ಸಂಪುಟ: 21, ಸಂಚಿಕೆ: 185, ಪುಟಗಳು: 8, ಭಾನುವಾರ, 14 ಏಪ್ರಿಲ್ 2024 RNI NO. KARKAN/2002/08054
epaper: www.sanjemugilu.com


ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಭಾನುವಾರ 14, ಏಪ್ರಿಲ್ -2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ, ಶುಕ್ಲ ಪಕ್ಷ,
- ಸಪ್ತಮಿ
- ರೋಹಿಣಿ ನಕ್ಷತ್ರ.
- **ರಾಹುಕಾಲ:** 04:59 PM 06 : 30 PM
- **ಗುಳಿಕಕಾಲ:** 03:28 PM04 : 59 PM
- **ಯಮಗಂಡಕಾಲ:** 12:27 PM 01 : 58 PM

## ಸಂಕ್ಷಿಪ್ತ ಸುದ್ದಿ

### ಮಂಗಳೂರಿನಲ್ಲಿ ಇಂದು ಮೋದಿ ರೋಡ್ ಶೋ



**ಮಂಗಳೂರು:** ಲೋಕಸಭೆ ಚುನಾವಣೆಗೆ ದಿನಾಂಕ ಘೋಷಣೆಯಾದ ಬಳಿಕ ಎರಡನೇ ಬಾರಿಗೆ ರಾಜ್ಯಕ್ಕೆ ಆಗಮಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರು ಇಂದು (ಏ.14) ರಾತ್ರಿ 7:45ಕ್ಕೆ ಮಂಗಳೂರಿನಲ್ಲಿ ರೋಡ್ ಶೋನಡೆಸಲಿದ್ದಾರೆ. ಪ್ರಧಾನಿ ಮೋದಿ ರೋಡ್ ಶೋ ಹಿನ್ನೆಲೆಯಲ್ಲಿ ಮಂಗಳೂರು ನಗರದ ಹಲವು ರಸ್ತೆಗಳಲ್ಲಿ ಮಧ್ಯಾಹ್ನ 2 ಗಂಟೆಯಿಂದ ರ್ಯಾಲಿ ಮುಗಿಯುವವರೆಗೂ ವಾಹನ ಸಂಚಾರ ನಿಷೇಧಿಸಿ, ಮಂಗಳೂರು ಕಮಿಷನರ್ ಅನುಪಮ್ ಅಗರ್ವಾಲ್ ಆದೇಶ ಹೊರಡಿಸಿದ್ದಾರೆ. ಪುಟ 2

### ಮಗು ಮಾಡಿಕೊಳ್ಳುವ ವಿಚಾರಕ್ಕೆ ಜಗಳ ಕೊಲೆ



**ಬೆಂಗಳೂರು:** ಮಗು ಮಾಡಿಕೊಳ್ಳುವ ವಿಚಾರಕ್ಕೆ ಸಂಬಂಧಿಸಿದಂತೆ ಗಂಡ-ಹೆಂಡತಿ ನಡುವೆ ಜಗಳವಾಗಿ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ಬೆಂಗಳೂರಿನ ಎಚ್‌ಎಎಲ್ ಪೊಲೀಸ್ ಠಾಣಾ ವ್ಯಾಪ್ತಿಯ ಅನ್ನಸಂದ್ರದಲ್ಲಿ ನಡೆದಿದೆ. ಗಿರಿಜಾ(30) ಕೊಲೆಯಾದ ಪತ್ನಿ, ನವೀನ್ ಕೊಲೆ ಮಾಡಿದ ಆರೋಪಿ ಪತಿ. ಭಟ್ಕಳ ಮೂಲದವರಾದ ಗಿರಿಜಾ, ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡಿಕೊಂಡಿದ್ದ ನವೀನ್ ಎಂಬುವವನೊಂದಿಗೆ ಕಳೆದ ಎಂಟು ತಿಂಗಳ ಹಿಂದೆಯಷ್ಟೇ ವಿವಾಹವಾಗಿದ್ದರು. ಮದುವೆ ಬಳಿಕ ಗಂಡ-ಹೆಂಡತಿ ಇಬ್ಬರೂ ಬೆಂಗಳೂರಲ್ಲಿ ನೆಲೆಸಿದ್ದರು. ಆದ್ರೆ, ಮಗು ಮಾಡಿಕೊಳ್ಳುವ ವಿಚಾರದಲ್ಲಿ ಪರಸ್ಪರ ಗಲಾಟೆ ಮಾಡಿಕೊಂಡಿದ್ದು, ಕೊನೆಗೆ ಪತಿ ನವೀನ್, ಪತ್ನಿ ಗಿರಿಜಾಳನ್ನ ಕೊಲೆ ಮಾಡಿದ್ದಾನೆ. ಪುಟ 2

ಲಕ್ಷ್ಮೀ ಹೆಬ್ಬಾಳ್ಕರ್ ಕ್ಷೇತ್ರಕ್ಕೆ ಸಾಹುಕಾರ್ ಎಂಟ್ರಿ

# ವಿವಾದಾತ್ಮಕ ಹೇಳಿಕೆ ನೀಡಿದ ಸಂಜಯ್ ಪಾಟೀಲ್



**ಬೆಳಗಾವಿ:** ಬೆಳಗಾವಿ ಲೋಕಸಭಾ ಕ್ಷೇತ್ರ, ದಿನೇ ದಿನೇ ರಂಗು ಪಡೆದುಕೊಳ್ಳುತ್ತಿದ್ದು, ಚುನಾವಣೆ ಕಾವು ಜೋರಾಗುತ್ತಿದೆ. ಮೊದಲ ಬಾರಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಗೋಕಾಕ್, ಅರಬಾವಿ ಕ್ಷೇತ್ರದಲ್ಲಿ ವಾಸ್ತವ್ಯ ಹೂಡಿ ಪುತ್ರನ ಪರ ರಮೇಶ್ ಜಾರಕಿಹೊಳಿ ಕೋಟೆಯಲ್ಲಿ ಭರ್ಜರಿ ಮತಯಾಚನೆ ನಡೆಸಿದ್ದರು. ಇದಾದ ಬಳಿಕ ಸೈಲೆಂಟ್ ಆಗಿದ್ದ ಸಾಹುಕಾರ್ ಇದೀಗ ಅಖಾಡಕ್ಕಿಳಿದಿದ್ದಾರೆ. ಚುನಾವಣಾ ಅಖಾಡಕ್ಕೆ ಧುಮ್ಮಿಕ್ಕಿರುವ ಮಾಜಿ ಸಚಿವ ರಮೇಶ್ ಜಾರಕಿಹೊಳಿ, ಮೊದಲ ದಿನವೇ ಹೆಬ್ಬಾಳ್ಕರ್ ಕ್ಷೇತ್ರದಿಂದ ಪ್ರಚಾರ ಶುರು ಮಾಡಿದ್ದಾರೆ.



ಬೆಳಗಾವಿ ತಾಲೂಕಿನ ಹಿಂಡಲಗಾ ಗ್ರಾಮದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ರಮೇಶ್ ಜಾರಕಿಹೊಳಿ ಭಾಗಿಯಾಗಿದ್ದರು. ಇನ್ನು ಸಮಾವೇಶದಲ್ಲಿ ಹೆಬ್ಬಾಳ್ಕರ್ ವಿರುದ್ಧ ಒಂದೇ ಒಂದು ಮಾತಾಡದೇ ಮೋದಿಯವರನ್ನ ಪ್ರಧಾನಿ ಮಾಡಬೇಕು ಮತ್ತು ಕೆಟ್ಟ ಸರ್ಕಾರ ಕಿತ್ತು ಒಗೆಯಬೇಕು ಎಂದು ಹೇಳಿದ್ದಾರೆ. ಆದರೆ, ಅವರ ಶಿಷ್ಯಂದಿರಾದ ಸಂಜಯ್ ಪಾಟೀಲ್ ಮತ್ತು ಧನಂಜಯ್ ಜಾಧವ್ ಮೂಲಕ ತಾವೇನೂ ಹೆಬ್ಬಾಳ್ಕರ್‌ಗೆ ಮೆಸೆಜ್ ಪಾಸ್ ಮಾಡಬೇಕಿತ್ತೋ ಅದನ್ನ ಭಾಷಣದಲ್ಲಿ ಮಾಡಿಸಿದರು. ಇದೇ ಸಂದರ್ಭದಲ್ಲಿ ಮತ್ತೆ ಸರ್ಕಾರ ಬೀಳುವ ಮಾತಾಡಿದ ರಮೇಶ್, ಚುನಾವಣೆ ಮುಗಿದ ಮೇಲೆ ಮತ್ತೆ ಡಬಲ್ ಇಂಜಿನ್ ಸರ್ಕಾರ ಬರುತ್ತೆ ಎಂದು ಹೇಳಿದರು.

**ವಿವಾದಾತ್ಮಕ ಹೇಳಿಕೆ ನೀಡಿದ ಸಂಜಯ್ ಪಾಟೀಲ್:** ಇನ್ನು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಮಾತನಾಡಲು ಹೋಗಿ ಮಾಜಿ ಶಾಸಕ ಸಂಜಯ್ ಪಾಟೀಲ್ ವಿವಾದವೊಂದನ್ನ ಮೈಮೇಲೆ ಎಳೆದುಕೊಂಡಿದ್ದಾರೆ. 'ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕ್ಷೇತ್ರದಲ್ಲಿ ಅತೀ ಹೆಚ್ಚು ಮಹಿಳೆಯರು ಸಮಾವೇಶದಲ್ಲಿ ಭಾಗಿಯಾಗಿದ್ದೀರಿ, ಇದರಿಂದ ಅವರಿಗೆ ಇಂದು ರಾತ್ರಿ ನಿದ್ದೆ ಬರುವುದಿಲ್ಲ. ಅದರಲ್ಲೂ ಇಂದು ರಮೇಶ್ ಜಾರಕಿಹೊಳಿ ಕೂಡ ಪ್ರಚಾರಕ್ಕೆ ಬಂದಿದ್ದರಿಂದ ಮಾತ್ರೆ ಜೊತೆಗೆ ಒಂದು ಪೆಗ್ ಎಕ್ಸ್ಟ್ರಾ ಹಾಕಿಕೊಳ್ಳಬೇಕು ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಜೊತೆಗೆ ಹೆಬ್ಬಾಳ್ಕರ್ ಅವರು ಒಂದು ಕಡೆ ಹಿಂದುತ್ವದ ಜಪ ಮಾಡ್ತಾರೆ, ಮತ್ತೊಂದು ಕಡೆ ಟಿಪ್ಪು ಸುಲ್ತಾನ್ ಪರವಾಗಿ ಮಾತಾಡ್ತಾರೆ. ಈ ರೀತಿ ಡಬಲ್ ಸ್ಟ್ಯಾಂಡ್ ಯಾಕೆ ಎಂದು ಕೇಳಿದ್ದಾರೆ. ಪುಟ 2



## ಲೋಕಸಭಾ ಚುನಾವಣೆಗೆ ಮಾಡಿದ ಪ್ರಣಾಳಿಕೆಯಲ್ಲಿ ಪ್ರಧಾನಿ ಭರವಸೆ

# ಸಂಕಲ್ಪ ಪತ್ರ ಬಿಡುಗಡೆ




**ನವದೆಹಲಿ:** ಮುಂಬರುವ ಲೋಕಸಭಾ ಚುನಾವಣೆಗೆ ಪ್ರಧಾನಿ ನರೇಂದ್ರ ಮೋದಿ ಬಿಜೆಪಿಯ ಪ್ರಣಾಳಿಕೆ ಸಂಕಲ್ಪ ಪತ್ರವನ್ನು ಬಿಡುಗಡೆ ಮಾಡಿದ್ದಾರೆ. ಇದರಲ್ಲಿ ಜನರಿಗೆ ಹಲವು ರೀತಿಯ ಭರವಸೆಗಳನ್ನು ನೀಡಿದ್ದಾರೆ. ಬಿಜೆಪಿಯು ಸಂಕಲ್ಪ ಪತ್ರ ಹೆಸರಿನಲ್ಲಿ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಮೋದಿಯವರು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಕೇಂದ್ರ ಸಚಿವ ಅಮಿತ್ ಶಾ, ಫಲಾನುಭವಿಗಳಿಗೆ ಮೊದಲ ಪ್ರಣಾಳಿಕೆ ಪುಸ್ತಕವನ್ನು ಮೊದಲು ನೀಡಿದ್ದಾರೆ.

ಬಿಜೆಪಿ ಯಾವಾಗಲೂ ಸಾಮಾಜಿಕ ನ್ಯಾಯಕ್ಕಾಗಿ ಹೋರಾಡುತ್ತದೆ, ಸಂಕಲ್ಪ ಪತ್ರ ನಮ್ಮ ಸಮರ್ಪಣೆ ಮುಂದಕ್ಕೆ ಕೊಂಡೊಯ್ಯುವ ಸಾಧನ, ಪ್ರತಿ ಚುನಾವಣೆ ಬಂದಾಗ ನಾವು ನಮ್ಮ ವಿಚಾರ ಜನರಿಗೆ ತಿಳಿಸುತ್ತೇವೆ, ನಂತರ ಆ ವಿಚಾರವನ್ನ ಅನುಷ್ಠಾನ ಮಾಡಿ ಮುಂದುವರಿಸುತ್ತೇವೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಹೇಳಿದ್ದಾರೆ. ಪುಟ 2

ವೃದ್ಧರಿಗೆ ಉಚಿತ ಚಿಕಿತ್ಸೆ

## ಬಡವರಿಗೆ ಉಚಿತ ಪಡಿತರ

**ನವದೆಹಲಿ:** ಇನ್ನುಮುಂದೆ 70 ವರ್ಷ ಮೇಲ್ಪಟ್ಟವರು ಕೂಡ ಆಯುಷ್ಮಾನ್ ಭಾರತ ಯೋಜನೆಗೆ ಒಳಪಡಲಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದ್ದಾರೆ. ಭಾರತೀಯ ಜನತಾ ಪಕ್ಷವು ಮುಂಬರಲಿರುವ ಲೋಕಸಭಾ ಚುನಾವಣೆಗೆ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದು, ವಯಸ್ಸಾದಂತೆ ಕಾಯಿಲೆಗಳು ಕೂಡ ಹೆಚ್ಚು ಹೀಗಾಗಿ ಇನ್ನುಮುಂದೆ ವೃದ್ಧರು ಚಿಂತಿಸಬೇಕಿಲ್ಲ, 70 ವರ್ಷ ಮೇಲ್ಪಟ್ಟವರೂ ಕೂಡ ಇನ್ನುಮುಂದೆ 5 ಲಕ್ಷದವರೆಗೆ ಉಚಿತ ಚಿಕಿತ್ಸೆ ದೊರೆಯಲಿದೆ ಎಂದು ಮೋದಿ ಅಭಯ ನೀಡಿದ್ದಾರೆ.

ಜನೌಷಧಿ ಕೇಂದ್ರಗಳಲ್ಲಿ ಶೇ.80ರಷ್ಟು ರಿಯಾಯಿತಿಯೊಂದಿಗೆ ಔಷಧ ವಿತರಣೆ ಮಾಡಲಿದ್ದೇವೆ ಎಂದು ಪ್ರಧಾನಿ ಮೋದಿ ತಿಳಿಸಿದ್ದಾರೆ.




ಪಿಎಂ ಕಿಸಾನ್ ಸಮ್ಮಾನ್ ನಿಧಿಯ ಪ್ರಯೋಜನಗಳು ಮುಂದುವರಿಯುತ್ತವೆ ದೇಶದ 10 ಕೋಟಿ ರೈತರು ಭವಿಷ್ಯದಲ್ಲಿಯೂ ಪಿಎಂ-ಕಿಸಾನ್ ಸಮ್ಮಾನ್ ನಿಧಿಯ ಪ್ರಯೋಜನಗಳನ್ನು ಪಡೆಯಲಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಸಹಕಾರದ ಮೂಲಕ ಸಮೃದ್ಧಿ ಎಂಬ ದೂರದೃಷ್ಟಿಯೊಂದಿಗೆ ಬಿಜೆಪಿ ರಾಷ್ಟ್ರೀಯ ಸಹಕಾರ ನೀತಿ ಯನ್ನು ಪರಿಚಯಿಸಲಿದೆ. ಈ ಮೂಲಕ ನಾವು ಕ್ರಾಂತಿಕಾರಿ ದಿಕ್ಕಿನಲ್ಲಿ ಮುನ್ನಡೆಯಲಿದ್ದೇವೆ. ದೇಶಾದ್ಯಂತ ಹೈನುಗಾರಿಕೆ ಮತ್ತು ಸಹಕಾರ ಸಂಘಗಳ ಸಂಖ್ಯೆಯನ್ನು ದೊಡ್ಡ ಪ್ರಮಾಣದಲ್ಲಿ ಹೆಚ್ಚಿಸಲಾಗುವುದು ಎಂದರು. ಪುಟ 2

## ಸಂವಿಧಾನ ಬದಲಾವಣೆಯ ಭಯ ಹುಟ್ಟಿಸುತ್ತಾರೆ

**ಹಾವೇರಿ:** ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಸಿಎಂ ಸಿದ್ದರಾಮಯ್ಯನವರಿಗೆ ಮಾತನಾಡಲು ಏನೂ ಇಲ್ಲದ ಕಾರಣ ಸಂವಿಧಾನ ಬದಲಾಯಿಸುತ್ತಾರೆ ಎಂದು ರಾಜಕೀಯವಾಗಿ ಭಯ ಹುಟ್ಟಿಸುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಸವಣೂರಿನಲ್ಲಿ ಚುನಾವಣಾ ಪ್ರಚಾರಕ್ಕೂ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಂವಿಧಾನ ಬದಲು ಮಾಡುವ ಬಿಜೆಪಿ ಪಕ್ಷಕ್ಕೆ ಮತ ಹಾಕಬೇಡಿ ಎಂಬ ಸಿಎಂ ಸಿದ್ದರಾಮಯ್ಯ ಮಾತಿಗೆ ಪ್ರತಿಕ್ರಿಯೆ ನೀಡಿದರು. ಸಿದ್ದರಾಮಯ್ಯ ಅವರಿಗೆ ಮೋದಿಯವರ ವಿರುದ್ಧ ಹೇಳಲು ಏನೂ ಇಲ್ಲ. ಕಳೆದ ಬಾರಿ ಇದನ್ನೇ ಹೇಳಿದ್ದರು. ಸಂವಿಧಾನ ಬದಲು ಮಾಡಲು ಯಾರ ಕೈಯಲ್ಲೂ ಆಗುವುದಿಲ್ಲ. ಎಲ್ಲದಕ್ಕೂ ಕಾನೂನು ಅಂತ ಇದೆ. ಸಂವಿಧಾನ ಬದಲು ಮಾಡಲು ಸಾಧ್ಯವಿಲ್ಲವೆಂದು ಸುಪ್ರೀಂ ಕೋರ್ಟ್ ಹೇಳಿದೆ. ಸಿದ್ದರಾಮಯ್ಯ ಸುಮ್ಮನೆ ರಾಜಕೀಯ ಭಯ ಹುಟ್ಟಿಸಲು ಈ ರೀತಿ ಹೇಳುತ್ತಿದ್ದಾರೆ. ಡಾ.ಬಿ.ಆರ್ ಅಂಬೇಡ್ಕರ್ ಸಂವಿಧಾನ ರಚನೆ ಮಾಡುವ ಶಾಶ್ವತ ಕೆಲಸ ಮಾಡಿದ್ದಾರೆ ಎಂದರು.



ಭಾರತ ಮಾತಾ ಕೀ ಜೈ ಎನ್ನುವುದು ಬಿಜೆಪಿಯ ಅಪ್ಪನ ಮನೆ ಆಸ್ತಿನಾ ಎಂಬ ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಮಾತಿಗೆ ತಿರಗೇಟು ನೀಡಿದ ಅವರು, ಅವರ ಹೇಳಿಕೆ ಸರಿಯಾಗಿದೆ, ತಪ್ಪೇನೂ ಇಲ್ಲ. ಭಾರತ ಮಾತಾ ಕಿ ಜೈ ಎಂದು ಕೂಗಲು ಪುಟ 2

### ತೆನೆ ಹೊತ್ತ ಮಹಿಳೆಗೆ 'ಕಮಲ' ಎಂದು ಹೆಸರಿಟ್ಟ ಪ್ರಜ್ವಲ್



**ಹಾಸನ:** ಜೆಡಿಎಸ್ ಚಿಹ್ನೆ ತೆನೆ ಹೊತ್ತ ಮಹಿಳೆಗೆ ಕಮಲ ಎಂದು ಹಾಸನ ಮೈತ್ರಿ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಎಂದು ನಾಮಕರಣ ಮಾಡಿದ್ದಾರೆ. ಪ್ರಜ್ವಲ್ ರೇವಣ್ಣ ಹಾಸನದ ಜೆಡಿಎಸ್-ಬಿಜೆಪಿಯ ಮೈತ್ರಿ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದಾರೆ. ಹಾಸನ ಕ್ಷೇತ್ರದ ಚನ್ನರಾಯಪಟ್ಟಣ ತಾಲೂಕಿನ ಮಂಚಿಗನಹಳ್ಳಿ ಗ್ರಾಮದಲ್ಲಿ ಮತದಾರರನ್ನು ಉದ್ದೇಶಿಸಿ ಪ್ರಜ್ವಲ್ ರೇವಣ್ಣ ಮಾತನಾಡಿದರು. ಚುನಾವಣೆಯಲ್ಲಿ ಯಾವ ಚಿಹ್ನೆಯಡಿಯಲ್ಲಿ ಸ್ಪರ್ಧೆ ಮಾಡ್ತೀರಿ? ನಿಮ್ಮ ಹೆಸರಿನ ಮುಂದೆ ಚಿಹ್ನೆ ಯಾವುದಿರುತ್ತೆ ಎಂದು ಕೇಳುತ್ತಿದ್ದರು. ಪುಟ 2

ಶಿವಮೊಗ್ಗ, ಶೃಂಗೇರಿ ಸೇರಿದಂತೆ ಹಲವೆಡೆ ವರುಣನ ಆರ್ಭಟ

## 25 ಜಿಲ್ಲೆಗಳಲ್ಲಿ ಮಳೆ ಸಾಧ್ಯತೆ

**ಬೆಂಗಳೂರು:** ಕರ್ನಾಟಕದ ಹಲವೆಡೆ ವರುಣನ ಆಗಮನವಾಗಿದೆ, ಶಿವಮೊಗ್ಗ, ಶೃಂಗೇರಿ, ತೀರ್ಥಹಳ್ಳಿ, ಉತ್ತರ ಕನ್ನಡ ಸೇರಿದಂತೆ ಹಲವೆಡೆ ಮಳೆಯಾಗಿದೆ. ಭಾಲ್ಕಿ, ಮುಂಡಗೋಡ, ಹುಮುನಾಬಾದ್, ಬೀದರ್, ಬೆಳಗಾವಿ, ನರಗುಂದ, ಕಕ್ಕೇರಿ, ಅಥಣಿ, ಯಲಬುರ್ಗಾ, ಜಯಪುರ, ಬಾಳೆಹೊನ್ನೂರು, ನಾಪೋಕ್ಲು, ತ್ಯಾಗರ್ತಿ, ಮೈಸೂರಿನಲ್ಲಿ ಮಳೆಯಾಗಿದೆ. ಏಪ್ರಿಲ್ 15 ಹಾಗೂ 16ರಂದು ರಾಜ್ಯಾದ್ಯಂತ ಒಣಹವೆ ಇರುವ ಸಾಧ್ಯತೆ ಇದೆ.

ಏಪ್ರಿಲ್ 17ರಂದು ದಕ್ಷಿಣ ಕನ್ನಡ, ಉಡುಪಿ, ಬಾಗಲಕೋಟೆ, ಗದಗ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ಬಳ್ಳಾರಿ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಮಂಡ್ಯ, ಶಿವಮೊಗ್ಗ, ತುಮಕೂರು, ವಿಜಯನಗರ, ಮೈಸೂರು, ವಿಜಯನಗರ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ.



ಕರಾವಳಿಯ ಎಲ್ಲಾ ಜಿಲ್ಲೆಗಳಲ್ಲಿ ಒಣಹವೆ ಇರುವ ಸಾಧ್ಯತೆ ಇದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿರಲಿದೆ, ಎಚ್ ಎಎಲ್ ನಲ್ಲಿ 34.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ನಗರದಲ್ಲಿ 34.6ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೆಐಎಎಲ್ ನಲ್ಲಿ 34.6ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಜಿಕೆವಿಕೆಯಲ್ಲಿ 35.2ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಬಾಗಲಕೋಟೆಯಲ್ಲಿ 38.7 ಡಿಗ್ರಿ ಸೆಲ್ಸಿಯಸ್ ಅತ್ಯಂತ ಗರಿಷ್ಠ ಉಷ್ಣಾಂಶ ದಾಖಲಾಗಿದೆ. ಕಾರವಾರದಲ್ಲಿ 34.7 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 25.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಾರವಾರದಲ್ಲಿ 36.3 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 27.1 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಶಿರಾಲಿಯಲ್ಲಿ 37.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ವಿಜಯಪುರದಲ್ಲಿ 38.5ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ. ಧಾರವಾಡದಲ್ಲಿ 35.8 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಹಾವೇರಿಯಲ್ಲಿ 39.8ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 22.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೊಪ್ಪಳದಲ್ಲಿ 38.4ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ ದಾಖಲಾಗಿದೆ.

### ಜಮ್ಮು ಮತ್ತು ಕಾಶ್ಮೀರದಲ್ಲಿ ಕಂದಕಕ್ಕೆ ಉರುಳಿದ ಕಾರು ಆರು ಸಾವು

**ಜಮ್ಮು:** ಜಮ್ಮು ಮತ್ತು ಕಾಶ್ಮೀರದ ದೋಡಾ ಜಿಲ್ಲೆಯಲ್ಲಿ ಕಾರೊಂದು ರಸ್ತೆಯಿಂದ ಆಯತಪ್ಪಿ ಆಳವಾದ ಕಂದಕಕ್ಕೆ ಬಿದ್ದ ಪರಿಣಾಮ 4 ವರ್ಷದ ಬಾಲಕಿ ಸೇರಿದಂತೆ ಐವರು ಸಾವನ್ನಪ್ಪಿದ್ದಾರೆ ಮತ್ತು ಇತರರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಅಪಘಾತದಲ್ಲಿ ಜೀವಹಾನಿಯ ಬಗ್ಗೆ ಸಂತಾಪ ವ್ಯಕ್ತಪಡಿಸಿದ್ದಾರೆ ಮತ್ತು ಸಂತ್ರಸ್ತ ವ್ಯಕ್ತಿಗಳಿಗೆ ಅಗತ್ಯವಿರುವ ಎಲ್ಲಾ ಸಹಾಯವನ್ನು ಒದಗಿಸಲು ಜಿಲ್ಲಾಡಳಿತಕ್ಕೆ ಸೂಚನೆಗಳನ್ನು ನೀಡಿದ್ದಾರೆ. ಪುಟ 2



### ಚಲಿಸುತ್ತಿದ್ದ ರೈಲಿನಿಂದ ಹಾರಿ ಯುವಕ ಆತ್ಮಹತ್ಯೆ






**ಶಿವಮೊಗ್ಗ:** ಚಲಿಸುತ್ತಿದ್ದ ರೈಲಿನಿಂದ ತುಂಗಾ ನದಿಗೆ ಬಿದ್ದು ವ್ಯಕ್ತಿಯೊಬ್ಬರು ಸಾವನ್ನಪ್ಪಿದ್ದಾರೆ. ಸಾವಿಗೆ ಕಾರಣ ತಿಳಿದುಬಂದಿಲ್ಲ. ಮೃತವ್ಯಕ್ತಿಗೆ ಅಂದಾಜು 35 ವರ್ಷವಾಗಿರಬಹುದೆಂದು ಅಂದಾಜಿಸಲಾಗಿದೆ. ಈತ ಕೆಳಕ್ಕೆ ಬಿದ್ದಿದ್ದು ಹೇಗೆ ಎಂಬುದು ಗೊತ್ತಾಗಿಲ್ಲ. ಬಿದ್ದ ಬೆನ್ನಲ್ಲೆ ತೀವ್ರವಾಗಿ ಗಾಯಗೊಂಡು ಸಾವನ್ನಪ್ಪಿದ್ದಾರೆ ಎನ್ನಲಾಗಿದೆ. ಇನ್ನು ಈ ವಿಚಾರ ತಿಳಿಯುತ್ತಲೇ, ಸ್ಥಳಕ್ಕೆ ಕೋಟೆ ಠಾಣೆ ಪೊಲೀಸರು ದೌಡಾಯಿಸಿ ಪರಿಶೀಲನೆ ನಡೆಸಿದ್ದು, ಮುಂದಿನ ಕ್ರಮ ಕೈಗೊಂಡಿದ್ದಾರೆ. ಸದ್ಯದ ಮಟ್ಟಿಗೆ ಮೃತರು ಯಾರು ಎಂಬ ಗುರುತು ಪತ್ತೆಯಾಗಿಲ್ಲ. ಪುಟ 2

# ರಾಮೇಶ್ವರಂ ಕೆಫೆ ಬಾಂಬ್ ಬ್ಲಾಸ್ಟ್ ಪ್ರಕರಣ ಶಂಕಿತರು ಎನ್ಐಎ ಕಸ್ಟಡಿಗೆ



**ಬೆಂಗಳೂರು:** ನಗರದ ರಾಮೇಶ್ವರಂ ಕೆಫೆ ಬಾಂಬ್ ಬ್ಲಾಸ್ಟ್ ಪ್ರಕರಣದಲ್ಲಿ ಬಂಧನಕ್ಕೊಳಗಾದ ಇಬ್ಬರು ಆರೋಪಿಗಳನ್ನು ಎನ್ಐಎ ಅಧಿಕಾರಿಗಳು ನ್ಯಾಯಾಧೀಶರ ಮುಂದೆ ಹಾಜರುಪಡಿಸಿದ್ದು, ನ್ಯಾಯಾಲಯ ಆರೋಪಿಗಳನ್ನು ಎನ್ಐಎ ಕಸ್ಟಡಿಗೆ ನೀಡಿದೆ. ಆರೋಪಿಗಳನ್ನು ನ್ಯಾಯಾಧೀಶರ ಮನೆಗೆ ಹಾಜರುಪಡಿಸಿದ ಹಿನ್ನೆಲೆ ನ್ಯಾಯಾಧೀಶರ ಮನೆಗೆ ಬಿಗಿ ಪೊಲೀಸ್ ಭದ್ರತೆ ಒದಗಿಸಲಾಗಿತ್ತು. ಎನ್ಐಎ ಪರವಾಗಿ ಎಸ್‌ಪಿಪಿ ಪ್ರಸನ್ನಕುಮಾರ್ ಹಾಜರಾಗಿದ್ದು, ವಾದ ಮಂಡಿಸಿದರು. ಈ ವೇಳೆ ಎನ್ಐಎ ಎಸ್ಪಿ ಶಿವವಿಕ್ರಮ್ ಕೂಡ ಹಾಜರಿದ್ದರು. ಆರೋಪಿಗಳನ್ನು ಪಶ್ಚಿಮ ಬಂಗಾಳದಲ್ಲಿ ಬಂಧಿಸಲಾಗಿತ್ತು. ಬಳಿಕ ಕೋಲ್ಕತ್ತಾದಿಂದ ಬೆಂಗಳೂರಿನ ವಿಮಾನ ನಿಲ್ದಾಣಕ್ಕೆ ಶಂಕಿತರಾದ ಅಬ್ದುಲ್ ಮತೀನ್ ತಾಹ, ಮುಸಾವಿರ್ ಹುಸೇನ್‌ನನ್ನು ಎನ್ಐಎ ಪೊಲೀಸರು ಕರೆತಂದಿದ್ದರು. ಇಬ್ಬರನ್ನೂ ತೀವ್ರ ವಿಚಾರಣೆಗೆ ಒಳಪಡಿಸಲಿದ್ದಾರೆ. ಬಾಂಬ್ ಬ್ಲಾಸ್ಟ್ ಕೇಸಲ್ಲಿ ಬಂಧಿತರಾಗಿರುವ ಮುಜಾಮಿಲ್ ಶರೀಫ್, ಮಾಜ್ ಮಾನಿರ್ ಹೇಳಿಕೆ ಅಧರಿಸಿ ವಿಚಾರಣೆ ನಡೆಸಲಾಗುವುದು. ರಾಮೇಶ್ವರಂ ಬಾಂಬ್ ಸ್ಫೋಟ ಕೇಸಲ್ಲಿ ಯಾರ್ಯಾರ ಪಾತ್ರ ಏನಿತ್ತು? ಈ ಕೃತ್ಯದ ಹಿಂದೆ ಬೇರೆ ಯಾರೆಲ್ಲಾ ಇದ್ದಾರೆ? ರಾಮೇಶ್ವರಂ ಕೆಫೆಯಲ್ಲೇ ಬಾಂಬ್ ಬ್ಲಾಸ್ಟ್ ಮಾಡಿದ ಉದ್ದೇಶವೇನು? ಬೇರೆ ಎಲ್ಲೆಲ್ಲಿ ವಿಧ್ವಂಸಕ ಕೃತ್ಯವೆಸಗಲು ಪ್ಲಾನ್ ಮಾಡಲಾಗಿತ್ತು ಎಂಬ ಅಂಶಗಳು ಸೇರಿದಂತೆ ನಾನಾ ದೃಷ್ಟಿಕೋನದಲ್ಲಿ ಅಧಿಕಾರಿಗಳು ವಿಚಾರಣೆ ನಡೆಸಲಿದ್ದಾರೆ.

# ಒಂದೇ ಮರಕ್ಕೆ ಸಾವಿಗೆ ಶರಣಾದ ಪ್ರೇಮಿಗಳು

**ಗದಗ:** ಇಷ್ಟ ಇಲ್ಲದ ಮದುವೆ ಮಾಡಿದ್ದಕ್ಕೆ ಪ್ರಿಯಕರನೊಂದಿಗೆ ಯುವತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ನರೇಗಲ್ ಪಟ್ಟಣದ ಹೊರ ವಲಯದಲ್ಲಿ ನಡೆದಿದೆ. ಹೊರ ವಲಯದ ಜಮೀನಲ್ಲಿ ಮರಕ್ಕೆ ನೇಣು ಬಿಗಿದುಕೊಂಡು ಪ್ರೇಮಿಗಳು ಆತ್ಮಹತ್ಯೆ ಮಾಡಿಕೊಂಡಿದ್ದು, ಮೃತರನ್ನು ಲಲಿತಾ ಹಲಗೇರಿ (26) ಅಪ್ಪಣ್ಣ ಗೊರಗಿ (28) ಎಂದು ಗುರುತಿಸಲಾಗಿದೆ. ಅಂದಹಾಗೇ, ಮನೆಯವರ ಒತ್ತಾಯಕ್ಕೆ ಇದೇ ತಿಂಗಳು ಲಲಿತಾ ಮದುವೆಯಾಗಿದ್ದರಂತೆ. ಆದರೆ ಪ್ರಿಯಕರನನ್ನ ಬಿಟ್ಟಿರಲಾಗದೆ ಜೊತೆಗೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ.





ಯುವ ಜೋಡಿ ಮೊದಲು ವಿಷ ಸೇವಿಸಿ ಆತಹತ್ಯೆಗೆ ಯತ್ನಿಸಿದ್ದು, ನಂತರ ನೇಣು ಬಿಗಿದುಕೊಂಡು ಕೊನೆಯುಸಿರೆಳೆದಿದ್ದಾರೆ. ಸ್ಥಳಕ್ಕೆ ನರೇಗಲ್ ಪೊಲೀಸರ ಭೇಟಿ ಪರಿಶೀಲನೆ ನಡೆಸಿದ್ದಾರೆ.ಆತ್ಮಹತ್ಯೆ ಮಾಡಿಕೊಂಡ ಅಪ್ಪಣ್ಣನ ಸಹೋದರಿ ನಿರ್ಮಲಾ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದು, ನಮ್ಮ ಅಣ್ಣ ನಮಗೆ ಆಧಾರವಾಗಿದ್ದ. ಹೀಗೆ ಮಾಡ್ತಾನೆ ಅಂತ ಗೊತ್ತಿರಲಿಲ್ಲ. ಎಲ್ಲವನ್ನೂ ಹೇಳಿಕೊಳ್ಳುತ್ತಿದ್ದ, ಆದರೆ ಈ ವಿಚಾರವನ್ನು ಮಾತ್ರ ಹೇಳಿಲ್ಲ. ಮದುವೆ ಮಾಡಿಕೊಳ್ಳಲು ಹೇಳಿದರೂ ಸರಿ ಆಯ್ತು ಅಂತಲೇ ಹೇಳಿದ್ದ ಎಂದು ಕಣ್ಣೀರಿಟ್ಟಿದ್ದಾರೆ.

# ಕಾಂಗ್ರೆಸ್ ನಡೆ ದೇಶದ ಭದ್ರತೆಗೆ ಅಪಾಯ



**ಬೆಂಗಳೂರು:** ಕಾಂಗ್ರೆಸ್ಸಿನ ನಡೆಯು ಈ ದೇಶದ ಭದ್ರತೆಗೆ ಅಪಾಯ ತರುವಂತಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಟೀಕಿಸಿದರು.

ಬಿಜೆಪಿ ಚುನಾವಣಾ ಮಾಧ್ಯಮ ಕೇಂದ್ರ ಹೋಟೆಲ್ ಜಿ.ಎಂ. ರಿಜಾಯ್ಸ್‌ನಲ್ಲಿ ಕಾಂಗ್ರೆಸ್ ಸರ್ಕಾರದ ದುರಾಡಳಿತದ ಆರೋಪ ಪಟ್ಟಿ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಮೇಶ್ವರಂ ಕೆಫೆಯಲ್ಲಿ ಸ್ಫೋಟದ ಘಟನೆ ಬೆಂಗಳೂರನ್ನು ತಲ್ಲಣಗೊಳಿಸಿದೆ. ಇಡೀ ದೇಶದ ಜನರು ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಪದೇಪದೇ ಇಂಥ ಭಯೋತ್ಪಾದಕ ಕೃತ್ಯ ನಡೆಯುವುದನ್ನು ನಾವು ನೋಡಿದ್ದೇವೆ ಎಂದು ಹೇಳಿದರು. ಎನ್ಐಎ ತನಿಖಾ ತಂಡವು ಹಲವರನ್ನು ಬಂಧಿಸಿ ಮುಂದೆ ಆಗಬಹುದಾದ ಹಲವಾರು ಸ್ಫೋಟದ ಘಟನೆಗಳನ್ನು ತಡೆಯುವಲ್ಲಿ ಮಹತ್ವದ ಸಾಧನೆ ಮಾಡಿದೆ. ಭಯದಿಂದಿದ್ದ ಕರ್ನಾಟಕದ ಜನರು ಈ ಬಂಧನದಿಂದ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ. ಕರ್ನಾಟಕದ ಜನರ ಪರವಾಗಿ ಎನ್ಐಎ ತಂಡಕ್ಕೆ ಅಭಿನಂದನೆಗಳು ಎಂದು ತಿಳಿಸಿದರು.

ಈ ದುರ್ಘಟನೆ ನಡೆದಾಗ ಸ್ಥಳಕ್ಕೆ ಹೋಗಿದ್ದ ಡಿ.ಕೆ.ಶಿವಕುಮಾರ್ ಅವರು ಘಟನೆಯನ್ನು ತಿರುಚುವ ಪ್ರಯತ್ನ ಮಾಡಿದ್ದರು. ಅವರಿಗೆ ಅಲ್ಪಸಂಖ್ಯಾತರ ಮೇಲೆ ಏನಾದರೂ ಹೇಳಿದರೆ ಮತಬ್ಯಾಂಕ್ ಖಾಲಿ ಆದೀತೆಂಬ ಮನಸ್ಥಿತಿ ಇದೆ. ಘಟನೆಯ ಕುರಿತು ಹಾಗೂ ತನಿಖೆಯ ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದರು. 'ಇದು ವ್ಯವಹಾರ ಸಂಬಂಧಿತ ಗಲಾಟೆ; ಸಣ್ಣ ಪ್ರಮಾಣದ ಸ್ಫೋಟ' ಎಂದಿದ್ದರು. ಪೊಲೀಸರೂ ಅದೇ ಜಾಡಿನಲ್ಲಿ ತನಿಖೆ ನಡೆಸಿದ್ದರು ಎಂದು ವಿಶ್ಲೇಷಿಸಿದರು.

ಬಳಿಕ ಸಾಯಿ ಪ್ರಸಾದ್ ಅವರಿಂದ ಮಾಹಿತಿ ಸಂಗ್ರಹಿಸಿದ್ದರು. ಬಿಜೆಪಿಯವರನ್ನೂ ತನಿಖೆಗೆ ಕರೆದಿದ್ದಾರೆ ಎಂದು ದಿನೇಶ್ ಗುಂಡೂರಾವ್ ತಕ್ಷಣವೇ ಆರೋಪ ಮಾಡಿದ್ದರು. ಮಂತ್ರಿಗಳಾಗಿ ಅವರಿಗೆ ಕಾಮನ್ ಸೆನ್ಸ್ ಬೇಡವೇ ಎಂದು ಪ್ರಶ್ನೆ ಮುಂದಿಟ್ಟರು. ತನಿಖೆಗೆ ಕರೆದ ಕಾರಣದಿಂದ ಮುಖ್ಯ ತಿರುವು ಸಿಕ್ಕಿದೆ. ಪಕ್ಕಾ ಸಾಕ್ಷಿಯೂ ಲಭಿಸಿದೆ ಎಂದು ತಿಳಿಸಿದರು. ದೇಶದ ಬಗ್ಗೆ ಕಾಳಜಿ ಇದ್ದರೆ ಸಾಕ್ಷಿಯ ವಿವರವನ್ನು ತಿಳಿಸಬಾರದಿತ್ತು ಎಂದು ಆಕ್ಷೇಪ ಸೂಚಿಸಿದರು.

**ಸಹೋದರಿಯ ಸೇಫ್ ಜಾಗ...:** ಕಾಂಗ್ರೆಸ್ಸಿನವರು ಪದೇಪದೇ ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದಾರೆ. ಕುಕ್ಕರ್ ಬ್ಲಾಸ್ಟ್ ಆದಾಗಲೂ ಬ್ರದರ್ಸ್ ಎಂದಿದ್ದರು. ಎನ್ಐಎ ತನಿಖೆಯ ಮೂಲಕ ಇದರ ಹಿಂದೆ ಇದ್ದವರ ವಿವರ, ಸಂಚಿನ ಮಾಹಿತಿ ಲಭಿಸಿದೆ. ಇಲ್ಲಿನ ಬ್ರದರ್ಸ್ ಇವರ ಆತ್ಮೀಯ ಸಹೋದರಿ ಮಮತಾ ಬ್ಯಾನರ್ಜಿ ಅವರ ಸೇಫ್ ಜಾಗದಲ್ಲಿ ಸಿಕ್ಕಿದ್ದಾರೆ. ಆರೋಪಿಗಳು ಗುಜರಾತ್, ರಾಜಸ್ಥಾನ, ಮಧ್ಯಪ್ರದೇಶಕ್ಕೆ ಹೋಗಿಲ್ಲ ಎಂದು ಆರ್.ಅಶೋಕ್ ಅವರು ವಿವರಿಸಿದರು.

ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದವರನ್ನು ಬಂಧಿಸಲು ಒಂದು ವಾರ ಬೇಕಾಯಿತು. ನಾವು ಸದನದಲ್ಲಿ ಎರಡು ದಿನ ಹೋರಾಟ ಮಾಡಿದಾಗ, 'ಅವರು ಪಾಕಿಸ್ತಾನ ಪರ ಘೋಷಣೆ ಕೂಗಿಲ್ಲ' ಎಂದು ಸಚಿವರು ಹೇಳಿದ್ದರು. ಬಿಜೆಪಿಯವರದು ಕಾಮಾಲೆ ಕಣ್ಣು ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದರು. ಈಗ ಹೇಳಿ ಯಾರದ್ದೀ ಕಾಮಾಲೆ ಕಣ್ಣು? ಎಂದು ಪ್ರಿಯಾಂಕ್ ಖರ್ಗೆಯವರನ್ನು ಪ್ರಶ್ನಿಸಿದರು. ಇದೆಲ್ಲವನ್ನೂ ನೋಡಿದರೆ ಕರ್ನಾಟಕದ ಜನರು ಆತಂಕಪಡುವಂತಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾಂಗ್ರೆಸ್ ಪಕ್ಷದವರಿಗೆ ದೇಶದ ಕಾಳಜಿ ಇಲ್ಲ. ಕಾಂಗ್ರೆಸ್ ಸಂಸದ ಸುರೇಶ್ ಅವರೇ ದೇಶವನ್ನು ಒಡೆಯಲು ಹೇಳಿದ್ದಾರೆ ಎಂದು ಗಮನ ಸೆಳೆದರು. ನಮ್ಮ ತೆರಿಗೆ ನಮ್ಮ ಹಕ್ಕು- ಲೂಟಿ ಹೊಡೆಯಲು ಇವರಿಗೆ ಇನ್ನೊಂದು ದೇಶ ಬೇಕು ಎಂದು ಟೀಕಿಸಿದರು.

# 6 ವರ್ಷಗಳ ಮುನಿಸು ಮರೆತು ಶ್ರೀನಿವಾಸ್ ಪ್ರಸಾದ್ ಮನೆಗೆ ಸಿಎಂ ಸಿದ್ದರಾಮಯ್ಯ ಭೇಟಿ

**ಮೈಸೂರು:** ಲೋಕಸಭಾ ಚುನಾವಣೆ ಹೊತ್ತಲ್ಲಿ ಮೈಸೂರು ಭಾಗದಲ್ಲಿ ಕಾಂಗ್ರೆಸ್ ಪಕ್ಷ ಬಲಪಡಿಸಲು ಸಿಎಂ ಸಿದ್ದರಾಮಯ್ಯ ಮುಂದಾಗಿರುವಂತೆ ಕಾಣುತ್ತಿದೆ. ರಾಜಕೀಯ ಕಾರಣಕ್ಕೆ 6 ವರ್ಷಗಳಿಂದ ಇದ್ದ ಮುನಿಸನ್ನು ಮರೆತು ಬಿಜೆಪಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರನ್ನು ಸಿಎಂ ಸಿದ್ದರಾಮಯ್ಯ ಭೇಟಿಯಾಗಿದ್ದಾರೆ.



ಇಂದು ಪ್ರಧಾನಿ ಮೋದಿ ಅವರು ಮೈಸೂರಿಗೆ ಪ್ರಚಾರಕ್ಕಾಗಿ ಆಗಮಿಸಲಿದ್ದಾರೆ. ಈ ಹೊತ್ತಿನಲ್ಲೇ ಬಿಜೆಪಿ ಸಂಸದ ಶ್ರೀನಿವಾಸ ಪ್ರಸಾದ್ ಅವರನ್ನು ಸಿಎಂ ಭೇಟಿಯಾಗಿರುವುದು ಅಚ್ಚರಿ ಮೂಡಿಸಿದೆ. ಆರು ವರ್ಷಗಳಿಂದ ದಿಗ್ಗಜ ನಾಯಕರು ಪರಸ್ಪರ ಭೇಟಿಯಾಗಿರಲಿಲ್ಲ, ಮಾತುಕತೆಯೂ ಇರಲಿಲ್ಲ. ಈಗ ಚುನಾವಣೆ ಹೊಸ್ತಿಲಲ್ಲಿ ಪ್ರಸಾದ್ ಮನೆಗೆ ಸಿದ್ದರಾಮಯ್ಯ ಅವರು ಭೇಟಿ ನೀಡಿರುವುದು ಕುತೂಹಲ ಮೂಡಿಸಿದೆ.

ಇದು ಸೌಹಾರ್ದಯುತ ಭೇಟಿಯೋ ಅಥವಾ ರಾಜಕೀಯ ಭೇಟಿಯೋ ಎಂಬ ಚರ್ಚೆ ರಾಜಕೀಯ ವಲಯದಲ್ಲಿ ಶುರುವಾಗಿದೆ. ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಅವರು ಶ್ರೀನಿವಾಸ್ ಪ್ರಸಾದ್ ಅವರ ಮನೆಗೆ ಭೇಟಿ ನೀಡಿದ್ದರು. ಈ ವೇಳೆ, ಬನ್ರಿ ಪ್ರಸಾದ್ ಎಂದು ಸಿಎಂ ಕುಶಲೋಪರಿ ವಿಚಾರಿಸಿದರು.

ಶ್ರೀನಿವಾಸ ಪ್ರಸಾದ್ ಬಂದ ಕೂಡಲೇ ಸಿಎಂ ಎದ್ದು ನಿಲ್ಲಲು ಮುಂದಾದರು. ಆಗ ಶ್ರೀನಿವಾಸ್ ಪ್ರಸಾದ್, ಬೇಡ ಬೇಡ.. ಕೂತುಕೊಳ್ಳಿ ಎಂದರು. ಈ ವೇಳೆ ಸಿಎಂ ಬಳಿ ಪ್ರಸಾದ್ ಆರೋಗ್ಯ ಸಮಸ್ಯೆ ಹೇಳಿಕೊಂಡರು. 'ಆರೋಗ್ಯ ನಿರ್ಲಕ್ಷ್ಯ ಮಾಡಬೇಡಿ' ಎಂದು ಸಿಎಂ ಸಲಹೆ ನೀಡಿದರು.

2013 ರಲ್ಲಿ ಸಿದ್ದರಾಮಯ್ಯ ಅವರು ಸಿಎಂ ಆಗಿದ್ದಾಗ ಕಂದಾಯ ಸಚಿವರಾಗಿದ್ದ ವಿ.ಶ್ರೀನಿವಾಸ್ ಪ್ರಸಾದ್ ಅವರನ್ನು ತಮ್ಮ ಸಂಪುಟದಿಂದ ಕೈಬಿಟ್ಟಿದ್ದರು. ಇದರಿಂದ ಕುಪಿತಗೊಂಡಿದ್ದ ಪ್ರಸಾದ್ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿ ಚುನಾವಣೆ ಎದುರಿಸಿದ್ದರು. ಆಗ ವಿಧಾನಸಭಾ ಚುನಾವಣೆಯಲ್ಲಿ ಸೋಲು ಕಂಡಿದ್ದರು. ನಂತರ ಚಾಮರಾಜನಗರ ಕ್ಷೇತ್ರದಿಂದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಪ್ರಸಾದ್ ಗೆಲುವು ಸಾಧಿಸಿದ್ದರು.

ಸಂಪುಟದಿಂದ ಕೈಬಿಟ್ಟಾಗಿನಿಂದ ಸಿದ್ದರಾಮಯ್ಯ ವಿರುದ್ಧ ಪ್ರಸಾದ್ ಅಸಮಾಧಾನ ಹೊಂದಿದ್ದರು. ಆದರೆ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಹಲವು ಕುತೂಹಲಕಾರಿ ಬೆಳವಣಿಗೆಗಳು ನಡೆಯುತ್ತಿವೆ. ಪ್ರಸಾದ್ ಅನಾರೋಗ್ಯ ಹಾಗೂ ವಯಸ್ಸಿನ ಕಾರಣ ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಘೋಷಿಸಿದ್ದಾರೆ. ಬಿಜೆಪಿಯಿಂದ ಬಾಲರಾಜ್ ಕಣಕ್ಕಿಳಿದಿದ್ದಾರೆ. ಇತ್ತ ಕಾಂಗ್ರೆಸ್‌ನಿಂದ ಹೆಚ್.ಸಿ.ಮಹದೇವಪ್ಪ ಅವರ ಪುತ್ರ ಸುನೀಲ್ ಬೋಸ್ ಸ್ಪರ್ಧಿಸಿದ್ದಾರೆ. ಪುತ್ರನ ಗೆಲುವಿಗಾಗಿ ಕ್ಷೇತ್ರದಲ್ಲಿ ಮಹದೇವಪ್ಪ ಕಸರತ್ತು ನಡೆಸುತ್ತಿದ್ದಾರೆ. ಹೀಗಾಗಿ ಬಿಜೆಪಿಯ ಶ್ರೀನಿವಾಸ್ ಪ್ರಸಾದ್ ಮನೆಗೆ ಭೇಟಿ ನೀಡಿ ರಾಜಕೀಯ ದಾಳ ಉರುಳಿಸಿದ್ದರು.

# ಬೆಂಜ್ ಕಾರಿನ ಗ್ಲಾಸ್ ಒಡೆದು ಕಂತೆ ಕಂತೆ ಹಣ ಸೀಜ್ ಮಾಡಿದ ಮಹಿಳಾ ಅಧಿಕಾರಿ

**ಬೆಂಗಳೂರು:** ಎರಡು ಕಾರುಗಳಲ್ಲಿದ್ದ ಕಂತೆ ಕಂತೆ ಹಣವನ್ನು ಚುನಾವಣಾಧಿಕಾರಿಗಳು ವಶಕ್ಕೆ ಪಡೆದ ಪ್ರಕರಣ ಜಯನಗರದಲ್ಲಿ ನಡೆದಿದೆ. ಅನುಮಾನಾಸ್ಪದ ಕಾರಿನ ಗ್ಲಾಸ್ ಒಡೆದು ಮಹಿಳಾ ಅಧಿಕಾರಿ ಹಣ ಸೀಜ್ ಮಾಡಿ ದಿಟ್ಟತನ ಮೆರೆದಿದ್ದಾರೆ.



ಅಧಿಕಾರಿಗಳು ಬರುತ್ತಿದ್ದಂತೆ ಕಾರಿನಲ್ಲಿದ್ದ ಐವರು, ಚೀಲದಲ್ಲಿರುವುದು ಮಾವಿನ ಹಣ್ಣು ಎಂದಿದ್ದಾರೆ. ಬಳಿಕ ಅಧಿಕಾರಿಗಳು ಪರಿಶೀಲನೆಗೆ ಮುಂದಾದಾಗ ಒಂದು ಕಾರಿನಲ್ಲಿದ್ದ ಐವರು ಪರಾರಿಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆಳಗ್ಗೆ 9 ಗಂಟೆಯಿಂದ ಪೋಲೋ, ಬೆಂಜ್ ಮತ್ತು ಫಾರ್ಚೂನರ್ ಕಾರುಗಳು ಬಂದು ನಿಂತಿದ್ದವು. ಪೋಲೋ ಕಾರಿನಿಂದ ಬೈಕ್‌ಗೆ ಹಣ ತುಂಬಿಸುತ್ತಿದ್ದ ವೇಳೆ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಕೂಡಲೇ ಫಾರ್ಚೂನರ್ ಕಾರಿನಲ್ಲಿ ಐವರು ಪರಾರಿಯಾಗಿದ್ದಾರೆ. ಸದ್ಯ ಎರಡು ಕಾರು ಮಾತ್ರ ಉಳಿದಿವೆ. ಒಂದು ಬೈಕ್ ಹಾಗೂ ಎರಡು ಕಾರುಗಳಲ್ಲಿ ಮೂರು ಬ್ಯಾಗ್‌ನಲ್ಲಿ ಹಣ ಸಿಕ್ಕಿದೆ ಎಂದು ಎಂಸಿಸಿ ನೋಡಲ್ ಆಫೀಸರ್ ಮನೀಷ್ ಮೌದ್ಗಿಲ್ ಮಾಹಿತಿ ನೀಡಿದ್ದಾರೆ.

ಅಧಿಕಾರಿಗಳು ಬೆಂಜ್ ಕಾರಿನ ಗ್ಲಾಸ್ ಒಡೆದು ಹಣ ಇರುವ ಬ್ಯಾಗನ್ನು ಹೊರಗೆ ತೆಗೆದಿದ್ದು, ಕಾರಿನ ಒಳಗಡೆ ಇದ್ದ ದಾಖಲಾತಿಗಳನ್ನ ವಶಕ್ಕೆ ಪಡೆದಿದ್ದಾರೆ. ಕಾರಿನ ಒಳಗಡೆ ಒಂದು ಮೊಬೈಲ್ ಕೂಡ ಪತ್ತೆಯಾಗಿದೆ. ಇದೀಗ ಎರಡು ಕೌಂಟಿಂಗ್ ಮಷಿನ್‌ಗಳನ್ನು ತರಿಸಿಕೊಂಡು ಅಧಿಕಾರಿಗಳು ಹಣ ಎಣಿಸುವ ಕಾರ್ಯದಲ್ಲಿ ತೊಡಗಿದ್ದಾರೆ.

ಜಯನಗರ ಪೊಲೀಸ್ ಠಾಣೆಗೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನಾಗರಾಜ್, ಮತ್ತು ಮಾಜಿ ಕಾರ್ಪೊರೇಟರ್ ನಾಗರಾಜ್ ಭೇಟಿ ನೀಡಿ ಸೂಕ್ತ ಕ್ರಮಕ್ಕೆ ಒತ್ತಾಯಿಸಿದ್ದಾರೆ.

# ಸಿದ್ದರಾಮಯ್ಯ ಮೂಲ ನಮ್ಮ ಪಕ್ಷದವರಲ್ಲ, ಬೇರೆ ಪಕ್ಷದಿಂದ ಬಂದವರು

**ರಾಮನಗರ:** ಇವತ್ತು ಸಿದ್ದರಾಮಯ್ಯ ಅವರು ನಮ್ಮ ಪಕ್ಷಕ್ಕೆ ಬಂದಿದ್ದಾರೆ. ಅವರು ಮೂಲ ನಮ್ಮ ಪಕ್ಷದವರಲ್ಲ, ಬೇರೆ ಪಕ್ಷದಿಂದ ಬಂದವರು ಆದರೂ, ನಾವು ಅವರಿಗೆ ಅವಕಾಶ ಮಾಡಿಕೊಟ್ಟಿದ್ದೇವೆ ಎಂದು ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಲೋಕಸಭಾ ಚುನಾವಣಾ ಅಭ್ಯರ್ಥಿ ಡಿ.ಕೆ ಸುರೇಶ್ ಹೇಳಿದ್ದಾರೆ.

ರಾಮನಗರದಲ್ಲಿ ಕಾರ್ಯಕರ್ತರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಬೇರೆ ಪಕ್ಷದಿಂದ ಬಂದವರು ಆದರೂ ನಾವು ಅವರಿಗೆ ಅವಕಾಶ ಮಾಡಿಕೊಟ್ಟಿದ್ದೇವೆ. ಇಂದು 2ನೇ ಬಾರಿಗೆ ಮುಖ್ಯಮಂತ್ರಿ ಆಗಿದ್ದಾರೆ, ನಮ್ಮ ನಾಯಕರಾಗಿದ್ದಾರೆ ಎಂದಿದ್ದಾರೆ.

ಸಿದ್ದರಾಮಯ್ಯ ಅವರು ರಾಜ್ಯಕ್ಕೆ ಹೊಸ ಕಾಯಕಲ್ಪ ಕೊಟ್ಟಿದ್ದಾರೆ. ಬಡವರಿಗಾಗಿ ಒಂದಷ್ಟು ಕಾರ್ಯಕ್ರಮ ಕೊಟ್ಟಿದ್ದಾರೆ. ಹಾಗಾಗಿ ಹಣೇಲಿ ಬರೆದಿದ್ದರೆ ಎಲ್ಲಾ ಆಗುತ್ತೆ, ಬರೆದಿಲ್ಲ ಅಂದ್ರೆ ಏನೂ ಮಾಡೋಕಾಗಲ್ಲ ಎಂದು ನುಡಿದಿದ್ದಾರೆ.

**ಸಿದ್ದರಾಮಯ್ಯರ ಯೋಗ ಇಲ್ಲಿ ಬರೆದಿತ್ತು:** ಜೆಡಿಎಸ್‌ನವರು ಸಿದ್ದರಾಮಯ್ಯ ಅವರಿಗೆ ಬೀಗ ಹಾಕಿ ಕೂರಿಸಿದ್ರು, ಸಸ್ಪೆಂಡ್ ಮಾಡಿದ್ದರು. ಆದ್ರೆ ಅವರ ಯೋಗ ಅಲ್ಲಿ ಬರೆದಿರಲಿಲ್ಲ, ಇಲ್ಲಿ (ಕಾಂಗ್ರೆಸ್) ಬರೆದಿತ್ತು. ಹಾಗೆಯೇ ನಿಮ್ಮ ಯೋಗ ಸಹ ಬರೆದಿರಬಹುದು. ಯಾರನ್ನೂ ಅಡ್ಡ ಹಾಕೋಕೆ ಹೋಗ್ಬೇಡಿ, ಪಕ್ಷ ಬೆಳೆಯುವ ನಿಟ್ಟಿನಲ್ಲಿ ಕೆಲಸ ಮಾಡಿ ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದ್ದಾರೆ.

## ಸಂಜಯ್ ಪಾಟೀಲ್

ಹಿಂದುತ್ವದ ಮೇಲೆ ನಿಜವಾಗಿಯೂ ಕಾಳಜಿ ಇದ್ದರೆ ನಿಮ್ಮದೇ ಸರ್ಕಾರ ಇದೆ, ಗೋ ಹತ್ಯೆ ನಿಷೇಧ ಕಾಯ್ದೆ ಜಾರಿಗೆ ತನ್ನಿ, ಹಾಗೇನಾದ್ರೂ ಮಾಡಿದರೆ ನಿಮ್ಮ ಜೊತೆಗೆ ನಾನು ಓಡಾಡುತ್ತೇನೆ. ಒಂದು ವೇಳೆ ನಿಮಗೆ ಮಾಡಲು ಆಗಲಿಲ್ಲ ಎಂದರೆ, ನೀವು ಹಿಂದುತ್ವದ ಹೆಸರು ಹೇಳಬೇಡಿ ಎಂದು ಸಂಜಯ್ ಪಾಟೀಲ್ ಸವಾಲ್ ಹಾಕಿದ್ದಾರೆ.

ಒಂದು ಕಡೆ ಚುನಾವಣೆ ಕಾವು ರಂಗೇರುತ್ತಿದ್ದರೆ, ಇನ್ನೊಂದು ಕಡೆ ನಾಯಕರ ನಡುವಿನ ಮಾತಿನ ವರಸೆಯೂ ಜೋರಾಗುತ್ತಿದ್ದು, ಅತೀ ರೇಖಕ್ಕೂ ಹೋಗುತ್ತಿದೆ. ವೈಯಕ್ತಿಕ ನಿಂದನೆ ಕೂಡ ಚುನಾವಣೆಯಲ್ಲಿ ನಡೆಯುತ್ತಿದ್ದು, ಮತದಾರರು ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಒಟ್ಟಿನಲ್ಲಿ ಮೇ.7ರಂದು ನಡೆಯುವ ಮತದಾನಕ್ಕೆ, ಮತದಾರರು ಯಾರಿಗೆ ಜೈ ಅಂತಾರೆ ಎನ್ನುವುದನ್ನು ಕಾದುನೋಡಬೇಕಿದೆ. ಬದ್ಧ ವೈರಿಗಳನ್ನ ಸೋಲಿಸಲು ತಂತ್ರ-ರಣತಂತ್ರ ನಡೆದಿದ್ದು, ಇದರಲ್ಲಿ ಯಾರು ಸಕ್ಸಸ್ ಆಗುತ್ತಾರೆ ಎನ್ನುವುದು ಜೂನ್ 4ರಂದು ಫಲಿತಾಂಶದ ಮೂಲಕ ಗೊತ್ತಾಗಲಿದೆ.

## ಸಂಕಲ್ಪ ಪತ್ರ ಬಿಡುಗಡೆ

ನಾವು ಹೇಳಿದ್ದನ್ನೇ ಮಾಡುತ್ತೇವೆ: ರಾಜನಾಥ್ ಸಿಂಗ್ ಬಿಜೆಪಿ ತನ್ನ ಪ್ರಣಾಳಿಕೆಯ ಪ್ರತಿ ಭರವಸೆಯನ್ನು ಈಡೇರಿಸುತ್ತಿರುವುದಕ್ಕೆ ನಮಗೆ ಹೆಮ್ಮೆ ಇದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನಾವು ಹೇಳಿದ್ದನ್ನು ಮಾಡುತ್ತೇವೆ. ನಮ್ಮ ಮಾತು ಮತ್ತು ನಡೆಗಳ ನಡುವೆ ಯಾವತ್ತೂ ವ್ಯತ್ಯಾಸವಿರಲಿಲ್ಲ. ಬಿಜೆಪಿಗಷ್ಟೇ ಅಲ್ಲ, ದೇಶದ ಜನತೆಯೂ ಇದನ್ನು ನಂಬಲು ಆರಂಭಿಸಿದ್ದಾರೆ. ಈ ವಿಶ್ವಾಸಾರ್ಹತೆಯೇ ನಮ್ಮ ದೊಡ್ಡ ಶಕ್ತಿ ಎಂದು ರಾಜನಾಥ್ ಸಿಂಗ್ ಹೇಳಿದ್ದಾರೆ.

ಬಿಜೆಪಿ ತನ್ನ ನಿರ್ಣಯ ಪತ್ರಕ್ಕೆ ಜ್ಞಾನ ಎಂದು ಹೆಸರಿಸಿದೆ, ಇದು ಕಾಂಗ್ರೆಸ್‌ನ ನ್ಯಾಯ ಪತ್ರಕ್ಕೆ ಪ್ರತ್ಯುತ್ತರವಾಗಲಿದೆ. 2024 ರ ಲೋಕಸಭಾ ಚುನಾವಣೆಗೆ ಬಿಜೆಪಿ ಸಾರ್ವಜನಿಕರಿಂದ ಸಲಹೆಗಳನ್ನು ಪಡೆಯುವ ಮೂಲಕ ತನ್ನ ಪ್ರಣಾಳಿಕೆಯನ್ನು ಸಿದ್ಧಪಡಿಸಿದೆ.

2024 ರ ಲೋಕಸಭಾ ಚುನಾವಣೆಯ ಪ್ರಣಾಳಿಕೆಯನ್ನು ತಯಾರಿಸಲು ಬಿಜೆಪಿ ಸಮಿತಿಯನ್ನು ರಚಿಸಿದೆ. ಅಧ್ಯಕ್ಷರು ಸೇರಿದಂತೆ 27 ಜನರನ್ನು ಈ ಸಮಿತಿಯ ಸದಸ್ಯರನ್ನಾಗಿ ಮಾಡಲಾಗಿದೆ. ಗೃಹ ಸಚಿವ ರಾಜನಾಥ್ ಸಿಂಗ್ ಅವರನ್ನು ಸಮಿತಿಯ ಅಧ್ಯಕ್ಷರನ್ನಾಗಿ ಮಾಡಲಾಯಿತು. ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಸಂಯೋಜಕರಾಗಿದ್ದಾರೆ. ಸಚಿವ ಪಿಯೂಷ್ ಗೋಯಲ್ ಅವರನ್ನು ಸಹ ಸಂಚಾಲಕರನ್ನಾಗಿ ಮಾಡಲಾಯಿತು.

ಮಧ್ಯಪ್ರದೇಶ ಸಿಎಂ ಮೋಹನ್ ಯಾದವ್, ಅಸ್ಸಾಂ ಸಿಎಂ ಹಿಮಂತ ಬಿಸ್ವಾ ಶರ್ಮಾ, ಗುಜರಾತ್ ಸಿಎಂ ಭೂಪೇಂದ್ರ ಪಟೇಲ್, ಛತ್ತೀಸ್‌ಗಢ ಸಿಎಂ ವಿಷ್ಣುದೇವ್ ಸಾಯಿ, ಅರ್ಜುನ್ ಮುಂಡಾ, ಕಿರಣ್ ರಿಜಿಜು, ಅಶ್ವಿನಿ ವೈಷ್ಣವ್, ಶಿವರಾಜ್ ಸಿಂಗ್ ಚೌಹಾಣ್, ವಸುಂಧರಾ ರಾಜೆ, ಸ್ಮೃತಿ ಇರಾನಿ ಈ ಸಮಿತಿಯ ಸದಸ್ಯರಾಗಿದ್ದಾರೆ. ಇವರಲ್ಲದೆ ವಿವಿಧ ಇಲಾಖೆಗಳ ಆಡಳಿತಾಧಿಕಾರಿಗಳನ್ನೂ ಸಮಿತಿಯಲ್ಲಿ ಸೇರಿಸಲಾಗಿದೆ.

ಮುಂದಿನ 5 ವರ್ಷಗಳ ಕಾಲ ಉಚಿತ ಪಡಿತರ ಯೋಜನೆ ಮುಂದುವರಿಯಲಿದೆ ಎಂಬುದು ಮೋದಿಯವರ ಗ್ಯಾರಂಟಿ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಈ ನಿರ್ಣಯ ಪತ್ರವು ಅಭಿವೃದ್ಧಿ ಹೊಂದಿದ ಭಾರತದ ಎಲ್ಲಾ 4 ಬಲವಾದ ಸ್ತಂಭಗಳನ್ನು ಯುವ ಶಕ್ತಿ, ಮಹಿಳಾ ಶಕ್ತಿ, ಬಡವರು ಮತ್ತು ರೈತರನ್ನು ಸಶಕ್ತಗೊಳಿಸುತ್ತದೆ. ನಮ್ಮ ಗಮನವು ಜೀವನದ ಘನತೆ, ಜೀವನದ ಗುಣಮಟ್ಟ ಮತ್ತು ಹೂಡಿಕೆಯ ಮೂಲಕ ಉದ್ಯೋಗಗಳ ಮೇಲೆ ಕೇಂದ್ರೀಕೃತವಾಗಿದೆ.

ಬಿಜೆಪಿ ಪ್ರತಿ ಭರವಸೆಯನ್ನು ಜಾರಿಗೆ ತಂದಿದೆ-ಮೋದಿ ಕಳೆದ 10 ವರ್ಷಗಳಲ್ಲಿ ಬಿಜೆಪಿ ತನ್ನ ಪ್ರಣಾಳಿಕೆಯ ಪ್ರತಿಯೊಂದು ಅಂಶವನ್ನು ಗ್ಯಾರಂಟಿಯಾಗಿ ಜಾರಿಗೆ ತಂದಿದ್ದೇವೆ ಎಂದರು.

70 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ವ್ಯಕ್ತಿಯೂ ಆಯುಷ್ಮಾನ್ ಭಾರತ್ ಯೋಜನೆಯಡಿ ಬರುತ್ತಾರೆ- ಪ್ರಧಾನಿ ಮೋದಿ

ವಯಸ್ಸಾಗುತ್ತಿದ್ದಂತೆ ಅನೇಕ ಆರೋಗ್ಯ ಸಂಬಂಧಿ ಸಮಸ್ಯೆಗಳು ಕಾಡುತ್ತವೆ, ಇನ್ನುಮುಂದೆ 70 ವರ್ಷ ಮೇಲ್ಪಟ್ಟವರು ಕೂಡ ಆಯುಷ್ಮಾನ್ ಭಾರತ ಯೋಜನೆಯ ಭಾಗವಾಗಿರುತ್ತಾರೆ ಎಂದು ಪ್ರಧಾನಿ ಮೋದಿ ಅಭಯ ನೀಡಿದ್ದಾರೆ.

ಬಿಜೆಪಿಯ ಪ್ರಣಾಳಿಕೆಯ ಪ್ರಮುಖ ಅಂಶಗಳೇನು -ಉದ್ಯೋಗ ಖಾತರಿ -2036 ರಲ್ಲಿ ಒಲಿಂಪಿಕ್ಸ್ ಆತಿಥ್ಯ -3 ಕೋಟಿ ಲಖ್ಪತಿ ದೀದಿ ಮಾಡುವ ಗುರಿ -ಮಹಿಳಾ ಮೀಸಲಾತಿ ಜಾರಿಗೊಳಿಸುವ ಭರವಸೆ -ಕೃಷಿ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು -ಮೀನುಗಾರರಿಗೆ ಯೋಜನೆ -ಇ-ಶ್ರಮ್ ಮೂಲಕ ಕಲ್ಯಾಣ ಯೋಜನೆಯಿಂದ ಪ್ರಯೋಜನ ಪಡೆಯುವುದು -2025 ಬುಡಕಟ್ಟು ಹೆಮ್ಮೆಯ ವರ್ಷ ಪ್ರತಿ ಕ್ಷೇತ್ರದಲ್ಲೂ ಒಬಿಸಿ-ಎಸ್‌ಸಿ-ಎಸ್‌ಟಿಗೆ ಗೌರವ -ಜಾಗತಿಕ ಉತ್ಪಾದನಾ ಕೇಂದ್ರವನ್ನು ರಚಿಸಲು ಸಿದ್ಧತೆ -ಪ್ರಪಂಚದಾದ್ಯಂತ ರಾಮಾಯಣ ಹಬ್ಬವನ್ನು ಆಚರಿಸಲಾಗುವುದು -ಅಯೋಧ್ಯೆಯ ಅಭಿವೃದ್ಧಿ -ಒಂದು ರಾಷ್ಟ್ರ, ಒಂದು ಚುನಾವಣೆ -ರೈಲ್ವೆಯಲ್ಲಿ ಕಾಯುವ ಪಟ್ಟಿಯ ಸಮಸ್ಯೆಯನ್ನು ತೆಗೆದುಹಾಕಲು -ಈಶಾನ್ಯ ಭಾರತದ ಅಭಿವೃದ್ಧಿ

## ಬಡವರಿಗೆ ಉಚಿತ ಪಡಿತರ

ಪೈಪ್ ಮೂಲಕ ಗ್ಯಾಸ್ ತಲುಪಿಸುವ ಕೆಲಸ ಮಾಡಲಾಗುವುದು ಬಿಜೆಪಿ ಸರ್ಕಾರ ಬಡವರಿಗಾಗಿ 4 ಕೋಟಿ ಪಕ್ಕಾ ಮನೆಗಳನ್ನು ನಿರ್ಮಿಸಿದೆ. ಈಗ ರಾಜ್ಯ ಸರ್ಕಾರದಿಂದ ಸಿಗುತ್ತಿರುವ ಹೆಚ್ಚುವರಿ ಮಾಹಿತಿಯನ್ನು ಪರಿಗಣಿಸಿ, ಆ ಕುಟುಂಬಗಳ ಬಗ್ಗೆ ಚಿಂತಿಸುವುದರೊಂದಿಗೆ ಇನ್ನೂ 3 ಕೋಟಿ ಮನೆಗಳನ್ನು ನಿರ್ಮಿಸುವ ಭರವಸೆಯೊಂದಿಗೆ ನಾವು ಮುಂದುವರಿಯುತ್ತೇವೆ. ಇಲ್ಲಿಯವರೆಗೆ ನಾವು ಪ್ರತಿ ಮನೆಗೆ ಅಗ್ಗದ ಸಿಲಿಂಡರ್‌ಗಳನ್ನು ತಲುಪಿಸಿದ್ದೇವೆ, ಈಗ ನಾವು ಪ್ರತಿ ಮನೆಗೆ ಅಗ್ಗದ ಪೈಪ್ಡ್ ಅಡುಗೆ ಅನಿಲವನ್ನು ತಲುಪಿಸಲು ತ್ವರಿತವಾಗಿ ಕೆಲಸ ಮಾಡುತ್ತೇವೆ.

ಮುದ್ರಾ ಯೋಜನೆಯಡಿ 20 ರೂ. ಲಕ್ಷ ಸಾಲ ದೊರೆಯಲಿದೆ ಪ್ರಧಾನಿ ಮೋದಿ ಕಳೆದ ಕೆಲವು ವರ್ಷಗಳಲ್ಲಿ ಮುದ್ರಾ ಯೋಜನೆ ಕೋಟ್ಯಂತರ ಜನರನ್ನು ಉದ್ಯಮಿಗಳನ್ನಾಗಿ ಮಾಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಭಾಷಣದಲ್ಲಿ ಹೇಳಿದರು. ಈ ಯಶಸ್ಸನ್ನು ಕಂಡ ಬಿಜೆಪಿ ಮತ್ತೊಂದು 'ಸಂಕಲ್ಪ' ಕೈಗೊಂಡಿದೆ. ಮುದ್ರಾ ಯೋಜನೆಯಡಿ ಮೊದಲ ಸಾಲ 10 ಲಕ್ಷ ರೂ. ಇದೀಗ ಬಿಜೆಪಿ ಈ ಮಿತಿಯನ್ನು 20 ಲಕ್ಷಕ್ಕೆ ಹೆಚ್ಚಿಸಲು ನಿರ್ಧರಿಸಿದೆ.

ದೇಶದಲ್ಲಿ ಮೂರು ರೀತಿಯ ವಂದೇ ಭಾರತ್ ರೈಲುಗಳು ಓಡಲಿವೆ ಬಿಜೆಪಿ ವಂದೇ ಭಾರತ್ ರೈಲುಗಳನ್ನು ದೇಶದ ಮೂಲೆ ಮೂಲೆಗೆ ವಿಸ್ತರಿಸಲಿದೆ ಎಂದು ಪ್ರಧಾನಿ ಮೋದಿ ಹೇಳಿದರು. ವಂದೇ ಭಾರತ್‌ನ ಮೂರು ಮಾದರಿಗಳು ದೇಶದಲ್ಲಿ ನಡೆಯಲಿವೆ ವಂದೇ ಭಾರತ್ ಸ್ಲೀಪರ್, ವಂದೇ ಭಾರತ್ ಚೇರ್‌ಕಾರ್ ಮತ್ತು ವಂದೇ ಭಾರತ್ ಮೆಟ್ರೋ. ಇಂದು ಅಹಮದಾಬಾದ್ ಮುಂಬೈ ಬುಲೆಟ್ ಟ್ರೈನ್ ಕಾಮಗಾರಿ ಭರದಿಂದ ಸಾಗುತ್ತಿದ್ದು, ಬಹುತೇಕ ಮುಕ್ತಾಯವಾಗಿದೆ. ಅದೇ ರೀತಿ ಉತ್ತರ ಭಾರತದಲ್ಲಿ ಒಂದು ಬುಲೆಟ್ ರೈಲು, ದಕ್ಷಿಣ ಭಾರತದಲ್ಲಿ ಒಂದು ಬುಲೆಟ್ ರೈಲು ಮತ್ತು ಪೂರ್ವ ಭಾರತದಲ್ಲಿ ಒಂದು ಬುಲೆಟ್ ರೈಲು ಓಡಲಿದೆ. ಇದಕ್ಕಾಗಿ ಸರ್ವೆ ಕಾರ್ಯವೂ ಶೀಘ್ರ ಆರಂಭವಾಗಲಿದೆ.

ದೇಶಕ್ಕೆ ಯುಸಿಸಿ ಅಗತ್ಯ- ಪ್ರಧಾನಿ ಮೋದಿ ಒಂದು ರಾಷ್ಟ್ರ, ಒಂದು ಚುನಾವಣೆ ಎಂಬ ಕಲ್ಪನೆಯನ್ನು ಸಾಕಾರಗೊಳಿಸುವ ಸಂಕಲ್ಪದೊಂದಿಗೆ ನಾವು ಮುನ್ನಡೆಯುತ್ತೇವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ದೇಶದ ಹಿತಾಸಕ್ತಿಯಲ್ಲಿ ಏಕರೂಪ ನಾಗರಿಕ ಸಂಹಿತೆಯನ್ನು (ಯುಸಿಸಿ) ಸಮಾನವಾಗಿ ಬಿಜೆಪಿ ಪರಿಗಣಿಸುತ್ತದೆ. ಬಿಜೆಪಿ ಅಭಿವೃದ್ಧಿ ಮಂತ್ರ ಹಾಗೂ ಪರಂಪರೆಯಲ್ಲಿ ನಂಬಿಕೆ ಇಟ್ಟಿದೆ ಎಂದರು. ನಾವು ಪ್ರಪಂಚದಾದ್ಯಂತ ತಿರುವಳ್ಳುವರ್ ಸಾಂಸ್ಕೃತಿಕ ಕೇಂದ್ರಗಳನ್ನು ರಚಿಸುತ್ತೇವೆ. ಜಗತ್ತಿನ ಅತ್ಯಂತ ಪುರಾತನ ಭಾಷೆ ತಮಿಳು ನಮ್ಮ ಹೆಮ್ಮೆ. ಜಾಗತಿಕವಾಗಿ ತಮಿಳು ಭಾಷೆಯ ವರ್ಚಸ್ಸು ಹೆಚ್ಚಿಸಲು ಬಿಜೆಪಿ ಪ್ರತಿ ಪ್ರವಾಸ ಮಾಡಲಿದೆ.

## ಮೊದಲನೇ ಪುಟದಿಂದ...

**ಮತ್ತಷ್ಟು ಅಂಶಗಳು ಹೀಗಿವೆ**

- ಬಡವರಿಗೆ 3 ಕೋಟಿ ಮನೆಗಳ ನಿರ್ಮಾಣ
- ಪೈಪ್‌ಲೈನ್ ಮೂಲಕ ಅಡುಗೆ ಅನಿಲ ಪೂರೈಕೆ
- ಕೋಟ್ಯಂತರ ಕುಟುಂಬಗಳಿಗೆ ಸೋಲಾರ್ ಮೂಲಕ ಉಚಿತವಾಗಿ ವಿದ್ಯುತ್ ಪೂರೈಕೆ
- ಮುದ್ರಾ ಯೋಜನೆ ಅಡಿಯಲ್ಲಿ ಸಿಗುವ ಸಾಲದ ಮೊತ್ತ 20 ಲಕ್ಷ ರೂ.ಗೆ ಏರಿಕೆ
- ಅಮೃತ್ ಭಾರತ್, ವಂದೇ ಭಾರತ್ ರೈಲುಗಳ ಸಂಖ್ಯೆ ಹೆಚ್ಚಳ
- ಮಂಗಳಮುಖಿಯರಿಗೂ ಆಯುಷ್ಮಾನ್ ಭಾರತ್ ಯೋಜನೆ ಅಡಿ ಉಚಿತ ಚಿಕಿತ್ಸೆ ● 10 ಕೋಟಿ ಮಹಿಳೆಯರಿಗೆ ಉದ್ಯೋಗ, ಉದ್ಯಮ ಕುರಿತು ಕೌಶಲ ತರಬೇತಿ
- ಮೂರು ಕೋಟಿ ಮಹಿಳೆಯರಿಗೆ ಲಕ್‌ಪತಿ ದೀದಿ ಯೋಜನೆಯ ಗ್ಯಾರಂಟಿ ● ರೈತರಿಗೆ ಪಿಎಂ ಕಿಸಾನ್ ಯೋಜನೆ ಅಡಿಯಲ್ಲಿ ಹಣ ವರ್ಗಾವಣೆ ಮುಂದುವರಿಕೆ
- ದೇಶಾದ್ಯಂತ ಡೇರಿ ಸಹಕಾರ ಸಂಘಗಳನ್ನು ಹೆಚ್ಚಿಸಲಾಗುವುದು
- ಕ್ರೀಡೆಯಲ್ಲಿ ಸ್ತ್ರೀಯರ ಪ್ರಾತಿನಿಧ್ಯ ಹೆಚ್ಚಿಸಲು ಹೊಸ ಯೋಜನೆ
- ತಮಿಳು ಭಾಷೆಯ ವೈಶಿಷ್ಟ್ಯ ಸಾರಲು ಆದ್ಯತೆ
- ಉದ್ಯೋಗ ಖಾತರಿ
- 2036 ರಲ್ಲಿ ಒಲಿಂಪಿಕ್ಸ್ ಆತಿಥ್ಯ
- 3 ಕೋಟಿ ಲಕ್ ಪತಿ ದೀದಿ ಮಾಡುವ ಗುರಿ
- ಮಹಿಳಾ ಮೀಸಲಾತಿ ಜಾರಿಗೊಳಿಸುವ ಭರವಸೆ
- ಕೃಷಿ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು
- ಮೀನುಗಾರರಿಗೆ ಯೋಜನೆ
- ಇ-ಶ್ರಮ್ ಮೂಲಕ ಕಲ್ಯಾಣ ಯೋಜನೆಯ ಪ್ರಯೋಜನ
- 2025 ಬುಡಕಟ್ಟು ಹೆಮ್ಮೆಯ ವರ್ಷ
- ಪ್ರತಿ ಕ್ಷೇತ್ರದಲ್ಲೂ ಒಬಿಸಿ-ಎಸ್‌ಸಿ-ಎಸ್‌ಟಿಗೆ ಗೌರವ
- ಜಾಗತಿಕ ಉತ್ಪಾದನಾ ಕೇಂದ್ರ ರಚಿಸಲು ಸಿದ್ಧತೆ
- ಪ್ರಪಂಚದಾದ್ಯಂತ ರಾಮಾಯಣ ಹಬ್ಬ
- ಅಯೋಧ್ಯೆಯ ಅಭಿವೃದ್ಧಿ
- ಒಂದು ರಾಷ್ಟ್ರ, ಒಂದು ಚುನಾವಣೆ
- ಈಶಾನ್ಯ ಭಾರತದ ಅಭಿವೃದ್ಧಿ
- ಸೆಮಿಕಂಡಕ್ಟರ್ ಮತ್ತು ಬಾಹ್ಯಾಕಾಶ ವಲಯದಲ್ಲಿ ಅಭಿವೃದ್ಧಿ

## ಭಯ ಹುಟ್ಟಿಸುತ್ತಾರೆ

ಭಾರತದ ಮಕ್ಕಳಿಗೆ ಅಧಿಕಾರ ಇದೆ. ಕಾಂಗ್ರೆಸ್‌ನವರು ಕೂಗಲಿ ನಾವು ಸ್ವಾಗತ ಮಾಡುತ್ತೇವೆ. ಭಾರತ ಮಾತೆ ಇನ್ನೂ ಖುಷಿ ಆಗುತ್ತಾಳೆ ಎಂದರು. ಭಾರತ ಮಾತಾ ಕಿ ಜೈ ಎಂದು ಹೇಳಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಅಪ್ಪಣೆ ಕೇಳಿರುವುದು ಅಲ್ಲಿರುವವರ ಮನಸ್ಥಿತಿ ಏನು ಎಂದು ಬಿಂಬಿಸುತ್ತದೆ ಎಂದು ಹೇಳಿದರು.

ಬಿಜೆಪಿ 400 ಸೀಟು ಗೆಲ್ಲುವುದಿಲ್ಲ. ಅಧಿಕಾರಕ್ಕೆ ಬರುವುದಿಲ್ಲ ಎಂಬ ಸಿಎಂ ಹೇಳಿಕೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್‌ನವರ ಎಲೆಯೊಳಗೆ ಕಲ್ಲು ಬಿದ್ದಿದೆ. ಅವರು ಸ್ಪರ್ಧೆ ಮಾಡಿರುವುದೇ 230 ಸ್ಥಾನಗಳಿಗೆ. ಇನ್ನೊಬ್ಬರ ಬಗ್ಗೆ ಮಾತನಾಡುತ್ತಾರೆ. ನಾವು 100% 370 ಸೀಟು ದಾಟುತ್ತೇವೆ. ಕೇಂದ್ರದಲ್ಲಿ ಮತ್ತೆ ನಮ್ಮ ಬಿಜೆಪಿ ಸರ್ಕಾರ ಬರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ನಿರ್ಮಲಾನಂದ ನಾಥ ಸ್ವಾಮೀಜಿ ಅವರ ಫೋನ್ ಕದ್ದಾಲಿಕೆಯ ಆರೋಪದ ಕುರಿತು ಮಾತನಾಡಿದ ಅವರು, ಫೋನ್ ಕದ್ದಾಲಿಕೆಯ ಬಗ್ಗೆ ಆರೋಪ ಪ್ರತ್ಯಾರೋಪ ಇವೆ. ಯಾವುದಕ್ಕೂ ಸ್ಪಷ್ಟತೆ ಇಲ್ಲ. ಸ್ಪಷ್ಟತೆ ಇದ್ದಾಗ ಮಾತ್ರ ಅದರ ಬಗ್ಗೆ ಮಾತನಾಡಬೇಕು ಎಂದು ತಿಳಿಸಿದರು. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಥರ ಸಿರಹಟ್ಟಿಯ ಫಕೀರೇಶ್ವರ ಮಠದ ಶ್ರೀ ದಿಂಗಾಲೇಶ್ವರ ಸ್ವಾಮೀಜಿ ಆಗುತ್ತಾರೆ ಎಂಬ ಮಾತಿಗೆ ಪ್ರತಿಕ್ರಿಯಿಸಿ, ಜನರು ತೀರ್ಮಾನ ಮಾಡಿದರೆ ಯಾಕೆ ಆಗಬಾರದು ಆಗಲಿ ಬಿಡಿ ಎಂದು ಹೇಳಿದರು.

## ಪ್ರಜ್ವಲ್

ಚಿಹ್ನೆ ತೆನೆ ಹೊತ್ತ ಮಹಿಳೆ ಇರುತ್ತದೆ. ಮಹಿಳೆಯ ಹೆಸರು ಕಮಲ ಎಂದು ಹೆಸರಿಟ್ಟರು.

ಇದು ದೇಶಕ್ಕಾಗಿ ನಡೆಯುತ್ತಿರುವ ಚುನಾವಣೆ. ಅಭಿವೃದ್ಧಿ ವಿಚಾರದಲ್ಲಿ ನಮಗೆ ಯಾರೂ ಸಾಟಿ ಇಲ್ಲ. ಕಾಂಗ್ರೆಸ್‌ನವರು ಹೆಚ್‌ಡಿ ರೇವಣ್ಣ ದುರಂಹಕಾರಿ ಎಂದು ಹೇಳುತ್ತಾರೆ. ರೇವಣ್ಣ ಅವರಿಗೆ ಸ್ವಲ್ಪ ಹೆಚ್ಚು, ಆದರೆ ಹೃದಯದಲ್ಲಿ ಪ್ರೀತಿ ಇದೆ ಎಂದು ಪ್ರಜ್ವಲ್ ರೇವಣ್ಣ ಹೇಳಿದರು.

**ಹಾಸನ ಉಸ್ತುವಾರಿ ವಿರುದ್ಧ ಆರೋಪ:** ಆರ್‌ಎಸ್‌ಎಸ್ ಸ್ವಯಂ ಸೇವಕ ವಿಜಯಕುಮಾರ್ ಮೇಲಿನ ಹಲ್ಲೆಯ ಪ್ರಕರಣದಲ್ಲಿ ಜಿಲ್ಲಾ ಉಸ್ತುವಾರಿ ಕೆಎನ್ ರಾಜಣ್ಣ ಭಾಗಿಯಾಗಿದ್ದಾರೆ ಎಂದು ಪ್ರಜ್ವಲ್ ರೇವಣ್ಣ ಆರೋಪಿಸಿದರು. ಈ ಪ್ರಕರಣದಲ್ಲಿ ಪೊಲೀಸರು ಒತ್ತಡದಲ್ಲಿ ಸಿಲುಕಿದ್ದು, ನ್ಯಾಯ ಸಿಗೋವರೆಗೂ ಹೋರಾಟ ಮಾಡುತ್ತೇವೆ ಎಂದು ಪ್ರಜ್ವಲ್ ರೇವಣ್ಣ ಹೇಳಿದರು.

ಕೆಲವರು ರಾತ್ರಿಯೇ ಪೊಲೀಸರಿಗೆ ಫೋನ್ ಮಾಡಿ ತಿಳಿಸಿದ್ದಾರೆ. ಕಿಡಿಗೇಡಿಗಳ ವಿರುದ್ಧ ಪೊಲೀಸರು ಕ್ರಮ ತೆಗೆದುಕೊಳ್ಳಬೇಕಿತ್ತು. ಆದರೆ ಯಾವುದೇ ಕ್ರಮ ಜರುಗಿಸಿಲ್ಲ. ರಾಜಕೀಯ ಒತ್ತಡಕ್ಕೆ ಸಿಲುಕಿ ರೌಡಿಗಳ ರಕ್ಷಣೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

**ತಲೆಗೆ ಗಂಭೀರ ಗಾಯ:** ವಿಜಯ್‌ಕುಮಾರ್ ಅವಿವಾಹಿತರಾಗಿದ್ದು, ಕಲ್ಲಿನಿಂದ ಹೊಡೆದಿದ್ದರಿಂದ ತಲೆಗೆ ಗಂಭೀರವಾದ ಗಾಯವಾಗಿದೆ. ಅಂಗಡಿ ಸಹ ಧ್ವಂಸಗೊಳಿಸಲಾಗಿದೆ. ವಿಜಯ್ ಕುಮಾರ್ ಚಿಕಿತ್ಸೆ ಹಣ ಪಾವತಿಸಲು ಅವರ ಮನೆಯಲ್ಲಿ ಹಣ ಇಲ್ಲ. ಒಳ್ಳೆಯ ವ್ಯಕ್ತಿತ್ವ ಇರೋ ವ್ಯಕ್ತಿ ಮೇಲೆ ಹಲ್ಲೆ ಮಾಡುವವರ ಮನಸ್ಥಿತಿ ಹೇಗಿರಬೇಕು ಎಂದು ಪ್ರಜ್ವಲ್ ರೇವಣ್ಣ ಆತಂಕ ವ್ಯಕ್ತಪಡಿಸಿದರು.

## ಯುವಕ ಆತ್ಮಹತ್ಯೆ

ಬೆಳಗ್ಗೆ ಸುಮಾರು 10-30ರ ಆಸುಪಾಸಿನಲ್ಲಿ ಈ ಘಟನೆ ನಡೆದಿದ್ದು, ಬೆಂಗಳೂರಿನಿಂದ ಶಿವಮೊಗ್ಗಕ್ಕೆ ಬರುತ್ತಿದ್ದ ರೈಲಿನಿಂದ ಏಕಾಏಕಿ ಯುವಕನೊಬ್ಬನು ತುಂಗಾ ನದಿಗೆ ಹಾರಿದ್ದಾನೆ. ಇದನ್ನು ನೋಡಿದ ಪ್ರಯಾಣಿಕರು ರೈಲ್ವೇ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಯುವಕನು ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಸುದ್ದಿ ತಿಳಿಯುತ್ತಿದ್ದಂತೆ ಘಟನಾ ಸ್ಥಳಕ್ಕೆ ತುಂಗಾ ನಗರ ಪೊಲೀಸ್ ಎಂಟ್ರಿ ಕೊಟ್ಟಿದ್ದರು. ಸ್ಥಳೀಯರ ಸಹಾಯದಿಂದ ಯುವಕನ ಮೃತದೇಹವನ್ನು ಹೊರಗೆ ತೆಗೆದಿದ್ದಾರೆ. ನದಿಯಲ್ಲಿ ನೀರು ಬತ್ತಿ ಹೋಗಿದ್ದು, ಎತ್ತರದಿಂದ ನದಿಗೆ ಹಾರಿದ ಬಳಿಕ ತಲೆಗೆ ಬಲವಾದ ಪೆಟ್ಟು ಬಿದ್ದಿದೆ. ಇದರ ಪರಿಣಾಮ ವ್ಯಕ್ತಿಯು ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಅಷ್ಟಕ್ಕೂ ಆತ್ಮಹತ್ಯೆ ಮಾಡಿಕೊಂಡಿರುವ ಯುವಕನು ಯಾರು?, ಎಲ್ಲಿಗೆ ಹೋಗುತ್ತಿದ್ದನು. ಆತ್ಮಹತ್ಯೆಗೆ ಕಾರಣವೇನು ಎನ್ನುವ ಮಾಹಿತಿಗಳು ಪೊಲೀಸರಿಗೆ ಸಿಕ್ಕಿಲ್ಲ. ಸದ್ಯ ಮೃತದೇಹವನ್ನು ಶಿವಮೊಗ್ಗದ ಮೆಗ್ಗಾನ್ ಜಿಲ್ಲಾಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ. ಮೃತವ್ಯಕ್ತಿ ಯಾರು ಎನ್ನುವುದನ್ನು ಪೊಲೀಸರು ಮೊದಲು ಪತ್ತೆ ಮಾಡಬೇಕಿದೆ. ಸದ್ಯ ತುಂಗಾ ನಗರ ಪೊಲೀಸರು ಆತ್ಮಹತ್ಯೆಯ ಹಿಂದಿನ ರಹಸ್ಯ ಬೇಧಿಸಲು ತನಿಖೆ ಚುರುಕುಗೊಳಿಸಿದ್ದಾರೆ.

## ಆರು ಸಾವು

ವಾಹನವು ಥಾತ್ರಿಯಿಂದ ಕಥಾವಾಕ್ಕೆ ತೆರಳುತ್ತಿದ್ದಾಗ ಖಾನ್ಪುರದಲ್ಲಿ ಸಂಜೆ 7 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ ಎಂದು ಅವರು ತಿಳಿಸಿದ್ದಾರೆ. ರಕ್ಷಣಾ ಕಾರ್ಯಾಚರಣೆಯ ನೇತೃತ್ವ ವಹಿಸಿದ್ದ ಥಾತ್ರಿ ಪೊಲೀಸ್ ಠಾಣೆಯ ಠಾಣಾಧಿಕಾರಿ ಸುರೇಶ್ ಗೌತಮ್, ಅಪಘಾತದಲ್ಲಿ ಮಹಿಳೆ ಮತ್ತು ನಾಲ್ಕು ವರ್ಷದ ಬಾಲಕಿ ಸೇರಿದಂತೆ ಐವರು ಸಾವನ್ನಪ್ಪಿದ್ದು, ಐವರು ಆಸ್ಪತ್ರೆಗೆ ದಾಖಲಾಗಿದ್ದು, ಚಿಂತಾಜನಕರಾಗಿದ್ದಾರೆ ಎಂದು ಹೇಳಿದ್ದಾರೆ. ಗಾಯಗೊಂಡಿರುವ ಐವರನ್ನು ಆಸ್ಪತ್ರೆಗೆ ಸಾಗಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅವರು ಹೇಳಿದರು, ಅಪಘಾತದಲ್ಲಿ ವಾಹನಕ್ಕೆ ವ್ಯಾಪಕ ಹಾನಿಯಾಗಿದೆ. ಮೃತ ನಾಲ್ವರನ್ನು ಮುಖ್ತಿಯಾರ್ ಅಹ್ಮದ್, ರಿಯಾಜ್ ಅಹ್ಮದ್, ಮೊಹಮ್ಮದ್ ರಫಿ, ಇರೀನಾ ಬೇಗಂ ಎಂದು ಪೊಲೀಸರು ಗುರುತಿಸಿದ್ದಾರೆ.

ನಾಲ್ಕು ವರ್ಷದ ಬಾಲಕಿ ಮೊಹಮ್ಮದ್ ಅಮೀರ್ ಮತ್ತು ಸೈಮಾ ದಂಪತಿಯ ಪುತ್ರಿಯಾಗಿದ್ದು, ಅಪಘಾತದಲ್ಲಿ ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಗಾಯಗೊಂಡ ಇತರರಲ್ಲಿ ಸೂಫಿಯಾನ್ ಶೇಖ್ ಮತ್ತು ಇಬ್ಬರು ಹುಡುಗಿಯರು ಸೇರಿದ್ದಾರೆ ಎಂದು ಅವರು ಹೇಳಿದರು. ಡೆಮಾಕ್ರಟಿಕ್ ಪ್ರೋಗ್ರೆಸಿವ್ ಆಜಾದ್ ಪಕ್ಷದ ಅಧ್ಯಕ್ಷ ಮತ್ತು ಮಾಜಿ ಮುಖ್ಯಮಂತ್ರಿ ಗುಲಾಂ ನಬಿ ಆಜಾದ್ ಅವರು ಅಪಘಾತದಲ್ಲಿ ಜೀವಹಾನಿಯ ಬಗ್ಗೆ ದುಃಖ ವ್ಯಕ್ತಪಡಿಸಿದ್ದಾರೆ ಮತ್ತು ಚೆನಾಬ್ ಕಣಿವೆ ಪ್ರದೇಶದಲ್ಲಿ ಹೆಚ್ಚುತ್ತಿರುವ ಅಪಘಾತಗಳನ್ನು ತಡೆಯಲು ತೀವ್ರತರವಾದ ಕ್ರಮಗಳನ್ನು ಒತ್ತಾಯಿಸಿದರು.

## ಕೊಲೆ

ಮದುವೆ ಬಳಿಕ ಗಿರಿಜಾಗೆ ಗರ್ಭಪಾತ ಆಗಿತ್ತು. ಇದಾದ ಬಳಿಕ ಸದ್ಯಕ್ಕೆ ಮಗು ಬೇಡ ಎಂದು ನವೀನ್ ಎಂದಿದ್ದ. ಆದ್ರೆ ಗಿರಿಜಾ ಮಗು ಬೇಕು ಎಂದು ಪಟ್ಟು ಹಿಡಿದಿದ್ದಳು. ಇದೇ ವಿಚಾರಕ್ಕೆ ಇಬ್ಬರ ನಡುವೆ ದಿನನಿತ್ಯ ಜಗಳ ನಡೆಯುತ್ತಿತ್ತು. ಅದರಂತೆ ಏಪ್ರಿಲ್ 12 ರಂದು ಮತ್ತೆ ಜಗಳವಾಗಿದ್ದು, ಕೊನೆಗೆ ನವೀನ್ ಮಲಗಿರುವ ಸಮಯ ನೋಡಿ ಉಸಿರುಗಟ್ಟಿಸಿ ಪತ್ನಿ ಗಿರಿಜಾಳನ್ನ ಕೊಲೆ ಮಾಡಿದ್ದಾನೆ. ಈ ಬಗ್ಗೆ ಎಚ್‌ಎಎಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿ ನವೀನ್ ನನ್ನು ಬಂಧಿಸಿದ್ದಾರೆ.

ಮೃತ ಗಿರಿಜಾಳ ಸಹೋದರ ಮಂಜುನಾಥ್ ಘಟನೆ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದು, ಕೊಲೆ ಬಗ್ಗೆ ಪೊಲೀಸರು ಮಾಹಿತಿ ತಿಳಿಸಿದ್ದಾರೆ. ಮಗುವಿನ ವಿಚಾರಕ್ಕೆ ಗಲಾಟೆ ಆಗ್ತಿತ್ತು . ಅವಳು ಮಗು ಬೇಕು ಅಂತಿದ್ಲು, ಈತ ಬೇಡ ಅಂತಿದ್ದ. ನವೀನ್‌ಗೆ ಬೇರೆ ಅಫೇರ್ ಕೂಡ ಇತ್ತು. ನಮಗೆಲ್ಲ ಧಮ್ಕಿ ಹಾಕುತ್ತಿದ್ದ. 20 ತೊಲೆ ಚಿನ್ನ ಕೊಟ್ಟು ಮದುವೆ ಮಾಡಿದ್ವಿ/ 4 ತಿಂಗಳು ಚೆನ್ನಾಗಿದ್ದ ಅಮೇಲೆ ಗಲಾಟೆ ಶುರುವಾಗಿದೆ. ಅಬಾರ್ಷನ್ ಮಾಡಿಸಬೇಕು ಅಂತಿದ್ದ. ನಮ್ಮ ಅಕ್ಕ ಒಪ್ಪುತ್ತಿರಲಿಲ್ಲ ಎಂದು ಹೇಳಿದ್ದಾರೆ.

## ರೋಡ್ ಶೋ

ರೋಡ್ ಶೋ ನಡೆಯುವ ಲೇಡಿಹಿಲ್ ಬಳಿಯ ಶ್ರೀ ನಾರಾಯಣಗುರು ವೃತ್ತ ಲಾಲ್‌ಬಾಗ್. ಬಲ್ಲಾಳ್‌ಬಾಗ್ ಕೊಡಿಯಾಲ್ ಗುತ್ತು ಬಿ.ಜಿ ಸ್ಕೂಲ್ ಜಂಕ್ಷನ್ ಪಿ.ವಿ.ಎಸ್ ನವಭಾರತ ವೃತ್ತ ಹಂಪನಕಟ್ಟೆವರೆಗೆ ವಾಹನಗಳ ಸಂಚಾರ ನಿಷೇಧಿಸಲಾಗಿದೆ. ಕಾರ್ ಸ್ಟ್ರೀಟ್ ಕುದ್ರೋಳಿ ಕೂಳೂರು ಫೆರ್ರಿ ರಸ್ತೆ ಕಡೆಯಿಂದ ಅಡ್ಡ ರಸ್ತೆ ಮೂಲಕ ಎಂಜಿ ರಸ್ತೆ ಪ್ರವೇಶಿಸುವ ಎಲ್ಲ ವಾಹನಗಳ ಸಂಚಾರಕ್ಕೆ ಬ್ರೇಕ್ ಹಾಕಲಾಗಿದೆ. ಕೆಎಸ್ ಆರ್ ಟಿಸಿ, ಶ್ರೀದೇವಿ ಕಾಲೇಜು ರಸ್ತೆ, ಕೊಡಿಯಾಲ್ ಗುತ್ತು ರಸ್ತೆ, ಜೈಲು ರಸ್ತೆ ಹಾಗೂ ಬಿಜೈ ಚರ್ಚ್ ರಸ್ತೆ ಮೂಲಕ ಎಂ.ಜಿ ರಸ್ತೆಗೆ ಬರುವ ಅಡ್ಡ ರಸ್ತೆ ಹಾಗೂ ಬಂಟ್ಸ್ ಹಾಸ್ಟೆಲ್ ಮೂಲಕ ಪಿವಿಎಸ್ ಕಡೆಗೆ ಹೋಗಲು ಅವಕಾಶವಿಲ್ಲ. ಕೊಟ್ಟಾರ ಚೌಕಿ, ಉರ್ವಾ ಸ್ಟೋರ್, ಕೋಟೆಕಣಿ ಕ್ರಾಸ್, ಮಣ್ಣಗುಡ್ಡ ಜಂಕ್ಷನ್ ಮತ್ತು ಉರ್ವಾ ಮಾರ್ಕೆಟ್ ಕಡೆಯಿಂದ ನಾರಾಯಣಗುರು ವೃತ್ತ (ಲೇಡಿಹಿಲ್)ದ ಕಡೆಗೆ ಎಲ್ಲ ತರಹದ ವಾಹನ ಸಂಚಾರ ನಿಷೇಧಿಸಲಾಗಿದೆ.

ಕೆಎಸ್‌ಆರ್ ಟಿಸಿಯಿಂದ ಲಾಲ್‌ಬಾಗ್ ಮುಖಾಂತರ ನಾರಾಯಣಗುರು ವೃತ್ತ ಕಡೆ ಹೋಗುವ ಹಾಗೂ ಬಂಟ್ಸ್ ಹಾಸ್ಟೆಲ್, ಕರಂಗಲ್ಪಾಡಿ, ಕೋರ್ಟ್ ಕ್ರಾಸ್ ರಸ್ತೆಯಿಂದ ಪಿವಿಎಸ್ ಹೋಗುವ ಮತ್ತು ಎಂಜಿ ರೋಡ್ , ಕೆ.ಎಸ್.ರಾವ್ ರೋಡ್, ಡೊಂಗರಕೇರಿ ರಸ್ತೆ, ಗದ್ದೆಕೇರಿ ರೋಡ್, ವಿ.ಟಿ. ರೋಡ್, ಶಾರದಾ ವಿದ್ಯಾಲಯ ರಸ್ತೆಯಿಂದ ನವಭಾರತ ಸರ್ಕಲ್ ಕಡೆಗೆ ವಾಹನ ಸಂಚಾರಕ್ಕೆ ನಿಷೇಧ ಹೇರಲಾಗಿದೆ. ಎಂಜಿ ರಸ್ತೆಯಿಂದ ಜೈಲ್ ರೋಡ್ ಮುಖಾಂತರ ಬಿಜೈ ಚರ್ಚ್ ರೋಡ್ ನಲ್ಲಿ ವಾಹನ ಸಂಚಾರಕ್ಕೆ ನಿಷೇಧಿಸಲಾಗಿದೆ.




ಬೆಂಗಳೂರಿನ ಬಸವನಗುಡಿಯಲ್ಲಿರುವ ಜಗದ್ಗುರು ಶ್ರೀಮನ್ಮಧ್ವಾಚಾರ್ಯ ಮೂಲಮಹಾಸಂಸ್ಥಾನ ಶ್ರೀಮದುಪೇಂದ್ರ ತೀರ್ಥ ಪೀಠ - ಪುತ್ತಿಗೆ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಗುಣೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಏಪ್ರಿಲ್ 13ರಂದು ವಸಂತ ಧಾರ್ಮಿಕ ಶಿಬಿರ -2024ರ ಸಮಾರಂಭವು ಉದ್ಘಾಟನೆಗೊಂಡಿತು. ಈ ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಶ್ರೀ ಕೆ ಕೃಷ್ಣ ಅವರು ಆಗಮಿಸಿದ್ದರು. ಶ್ರೀ ಎಂ.ಬಿ. ಕುಂಜಾರ್, ಶ್ರೀ ವಾದಿರಾಜ ಅಗ್ನಿಹೋತ್ರಿ, ಶ್ರೀ ಸುಬ್ರಮಣ್ಯ ನಕ್ಷತ್ರಿ, ಶ್ರೀಮತಿ ಸೌಮ್ಯ ಜೋಶಿ, ಶ್ರೀಮತಿ ಭಾಗ್ಯಲಕ್ಷ್ಮೀ ಆಚಾರ್ಯ, ಶ್ರೀಮತಿ. ಮಲ್ಲಿಕಾ ನಕ್ಷತ್ರಿ ಉಪಸ್ಥಿತರಿದ್ದರು. ಸಹಯೋಗ : ತೌಳವ ಮಾಧ್ವ ಒಕ್ಕೂಟ ಶಶಿಧರ ಆಚಾರ್ಯ ಮತ್ತು ತಂಡ.

## ಗ್ಯಾರಂಟಿ ಯೋಜನೆಗಳಿಗೆ ಮರುಳಾಗಿ ಮತ ಹಾಕಿದರೆ ದೇಶ ಆದೋಗತಿಗೆ ಹೋಗಲಿದೆ



**ಚಾಮರಾಜನಗರ:** ಈ ಬಾರಿಯ ಲೋಕಸಭಾ ಚುನಾ ವಣೆಯಲ್ಲಿ ಮತದಾರರು ಕಾಂಗ್ರೆಸ್‌ನ ಗ್ಯಾರಂಟಿ ಯೋಜನೆಗಳಿಗೆ ಮರುಳಾಗಿ ಮತ ಹಾಕಿದರೆ ದೇಶ ಆದೋಗತಿಗೆ ಹೋಗಲಿದೆ ಎಂದು ಬಿಜೆಪಿ ಒಬಿಸಿ ರಾಷ್ಟ್ರೀಯ ಕಾರ್ಯ ಕಾರಿಣಿ ಸದಸ್ಯ ನೂರೊಂದುಶೆಟ್ಟಿ ಹೇಳಿದರು.

ನರೇಂದ್ರಮೋದಿ ಅವರು ಭ್ರಷ್ಟಾಚಾರಿಗಳನ್ನು ಬಗ್ಗು ಬಡಿಯುತ್ತಿದ್ದಾರೆ. ಕಾಂಗ್ರೆಸ್ ನವರು ಸ್ವಾರ್ಥಕ್ಕಾಗಿ ದೇಶ ವಿಭಜನೆ ಮನಸ್ಥಿತಿಗೆ ಹೋಗಿದ್ದಾರೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಒಕ್ಕೂಟ ಯಶಸ್ವಿ ಯಾಗುತ್ತದೆ ಎಂದು ಸುದ್ದಿಗೋಷ್ಟಿಯಲ್ಲಿ ತಿಳಿಸಿದರು. ರಾಹುಲ್ ಗಾಂಧಿ ನಾಯಕತ್ವ

ಸಂಪೂರ್ಣವಾಗಿ ವಿಫಲ ವಾಗಿದೆ ಎಂದು ಅರಿತಿರುವ ಕಾಂಗ್ರೆಸ್ಸಿಗರು ಅವರ ಹೆಸರನ್ನು ಹೇಳಲು ಭಯ ಬೀಳುತ್ತಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ವಿಶ್ವಾಸಾರ್ಹ ನಾಯಕತ್ವವಿಲ್ಲ. ಜೊತೆಗೆ ಸರ್ಕಾರದ ಸಾಧನೆಯ ಬೆಂಬಲವೂ ಇಲ್ಲದೇ ಕೇವಲ ಕೇಂದ್ರ ಸರ್ಕಾರದ ಅನುದಾನದ ಬಗ್ಗೆ ಜನರ ದಾರಿ ತಪ್ಪಿಸಿ ಆ ಮೂಲಕ ಜನರ ಬೆಂಬಲ ಗಳಿಸಬಹುದೆಂಬ ಭ್ರಮೆಯಲ್ಲಿ ತಮ್ಮ ಗಮನ ಕೇಂದ್ರಿಕರಿಸಿದ್ದಾರೆ ಎಂದರು.

ಆದರೆ, ನರೇಂದ್ರಮೋದಿಯವರು ಕಳೆದ 10 ವರ್ಷದಲ್ಲಿ ಕೈಗೊಂಡಿರುವ ಸಾಧನೆಯ ಆಧಾರದ ಮೇಲೆ ನಾವು ಈ ಚುನಾವಣೆಯನ್ನು ಎದುರಿಸುತ್ತಿದ್ದೇವೆ. ಕಳೆದ 10 ವರ್ಷಗಳ ಅವಧಿಯಲ್ಲಿ ದೇಶದಲ್ಲಿ ಅನೇಕ ಅಭಿವೃದ್ಧಿ ಕೆಲಸಗಳಾಗಿವೆ. ಸದೃಢ ಭಾರತಕ್ಕೆ, ಆರ್ಥಿಕ ಪ್ರಗತಿಗೆ ಹಾಗೂ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಬಿಜೆಪಿ ಅಭ್ಯರ್ಥಿಗಳಿಗೆ ಮತ ನೀಡಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಟಿಯಲ್ಲಿ ಬಿಜೆಪಿ ಜಿಲ್ಲಾ ವಕ್ತಾರ ಕಾಡಹಳ್ಳಿ ಶಿವರುದ್ರಸ್ವಾಮಿ, ಸಹ ವಕ್ತಾರ ಎನ್.ಮಂಜುನಾಥ್, ಮಾಧ್ಯಮ ಸಹ ಸಂಚಾಲಕ ಅಶ್ವಿನ್ ಇದ್ದರು.

# ನಾಗಯ್ಯ ನನ್ನ ಮೇಲೆ ಮಾಡಿರುವ ಆರೋಪದಲ್ಲಿ ಯಾವುದೇ ಸತ್ಯಾಂಶ ಇಲ್ಲ

**ಚಾಮರಾಜನಗರ:** ಬಿಎಸ್‌ಪಿ ಜಿಲ್ಲಾಧ್ಯಕ್ಷ ಎನ್ .ನಾಗಯ್ಯ ನನ್ನ ಮೇಲೆ ಮಾಡಿರುವ ಆರೋಪದಲ್ಲಿ ಯಾವುದೇ ಸತ್ಯಾಂಶ ಇಲ್ಲ ಎಂದು ಜಿ.ಪಂ. ಮಾಜಿ ಸದಸ್ಯ ಎಲ್.ನಾಗರಾಜು(ಕಮಲ್) ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದ ಅವರು, ಅಂಬೇಡ್ಕರ್ ತತ್ವ, ಆಶಯಗಳನ್ನು ಹೊಂದಿರುವ ಬಿಎಸ್‌ಪಿ ಪಕ್ಷದ ಜಿಲ್ಲಾಧ್ಯಕ್ಷನಾಗಿರುವ ನಾಗಯ್ಯ ಸುಳ್ಳುಸುಳ್ಳು ಹೇಳುವ ಮೂಲಕ ಅಂಬೇಡ್ಕರ್ ರವರ ತತ್ವ, ಸಿದ್ಧಾಂತಕ್ಕೆ ವಿರುದ್ದವಾಗಿ ಮಾತನಾಡಿರುವುದರಿಂದ ಅವರು ನೈತಿಕಹೊಣೆ ಹೊತ್ತು ಜಿಲ್ಲಾಧ್ಯಕ್ಷ ಸ್ಥಾನದಲ್ಲಿ ಮುಂದುವರೆಯುವ ಅರ್ಹತೆ, ಪಕ್ಷದ ಬಗ್ಗೆ, ನನ್ನ ಬಗ್ಗೆ ಮಾತನಾಡುವ ನೈತಿಕತೆ ಅವರಿಗೆ ಇಲ್ಲ ಎಂದರು.

ನನ್ನನ್ನು ಪ್ರಭಾವಿ ನಾಯಕರೊಂದಿಗೆ ಶಾಮೀಲಾಗಿದ್ದಾರೆ, ಬಿಎಸ್ಪಿ ಪಕ್ಷದಲ್ಲಿ ಯಾವುದೇ ಹುದ್ದೆ ಇಲ್ಲ. ಸದಸ್ಯತ್ವವನ್ನೇ ಪಡೆದಿಲ್ಲ ಎಂದು ಸುಳ್ಳು ಹೇಳಿರುವ ನಾಗಯ್ಯ ಜಾಹೀರಾತು, ಸಭೆ, ಸಮಾರಂಭಗಳಲ್ಲಿ ರಾಜ್ಯ ಕಾರ್ಯದರ್ಶಿ ಎಂದು ಹಾಕಿಸಿದ್ದಾರೆ. ಇಷ್ಟೆಲ್ಲ ಆಧಾರ ನನ್ನ ಬಳಿ ಇದ್ರು, ನಾಗಯ್ಯ ನನ್ನ ವಿರುದ್ದ ಸುಳ್ಳು ಮಾಡಿರವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು.

ಪೂರ್ವಿಕರು ಶ್ರಮಪಟ್ಟು ಕಟ್ಟಿದ ಬಹುಜನ ಸಮಾಜ ಪಕ್ಷ ಫಲಕೊಡುವ ಸಂದರ್ಭದಲ್ಲಿ ಸಾರಿಗೆ ಇಲಾಖೆಯಲ್ಲಿ ನೌಕರರಾಗಿ ಪೆನ್ಷನ್ ಪಡೆದುಕೊಂಡು ವ್ಯವಹಾರ ಮಾಡಲು ರಾಜಕಾರಣಕ್ಕೆ ಬಂದಿದ್ದಾರೆ. ಪಕ್ಷದ ಬೆಳವಣಿಗೆಯಲ್ಲಿ ಯಾವುದೇ ಕೊಡುಗೆ ಏನು ಇಲ್ಲ. ನಾನು ಕೂಡ ಪಕ್ಷವನ್ನು ಜಿಲ್ಲೆಯಲ್ಲಿ ಮೊದಲು



ಸಂಘಟನೆ ಮಾಡಿದ್ದೇನೆ ನನ್ನ ವಿರುದ್ದ ಆರೋಪ ಮಾಡಬೇಕಾದರೆ ನಾಗಯ್ಯ ಸಾಕ್ಷ?ಯ ಆಧಾರ ಸಹಿತ ಪತ್ರಿಕಾಗೋಷ್ಠಿ ಮಾಡಲಿ ಅಂದು ನಾನು ಕೂಡ ನನ್ನ ಬಲಿಯಿರುವ ಸಾಕ್ಷ?ಯಧಾರದೊಂದಿಗೆ ಸಮಕ್ಷಮದಲ್ಲಿ ಪತ್ರಿಕಾಗೋಷ್ಠಿಗೆ ಬರುತ್ತೇನೆ. ಯಾರು ಅನ್ಯಾಯ ಮಾಡುತ್ತಿದ್ದಾರೆ ಎಂಬುವುದು ಜಿಲ್ಲೆಯ ಜನರಿಗೆ ತಿಳಿಯುತ್ತದೆ ಎಂದು ಸವಾಲು ಹಾಕಿದರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಬಿಎಸ್ ಪಿ ಖಜಾಂಚಿ ಬಿ.ಫಾರಂನ್ನು ಮಾರಾಟ ಮಾಡಿಕೊಂಡು ವ್ಯವಹಾರ ಮಾಡಿದ್ದಾರೆ. ಚುನಾವಣೆ ಬಂದರೆ ವೈಯುಕ್ತಿಕ ಲಾಭ ಪಡೆಯುವುದು ಜಿಲ್ಲಾ, ರಾಜ್ಯ ಸಮಿತಿ ಹುನ್ನಾರವಾಗಿದೆ ಎಂದು ಆರೋಪಿಸಿದರು.

ಕೊಳ್ಳೇಗಾಲ ದಲ್ಲಿ ಹ.ರಾ.ಮಹೇಶ್, ಎಂ.ಕೃಷ್ಣಮೂರ್ತಿ ನನ್ನ ರಕ್ಷಣೆಯಲ್ಲಿ ಕೆಲಸ ಮಾಡಿದ್ದಾರೆ. ಸ್ಥಳೀಯ ವಾಗಿ ಸಮರ್ಥ ಅಭ್ಯರ್ಥಿ ಇಲ್ಲವೆಂದು ಮಂಡ್ಯ ಜಿಲ್ಲೆಯ ಕೃಷ್ಣಮೂರ್ತಿಯನ್ನು ಕಣಕ್ಕಿಳಿಸಿದ್ದಾರೆ ಎಂದು ದೂರಿದರು. ಪತ್ರಿಕಾಗೋಷ್ಠಿಯಲ್ಲಿ ಎಸ್‌ಸಿ,ಎಸ್‌ಟಿ ಉದ್ದಿಮೆದಾರರ ಸಂಘದ ಜಿಲ್ಲಾ ಉಪಾಧ್ಯಕ್ಷ ಪಾಳ್ಯ ಶಿವಮೂರ್ತಿ, ಮುಖಂಡ ದುಂಡುಮಾದನಾಯಕ, ಎಸ್.ಲಿಂಗಣ್ಣ ಉತ್ತಂಬಳ್ಳಿ, ಚೇತನ್ ಹಾಜರಿದ್ದರು.

## ರೈತ ಮಹಿಳೆಯೋರ್ವೆಗೆ ಮಾರಣಾಂತಿಕ ಹಲ್ಲೆ

**ಚಾಮರಾಜನಗರ:** ಜಿಲ್ಲೆಯ ಹನೂರು ತಾಲ್ಲೂಕಿನ

ಕೂಡ್ಲೂರು ಗ್ರಾಮದಲ್ಲಿ ಜಮೀನು ವಿಚಾರವಾಗಿ ನಡೆದ ಗಲಾಟೆಯಲ್ಲಿ ರೈತ ಮಹಿಳೆಯೋರ್ವೆಗೆ ಮಾರಣಾಂತಿಕ ಹಲ್ಲೆ ನಡೆದಿದ್ದು, ನೊಂದ ಮಹಿಳೆ ಚಾಮರಾಜನಗರ ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದಾರೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಹೂಗ್ಯಮ್ ಗ್ರಾಪಂ ವ್ಯಾಪ್ತಿಯ ಕೂಡ್ಲೂರು ಗ್ರಾಮದಲ್ಲಿ ಈ ಘಟನೆ ನಡೆದಿದ್ದು ಶನಿವಾರ ಮದ್ಯಾಹ್ನ3ಘಂಟೆಯ ವೇಳೆ ಮಾಹಿತಿ ಲಭ್ಯವಾಗಿದೆ ಕೂಡ್ಲೂರಿನ ರೈತ ಮಹಿಳೆ ಸೆಲ್ವಿ ಎಂಬಾಕೆಯ ಹಲ್ಲೆಗೆ ಒಳಗಾದವವರು

ಕೂಡ್ಲೂರು ಗ್ರಾಮದಲ್ಲಿ ನೆಡೆದ ಜಮೀನು ವಿವಾದದ ಗಲಾಟೆಯಲ್ಲಿ ಸ್ಥಳೀಯ ನೀವಾಸಿಯಾದ ತಂಗವೇಲು ಮತ್ತು ಮಾರ್ಟಳ್ಳಿಯ ಕರ್ನಲ್ ಎಂಬಾತರು ಕಾರಿನಲ್ಲಿ ಗುಂಪು ಕಟ್ಟಿಕೊಂಡು ಜಮೀನಿನ ಬಳಿ ಆಗಮಿಸಿ ರೈತ ಮಹಿಳೆ ಸೆಲ್ವಿ ಸೇರಿ ಸೇಲ್ವಿಯ ಸಹೋದರರ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ತಿಳಿದು ದೂರಿನಲ್ಲಿ ಪ್ರಸ್ತಾಪಿಸಿದ್ದಾರೆ. ಈ ಗದ್ದಲದಲ್ಲಿ ರೈತ ಮಹಿಳೆ ಸೆಲ್ವಿ ಎಂಬಾಕೆಗೆ ತಲೆಗೆ ತೀವ್ರ ಪೆಟ್ಟಾಗಿ ಚಾಮರಾಜನಗರ ಜಿಲ್ಲಾ ಆಸ್ಪತ್ರೆಗೆ ಚಿಕಿತ್ಸೆಗಾಗಿ ರವಾನೆ ಮಾಡಲಾಗಿದೆ ಈ ಘಟನೆ ಬೆನ್ನಲೆ ನೊಂದ ಮಹಿಳೆ ಸೇಲ್ವಿ ನಮ್ಮ ಜಮೀನಿಗೆ ತಂಗವೇಲು ಮತ್ತು ಕರ್ನಲ್ ಎಂಬಾತರು ಗುಂಪು ಕಟ್ಟಿಕೊಂಡು ಜಮೀನಿಗೆ ಅತಿಕ್ರಮಣ ಪ್ರವೇಶ ಮಾರಣಾಂತಿಕ ಹಲ್ಲೇ ಮಾಡಿದ್ದಾರೆ ಎಂದು ರಾಮಾಪುರ ಪೊಲೀಸ್ ಠಾಣೆಗೂ ದೂರು ನೀಡಿದ್ದಾರೆ

## ಏ.14 ರಂದು ಡಾ. ಬಿ.ಆರ್. ಅಂಬೇಡ್ಕರ್ ಅವರ 133ನೇ ಜಯಂತಿ ಕಾರ್ಯಕ್ರಮ

**ಚಿಕ್ಕಬಳ್ಳಾಪುರ:** ಲೋಕಸಭಾ ಸಾರ್ವತ್ರಿಕ ಚುನಾವಣೆಯ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ 133ನೇ ಜಯಂತಿಯನ್ನು ಸಾಂಕೇತಿಕವಾಗಿ ಏಪ್ರಿಲ್ 14 ರಂದು ಬೆಳಿಗ್ಗೆ 9:30 ಗಂಟೆಗೆ ನಗರದ ಎಂ.ಜಿ.ರಸ್ತೆಯಲ್ಲಿರುವ ಮೆಟ್ರಿಕ್ ನಂತರದ ಪದವಿ ಬಾಲಕರ ವಿದ್ಯಾರ್ಥಿನಿಲಯದ (ಜೈ ಭೀಮ್ ಮೆಮೋರಿಯಲ್) ಆವರಣದಲ್ಲಿ ಇರುವ ಡಾ॥ ಬಿ.ಆರ್. ಅಂಬೇಡ್ಕರ್ ರವರ ಪುತ್ಥಳಿಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮಾಲಾರ್ಪಣೆ ಕಾರ್ಯಕ್ರಮ ನಡೆಯಲಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದ್ವಿತೀಯ ಪಿಯುಸಿಯಲ್ಲಿ ಶೇಕಡ 98 ರಷ್ಟು ಫಲಿತಾಂಶ

ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ 2023-24ರಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಾದಂತಹ ನಿಕಿತಾ (570), ವರ್ಷಿಣಿ (566),ನಿವೇದಿತ (551), ಅಭಿಲಾಷ್‌ಎಂ (537),ಸಿರೀಷ (533),ಗಂಗ ಪ್ರಸಾದ್(516) ಹಾಗೂ ಮಾನಸ ವಿ (510) ಅಂಕಗಳನ್ನು ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿರುತ್ತಾರೆ. ಇವರಿಗೆ ಆಡಳಿತ ಮಂಡಳಿಯ ಅಧ್ಯಕ್ಷರಾಗಿರುವಂತಹ ಶ್ರೀ ಕೃಷ್ಣಪ್ಪರವರು ಹಾಗೂ ನಿರ್ದೇಶಕರಾದ ಶ್ರೀ ಕೇಶವ್ ರವರು ಹಾಗೂ ಕಾಲೇಜಿನ ಪ್ರಾಂಶುಪಾಲರಾದಂತಹ ಪ್ರವೀಣ್ ಎನ್ ರವರು ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಪರೀಕ್ಷೆಯಲ್ಲಿ ಹಾಜರಾದ ಒಟ್ಟು ವಿದ್ಯಾರ್ಥಿಗಳಲ್ಲಿ ಏಳು ವಿದ್ಯಾರ್ಥಿಗಳ ಅತ್ಯುನ್ನತ ಶ್ರೇಣಿ ಹಾಗೂ 18 ವಿದ್ಯಾರ್ಥಿಗಳು ಪ್ರಥಮ ದರ್ಜೆ ಹಾಗೂ ಐದು ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದು ಕಾಲೇಜಿನ ಆಡಳಿತ ಮಂಡಳಿಯಿಂದ ಶುಭ ಕೋರಲಾಯಿತು.

## ಮೈತ್ರಿ ಅಭ್ಯರ್ಥಿ ಪರವಾಗಿ ಜೆಡಿಎಸ್, ಬಿಜೆಪಿ ಮುಖಂಡರ ಮತ ಪ್ರಚಾರ

**ಮಂಡ್ಯ:** ರೈತರಿಗೆ ಶಾಶ್ವತ ಅಭಿವೃದ್ಧಿ ಕೆಲಸವನ್ನು ಲೋಕಸಭಾ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರ ತಮ್ಮ ಅಧಿಕಾರದ ಅವಧಿಯಲ್ಲಿ ಮಾಡಿದ್ದಾರೆ, ಅವರನ್ನು ಹೆಚ್ಚು ಮತಗಳಿಂದ ಜಯಶೀಲರಾಗಿ ಮಾಡಬೇಕು ಎಂದು ಜೆಡಿಎಸ್ ರಾಜ್ಯ ಮಹಿಳಾಧ್ಯಕ್ಷೆ ಲಕ್ಷ್ಮೀ ರಾಮೇಗೌಡ ಮನವಿ ಮಾಡಿದರು. ತಾಲ್ಲೂಕಿನ ಕೆರಗೋಡು ಮತ್ತು ಮಾರಗೌಡನಹಳ್ಳಿಯಲ್ಲಿ ಮಂಡ್ಯ ಲೋಕಸಭಾ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರ ಪರವಾಗಿ ಮತಯಾಚನೆ ಮಾಡಲು ಗ್ರಾಮದ ದೇವಾಲಯಗಳಲ್ಲಿ ಪೂಜೆ ಸಲ್ಲಿಸಿ, ನಂತರ ಸುದ್ದಿಗಾರೊಂದಿಗೆ ಮಾತನಾಡಿದರು.

ಬರಗಾಲದಲ್ಲಿಯೂ ಕೂಡ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ನಾಲೆಗಳಿಗೆ ನೀರು ಹರಿಸಿದ್ದಾರೆ, ಇಂದು 90 ಅಡಿ ಇದ್ದರೂ ಕೂಡ ನೀರು ಹರಿಸದಿರುವುದು, ವಿಪರ್ಯಾಸದ ಸಂಗತಿಯಾಗಿದೆ, ಎಚ್.ಡಿ.ಕುಮಾರಸ್ವಾಮಿ ಅವರು ರೈತಾಪಿ ವರ್ಗಕ್ಕೆ ಹಲವು ಯೋಜನೆಗಳನ್ನು ನೀಡುವ ಮೂಲಕ ಮುಖ್ಯವಾಗಿ ಕೃಷಿ ಸಾಲ ಮನ್ನಾ ಸೇರಿದಂತೆ ಹಲವು ಜನರಪರ ಯೋಜನೆಗಳನ್ನು ಜಾರಿಗೆ ತಂದು ಜನಸ್ನೇಹಿಯಾಗಿ ಕೆಲಸ ಮಾಡಿರುವ ಎಚ್ಡಿಕೆ ಅವರನ್ನು ಭಾರಿ ಬಹುತದೊಂದಿಗೆ ಗೆಲ್ಲಿಸಿಕೊಡಬೇಕು ಎಂದು ಮನವಿ ಮಾಡಿದರು.

## ಆಕಸ್ಮಿಕ ಬೆಂಕಿಗೆ ಬೈಕ್ ಸುಟ್ಟು ಕರಕಲು



**ಕೊಳ್ಳೇಗಾಲ:** ಬೇಸಿಗೆಯ ಬೇಗೆ ತೀವ್ರ ಗೊಳ್ಳುತ್ತಿದ್ದಂತೆ ಅಗ್ನಿ ಅವಘಡಗಳು ಕೂಡಾ ಹೆಚ್ಚುತ್ತಿವೆ.

ಕೊಳ್ಳೇಗಾಲ ಪಟ್ಟಣದ ಪಿಡಬ್ಲ್ಯೂಡಿ ಕಚೇರಿಯ ಮುಂಭಾಗದ ಆವರಣದಲ್ಲಿ ನಿಲ್ಲಿಸಿದ ಬೈಕ್ಗಳಿಗೆ ಆಕಸ್ಮಿಕ ಬೆಂಕಿ ತಗುಲಿ ಒಂದು ಬೈಕ್ ಸುಟ್ಟು ಕರಕಲಾಗಿದ್ದು ಪಕ್ಕದಲ್ಲಿ ಇದ್ದ ಇನ್ನೊಂದು ಬೈಕ್ ಗೆ ಬೆಂಕಿ ತಗುಲಿ ಅರ್ಧ ಸುಟ್ಟು ಹೋಗಿರುತ್ತದೆ.

ಅಕ್ಕ ಪಕ್ಕದಲ್ಲಿ ಇದ್ದ ಸ್ಥಳೀಯರು ಅಗ್ನಿ ಶಾಮಕ ಠಾಣೆಗೆ ಸುದ್ದಿ ತಿಳಿಸಿದ್ದಾರೆ ತಕ್ಷಣ ಅಗ್ನಿಶಾಮಕದಳದ ಸಿಬ್ಬಂದಿಗಳು ಬೆಂಕಿಯ ಆವರಿಸುವ ಮೊದಲೇ ಕಾರ್ಯಾಚರಣೆ ಮಾಡಿ ಬೆಂಕಿಯನ್ನು ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ.

ಪಿಡಬ್ಲ್ಯೂಡಿ ಕಚೇರಿ ಆವರಣದ ಮುಂಭಾಗ ಸ್ವಚ್ಛತೆ ಇಲ್ಲದೆ ಮರಗಳಿಂದ ಬಿದ್ದ ಎಲೆಗಳು ಗುಡ್ಡೆ ಗುಡ್ಡೆ ರಾಶಿ ಇದ್ದ ಕಾರಣ ಆಕಸ್ಮಿಕ ಬೆಂಕಿ ಹತ್ತಿಕೊಂಡು ಈ ಅನಾಹುತ ಸಂಭವಿಸಿದೆ ಎಂದು ಸಾರ್ವಜನಿಕರ ಆರೋಪ,

ಬೇಕು ಅಂತಾನೆ ಯಾರಾದರೂ ಬೆಂಕಿ ಹಚ್ಚಿದ್ದಾರಿಯೋ ಅಥವಾ ಬೇಸಿಗೆ ಬಿಸಿಲಿಗೆ ಎಲೆಗಳ ರಾಶಿ ಇದ್ದ ಕಾರಣ ಆಕಸ್ಮಿಕ ಬೆಂಕಿ ಹತ್ತಿಕೊಂಡಿದ್ದೆಯೋ ತಿಳಿದು ಬಂದಿಲ್ಲ.

ಬೇಸಿಗೆಯ ಬಿಸಲಿನ ತಾಪಕ್ಕೆ ಬೆಂಕಿ ಅವಘಡಗಳು ಹೆಚ್ಚುತ್ತಿದ್ದು ಸಣ್ಣಪುಟ್ಟ ಕಿಡಿಗಳು ಸಹಾ ದೊಡ್ಡ ಅನಾಹುತ ಸೃಷ್ಟಿಯಾಗುತ್ತದೆ ಆದ್ದರಿಂದ ಸ್ವಚ್ಛತೆಯನ್ನು ಕಾಪಾಡಿಕೊಳ್ಳಿ ಎಂದು ಅಗ್ನಿಶಾಮಕದಳದ ಸಿಬ್ಬಂದಿಗಳು ಸ್ಥಳದಲ್ಲಿ ಇದ್ದ ಸಾರ್ವಜನಿಕರಿಗೆ ಕಿವಿಮಾತು ತಿಳಿಸಿದರು.

# ಏಕಪಕ್ಷೀಯ ನಡೆಯಾದ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಡಾ.ರವೀಂದ್ರ ಅಸಮಾಧಾನ

**ಮಂಡ್ಯ:** ಮಂಡ್ಯ ಲೋಕಸಭಾ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಮಾಡುವಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಸ್ವಾಮಿ ಅವರು ಏಕಪಕ್ಷೀಯ ನಿರ್ಧಾರ ತೆಗೆದುಕೊಂಡಿದ್ದಾರೆ ಎಂದು ಕಾಂಗ್ರೆಸ್ ಮುಖಂಡ ಡಾ.ರವೀಂದ್ರ ಅಸಮಾಧಾನ ವ್ಯಕ್ತಪಡಿಸಿದರು.

ತಾಲ್ಲೂಕಿನ ಜಿ.ಕೆಬ್ಬಹಳ್ಳಿ ಗ್ರಾಮದಲ್ಲಿ ತಮ್ಮ ಬೆಂಬಲಿಗರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿ, ಚಲುವರಾಯಸ್ವಾಮಿ ಅವರು ಕಾಂಗ್ರೆಸ್ ಪಕ್ಷದ ಯಾವೊಬ್ಬ ಮುಖಂಡರ ಅಭಿಪ್ರಾಯ ಪಡೆಯದೇ ಏಕಪಕ್ಷೀಯವಾಗಿ ನಿರ್ಧಾರ ಮಾಡಲಾಗಿದೆ, ಕಾರ್ಯಕರ್ತರ ಅಭಿಪ್ರಾಯವನ್ನು ಸಂಗ್ರಹಿಸಲು ಇವರು ಹೋಗದೇ ಉದ್ಯಮಿ ಸ್ಟಾರ್ ಚಂದ್ರು ಅವರನ್ನು ಕರೆದುಕೊಂಡು ಬಂದು ಚುನಾವಣೆಗೆ ಸ್ಪರ್ಧಿಸಲು ಬಿಟ್ಟಿದ್ದಾರೆ ಇದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಸೌಜನ್ಯಕ್ಕಾದರೂ ನಮ್ಮ ಮತ್ತು ಪಕ್ಷದ ಮುಖಂಡರನ್ನು ಮಾತನಾಡಿಸದೇ ಇರುವ ಎನ್.ಚಲುವರಾಯಸ್ವಾಮಿ ಅವರ ನಡೆ ಖಂಡನೀಯವಾದುದು, ಜಿಲ್ಲೆಗೆ ವೆಂಕಟರಮಣೇಗೌಡ ಅಲಿಯಾಸ್ ಸ್ಟಾರ್ ಚಂದ್ರು ಯಾರು ಎಂದೇ ಗೊತ್ತಿಲ್ಲ ಈ ಸಂದರ್ಭದಲ್ಲಿ ಜಿಲ್ಲೆಗೆ ಒಬ್ಬ ಹಣವಿರುವ ಉದ್ಯಮಿಯನ್ನು ಕರೆದುಕೊಂಡು ಬಂದು ಕಾಂಗ್ರೆಸ್ ಅಭ್ಯರ್ಥಿ ಮಾಡಿರುವುದು ನಾಚಿಕೆಗೇಡಿನ ಸಂಗತಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂಧರ್ಭದಲ್ಲಿ ಮುಖಂಡರಾದ ಕೆಬ್ಬಹಳ್ಳಿ ಆನಂದ್, ಗೌಡಗೆರೆ ಜಿ.ಸಿ.ಬೋರೇಗೌಡ, ಹಂಚನಹಳ್ಳಿ ನಂದೀಶ್, ಲೋಕೇಶ್, ನವೀನ್, ರವಿಕುಮಾರ್, ಶಂಕರ್, ಚೇತನ್ ಭಾಗವಹಿಸಿದ್ದರು.

**ಮತದಾನ ಹಿನ್ನೆಲೆ ಏ. 24 ರಿಂದ 27 ರವರೆಗೆ ನಿಷೇಧಾಜ್ಞೆ ಜಾರಿ:** ಚಿಕ್ಕಬಳ್ಳಾಪುರ, ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 26 ರಂದು ಮತದಾನ ನಡೆಯಲಿದ್ದು, ಮತದಾನವು ಮುಕ್ತಾಯಗೊಳ್ಳುವ ಅವಧಿಯ 48 ಗಂಟೆಗಳ ಪೂರ್ವದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಹಾಗೂ ಮತದಾನವು ಸುಗಮ ಹಾಗೂ ಮುಕ್ತವಾಗಿ ನಡೆಸುವ ಹಿತದೃಷ್ಠಿಯಿಂದ ಏಪ್ರಿಲ್ 24 ರ ಸಂಜೆ 6 ಗಂಟೆಯಿಂದ ಏಪ್ರಿಲ್ 27 ರ ಸಂಜೆ 6 ಗಂಟೆಯವರೆಗೆ ದಂಡ ಪ್ರಕ್ರಿಯಾ ಸಂಹಿತೆ 1973ರ ಕಲಂ 144 ರನ್ವಯ ವಿವಿಧ ಷರತ್ತುಗಳಿಗೊಳಪಡಿಸಿ ಜಿಲ್ಲೆಯಾದ್ಯಂತ ನಿಷೇಧಾಜ್ಞೆ ವಿಧಿಸಿ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಆದೇಶ ಹೊರಡಿಸಿದ್ದಾರೆ.

ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಮತದಾರರಿಗೆ ವಿವಿಧ ಆಸೆ-ಆಮಿಷಗಳಿಗೆ ಒಳಪಡಿಸುವುದು, ಬೆದರಿಸಲು ಯತ್ನಿಸುವುದು, ತಮ್ಮ ಪರವಾಗಿ ವರ್ತಿಸಲು ಪುಸಲಾಯಿಸುವುದು, ಮತಗಟ್ಟೆಗಳ ಹತ್ತಿರದಲ್ಲಿ ಪ್ರಚಾರ ಮಾಡುವುದು, ಸಾರ್ವಜನಿಕ ಸಭೆ ನಡೆಸುವುದು, ಮತದಾರರನ್ನು ವಿವಿಧ ಸಾರಿಗೆ ವ್ಯವಸ್ಥೆಗಳ ಮೂಲಕ ಮತಗಟ್ಟೆಗಳಿಗೆ ಕರೆ ತರುವುದು, ಶಾಂತಿ ಭಂಗ ಉಂಟು ಮಾಡುವುದು, ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರುವುದು ಹಾಗೂ ಇತರೆ ಅಹಿತಕರ ಘಟನೆಗಳು ನಡೆಯುವಂತೆ ಮಾಡುವ ಸಂಭವನೀಯತೆಗಳಿದ್ದು, ಇದನ್ನು ತಡೆಗಟ್ಟಲು ಹಾಗೂ ಮತದಾನ ಪಾವಿತ್ರ್ಯತೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ದಂಡ ಪ್ರಕ್ರಿಯಾ ಸಂಹಿತೆ, 1973ರ ಕಲಂ 144ರ ಮೇರೆಗೆ ಪ್ರತಿಬಂಧಕಾಜ್ಞೆ ವಿಧಿಸಲಾಗಿದೆ.

ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಲ್ಲಿ ಮೇಲೆ ತಿಳಿಸಿದ ಅವಧಿಯಲ್ಲಿ ಸಾರ್ವಜನಿಕರು ಸಕಾರಣವಿಲ್ಲದೆ ಐದು ಅಥವಾ ಅದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕ ರಸ್ತೆ, ಬೀದಿ, ಓಣಿ, ಕೇರಿಗಳಲ್ಲಿ ಸಾರ್ವಜನಿಕ ಸ್ಥಳ, ಸಾರ್ವಜನಿಕ ಕಟ್ಟಡ ಮತ್ತು ಮತದಾನ ಕೇಂದ್ರದ ಸುತ್ತಮುತ್ತ ಗುಂಪು ಸೇರುವುದನ್ನು ನಿಷೇಧಿಸಲಾಗಿದೆ.

ಈ ಪ್ರದೇಶದ ವ್ಯಾಪ್ತಿಯಲ್ಲಿ ಇರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಸೈಬರ್ ಕೆಫೆಗಳನ್ನು ನಿರ್ಬಂಧಿಸಲಾಗಿದೆ. ಮತದಾನದ ದಿನದಂದು ಮತಗಟ್ಟೆಗಳ 100 ಮೀಟರ್ ಒಳಗೆ ಚುನಾವಣೆ ಪ್ರಚಾರ ನಿಷೇಧಿಸಲಾಗಿದೆ ಹಾಗೂ ಪ್ರಚಾರಕ್ಕೆ ಸಂಬಂಧಿಸಿದ ಪೋಸ್ಟರ್, ಬ್ಯಾನರ್, ಇನ್ಯಾವುದೇ ವಸ್ತುಗಳನ್ನು ಬಳಸುವಂತಿಲ್ಲ. ಕಲ್ಲುಗಳನ್ನು, ಖಾರಪದಾರ್ಥ ಇಲ್ಲವೆ ಸ್ಫೋಟಕ ವಸ್ತುಗಳು ಯಾವುದೇ ದಾಹಕ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ.

# ಜಿಲ್ಲೆಯ ಅಭಿವೃದ್ಧಿಗೆ ಮತ್ತೊಮ್ಮೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್ ಬೋಸ್ ಗೆಲ್ಲಿಸಿ

**ಚಾಮರಾಜನಗರ:** ತಾಲೂಕಿನ ವೆಂಕಟಯ್ಯನಛತ್ರ, ವಿಸಿಹೊಸೂರು, ಅಂಕನಶೆಟ್ಟಿಪುರ, ಬಸವಾಪುರ, ಚಿಕ್ಕಮೋಳೆ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಲೋಕಸಭಾ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್‌ಬೋಸ್ ಪರ ಕಾರ್ಯಕರ್ತರು ಹಾಗೂ ಮುಖಂಡರ ಜೊತೆಗೆ ತೆರಳಿ ಶಾಸಕ ಸಿ,ಪುಟ್ಟರಂಗಶೆಟ್ಟಿ ಮತಯಾಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕಸಿ,ಪುಟ್ಟರಂಗಶೆಟ್ಟಿ ಅವರು ದೇಶದ ಅಭಿವೃದ್ದಿಗೆ ಕಾಂಗ್ರೆಸ್ ಮಾಡಿದ ಸಾಧನೆ ಅಪಾರವಾಗಿದ್ದು ಸಂವಿಧಾನದ ಚೌಕಟ್ಟಿನಲ್ಲಿ ದೇಶದ ಎಲ್ಲಾ ಬಡವರು,ನಿರ್ಗತಿಕರು ಹಾಗೂ ಶೋಷಿತರ ಪರವಾಗಿ ಹಿಂದಿನ ಯುಪಿಎ ಸರ್ಕಾರದ ಅವಧಿಯಲ್ಲಿ ಹಲವು ಅಭಿವೃದ್ದಿ ಕೆಲಸಗಳು ಆಗಿದೆ. ಇಂದಿನ ಬಿಜೆಪಿ ಸರ್ಕಾರವು ಜನರಿಗೆ ಆಶ್ವಾಸನೆಗಳನ್ನು ನೀಡಿ ಅಭಿವೃದ್ದಿ ಮಾಡಿಲ್ಲ.ಹೀಗಾಗಿಲು ಕೇಂದ್ರದಲ್ಲಿ ಮತ್ತೊಮ್ಮೆ ಯುಪಿಎ ಸರ್ಕಾರವು ಅಧಿಕಾರಕ್ಕೆ ಬರುವ ವಿಶ್ವಾಸದಲ್ಲಿದೆ ಎಂದರು.



ಚಾಮರಾಜನಗರ ಜಿಲ್ಲೆಯ ಸರ್ವತೋಮುಖ ಅಭಿವೃದ್ದಿಗೆ ಮತದಾರರು ಮತ್ತೊಮ್ಮೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸಿನಿಲ್ ಬೋಸ್ ಅವರನ್ನು ಗೆಲ್ಲಿಸಿ ಆಶೀರ್ವಾದಿಸಬೇಕೆಂದು ಮನವಿ ಮಾಡಿದರು,

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ,ಕೆ ರವಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಎಸ್ ಗುರುಸ್ವಾಮಿ, ಮಹಮದ ಅಸ್ಗರ್‌ಮುನ್ನಾ, ಎಪಿಎಂಸಿ ಅಧ್ಯಕ್ಷ ಮಹದೇವಸ್ವಾಮಿ, ಜಿ,ಪಂ ಮಾಜಿ ಸದಸ್ಯ ರಮೇಶ್, ತಾ,ಪಂ ಮಾಜಿ ಸದಸ್ಯ ಎಚ್,ಎಂ ಮಹದೇವಶೆಟ್ಟಿ, ಕೋಡಿಮೋಳೆ ಪ್ರಕಾಶ್, ಮಹೇಶ್ ಕುದರ್, ಕೆಂಪರಾಜು, ಮಹೇಶ್, ಮಂಜುನಾಥ್, ಪರಿಶಿಷ್ಟ ವಿಭಾಗದ ತಾ,ಅಧ್ಯಕ್ಷ ಸೋಮಣ್ಣ, ಮಹದೇವಸ್ವಾಮಿ, ಗಣೇಶ್, ಸೇರಿದಂತೆ ಪಕ್ಷದ ಕಾರ್ಯಕರ್ತರು ಮುಖಂಡರು ಇದ್ದರು.

# ಎಚ್‌ಡಿಕೆಗೆ ಬೆಂಬಲಿಸುವಂತೆ ಮನವಿ

**ಮಂಡ್ಯ:** ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಒಕ್ಕಲಿಗ ಸಮುದಾಯವೇ ಅತಿ ಹೆಚ್ಚಿದ್ದರೂ ನಿರ್ಣಾಯ ಪಾತ್ರ ವಹಿಸುವುದು ಮಾತ್ರ ಹಿಂದುಳಿದವರು, ದಲಿತರು ಹಾಗೂ ಅಲ್ಪಸಂಖ್ಯಾತರು. ಈ ನಿಟ್ಟಿನಲ್ಲಿ ಅಲ್ಪಸಂಖ್ಯಾತ ಸಮುದಾಯ ಈ ಬಾರಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಬೆಂಬಲಿಸಬೇಕೆಂದು ಜೆಡಿಎಸ್ ಮುಖಂಡ ಹಾಗೂ ಕೇಂದ್ರದ ವಕ್ಫ್ ಕೌನ್ಸಿಲ್‌ನ ಮಾಜಿ ಸದಸ್ಯ ಅಬ್ಬಾಸ್ ಆಲಿ ಬೊಹ್ರಾ ಮನವಿ ಮಾಡಿದರು.



ಶನಿವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಕುಮಾರಸ್ವಾಮಿ ಸ್ಪರ್ಧೆ ಮಂಡ್ಯ ಜಿಲ್ಲೆಯ ಜನರ ಪಾಲಿಗೆ ಸುವರ್ಣಾವಕಾಶ ಒದಗಿಬಂದಂತಾಗಿದ್ದು, ಕುಮಾರಸ್ವಾಮಿ ಮಂಡ್ಯದಿಂದ ಆಯ್ಕೆಯಾದರೆ ಕೇಂದ್ರದಲ್ಲಿ ಮಂತ್ರಿಯಾಗಲಿದ್ದಾರೆ. ಈ ಭಾಗದ ರೈತರಿಗೆ, ಅಲ್ಪಸಂಖ್ಯಾತರಿಗೆ ಇದರಿಂದ ಅನುಕೂಲವಾಗಲಿದ್ದು, ಜೊತೆಗೆ ಕಾವೇರಿ ಸಮಸ್ಯೆಯನ್ನು ಬಗೆಹರಿಸಲು ಸಹ ಹೆಚ್ಡಿಕೆ ಹೋರಾಟ ಮಾಡಲಿದ್ದಾರೆ ಎಂದು ತಿಳಿಸಿದರು.

ಪ್ರಸ್ತುತ ಬರ ತಾಂಡವವಾಡುತ್ತಿದ್ದು, ಇದರಿಂದ ಕೆಆರ್‌ಎಸ್‌ನಲ್ಲಿ ನೀರಿಲ್ಲ. ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ತಮಿಳುನಾಡಿಗೆ ಓಲೈಕೆಗಾಗಿ ಕಾಂಗ್ರೆಸ್ ಸರ್ಕಾರ ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸಿದೆ. ಈ ಹಿಂದೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಕಾವೇರಿಗಾಗಿ ಸಂಸತ್‌ನಲ್ಲಿ ನಿರಂತರ ಹೋರಾಟ ಮಾಡಿದ್ದಾರೆ. ಈ ಹೋರಾಟವನ್ನು ಮತದಾರರು ಸ್ಮರಿಸಿಕೊಂಡು ದೇವೇಗೌಡರ ಪುತ್ರ ಕುಮಾರಸ್ವಾಮಿಗೆ ಮತ ಕೊಡಿ ಎಂದು ಮನವಿ ಮಾಡಿದರು.

ಅಲ್ಪಸಂಖ್ಯಾತ ಸಮುದಾಯಕ್ಕೆ ಜೆಡಿಎಸ್‌ನ ಕೊಡುಗೆ ಅಪಾರವಾಗಿದ್ದು, ಮೆರಾಜುದ್ದೀನ್ ಪಟೇಲ್ ಹಾಗೂ ಸಿ.ಎಂ.ಇಬ್ರಾಹಿಂರನ್ನು ಜೆಡಿಎಸ್‌ನ ರಾಜ್ಯಾಧ್ಯಕ್ಷರನ್ನಾಗಿ ಮಾಡಿದರೆ, ಜನತಾದಳ ಸರ್ಕಾರದಲ್ಲಿ ಮುಸ್ಲಿಂ ಸಮುದಾಯದ ರೋಷನ್‌ಬೇಗ್ ರನ್ನು ಗೃಹ ಸಚಿವರನ್ನಾಗಿ ಮಾಡಲಾಗಿತ್ತು. ಆದರೆ ಕಾಂಗ್ರೆಸ್ ಪಕ್ಷ ಮಾತ್ರ ಅಲ್ಪಸಂಖ್ಯಾತರನ್ನು ಕೇವಲ ಓಟ್‌ಬ್ಯಾಂಕಿಗಾಗಿ ಮಾತ್ರ ಬಳಸಿಕೊಳ್ಳುತ್ತಿದೆ. ರಾಜ್ಯದಲ್ಲಿ 9 ಮಂದಿ ಮುಸ್ಲಿಂ ಸಮುದಾಯದ ಶಾಸಕರಿದ್ದರೂ ಕೇವಲ ಇಬ್ಬರನ್ನು ಮಾತ್ರ ಮಂತ್ರಿ ಮಾಡಲಾಗಿದೆ. ಮಂತ್ರಿಯಾಗಿರುವ ಇಬ್ಬರಿಗೂ ಉತ್ತಮ ಖಾತೆ ನೀಡದೆ ಅವಮಾನಿಸಿದೆ ಎಂದು ಕಿಡಿಕಾರಿದರು.

ದೇಶದಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿ ಕಾಂಗ್ರೆಸ್‌ನಿಂದ ಮಾತ್ರ ಆಗುತ್ತದೆ ಎಂದು ಆ ಪಕ್ಷದ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ. ಮುಸ್ಲಿಂರ ಪರ ನಿಂತಿರುವುದು ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ. ಮೋದಿ ಕಳೆದ ಹತ್ತು ವರ್ಷದಲ್ಲಿ ಮುಸ್ಲಿಂ ಸಮುದಾಯದ ನಜ್ಮಾ ಹೆಪ್ತುಲ್ಲಾ, ಮುಕ್ತಾರ್ ಅಬ್ಬಾಸ್ ನಖ್ವಿ, ಸಹನವಾಜ್ ಶೇನ್ ಮತ್ತು ಎಂ.ಬಿ.ಅಕ್ಬರ್‌ರನ್ನು ರಾಜ್ಯಸಭೆಗೆ ಕಳುಹಿಸಿ ಕೇಂದ್ರದಲ್ಲಿ ಮಂತ್ರಿ ಸ್ಥಾನ ಕೊಟ್ಟಿದ್ದರು. ದೇಶದ ಅತ್ಯುನ್ನತ ಹುದ್ದೆಯಾದ ರಾಷ್ಟ್ರಪತಿ ಹುದ್ದೆಯನ್ನು ಪ್ರಖ್ಯಾತ ವಿಜ್ಞಾನಿ ಡಾ.ಎ.ಪಿ.ಜೆ.ಅಬ್ದುಲ್ ಕಲಾಂಗೆ ನೀಡುವ ಮೂಲಕ ಮುಸ್ಲಿಂ ಸಮುದಾಯಕ್ಕೆ ರಾಷ್ಟ್ರಪತಿ ಹುದ್ದೆಯನ್ನು ಕೊಟ್ಟಿದ್ದರು. ಆದರೆ ಕಾಂಗ್ರೆಸ್ ಇಂತಹ ಒಂದೇ ಒಂದು ಹುದ್ದೆಯನ್ನು ಮುಸ್ಲಿಂ ಸಮುದಾಯಕ್ಕೆ ಕೊಟ್ಟಿದೆಯೇ ಎಂದು ಪ್ರಶ್ನಿಸಿದರು.

ಗೋಷ್ಟಿಯಲ್ಲಿ ಬಿಜೆಪಿ ಮುಖಂಡರಾದ ಸಿ.ಟಿ.ಮಂಜುನಾಥ್, ಮಹಾಂತಪ್ಪ, ಸಿದ್ದರಾಜು, ಮಹೇಶ್, ಜೆಡಿಎಸ್ ಮುಖಂಡ ಫರೀದ್ ಉಪಸ್ಥಿತರಿದ್ದರು.

## ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕರಿಂದ ಸ್ಪಷ್ಟೀಕರಣ

**ಬೆಂಗಳೂರು:** ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಯಾವುದೇ ಪ್ರಾಧ್ಯಾಪಕರು ಹಾಗೂ ವೈದ್ಯಾಧಿಕಾರಿಗಳ ಕೊರತೆ ಇದೆ ಎಂದು ಏಪ್ರಿಲ್ 12 ರ ವಿವಿಧ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ಸುದ್ದಿ ಕುರಿತು ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕರು ಹಾಗೂ ಎಸ್.ಎ.ಬಿ.ವಿ.ಎಂ.ಸಿ.ಆರ್.ಐ ಡೀನ್ ಅವರು ಸ್ಪಷ್ಟೀಕರಣ ನೀಡಿದ್ದಾರೆ. ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಪತ್ರದ : ಎಸ್‌ಎಬಿವಿಎಂಸಿಆರ್ಐ / 384385/2022-23, ದಿನಾಂಕ: 04-01-2023 ರಂದು 59 ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು ಮತ್ತು ಸಹಾಯಕ ಪ್ರಾಧ್ಯಾಪಕರುಗಳು ನೇರ ನೇಮಕಾತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ.

ಅವಶ್ಯವಿರುವ ವೈದ್ಯರು ಹಾಗೂ ಇತರೆ ಆರೋಗ್ಯ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ನೇಮಕಾತಿ ಪ್ರಕ್ರಿಯೆ ದಿನಾಂಕವನ್ನು ಮುಂದುಡಲಾಗಿರುತ್ತದೆ. ಎನ್.ಎಂ.ಸಿ ಮಾರ್ಗಸೂಚಿಯ ಅನುಸಾರ ಅವಶ್ಯವಿರುವ ಪ್ರಾಧ್ಯಾಪಕರಗಳ ಹಾಗೂ ಇತರೆ ವೈದ್ಯಕೀಯ ಸಿಬ್ಬಂದಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ. ಚರಕ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆಗೆ ಅವಶ್ಯವಿರುವ ವೈದ್ಯಕೀಯ ಸಿಬ್ಬಂದಿ ಮತ್ತು ಅವಶ್ಯವಿರುವ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಎಸ್.ಎ.ಬಿ.ವಿಎಂ.ಸಿಆರ್.ಐ/88/2023-24, ದಿನಾಂಕ: 13.03.2024 ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚೆಕ್ ಪೋಸ್ಟ್ ಪರಿಶೀಲನೆ

**ಮಂಡ್ಯ:** ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಕೆ.ಆರ್.ಪೇಟೆ ತಾಲ್ಲೂಕಿನ ಆನೆಗೊಳ ಚೆಕ್ ಪೋಸ್ಟ್ ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಚೆಕ್ ಪೋಸ್ಟ್ ಸಿಬ್ಬಂದಿಗಳಿಂದ ನಿರ್ವಹಿಸುತ್ತಿರುವ ಪ್ರತಿದಿನದ ವರದಿ ಹಾಗೂ ಮಾಹಿತಿ ಪಡೆದುಕೊಂಡರು. ಎಚ್ಚರಿಕೆ ಹಾಗೂ ಜವಾಬ್ದಾರಿಯುತವಾಗಿ ವಾಹನಗಳ ತಪಾಸಣೆ ನಡೆಸಿ ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್ ಉಪಸ್ಥಿತರಿದ್ದರು.

## 26 ರಂದು ಸಂತೆ, ಜಾತ್ರೆ ನಿಷೇಧ

**ಮಂಡ್ಯ:** ಲೋಕಸಭಾ ಸಾರ್ವತ್ರಿಕ ಚುನಾವಣೆ ? 2024 ರ ಸಂಬಂಧ ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಮತದಾನವು ಏಪ್ರಿಲ್ 26 ರಂದು ನಡೆಯಲಿದೆ. ಮತದಾರರಿಗೆ ಮುಕ್ತ ಮತ್ತು ನ್ಯಾಯೋಚಿತ ಮತದಾನಕ್ಕೆ ಮತದಾನಕ್ಕೆ ಅವಕಾಶ ಕಲ್ಪಿಸುವ ಹಾಗೂ ಮತದಾನ ಕಾರ್ಯವನ್ನು ಸುಗಮವಾಗಿ ನಡೆಸುವ ಸಲುವಾಗಿ ಏಪ್ರಿಲ್ 26 ರಂದು ಮಂಡ್ಯ ಜಿಲ್ಲೆಯಾದ್ಯಂತ ನಡೆಯುವ ಎಲ್ಲಾ ರೀತಿಯ ಸಂತೆ, ಜಾತ್ರೆ ಹಾಗೂ ಉತ್ಸವಗಳನ್ನು ನಿಷೇಧಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ. ಕುಮಾರ ಅವರು ಆದೇಶ ಹೊರಡಿಸಿದ್ದಾರೆ.

## ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ

**ಮಂಡ್ಯ:** ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಇಂಜಿನಿಯರಿಂಗ್, ಕೃಷಿ ವಿಜ್ಞಾನ, ವೆಟರಿನರಿ, ಫಾರ್ಮಸಿ, ಬಿ.ಎಸ್.ಸಿ(ನರ್ಸಿಂಗ್) ಮುಂತಾದ ವೃತ್ತಿಪರ ಕೋರ್ಸುಗಳ ಪ್ರವೇಶಾತಿಗೆ ಸಿಇಟಿ ಪರೀಕ್ಷೆಯು ಜಿಲ್ಲೆಯ 13 ಪರೀಕ್ಷಾ ಕೇಂದ್ರಗಳಲ್ಲಿ ಏಪ್ರಿಲ್ 18 ಮತ್ತು 19 ರಂದು ನಡೆಯಲಿದೆ. ಸಿಇಟಿ ಪರೀಕ್ಷೆಯು ಸುಗಮವಾಗಿ ನಡೆಯಲು ಮಂಡ್ಯ ಮತ್ತು ಕೆ. ಆರ್. ಪೇಟೆ ತಾಲ್ಲೂಕಿನ ಒಟ್ಟು 13 ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಪರೀಕ್ಷಾ ದಿನಗಳಂದು 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತ ಇರುವ ಜೆರಾಕ್ಸ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಕುಮಾರ ಅವರು ಆದೇಶ ಹೊರಡಿಸಿದ್ದಾರೆ. ಪರೀಕ್ಷಾರ್ಥಿಗಳು ಮತ್ತು ಪರೀಕ್ಷಾ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿಗಳು/ಸಿಬ್ಬಂದಿಗಳು ಹೊರತುಪಡಿಸಿ ಇತರರು ಯಾರೂ ನಿಷೇಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಮೌಲ್ಯಮಾಪನ ಕೇಂದ್ರದ ಸುತ್ತ ನಿಷೇಧಾಜ್ಞೆ

**ಮಂಡ್ಯ:** ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಮಾರ್ಚ್/ಏಪ್ರಿಲ್ 2024 ರ ಮುಖ್ಯ ಎಸ್ ಎಸ್ ಎಲ್ ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯವು ಒಟ್ಟು 6 ಕೇಂದ್ರಗಳಲ್ಲಿ ಏಪ್ರಿಲ್ 15 ರಿಂದ ನಡೆಯಲಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮೌಲ್ಯಮಾಪನ ಕಾರ್ಯವು ಏಪ್ರಿಲ್ 15 ರಿಂದ ಪೂರ್ಣಗೊಳ್ಳುವವರೆಗೂ ಒಟ್ಟು 6 ಮೌಲ್ಯಮಾಪನ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಕುಮಾರ ಅವರು ಆದೇಶ ಹೊರಡಿಸಿದ್ದಾರೆ. ಮೌಲ್ಯ ಮಾಪನ ಕೇಂದ್ರಗಳು: ಮಂಡ್ಯ ಕಾರ್ಮೆಲ್ ಕಾನ್ವೆಂಟ್, ಸ. ಪ. ಪೂ. ಕಾ. ಕಲ್ಲು ಕಟ್ಟಡ, ಸೆಂಟ್ ಜಾನ್ ಪ್ರೌಢಶಾಲೆ, ಸೆಂಟ್ ಜೋಸೆಫ್ ಪ್ರೌಢಶಾಲೆ, ರೋಟರಿ ಪ್ರೌಢಶಾಲೆ, ಲಕ್ಷ್ಮಿ ಜನಾರ್ಧನ ಬಾಲಿಕ ಪ್ರೌಢಶಾಲೆಗಳಲ್ಲಿ ಮೌಲ್ಯಮಾಪನ ನಡೆಯಲಿದೆ.

# ಬಿಜೆಪಿ, ಜೆಡಿಎಸ್ ಹೊಂದಾಣಿಕೆ ಅಂದೇ ಆಗಿದ್ದರೆ ಈ ಪರಿಸ್ಥಿತಿ ಬರುತ್ತಿರಲಿಲ್ಲ

**ವಿಜಯಪುರ:** ಈಗಿನಂತೆ ಒಂದು ವರ್ಷದ ಮೊದಲೇ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಹೊಂದಾಣಿಕೆಯಾಗಿದ್ದರೆ ಈಗಿನ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇರುತ್ತಿರಲಿಲ್ಲ ಹಾಗೂ ಎರಡು ಪಕ್ಷಗಳ ಕಾರ್ಯಕರ್ತರಿಗೆ ಇಂತಹ ಪರಿಸ್ಥಿತಿ ಬರುತ್ತಿರಲಿಲ್ಲವೆಂದು ಜೆಡಿಎಸ್ ನ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ತಿಳಿಸಿದರು.

ಶುಕ್ರವಾರದಂದು ವಿಜಯಪುರ ಹೋಬಳಿ ಗೊಡ್ಲು ಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರ ಸಂಯುಕ್ತ ಸಭೆಯಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರವು ಬಹಳ ವಿಶಾಲವಾಗಿ ದೊಡ್ಡದಿದ್ದು ಎಲ್ಲೆಡೆ ಅಭ್ಯರ್ಥಿಗಳನ್ನು ಕರೆದುಕೊಂಡು ಬಂದು ಪ್ರಚಾರ ಮಾಡಿಸಲು ಸಾಧ್ಯವಾಗದ ಕಾರಣ ಸ್ಥಳೀಯ ಎರಡು ಪಕ್ಷಗಳ ಮುಖಂಡರುಗಳೇ ಪ್ರತಿ ಗ್ರಾಮಗಳಲ್ಲಿಯೂ ಪ್ರತಿ ಬೂತ್ ಮಟ್ಟದಲ್ಲಿಯೂ ಕಾರ್ಯಕ್ರಮಗಳನ್ನು ನಿರ್ವಹಿಸಿ ಮತದಾರರ ಮನವೊಲಿಸಿ ಮತಗಳನ್ನು ಹಾಕಿಸುವಂಥ ಕೆಲಸ ಆಗಬೇಕೆಂದು ತಿಳಿಸಿದರು.

ಚುನಾವಣೆ ನಡೆದು ಫಲಿತಾಂಶ ಬಂದ ನಂತರ ಒಬ್ಬರ ಮೇಲೆ ಒಬ್ಬರು ಹಾಗೆ ಆಗಬೇಕಿತ್ತು ಈಗಾಗಬೇಕಿತ್ತು ಎಂದು ಗೂಬೆ ಕೂರಿಸುವಂತಹ ಕೆಲಸ ಬೇಡ ಯಾವುದೇ ಪಕ್ಷದಲ್ಲಿ ಯಾವುದೇ ವ್ಯತ್ಯಾಸಗಳಿದ್ದರೂ ಸಹ ಜೆಡಿಎಸ್ ಹಾಗೂ ಬಿಜೆಪಿ ತಾಲೂಕು ಅಧ್ಯಕ್ಷರು ಹಾಗೂ ಮುಖಂಡರುಗಳ ಬಳಿ ಮಾತನಾಡಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕೆಂದು ತಿಳಿಸಿದರು. ಜೆಡಿಎಸ್ ತಾಲೂಕು ಅಧ್ಯಕ್ಷರಾದ ಕಾರಳ್ಳಿ ಮುನೇಗೌಡರವರು ಮಾತನಾಡುತ್ತಾ, ಈ ಬಾರಿ ಕ್ಷೇತ್ರದಿಂದ, ಐವತ್ತು ಸಾವಿರ ಲೀಡ್ ನಾವು ನೀಡಲೇಬೇಕಿದ್ದು, ಕಾರ್ಯಕರ್ತರು ಹಾಗೂ ಮುಖಂಡರುಗಳು ಕೇವಲ ವಾಲ್ ಪೋಸ್ಟರ್ಗಳಲ್ಲಿ, ಫ್ಲೆಕ್ಸಿಗಳಲ್ಲಿ ಪೋಸ್ ನೀಡುವಂತಹ ಕೆಲಸಗಳು ಬೇಕಾಗಿಲ್ಲ. ಪ್ರತಿಯೊಬ್ಬ ಕಾರ್ಯಕರ್ತರು ಹಾಗೂ ಮುಖಂಡರುಗಳು ಬೂತ್ ಮಟ್ಟದಲ್ಲಿ ಕಾರ್ಯವಾಸಿ ಕತ್ತೆ ಕಾಲು ಹಿಡಿ ಎಂಬ ಗಾದೆ ತಪ್ಪಲ್ಲ ಎಂಬಂತೆ ಹೇಗಾದರೂ ಸರಿಯೇ ಎನ್ ಡಿ ಎ ಅಭ್ಯರ್ಥಿಗೆ ಮತ ಹಾಕಿಸುವಂತಹ ಕೆಲಸ ಮಾಡಬೇಕಾಗಿದೆ ಎಂದು ತಿಳಿಸಿದರು. ಮಾಜಿ ಶಾಸಕರು ಹಾಗೂ ಬಿಜೆಪಿ ಮುಖಂಡರಾದ ಜಿ ಚಂದ್ರಣ್ಣ ಮಾತನಾಡಿ, ಇಲ್ಲಿರುವ ಪ್ರತಿಯೊಬ್ಬ ಮುಖಂಡರುಗಳು ಕನಿಷ್ಠ ನೂರಕ್ಕೂ ಹೆಚ್ಚು ಮತಗಳನ್ನು ಹಾಕಿಸುವಂತಹ ಶಕ್ತಿ ಇರುವಂತಹವರಾಗಿದ್ದು, ಇಂದಿನಿಂದಲೇ ಇರುವ ಅಲ್ಪಸಮಯದಲ್ಲಿಯೇ ಅಭ್ಯರ್ಥಿ ಕೆ ಸುಧಾಕರ್ ರವರ ಪರ ಪ್ರಚಾರ ಕಾರ್ಯದಲ್ಲಿ ತೊಡಗಬೇಕೆಂದು ತಿಳಿಸಿದರು. ಮಾಜಿ ಶಾಸಕ ಪಿಳ್ಳಮುನಿಶ್ಯಾಮಪ್ಪ ಮಾತನಾಡಿ, ಯಾವುದೇ ಕಾರಣಕ್ಕೂ ಮತದಾನ ಮಾಡುವ ಸಂದರ್ಭದಲ್ಲಿ ಜೆ.ಡಿ.ಎಸ್ ಕಾರ್ಯಕರ್ತರು ತೆನೆ ಹೊತ್ತ ಮಹಿಳೆಯ ಚಿಹ್ನೆಗಾಗಿ ಹುಡುಕುವಂತಹ ತಪ್ಪು ಮಾಡದೇ, ನಾಲ್ಕನೇ ಸಂಖ್ಯೆಯ ಕಮಲದ ಚಿಹ್ನೆ ಇರುವ ಬಿಜೆಪಿ ಅಭ್ಯರ್ಥಿ ಕೆ.ಸುಧಾಕರ್‌ರವರಿಗೆ ಮತ ನೀಡುವಂತೆ ಎಲ್ಲರಿಗೂ ಮನವರಿಕೆ ಮಾಡಿಕೊಡಬೇಕೆಂದು ತಿಳಿಸಿದರು.



ಈ ಸಂದರ್ಭದಲ್ಲಿ ಬಯಪ ಮಾಜಿ ಅಧ್ಯಕ್ಷ ಎಸ್. ಎಲ್.ಎನ್ ಅಶ್ವತ್ಥ್ ನಾರಾಯಣ್, ಜೆಡಿಎಸ್ ಕಾರ್ಯದರ್ಶಿ ರವೀಂದ್ರ,ಮುಖಂಡರಾದ ಚಿ.ಮಾ ಸುಧಾಕರ್, ಬಿಜೆಪಿ ತಾಲೂಕು ಅಧ್ಯಕ್ಷ ಸುನಿಲ್ ಸುಂದರೇಶ್, ಕಾರ್ಯದರ್ಶಿ ರವಿಕುಮಾರ್, ಮಂಜುನಾಥ್, ಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಜಗದೀಶ್, ಉಪಾಧ್ಯಕ್ಷರಾದ ಭಾಗ್ಯಮ್ಮ, ಮಾಜಿ ಅಧ್ಯಕ್ಷರುಗಳಾದ ಚೇತನ್ ಗೌಡ, ನಾರಾಯಣಸ್ವಾಮಿ, ಬಮೂಲ್‌ನ ಮಾಜಿ ನಿರ್ದೇಶಕರುಗಳಾದ ದಂಡಿಗನಹಳ್ಳಿ ನಾರಾಯಣಸ್ವಾಮಿ, ಹಾಲಿ ನಿರ್ದೇಶಕ ಇರಿಗೇನಹಳ್ಳಿ ಶ್ರೀನಿವಾಸ್, ಹಾಪ್ ಕಾಮ್ಸ್ ಮಾಜಿ ನಿರ್ದೇಶಕರಾದ ಹುರಳುಗುರ್ಕಿ ಶ್ರೀನಿವಾಸ್, ಬಿಜೆಪಿ ವಿಜಯಪುರ ಹೋಬಳಿ ಅಧ್ಯಕ್ಷ ಅನಿಲ್, ಜೆಡಿಎಸ್ ನ ಹೋಬಳಿ ಅಧ್ಯಕ್ಷರಾದ ಪುರ ಕೃಷ್ಣಪ್ಪ, ಕಾರ್ಯದರ್ಶಿ ಕಲ್ಯಾಣಕುಮಾರ್ ಬಾಬು, ಲಕ್ಷ್ಮಣ, ಬುಳ್ಳಹಳ್ಳಿ ರಾಜಪ್ಪ, ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಗಳ ಮಾಜಿ ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಮುಖ್ಯಮಂತ್ರಿ ಸಿದ್ದರಾಮಯ್ಯ ಲೇವಡಿ

# ಮೈತ್ರಿಗೆ ಸೋಲುವ ಭೀತಿ ಶುರು

**ಚಾಮರಾಜನಗರ:** : ಬಿಜೆಪಿ, ಜೆಡಿಎಸ್ ನಾಯಕರಿಗೆ ಲೋಕಸಭಾ ಚುನಾವಣೆಯಲ್ಲಿ ಸೋಲುವ ಭೀತಿ ಎದುರಾಗಿದ್ದು ಎರಡು ಪಕ್ಷಗಳು ಒಟ್ಟಿಗೆ ಸೇರಿ ಚುನಾವಣೆಯನ್ನು ಎದುರಿಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಲೇವಡಿ ಮಾಡಿದರು.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಎಂಜಿಎಸ್‌ವಿ ಕಾಲೇಜು ಮೈದಾನದಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕೊಳ್ಳೇಗಾಲ ಹಾಗೂ ಹನೂರು ವಿಧಾನಸಭಾ ಕ್ಷೇತ್ರಗಳ ಚುನಾವಣಾ ಪ್ರಚಾರ ಸಭೆ ಉದ್ಘಾಟಿಸಿ ಮಾತನಾಡಿದರು.

ನಮ್ಮ ಎದುರಾಳಿ ಬಿಜೆಪಿ, ಜೆಡಿಎಸ್ ಪಕ್ಷಗಳು ಚುನಾವಣೆಯಲ್ಲಿ ಹೊಂದಾಣಿಕೆ ಮಾಡಿಕೊಂಡು ನಮ್ಮ ವಿರುದ್ಧವಾಗಿ ಚುನಾವಣೆ ನಡೆಸುತ್ತಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಶೇ.43 ಮತ ಪಡೆದಿದ್ದು 136 ಸ್ಥಾನಗಳನ್ನು ಗೆದ್ದೆವು. ಅಧಿಕಾರದಲ್ಲಿದ್ದ ಬಿಜೆಪಿ ಕೇವಲ 66 ಸ್ಥಾನ ಹಾಗೂ ಜೆಡಿಎಸ್ 19 ಸ್ಥಾನಗಳನ್ನು ಗೆದ್ದರು. ಈಗ ಅವರಿಬ್ಬರಿಗೂ ಚುನಾವಣೆಯಲ್ಲಿ ಭಯ ಬಂದಿದೆ ಎಂದರು. ಸೋಲುವ ಭಯದಿಂದ ಒಟ್ಟುಗೂಡಿ ಕಾಂಗ್ರೆಸ್ ಪಕ್ಷವನ್ನು ಎದುರಿಸುವ ಕೆಲಸ ಮಾಡುತ್ತಿವೆ. ಎರಡು ಪಕ್ಷಗಳಿಗೆ ಯಾವುದೇ ಸಿದ್ಧಾಂತ ಇಲ್ಲ. ಸಾಮಾನ್ಯ ಕಾರ್ಯಕ್ರಮ ಕೂಡ ಘೋಷಣೆ ಮಾಡಿಕೊಂಡಿಲ್ಲ. ಕಾಂಗ್ರೆಸ್ ಸೋಲಿಸಬೇಕೆಂಬ ಗುರಿ ಮಾತ್ರ ಹೊಂದಿದ್ದಾರೆ ಎಂದು ಹೇಳಿದರು.

ಬಡವರು, ರೈತರು, ಮಹಿಳೆಯರು, ದಲಿತರು, ಹಿಂದುಳಿದವರು ಪರವಾಗಿ ಏನು ಮಾಡಿದ್ದೇವೆ ಎಂಬ ಸಾಧನೆಗಳಿಲ್ಲ. ಕಳೆದ ಅವಧಿಯಲ್ಲಿ ಎಚ್.ಡಿ.ಕುಮಾರಸ್ವಾಮಿ ಒಂದು ವರ್ಷ 2 ತಿಂಗಳು ಸಿಎಂ ಆಗಿದ್ದರು. ಯಡಿಯೂರಪ್ಪ ಎರಡು ವರ್ಷ, ಉಳಿದ ಅವಧಿಯಲ್ಲಿ ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದರು. ಈ 5 ವರ್ಷಗಳ ಅವಧಿಯಲ್ಲಿ ಏನೂ ಕೆಲಸ ಮಾಡಲಿಲ್ಲ ಎಂದರು. ಕಾಂಗ್ರೆಸ್ ಸರ್ಕಾರ ಇದ್ದಾಗ ಪೆಟ್ರೋಲ್ ಬೆಲೆ 69 ರೂ. ಇತ್ತು. ಆದರೆ, ಬಿಜೆಪಿ ಅಧಿಕಾರದ ಅವಧಿಯಲ್ಲಿ 100 ರೂ. ದಾಟಿದೆ. ಅದಾನಿ, ಅಂಬಾನಿ ಶ್ರೀಮಂತರಾದರು ಹೊರತು ಜನ ಸಾಮಾನ್ಯರು ಮಾತ್ರ ಬಡವರಾಗಿಯೇ ಉಳಿದರು. ಗ್ಯಾರಂಟಿ ಯೋಜನೆ ಇಂದಿಗೂ ದೇಶದಲ್ಲಿ ತನ್ನದೇ ಆದ ಪ್ರಾಮುಖ್ಯತೆಯನ್ನು ಹೊಂದಿದೆ ಎಂದು ತಿಳಿಸಿದರು. ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿ, 2023ರ ಚುನಾವಣಾ ಪೂರ್ವ 5 ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವುದಾಗಿ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಡಾ.ಜಿ.ಪರಮೇಶ್ವರ್ ಅವರು ಘೋಷಣೆ ಮಾಡಿದ್ದರು. ಆ ಭರವಸೆ ಮೇಲೆ ರಾಜ್ಯದ ಜನತೆ ಕಾಂಗ್ರೆಸ್ ಪಕ್ಷ ಮತ್ತೆ ಅಧಿಕಾರಕ್ಕೆ ಬರಲು ಆಶೀರ್ವಾದಮಾಡಿದರು. 135 ಸ್ಥಾನಗಳನ್ನು ಗೆಲ್ಲಿಸಿದರು. ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಕೆಲ ತಿಂಗಳಲ್ಲೇ ಸಿದ್ದರಾಮಯ್ಯ ಅವರು 5 ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿದರು. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ 28 ಸ್ಥಾನಗಳನ್ನು ಗೆಲ್ಲುವ ಮೂಲಕ ಇಂಡಿಯಾ ಒಕ್ಕೂಟ ಕೇಂದ್ರದಲ್ಲಿ ಸರ್ಕಾರ ರಚನೆ ಮಾಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಮಹಾಲಕ್ಷ್ಮೀ ಯೋಜನೆಯಡಿ ಮಹಿಳೆಯರಿಗೆ 1 ಲಕ್ಷ ರೂ. ಘೋಷಣೆ ಮಾಡಿದ್ದು ತಿಂಗಳಿಗೆ 8,330 ರೂ.ಗಳನ್ನು ನೀಡುವುದಾಗಿ ಹಾಗೂ ರೈತರ ಸಾಲ ಮನ್ನಾ ಮಾಡುವುದಾಗಿ ರಾಹುಲ್ ಗಾಂಧಿ ಘೋಷಣೆ ಮಾಡಿದ್ದಾರೆ. ಆದ್ದರಿಂದ ಈ ಬಾರಿ ಕಾಂಗ್ರೆಸ್ ಪಕ್ಷದ ಮೇಲೆ ಭರವಸೆ ಇಡುವ ಮೂಲಕ ಪಕಕೆ ಮತ ಚಲಾಯಿಸಿ ಅಭ್ಯರ್ಥಿಯನ್ನು ಗೆಲಿಸುವಂತೆ ಮನವಿ ಮಾಡಿದರು. ಇದಕ್ಕೂ ಮುನ್ನ ಪಟ್ಟಣದಲ್ಲಿರುವ ಡಾ.ಬಿ.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.ಇದೇ ಸಂದರ್ಭದಲ್ಲಿ ಬಿಜೆಪಿ, ಜೆಡಿಎಸ್, ಬಿಎಸ್ಪಿ ಸೇರಿದಂತೆ ಇತರೆ ಪಕ್ಷಗಳ ಮುಖಂಡರು ಪಕ್ಷ ತೊರೆದು ಸಿದ್ದರಾಮಯ್ಯ ಸಮ್ಮುಖದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಯಾದರು. ಕಾರ್ಯಕ್ರಮದಲ್ಲಿ ಸಚಿವರಾದ ಕೆ.ವೆಂಕಟೇಶ್, ಡಾ.ಎಚ್.ಸಿ. ಮಹದೇವಪ್ಪ, ಸತೀಶ್ ಜಾರಕಿಹೊಳಿ, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಶಾಸಕ ಸಿ.ಪುಟ್ಟರಂಗಶೆಟ್ಟಿ, ಎಚ್.ಎಂ.ಗಣೇಶ್ ಪ್ರಸಾದ್, ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ, ಮಾಜಿ ಸಂಸದ ಎಂ.ಶಿವಣ್ಣ, ಮಾಜಿ ಶಾಸಕರಾದ ಎಸ್.ಜಯಣ್ಣ, ಆರ್.ನರೇಂದ್ರ, ಜಿ.ಎನ್.ನಂಜುಂಡಸ್ವಾಮಿ ಸೇರಿದಂತೆ ಇತರರಿದ್ದರು.

# ಜಿಲ್ಲೆಯ ಅಭಿವೃದ್ದಿಗೆ ಮತ್ತೊಮ್ಮೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್ ಬೋಸ್ ಗೆಲಿಸಿ

**ಚಾಮರಾಜನಗರ:**ತಾಲೋಕಿನ ವೆಂಕಟಯ್ಯನಛತ್ರ, ವಿಸಿಹೊಸೂರು, ಅಂಕನಶೆಟ್ಟಿಪುರ, ಬಸವಾಪುರ, ಚಿಕ್ಕಮೋಳೆ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಲೋಕಸಭಾ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್‌ಬೋಸ್ ಪರ ಕಾರ್ಯಕರ್ತರು ಹಾಗೂ ಮುಖಂಡರ ಜೊತೆಗೆ ತೆರಳಿ ಶಾಸಕ ಸಿ,ಪುಟ್ಟರಂಗಶೆಟ್ಟಿ ಮತಯಾಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕಸಿ,ಪುಟ್ಟರಂಗಶೆಟ್ಟಿ ಅವರು ದೇಶದ ಅಭಿವೃದ್ಧಿಗೆ ಕಾಂಗ್ರೆಸ್ ಮಾಡಿದ ಸಾಧನೆ ಅಪಾರವಾಗಿದ್ದು ಸಂವಿಧಾನದ ಚೌಕಟ್ಟಿನಲ್ಲಿ ದೇಶದ ಎಲ್ಲಾ ಬಡವರು,ನಿರ್ಗತಿಕರು ಹಾಗೂ ಶೋಷಿತರ ಪರವಾಗಿ ಹಿಂದಿನ ಯುಪಿಎ ಸರ್ಕಾರದ ಅವಧಿಯಲ್ಲಿ ಹಲವು ಅಭಿವೃದ್ಧಿ ಕೆಲಸಗಳು ಆಗಿದೆ. ಇಂದಿನ ಬಿಜೆಪಿ ಸರ್ಕಾರವು ಜನರಿಗೆ ಆಶ್ವಾಸನೆಗಳನ್ನು ನೀಡಿ ಅಭಿವೃದ್ಧಿ ಮಾಡಿಲ್ಲ.ಹೀಗಾಗಿಲು ಕೇಂದ್ರದಲ್ಲಿ ಮತ್ತೊಮ್ಮೆ ಯುಪಿಎ ಸರ್ಕಾರವು ಅಧಿಕಾರಕ್ಕೆ ಬರುವ ವಿಶ್ವಾಸದಲ್ಲಿದೆ ಎಂದರು.

ಚಾಮರಾಜನಗರ ಜಿಲ್ಲೆಯ ಸರ್ವತೋಮುಖ ಅಭಿವೃದ್ದಿಗೆ ಮತದಾರರು ಮತ್ತೊಮ್ಮೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸಿನಿಲ್ ಬೋಸ್ ಅವರನ್ನು ಗೆಲ್ಲಿಸಿ ಆಶೀರ್ವಾದಿಸಬೇಕೆಂದು ಮನವಿ ಮಾಡಿದರು,

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ,ಕೆ ರವಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಎಸ್ ಗುರುಸ್ವಾಮಿ, ಮಹಮದ ಅಸ್ಗರ್‌ಮುನ್ನಾ, ಎಪಿಎಂಸಿ ಅಧ್ಯಕ್ಷ ಮಹದೇವಸ್ವಾಮಿ, ಜಿ,ಪಂ ಮಾಜಿ ಸದಸ್ಯ ರಮೇಶ್, ತಾ,ಪಂ ಮಾಜಿ ಸದಸ್ಯ ಎಚ್,ಎಂ ಮಹದೇವಶೆಟ್ಟಿ, ಕೋಡಿಮೋಳೆ ಪ್ರಕಾಶ್, ಮಹೇಶ್‌ಕುದರ್, ಕೆಂಪರಾಜು, ಮಹೇಶ್, ಮಂಜುನಾಥ್, ಪರಿಶಿಷ್ಟ ವಿಭಾಗದ ತಾ,ಅಧ್ಯಕ್ಷ ಸೋಮಣ್ಣ, ಮಹದೇವಸ್ವಾಮಿ, ಗಣೇಶ್, ಸೇರಿದಂತೆ ಪಕ್ಷದ ಕಾರ್ಯಕರ್ತರು ಮುಖಂಡರು ಇದ್ದರು,



## ನವ ಭಾರತ ನಿರ್ಮಾಣಕ್ಕೆ ಮತದಾನ ಸಂಜೀವಿನಿಯಾಗಿದೆ

**ಚಾಮರಾಜನಗರ:** ಪ್ರಜಾ ಪ್ರಭುತ್ವ ಬಲಿಷ್ಠಗೊಳ್ಳಲು ಪ್ರತಿಯೊಬ್ಬರೂ ಮತದಾನದಲ್ಲಿ ಭಾಗವಹಿಸಬೇಕು. ಒಂದೊಂದು ಮತವು ಸಹ ಸದೃಢ ಭಾರತ ನಿರ್ಮಾಣಕ್ಕೆ ಸಂಜೀವಿನಿಯಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ತಿಳಿಸಿದರು.

ಕೊಳ್ಳೇಗಾಲ ತಾಲ್ಲೂಕು ಪಂಚಾಯತ್ ಸ್ವೀಪ್ ಸಮಿತಿ ವತಿಯಿಂದ ಇಂದು ತಾಲೂಕಿನ ಮುಳ್ಳೂರು ಗ್ರಾಮ ಪಂಚಾಯತಿಯಲ್ಲಿ ಲೋಕಸಭಾ ಚುನಾವಣಾ-2024ರ ಅಂಗವಾಗಿ ಸಾರ್ವಜನಿಕರಿಗೆ ಮತದಾನ ಜಾಗೃತಿ ಮೂಡಿಸಲು ಹಮ್ಮಿಕೊಳ್ಳಲಾಗಿದ್ದ ಅಲಂಕರಿಸಿದ ಎತ್ತಿನಗಾಡಿ ಜಾಥಾವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮತದಾನ ನಮ್ಮ ಹಕ್ಕು. ಯಾರು ಸಹ ಮತದಾನದಿಂದ ದೂರ ಉಳಿಯದೇ ತಪ್ಪದೇ ಮತ ಚಲಾಯಿಸಬೇಕು. ಪ್ರಜಾಪ್ರಭುತ್ವದ ಹಬ್ಬವನ್ನು ಎಲ್ಲರೂ ಮತ ಚಲಾಯಿಸುವ ಮೂಲಕ ಆಚರಿಸಬೇಕು. ಪ್ರತೀ ಐದು ವರ್ಷಕ್ಕೆ ಒಮ್ಮೆ ಮಾತ್ರ ಬರುವ ಚುನಾವಣೆಯಲ್ಲಿ ಅಭಿವೃದ್ಧಿ ಪರವಾಗಿ ಕೆಲಸಗಳನ್ನು ಮಾಡುವ ಉತ್ತಮ ವ್ಯಕ್ತಿಯನ್ನು ಆರಿಸಿಕೊಳ್ಳಿ ಎಂದರು.

ಎತ್ತಿನಗಾಡಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಚುನಾವಣಾ ಯುವ ರಾಯಭಾರಿಗಳಾದ ಬಿಗ್‌ಬಾಸ್ ಖ್ಯಾತಿಯ ಕಾರ್ತಿಕ್ ಮಹೇಶ್ ಅವರು ಚಾಲನೆ ನೀಡಿ ಮಾತನಾಡಿ ಯಾವುದೇ ಆಸೆ, ಆಮಿಷಗಳಿಗೆ ಒಳಗಾಗದೇ ಪ್ರಬುದ್ಧ ವ್ಯಕ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಕಡ್ಡಾಯವಾಗಿ ಮತದಾನ ಮಾಡುವುದನ್ನು ಮರಿಯಬೇಡಿ ಎಂದು ಹೇಳಿದರು.

ಮತೋರ್ವ ರಾಯಭಾರಿ ಸಮತಾ ಸಮಾಜದ ಅಧ್ಯಕ್ಷರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಾದ ದೀಪಾ ಬುದ್ದೇ ಅವರು ಮತದಾನ ಮಾಡುವುದು ಬಹಳ ಪವಿತ್ರವಾದ ಕೆಲಸ. ನಮ್ಮ ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವ ಒಬ್ಬ ಸೂಕ್ತ ಅಭ್ಯರ್ಥಿ ಆಯ್ಕೆ ಮಾಡಲು ಎಲ್ಲರೂ ತಪ್ಪದೇ ಮತದಾನ ಮಾಡಿ ಎಂದು ತಿಳಿಸಿದರು.

ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ, ಸಹಾಯಕ ನಿರ್ದೇಶಕ ಗೋಪಾಲ್ ಕೃಷ್ಣ, ಗ್ರಾಮ ಪಂಚಾಯತಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸಂಜೀವಿನಿ ಯೋಜನೆಯ ಒಕ್ಕೂಟದ ಸದಸ್ಯರು ಇದ್ದರು.



**ವಿಜಯಪುರ ಪಟ್ಟಣದ ಹದಿನಾರನೇ ವಾರ್ಡ್ ನ ಮಾಜಿ ಪುರಸಭಾ ಸದಸ್ಯ ಮುಬಾರಕ್ ರವರ ನಿವಾಸದಲ್ಲಿ ರಂಜಾನ್ ಹಬ್ಬದ ಸಂದರ್ಭದಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಕಾಂಗ್ರೆಸ್ನ ರಕ್ಷಾ ರಾಮಯ್ಯ ರವರು ಮುಸ್ಲಿಂ ಬಾಂಧವರಿಗೆ ಶುಭಾಶಯ ತಿಳಿಸಿದರು. ಈ ಸಂದರ್ಭದಲ್ಲಿ ಮುಸ್ಲಿಂ ಬಾಂಧವರು ವಿಶೇಷವಾಗಿ ರೇಷ್ಮೆ ಗೂಡಿನಿಂದ ತಯಾರಿಸಿದ ಹಾರವನ್ನು ಹಾಕಿ ಅಭಿನಂದಿಸಿದರು. ಕೆಪಿಸಿಸಿ ಕಾರ್ಯದರ್ಶಿ, ವಿ ಮಂಜುನಾಥ್, ಪುರಸಭಾ ಸದಸ್ಯರುಗಳಾದ ಹನೀಫ್ ಉಲ್ಲಾ, ರಾಜಣ್ಣ, ಇಕ್ಬಾಲ್, ಮಾಜಿ ಸದಸ್ಯರುಗಳಾದ ಮುಬಾರಕ್, ಜೆ ಎನ್ ಶ್ರೀನಿವಾಸ್, ಜಿಲ್ಲಾ ಅಲ್ಪಸಂಖ್ಯಾತ ಘಟಕದ ಕಾಂಗ್ರೆಸ್ ಅಧ್ಯಕ್ಷರಾದ ಗೌಸ್ಖಾನ್, ಟೌನ್ ಅಧ್ಯಕ್ಷ ಆಫ್ಜಲ್, ಸಬತುಲ್ಲ, ಜಗದೀಶ್, ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಮಚಂದ್ರಪ್ಪ, ಟೌನ್ ಕಾಂಗ್ರೆಸ್ ಅಧ್ಯಕ್ಷ ವಿಎಂ ನಾಗರಾಜು, ಕಾರ್ಯದರ್ಶಿ ಕೋಕೋ ಕೋಲಾ ಮಂಜುನಾಥ್, ಡಾಬಾಮಧು ಮತ್ತಿತರ ಮುಖಂಡರುಗಳು ಉಪಸ್ಥಿತರಿದ್ದರು.**

### ಹಿರಿಯ ಪತ್ರಕರ್ತ ಮೊದಲಿಯಾರ್‌ಗೆ ಕೆ.ಯು.ಡಬ್ಲ್ಯ್ಯ ಜೆ. ಗೌರವ

# ವೃತ್ತಿಯಲ್ಲಿ ಪತ್ರಕರ್ತರು ತಮ್ಮ ನಿಲುವಿಗೆ ಗಟ್ಟಿಯಾಗಿರುವಂತೆ ಕರೆ

**ಬೆಂಗಳೂರು:** ಎಂಥಹ ಕಠಿಣ ಪರಿಸ್ಥಿತಿಗಳು ಎದುರಾದರೂ ಪತ್ರಕರ್ತರು ತಮ್ಮ ನಿಲುವನ್ನು ಸಡಿಲಿಸಬಾರದು. ಅದು ನಾವೇ ಕಂಕಣ ಪಡೆದುಕೊಂಡು ಮಾಧ್ಯಮ ವೃತ್ತಿಗೆ ನೀಡುವ ಗೌರವ ಎಂದು ಹಿರಿಯ ಪತ್ರಕರ್ತರಾದ ಗಂಗಾಧರ ಮೊದಲಿಯಾರ್ ಅವರು ಅಭಿಪ್ರಾಯಪಟ್ಟರು.

ಮಲ್ಲತ್ತಳ್ಳಿಯಲ್ಲಿರುವ ಅವರ ಮನೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆ.ಯು.ಡಬ್ಲ್ಯ್ಯ.ಜೆ) ಹಮ್ಮಿಕೊಂಡ ಮನೆಯಂಗಳದಲ್ಲಿ ಮನದುಂಬಿ ನಮನ ಸಮಾರಂಭದಲ್ಲಿ ಸಂಘದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ವಿದ್ಯಾರ್ಥಿ ಜೀವನದಿಂದಲೇ ಪತ್ರಿಕೆಗೆ ಬರೆಯುವ ಮೂಲಕ ಒಂದಿಷ್ಟು ಸಂಪಾದನೆ ಮಾಡಿಕೊಂಡು ಓದು ಮುಂದುವರಿಸಿಕೊಂಡು ಬಂದಿದ್ದು, ಮುಂದೆ ಪತ್ರಕರ್ತನಾಗುವ ಅವಕಾಶವನ್ನು ನೀಡಿತು. ಹಾಗಾಗಿ ನಾಲ್ಕು ದಶಕಗಳ ಕಾಲ ಸಂಯುಕ್ತ ಕರ್ನಾಟಕ ಮತ್ತು ಪ್ರಜಾವಾಣಿ ಪತ್ರಿಕೆಯಲ್ಲಿ ಕೆಲಸ ಮಾಡಲು ಸಾಧ್ಯವಾಯಿತು ಎಂದರು.

ಸವಾಲುಗಳ ನಡುವೆಯೇ ಪತ್ರಕರ್ತರು ಕೆಲಸ ಮಾಡಬೇಕಿದೆ. ಪತ್ರಕರ್ತರು ಯಾವುದೇ ರೀತಿಯಲ್ಲೂ ತಮ್ಮ ವ್ಯಕ್ತಿತ್ವಕ್ಕೆ ಕುಂದುಂಟಾಗುವ ರೀತಿಯಲ್ಲಿ ನಡೆದುಕೊಂಡರೆ ಎಲ್ಲೂ ಕೂಡಾ ಗುರುತಿಸಿಕೊಳ್ಳುವುದು ಅಸಾಧ್ಯ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ, ಪ್ರಧಾನ ಕಾರ್ಯದರ್ಶಿ ಮತ್ತು ರಾಜ್ಯಾಧ್ಯಕ್ಷ ಹೀಗೆ ವಿವಿಧ ಹುದ್ದೆಗಳನ್ನು ವಹಿಸಿಕೊಂಡು ಸಂಘಟನಾತ್ಮಕ ಕಾರ್ಯಗಳನ್ನು ವಿವಿಧ ಸವಾಲುಗಳ ಮಧ್ಯೆ ಹತ್ತಾರು ವರ್ಷಗಳ ಕಾಲ ನಿರ್ವಹಿಸಿರುವುದು ತೃಪ್ತಿ ಕೊಟ್ಟಿದೆ. ಮಾಧ್ಯಮ ಅಕಾಡೆಮಿಯ ಸೇವೆಗೂ ಕೆಯುಡಬ್ಲೂ?ಜೆ ಕಾರಣ. ನನ್ನ ಸೇವೆ ಗುರುತಿಸಿ ಟಿ.ಎಸ್.ಆರ್. ಪ್ರಶಸ್ತಿ ಸೇರಿದಂತೆ ಸರ್ಕಾರದ ವಿವಿಧ ಉನ್ನತ ಸ್ಥಾನಮಾನಗಳು ತನ್ನನ್ನು ಹುಡುಕಿಕೊಂಡು ಬಂದಿವೆ ಎಂದೂ ಅವರು ಅಭಿಪ್ರಾಯಪಟ್ಟರು.




ಶಿವಾನಂದ ತಗಡೂರು ಅವರು ಅಧ್ಯಕ್ಷರಾದ ಮೇಲೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಹೊಸ ರೂಪ ಪಡೆದು, ಕ್ರಿಯಾಶೀಲವಾಗಿ ಪತ್ರಕರ್ತರ ಶ್ರೇಯೋಭಿವೃದ್ಧಿಗೆ ತಕ್ಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು.

ಸಮಾರಂಭದಲ್ಲಿ ಪ್ರಸ್ತಾವಿಕ ಮಾತುಗಳನ್ನಾಡಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, ಗಂಗಾಧರ ಮೊದಲಿಯಾರ್‌ರವರು ಸಿನಿಮಾ ಪತ್ರಿಕೋದ್ಯಮದಲ್ಲಿ ತನ್ನದೇ ಆದ ಛಾಪು ಮೂಡಿಸಿದವರು. ಅವರು ಪತ್ರಿಕೋದ್ಯಮದ ಜೊತೆ ಜೊತೆಗೇ 18 ಸಾಹಿತ್ಯ ಕೃತಿಗಳನ್ನು ರಚಿಸಿರುವುದು ಅವರ ನೈಜ ಸಾಮರ್ಥ್ಯಕ್ಕೆ ಸಾಕ್ಷಿ, ಅಷ್ಟೇ ಅಲ್ಲದೇ, ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ನಿಷ್ಠೆಯಿಂದ ತಮ್ಮ ಜವಾಬ್ದಾರಿಯನ್ನು ನಿರ್ವಹಿಸಿದ್ದಾರೆ ಎಂದರು. ಮೊದಲಿಯಾರ ಅವರೊಳಗೊಬ್ಬ ಪತ್ರಕರ್ತ, ಸಂಘಟಕ ಅಷ್ಟೆ ಅಲ್ಲ, ಸಾಹಿತಿಯೂ ಇದ್ದಾನೆ ಎಂದರು. ಹಿರಿಯ ಪತ್ರಕರ್ತರಾದ ಕಂ.ಕ. ಮೂರ್ತಿ ಮಾತನಾಡಿ, ಕೆ.ಯು.ಡಬ್ಲ್ಯ್ಯ.ಜೆ. ಕಳೆದ ಹಲವಾರು ವರ್ಷಗಳಿಂದ ಪತ್ರಕರ್ತರಿಗೆ ಸಂಪರ್ಕ ಸೇತುವೆಯಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದೆ. ಅದಕ್ಕೆ ಪದಾಧಿಕಾರಿಗಳ ನಿಸ್ವಾರ್ಥ ಮನೋಭಾವವೇ ಕಾರಣ. ಅಷ್ಟೇ ಅಲ್ಲದೇ, ಸಂಘವು ರಾಜ್ಯದಾದ್ಯಂತ ಕ್ರಿಯಾಶೀಲ ಚಟುವಟಿಕೆಗಳ ಮೂಲಕ ಬಾಂಧವ್ಯ ಬೆಸೆಯುವ ಕೊಂಡಿಯಂತೆ ತನ್ನ ಬದ್ಧತೆಯನ್ನು ದಿನದಿಂದ ದಿನಕ್ಕೆ ಹೆಚ್ಚಿಸಿಕೊಂಡಿರುವುದು ಅಭಿನಂದನಾರ್ಹ. ಕೆಯುಡಬ್ಲೂಜೆ ಕ್ರೀಯಾಶೀಲತೆ ವೃತ್ತಿನಿಷ್ಠ ಪತ್ರಕರ್ತರ ಪಾಲಿಗೆ ನಿಜಕ್ಕೂ ಹೆಮ್ಮೆಯ ವಿಷಯ ಎಂದರು.

ಇದೇ ಸಂದರ್ಭದಲ್ಲಿ ಗಂಗಾಧರ ಮೊದಲಿಯಾರ್ ಅವರ ಪತ್ನಿ ಮಾಳವಿಕಾ ಅವರನ್ನು ಸಮಾರಂಭದಲ್ಲಿ ಗೌರವಹಿಸಲಾಯಿತು.

ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ ಸ್ವಾಗತಿಸಿದರು. ಕೊನೆಯಲ್ಲಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಸೋಮಶೇಖರ ಗಾಂಧಿ ವಂದನಾರ್ಪಣೆ ಮಾಡಿದರು. ಬೆಂಗಳೂರು ನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇಂದ್ರ ಪಾರೆಕಟ್, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಆರ್ .ದೇವರಾಜ್, ನಗರ ಘಟಕದ ಶಿವರಾಜ್, ಶರಣ ಬಸಪ್ಪ ಹಾಜರಿದ್ದರು.

### ಚಿನ್ನದ ಪದಕದ ವಿದ್ಯಾರ್ಥಿಯಾಗಿದ್ದ...

ಮೈಸೂರಿನಲ್ಲಿ ಚಿನ್ನದ ಪದಕದೊಂದಿಗೆ ಎಂ.ಎ ಕನ್ನಡ ಮುಗಿಸಿದ್ದ ಗಂಗಾಧರ ಮೊದಲಿಯಾರ್ ಅವರು ಸಂಯುಕ್ತ ಕರ್ನಾಟಕ ಪತ್ರಿಕೆಯ ಮೂಲಕ 1976ರಲ್ಲಿ ಪತ್ರಿಕೋದ್ಯಮಕ್ಕೆ ಪದಾರ್ಪಣೆ ಮಾಡಿದವರು. ಅಲ್ಲಿ ನಾಲ್ಕು ವರ್ಷ ವೃತ್ತಿ ಅನುಭವ ಗಳಿಸಿ, ಪ್ರಜಾವಾಣಿ ಬಳಗದಲ್ಲಿ ಸುಮಾರು ನಾಲ್ಕು ದಶಕಗಳ ಕಾಲದ ಸುದೀರ್ಘಾವಧಿ ಸೇವೆ ಸಲ್ಲಿಸಿದವರು. ತುಮಕೂರಿನಲ್ಲಿ ವರದಿಗಾರರಾಗಿ ಸೇವೆ ಸಲ್ಲಿಸಿದ ಸಂದರ್ಭದಲ್ಲಿ ನಕ್ಸಲ್ ಚಟುವಟಿಕೆ ಬಗ್ಗೆ ಬರೆದ ವರದಿಗಳ ಹಿನ್ನೆಲೆಯಲ್ಲಿ ಆಗಿನ ಜಿಲ್ಲಾಡಳಿತ ಕೆಂಗಣ್ಣಿಗೆ ಗುರಿಯಾಗಿದ್ದನ್ನು ಅವರು ನೆನಪಿಸಿಕೊಂಡರು.

### ರಾಜ್‌ಕುಮಾರ್ ಮೂಗಿನ ಸುದ್ದಿ ವಿವಾದ...

ಸಿನಿಮಾ ಕುರಿತು ಬರೆದ ವರದಿ ಮಿಸ್ ಫೈರ್ ಆಗಿ ಡಾ. ರಾಜ್ ಕುಟುಂಬದಿಂದ ಸಂಕಷ್ಟಕ್ಕೂ ಗುರಿಯಾದೆ. ತಾನು ರಾಜ್‌ಕುಮಾರ್ ರವರ ಮೂಗಿನ ಕುರಿತು ಟೀಕಿಸಿ ಬರೆದಿಲ್ಲ, ಬಸವಣ್ಣ ಸಿನಿಮಾಗೆ ಬೇರೊಬ್ಬ ನಟನ ಮೂಗಿನ ಕುರಿತಾಗಿ ಬರೆದದ್ದನ್ನು ಡಾ. ರಾಜ್ ಬಳಗದ ಕೆಲವರು ಅವರ ಬಗ್ಗೆ ಬರೆದದ್ದೆಂದು ತಪ್ಪಾಗಿ ಅರ್ಥೈಸಿ ತನಗೆ ಪ್ರಾಣ ಬೆದರಿಕೆಯ ತೊಂದರೆಕೊಟ್ಟರು. ಆದರೆ ಆಗ ತಾನು ಕಾರ್ಯನಿರ್ವಹಿಸಿದ್ದ ಪತ್ರಿಕಾ ಸಂಸ್ಥೆಯ ಮಾಲಿಕರು ತನ್ನ ಜೊತೆ ನಿಂತು, ಧೈರ್ಯ ತುಂಬಿದ ನಿಲುವನ್ನು ಮೊದಲಿಯಾರ್‌ರವರು ತಮ್ಮ ವೃತ್ತಿ ಜೀವನದ ಮರೆಯದ ಘಟನೆ ಎಂದು ಹೇಳಿಕೊಂಡರು.

# ಕರ್ನಾಟಕಕ್ಕೆ ಏನು ಮಾಡಿದ್ದಾರೆ ಎಂದು ರಾಜ್ಯದ ಜನತೆಗೆ ಮೋದಿ ಉತ್ತರಿಸಲಿ

**ಮೈಸೂರು:** ಪ್ರಧಾನಿ ಮೋದಿಯವರು ನಾಳೆ ಮೈಸೂರಿಗೆ ಆಗಮಿಸುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿಎಂ ಸಿದ್ದರಾಮಯ್ಯ, ಮೋದಿಯವರು ಬಂದು ಹೋಗಲು ನನ್ನದೇನೂ ತಕರಾರಿಲ್ಲ. ಕರ್ನಾಟಕಕ್ಕೆ ಏನು ಮಾಡಿದ್ದಾರೆ ಎಂದು ರಾಜ್ಯದ ಜನತೆಗೆ ಹೇಳಬೇಕು. ನಿರುದ್ಯೋಗ, ತೆರಿಗೆ ಹಂಚಿಕೆ, ಬರಗಾಲಕ್ಕೆ ಇಂದಿನವರೆಗೂ ಯಾಕೆ ಪರಿಹಾರ ನೀಡಿಲ್ಲ ಎಂಬುದಕ್ಕೆಲ್ಲಾ ಉತ್ತರ ಹೇಳಲಿ ಎಂದು ಆಗ್ರಹಿಸಿದರು.

ಇಂದು ಮೈಸೂರಿನ ತಮ್ಮ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಎನ್. ಡಿಎಗೆ ಪೂರ್ಣ ಬಹುಮತ ದೊರಕುವುದಿಲ್ಲ. ಬಿಜೆಪಿ ವಿರುದ್ಧವಿರುವ ಇಂಡಿಯಾ ಮೈತ್ರಿಗೆ ಬಹುಮತ ದೊರೆಯಲಿದೆ. 400 ಕ್ಕೂ ಹೆಚ್ಚು ಸ್ಥಾನಪಡೆಯುವುದಾಗಿ ಹೇಳಿಕೊಳ್ಳುತ್ತಿರುವ ಬಿಜೆಪಿಯದ್ದು ಜನರ ದಾರಿತಪ್ಪಿಸುವ ಕಾರ್ಯತಂತ್ರ ಎಂದರು.



**ಅನಂತಕುಮಾರ್ ಹೆಗಡೆ ಮೇಲೆ ಕ್ರಮ ಏಕಿಲ್ಲ:** ಅಂಬೇಡ್ಕರ್ ಬಂದರೂ ಸಂವಿಧಾನ ಬದಲಿಸಲು ಸಾಧ್ಯವಿಲ್ಲ. ಬಿಜೆಪಿ ಸಂವಿಧಾನದ ಪರವಾಗಿದೆ ಎಂದು ಮೋದಿ ಹೇಳಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಹಾಗಾದರೆ ಅನಂತಕುಮಾರ್ ಹೆಗಡೆ ಮೇಲೆ ಕ್ರಮ ಯಾಕೆ ತೆಗೆದುಕೊಂಡಿಲ್ಲ. ಅವರನ್ನು ಪಕ್ಷದಿಂದ ಅಥವಾ ಮಂತ್ರಿ ಸ್ಥಾನದಿಂದ ಕೈಬಿಟ್ಟರೇ ಎಂದು ಪ್ರಶ್ನಿಸಿದರು. ಉತ್ತರ ಕರ್ನಾಟಕದಲ್ಲಿ ಐದು ವರ್ಷಗಳಿಂದ ಏನೂ ಕೆಲಸ ಮಾಡದೇ ಮನೆಯಲ್ಲಿ ಕುಳಿತಿದ್ದರು. ಕೊನೇ 3-4 ತಿಂಗಳು ಬಂದು ಸೋಲುವ ವರದಿಯಾಧಾರದ ಮೇಲೆ ಅನಂತಕುಮಾರ್ ಅವರಿಗೆ ಟಿಕೆಟ್ ಕೊಟ್ಟಿಲ್ಲ ಎಂದರು.

**ಬಿಜೆಪಿ ಯಾವತ್ತೂ ಸಂವಿಧಾನದ ಪರವಾಗಿಲ್ಲ:** ಬಿಜೆಪಿ ಯಾವತ್ತೂ ಸಂವಿಧಾನದ ಪರವಾಗಿಲ್ಲ. ಸಂವಿಧಾನ ಜಾರಿಯಾದಾಗ ಸಾವರ್ಕರ್ ಹಾಗೂ ಗೋಲ್ವಾಲ್ಕರ್ ಅವರು ಭಾರತದ ಸಂವಿಧಾನವನ್ನು ವಿರೋಧಿಸಿದ್ದರು ಎಂದರು.

ಎನ್.ಐ.ಎ ಹಾಗೂ ಕರ್ನಾಟಕ ಪೊಲೀಸ್ ಕಾರ್ಯ ಶ್ಲಾಘನೀಯ

ರಾಮೇಶ್ವರ ಕಾಫೆ ಬಾಂಬ್ ಸ್ಫೋಟದ ಪ್ರಮುಖ ಆರೋಪಿಗಳನ್ನು ಬಂಧಿಸಿರುವ ಎನ್.ಐ. ಎ ತಂಡ ಮತ್ತು ಕರ್ನಾಟಕ ಪೊಲೀಸರನ್ನು ಸಿಎಂ ಸಿದ್ದರಾಮಯ್ಯ ಶ್ಲಾಘಿಸಿದ್ದಾರೆ. ಆರೋಪಿಗಳನ್ನು ಕೋಲ್ಕತ್ತಾದಿಂದ ಬೆಂಗಳೂರಿಗೆ ಕರೆ ತಂದ ನಂತರ ವಿಚಾರಣೆ ಮಾಡಿ ಹೆಚ್ಚಿನ ವಿವರ ಪಡೆಯಲಾಗುವುದು ಎಂದರು.

## ಹಂದನಕೆರೆ ಕಾಲೇಜಿಗೆ ಶೇ.89 ಫಲಿತಾಂಶ





**ಹುಳಿಯಾರು:** 2023-24 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಹಂದನಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಶೇ. 88.57 ಫಲಿತಾಂಶ ಲಭಿಸಿದೆ.

ಈ ಕಾಲೇಜಿ ಕಲಾ ವಿಭಾಗದಿಂದ 35 ಮಂದಿ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಇವರಲ್ಲಿ 31 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಈ ಪೈಕಿ 3 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ, 15 ವಿದ್ಯಾರ್ಥಿಗಳು ಪ್ರಥಮ, 8 ವಿದ್ಯಾರ್ಥಿಗಳು ದ್ವಿತೀಯ ಹಾಗೂ 5 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ಪಾಸಾಗಿದ್ದಾರೆ. ಎಚ್.ಆರ್.ರಂಗಸ್ವಾಮಿ (525), ಸಿ.ಆರ್.ಸಹನಾ (516), ಸಿ.ಆರ್.ಮೇಘನಾ (513), ಸಿ.ಎಲ್.ಕುಮಾರಿ (496), ಸಿ.ಎಂ.ಕುಸುಮಾ (491), ಎಚ್.ಎಸ್.ಅಶ್ವಿನಿ (482) ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಾಗಿದ್ದಾರೆ. ಉತ್ತಮ ಫಲಿತಾಂಶಕ್ಕೆ ಕಾರಣಕರ್ತರಾದ ವಿದ್ಯಾರ್ಥಿಗಳನ್ನು ಪ್ರಾಚಾರ್ಯ ಟಿ.ಎಂ.ಶಿವಣ್ಣ, ಉಪನ್ಯಾಸಕರು ಹಾಗೂ ಕಾಲೇಜಿನ ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು ಅಭಿನಂಧಿಸಿದ್ದಾರೆ.

## ಶಾಲಾ ಮಕ್ಕಳಿಗೆ ಬೇಸಿಗೆಯಲ್ಲೂ ಬಿಸಿಯೂಟ

**ಹುಳಿಯಾರು:** ಬರಗಾಲದ ತಾಲ್ಲೂಕು ಎಂದು ಘೋಷಣೆಯಾಗಿರುವ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಬೇಸಿಗೆ ರಜೆಯಲ್ಲೂ ಬಿಸಿಯೂಟ ನೀಡುವ ಕಾರ್ಯ ಯಶಸ್ವಿಯಾಗಿ ನಡೆಯುತ್ತಿದೆ. ಭಾನುವಾರ ಹೊರತುಪಡಿಸಿ ಇನ್ನುಳಿದ 41 ದಿನಗಳ ಕಾಲ ಈ ಬಿಸಿ ಊಟ ವಿತರಣಾ ವ್ಯವಸ್ಥೆ ತಾಲೂಕಿನಲ್ಲಿ ಜಾರಿಯಲ್ಲಿರುತ್ತದೆ. ತಾಲ್ಲೂಕಿನಲ್ಲಿ 18 ಸಾವಿರ ವಿದ್ಯಾರ್ಥಿಗಳಿದ್ದು ಇವರಲ್ಲಿ 7493 ವಿದ್ಯಾರ್ಥಿಗಳು ಬಿಸಿಯೂಟಕ್ಕೆ ಒಪ್ಪಿಗೆ ನೀಡಿದ್ದು, ಇವರಿಗೆ ಬಿಸಿಯೂಟ ವಿತರಿಸಲು 292 ಶಾಲೆಗಳಲ್ಲಿ 410 ಅಡಿಗೆ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅದರಂತೆ ಆಯಾಯ ಶಾಲಾ ಶಿಕ್ಷಕರು ಹಾಗೂ ನೋಡಲ್ ಶಿಕ್ಷಕರು ಬಿಸಿಯೂಟ ಪಡೆಯುವ ಎಲ್ಲಾ ವಿದ್ಯಾರ್ಥಿಗಳ ದಾಖಲಾತಿ ಪಡೆದು ಪ್ರತಿನಿತ್ಯ ಇಲಾಖೆಗೆ ಸಂದೇಶ ಕಳುಹಿಸುತ್ತಿದ್ದಾರೆ. ವಿದ್ಯಾರ್ಥಿಗಳಿಗೆ ಪಲಾವು, ಉಪ್ಪಿಟ್ಟು, ಟಮೊಟೊಬಾತ್, ಅನ್ನಸಾಂಬಾರ್ ಹೀಗೆ ನಿತ್ಯ ಒಂದೊಂದು ರೀತಿಯ ಆಹಾರ ವಿತರಣೆ ಮಾಡಲಾಗುತ್ತದೆ. ಬಿಸಿಯೂಟ ಯೋಜನೆ ವಿತರಣೆ ಅನುಷ್ಠಾನವನ್ನು ಮೇಲ್ವಿಚಾರಣೆ ಮಾಡಲು ಸಿಆರ್‌ಪಿ, ಬಿಆರ್‌ಪಿ, ಇಸಿಓರವರನ್ನು ನೋಡಲ್ ಅಧಿಕಾರಿಗಳಾಗಿ ನೇಮಿಸಲಾಗಿದ್ದು ಉಸ್ತುವಾರಿ ಬಗ್ಗೆ ಈಗಾಗಲೇ ಗೂಗಲ್ ಮೀಟ್ ಸಭೆ ಮೂಲಕ ತರಬೇತಿ ನೀಡಲಾಗಿದ್ದು ಪ್ರತಿದಿನವೂ ಶಾಲೆಗಳಿಗೆ ಭೇಟಿ ನೀಡಿ ಮೇಲ್ವಿಚಾರಣೆ ಮಾಡಲಿದ್ದಾರೆ ಎಂದು ತಾಲ್ಲೂಕು ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಗವೀರಂಗಯ್ಯ ವಿವರಿಸಿದ್ದಾರೆ.



# ಸುಳ್ಳಿನ ಸವಾರಿ ಮಾಡಿಕೊಂಡು 10 ವರ್ಷ ಮುಗಿಸಿದ್ರು

## ಯಾವ ಮುಖ ಹೊತ್ಕೊಂಡು ಮೈಸೂರಿಗೆ ಬರ್ತಾರೆ? ಮೋದಿ ವಿರುದ್ಧ ಸಿಎಂ ಗುಡುಗು

**ಮೈಸೂರು:** ಸುಳ್ಳು ಹೇಳಿದರೆ ಜನ ಮೋದಿ ಮೋದಿ ಅಂತಾರೆ ಎನ್ನುವುದು ಅವರಿಗೆ ಗೊತ್ತಾಗಿದೆ. ಹೀಗಾಗಿ ಅವರು ಸುಳ್ಳು ಹೇಳೋದನ್ನು ಮತ್ತಷ್ಟು ಹೆಚ್ಚಿಸಿದ್ದಾರೆ. ಸುಳ್ಳಿನ ಸವಾರಿ ಮಾಡಿಕೊಂಡು 10 ವರ್ಷ ಮುಗಿಸಿದ್ರು: ಯಾವ ಮುಖ ಹೊತ್ಕೊಂಡು ಮೈಸೂರಿಗೆ ಬರ್ತಾರೆ? ಎಂದು ಪ್ರಧಾನಿ ಮೋದಿ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದರು.

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕೃಷ್ಣರಾಜದಲ್ಲಿ ನಡೆದ ಜನಧ್ವನಿ-2 ಯಾತ್ರೆಯ ಬೃಹತ್ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಪ್ರತಿಯೊಬ್ಬ ಭಾರತೀಯರ ಖಾತೆಗೆ 15 ಲಕ್ಷ ಹಾಕ್ತೀನಿ ಅಂದ್ರು,

ವಿದೇಶದಿಂದ ಕಪ್ಪು ಹಣ ತರುತ್ತೇನೆ ಅಂದರು. ರೈತರ ಆದಾಯ ದುಪ್ಪಟ್ಟು ಮಾಡುತ್ತೇವೆ ಅಂದರು. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡುತ್ತೇವೆ ಅಂದರು. ಡೀಸೆಲ್- ಪೆಟ್ರೋಲ್-ಗ್ಯಾಸ್-ರಸಗೊಬ್ಬರದ ಬೆಲೆ ಕಡಿಮೆ ಮಾಡುತ್ತೇವೆ ಎಂದು ಭರವಸೆ ನೀಡಿದ್ದರು. ಡಾಲರ್ ಎದುರು ರೂಪಾಯಿ ಮೌಲ್ಯ ಹೆಚ್ಚಿಸ್ತೀವಿ ಅಂದರು. ಹೀಗೆ ರಾಶಿ ರಾಶಿ ಸುಳ್ಳುಗಳ ಮೂಲಕವೇ ಭಾರತೀಯರನ್ನು ನಿರಂತರವಾಗಿ ಬಕ್ರಾ ಮಾಡಿ ವಂಚಿಸಿದರು. ಹತ್ತು ವರ್ಷಗಳ ಕಾಲ ನಿಮ್ಮನ್ನು ವಂಚಿಸಿದವರಿಗೇ ಮತ ಹಾಕೋಕೆ ನಿಮಗೆ ಮನಸ್ಸು ಬರತ್ತಾ ಎಂದು ಸಿಎಂ ಸಿದ್ದರಾಮಯ್ಯ ಪ್ರಶ್ನಿಸಿದರು.



ಮೈಸೂರಿನಲ್ಲಿ ಜಯದೇವ ಆಸ್ಪತ್ರೆ ಮಾಡಿದವರು ಯಾರು, ಮಹಿಳಾ-ಮಕ್ಕಳ ಆಸ್ಪತ್ರೆ ಮಾಡಿದವರು ಯಾರು, ಶಾಲೆ-ಹಾಸ್ಟೆಲ್ ಗಳನ್ನು ಮಾಡಿದವರು ಯಾರು, ಮೈಸೂರಿನ ಅಭಿವೃದ್ಧಿಗೆ ಸಾವಿರಾರು ಕೋಟಿ ಹಣ ಕೊಟ್ಟ ಸರ್ಕಾರ ಯಾವುದು ಎನ್ನುವುದು ಮೈಸೂರಿನ ಪ್ರತಿ ಪ್ರಜ್ಞಾವಂತರಿಗೂ ಗೊತ್ತು. ನಾವು ಮಾಡಿದಷ್ಟು ಕೆಲಸವನ್ನು ಮಾಡಲು ಬಿಜೆಪಿಗೂ ಅವಕಾಶ ಇತ್ತು. ಜನ ಅವಕಾಶ ಕೊಟ್ಟಿದ್ದರು. ಆದರೆ ಈ ಅವಕಾಶ ಸಿಕ್ಕಾಗ ಬಿಜೆಪಿ ಸಂಸದರು ಕೆಲಸ ಮಾಡಲಿಲ್ಲ. ಹೀಗಾಗಿ ನುಡಿದಂತೆ ನಡೆದು ಅಭಿವೃದ್ಧಿಯ ದಿಕ್ಕಲ್ಲಿ ಮುನ್ನುಗ್ಗುತ್ತಿರುವ ನಮಗೆ ಅವಕಾಶ ಕೊಡಿ. ಸಾಮಾನ್ಯ ಕಾರ್ಯಕರ್ತರಾಗಿ ಹೋರಾಟ, ಪ್ರತಿಭಟನೆಗಳಿಂದ ಬೆಳೆದ ಎಂ.ಲಕ್ಷ್ಮಣ್ ಅವರನ್ನು ಈ ಬಾರಿ ಗೆಲ್ಲಿಸಿ ಎಂದು ಸಿಎಂ ಸಿದ್ದರಾಮಯ್ಯ ಕರೆ ನೀಡಿದರು.

ಬಿಜೆಪಿಗೆ ಮೈಸೂರು-ಕೊಡಗಿನ ಜನತೆ ಅವಕಾಶ ಕೊಟ್ಟಾಗ ಬಿಜೆಪಿ ಸಂಸದರು, ಶಾಸಕರು, ಮುಖ್ಯಮಂತ್ರಿಗಳು, ಪ್ರಧಾನ ಮಂತ್ರಿಗಳು ಕ್ಷೇತ್ರದ ಅಭಿವೃದ್ಧಿಗೆ ಕೆಲಸ ಮಾಡಲಿಲ್ಲ. ಈಗ ಕೇವಲ ಅಭ್ಯರ್ಥಿಯನ್ನು ಬದಲಾಯಿಸಿ ಮತ ಕೇಳುತ್ತಿದ್ದಾರೆ. ಇದು ಹೊಣೆಗೇಡಿತನ ಅಲ್ಲವೇ ಎಂದು ಪ್ರಶ್ನಿಸಿದರು.

ಪ್ರಧಾನಿ ನರೇಂದ್ರ ಮೋದಿ ಬಡವರು, ದುಡಿಯುವ ವರ್ಗಗಳ ಪರವಾಗಿ, ಮಹಿಳೆಯರ ಪರವಾಗಿ ಮಾಡಿದ ಒಂದೇ ಒಂದು ಕೆಲಸ ಯಾರಿಗಾದರೂ ಗೊತ್ತಾ ಎಂದು ಪ್ರಶ್ನಿಸಿದ ಸಿಎಂ ಸಿದ್ದರಾಮಯ್ಯ, ಕೇವಲ ಸುಳ್ಳುಗಳನ್ನು ಸೃಷ್ಟಿಸಿ, ಭಾವನಾತ್ಮಕವಾಗಿ ಕೆರಳಿಸುವವರಿಗೆ ಮತ ಹಾಕಿದರೆ ನೀವು ಮೋಸಹೋದಂತೆ ತಾನೇ ಎಂದು ಪ್ರಶ್ನಿಸಿದರು.

ಮತ ಕೇಳೋದಕ್ಕೆ ಮೋದಿಯವರಿಗೆ ಮುಖ ಇದೆಯಾ?

ನಾಳೆ ಮೈಸೂರಿಗೆ ಬರುತ್ತಿರುವ ಮೋದಿಯವರು ಯಾವ ಮುಖ ಇಟ್ಟುಕೊಂಡು ಮತ ಕೇಳ್ತಾರೆ. ಮೋದಿಯವರಾಗಲೀ, ಇವರ ಸಂಸದರಾಗಲೀ ಮೈಸೂರಿಗೆ ಏನು ಕೆಲಸ ಮಾಡಿದ್ದಾರೆ ತೋರಿಸಲಿ. ಬರೀ ಸುಳ್ಳುಗಳ ಸವಾರಿ ಮಾಡಿಕೊಂಡು 10 ವರ್ಷ ಮುಗಿಸಿದರು. ಹೀಗಿದ್ದಾಗ ಮೋದಿಯವರು ಯಾವ ಮುಖ ಹೊತ್ಕೊಂಡು ರಾಜ್ಯಕ್ಕೆ ಬರ್ತಾರೆ? ಯಾವ ಮುಖ ಹೊತ್ತಕೊಂಡು ಮತ ಕೇಳುತ್ತಾರೆ ಎಂದು ಸಿಎಂ ಗುಡುಗಿದರು.

ಇಂದಿರಾಗಾಂಧಿ 20 ಅಂಶಗಳ ಕಾರ್ಯಕ್ರಮ ಕೊಟ್ಟರು. ಮೋದಿ ಒಂದಂಶದ ಕಾರ್ಯಕ್ರಮವನ್ನೂ ಕೊಡಲಿಲ್ಲ.

ಸ್ವಾತಂತ್ರ್ಯ ನಂತರ ದೇಶದ ಅಭಿವೃದ್ಧಿಗೆ ಅಡಿಪಾಯ ಹಾಕಿದ್ದು ಕಾಂಗ್ರೆಸ್. ಬಡತನ ನಿರ್ಮೂಲನೆಗೆ ಇಂದಿರಾಗಾಂಧಿಯವರು 20 ಅಂಶಗಳ ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡಿದರು. ಕೇವಲ ಅತ್ಯಂತ ಶ್ರೀಮಂತರಿಗಾಗಿ ಕೆಲಸ ಮಾಡಿದ ಮೋದಿ ಬಡವರಿಗಾಗಿ, ಬಡತನ ಹೋಗಲಾಡಿಸಲು ಒಂದಂಶದ ಕಾರ್ಯಕ್ರಮವನ್ನೂ ಏಕೆ ಕೊಡಲಿಲ್ಲ ಎಂದು ಪ್ರಶ್ನಿಸಿದ ಸಿಎಂ ಸಿದ್ದರಾಮಯ್ಯ ಬಿಜೆಪಿಗೆ ಒಂದೂ ಸೀಟು ಕೊಡಬೇಡಿ ಎಂದು ಕರೆ ನೀಡಿದರು.

# ಸಿದ್ದರಾಮಯ್ಯ ಭೇಟಿ ಸಂತೋಷ ಆಯ್ತು

**ಮೈಸೂರು:** ಸಿಎಂ ಸಿದ್ದರಾಮಯ್ಯ ಮನೆಗೆ ಬಂದಿದ್ದು ಸಂತೋಷ ಆಗಿದೆ. ಸಿದ್ದರಾಮಯ್ಯ ಜೊತೆ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ ಎಂದು ಸಂಸದ ವಿ.ಶ್ರೀನಿವಾಸ್ ಪ್ರಸಾದ್ ತಿಳಿಸಿದರು.

ಸಿಎಂ ಸಿದ್ದರಾಮಯ್ಯ ಭೇಟಿ ನೀಡಿದ ಬಳಿಕ ಮಾಧ್ಯಮಗಳ ಜತೆ ಮಾತನಾಡಿದ ವಿ.ಶ್ರೀನಿವಾಸ್ ಪ್ರಸಾದ್, ನಾಳೆಯ ಮೋದಿ ಸಮಾವೇಶಕ್ಕೆ ಆಹ್ವಾನ ಬಂದಿಲ್ಲ, ಬರುವುದು ಇಲ್ಲ. ಬಂದಿಲ್ಲ, ಕರೆದಿಲ್ಲ, ಕರೆಯೋದು ಇಲ್ಲ, ನಾನು ಹೋಗೋದು ಇಲ್ಲ ಎಂದು ಸ್ಪಷ್ಟಪಡಿಸಿದರು.



ಸಿದ್ದರಾಮಯ್ಯ ಜೊತೆ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ. ಅವರ ಭೇಟಿ ನನಗೆ ಸಹಜವಾಗಿ ಖುಷಿ ಕೊಟ್ಟಿದೆ. ಅವರು ನನ್ನ ಬೆಂಬಲ ಕೇಳಿದ್ದಾರೆ. ನಾನು ರಾಜಕೀಯ ನಿವೃತ್ತಿಯಾಗಿದ್ದೇನೆ ಅಂತ ಹೇಳಿದ್ದೇನೆ ಅಷ್ಟೆ. ಚಾಮರಾಜನಗರದಲ್ಲಿ ಕಾಂಗ್ರೆಸ್ ಗೆ ಉತ್ತಮವಾದ ವಾತಾವರಣ ಇದೆ. ನಾನು ರಾಜಕೀಯ ನಿವೃತ್ತಿ ತೆಗೆದುಕೊಂಡಿದ್ದೇನೆ. ಬಹಿರಂಗವಾಗಿ ಯಾವುದೇ ಸಭೆ ಸಮಾರಂಭಗಳಲ್ಲಿ ಭಾಗವಹಿಸುತ್ತಿಲ್ಲ ಎಂದರು.

ನಂತರ ಸಿಎಂ ಸಿದ್ದರಾಮಯ್ಯ ಮಾತನಾಡಿ, ಶ್ರೀನಿವಾಸ್ ಪ್ರಸಾದ್ ನಾನು ಬಹಳ ದೀರ್ಘಕಾಲದ ಸ್ನೇಹಿತರು. ರಾಜಕೀಯದಲ್ಲಿ ಅವರು ಬಿಜೆಪಿಗೆ ಹೋದರು ನಾನು ಕಾಂಗ್ರೆಸ್ ನಲ್ಲಿದ್ದೆ. ಈಗ ಅವರು ರಾಜಕೀಯ ನಿವೃತ್ತಿ ಘೋಷಣೆ ಮಾಡಿದ್ದಾರೆ. ಹಾಗಾಗಿ ಅವರ ಆರೋಗ್ಯ ವಿಚಾರಿಸಿಸೋಣ ಅಂತಾ ಬಂದಿದ್ದೆ. ರಾಜಕೀಯವಾಗಿ ಏನೂ ಪ್ರಸ್ತಾಪ ಮಾಡಲಿಲ್ಲ. ಅವರು ರಾಜಕೀಯ ನಿವೃತ್ತಿ ಘೋಷಣೆ ಮಾಡಿ ನಾನು ಯಾರ ಪರವಾಗಿಯೂ ನಾನು ಪ್ರಚಾರಕ್ಕೆ ಹೋಗಲ್ಲ ,ಯಾರ ಪರ, ವಿರೋಧವು ಮಾತನಾಡಲ್ಲ ಅಂತ ಹೇಳಿದ್ದಾರೆ. ಹಾಗಾಗಿ ರಾಜಕೀಯ ಚರ್ಚೆ ಏನೂ ಮಾಡಲಿಲ್ಲ. ನೀವು ಕಾಂಗ್ರೆಸ್ ನಲ್ಲಿದ್ದವರು ನಿಮ್ಮ ಸಿಂಪತಿ ಕಾಂಗ್ರೆಸ್ ಮೇಲಿರಲಿ ಎಂದು ಮನವಿ ಮಾಡಿದ್ದೇನೆ ಅಷ್ಟೇ ಎಂದರು.

# ಗ್ರಾಮೀಣ ಶೈಲಿಯಲ್ಲಿ ಎತ್ತಿನ ಗಾಡಿ ಏರಿ ಮತದಾನ ಜಾಗೃತಿ

**ಮೈಸೂರು:** ಲೋಕ ಸಭಾ ಚುನಾವಣೆ ಹಿನ್ನೆಲೆ ಮತದಾನ ಪ್ರಮಾಣವನ್ನು ಹೆಚ್ಚುಸುವ ನಿಟ್ಟಿನಲ್ಲಿ ನಂಜನಗೂಡು ತಾಲ್ಲೂಕು ಪಂಚಾಯಿತಿಯ ಸ್ವಿಪ್ ಸಮಿತಿ ವತಿಯಿಂದ ಗ್ರಾಮೀಣ ಸೊಗಡಿನ ಶೈಲಿನಲ್ಲಿ ಎತ್ತಿನಗಾಡಿ ಜಾಥಾ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು.

ನಂಜನಗೂಡು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ ಅವರ ಮಾರ್ಗದರ್ಶನದಂತೆ, ಬಿಳಿಗೆರೆ ಹೋಬಳಿ ಮಟ್ಟದಲ್ಲಿ ಕಳೆದ ಬಾರಿ ಮತದಾನ ಪ್ರಮಾಣ ಕಡಿಮೆ ಇರುವ ಗ್ರಾಮ ಪಂಚಾಯಿತಿಗಳಿಂದ ಸುತ್ತೂರು ಗ್ರಾಮದಲ್ಲಿ ಎತ್ತಿನ ಗಾಡಿ ಜಾಥಾ ಹಮ್ಮಿಕೊಳ್ಳಲಾಯಿತು.

ಸರ್ಕಾರಿ ಹಿರಿಯ ಪ್ರಾಥಾಮಿಕ ಶಾಲೆ ಮುಂಭಾಗದಿಂದ ಬಿಳಿಗೆರೆ ಹೋಬಳಿಯ ಎಲ್ಲಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿ, ಸಿಬ್ಬಂದಿ ಹಾಗೂ ಸ್ವಸಹಾಯ ಸಂಘದ ಮಹಿಳೆಯರು ಎತ್ತಿನ ಗಾಡಿ ಏರಿ ಸುತ್ತೂರಿನ ಪ್ರಮುಖ ರಸ್ತೆಗಳಲ್ಲಿ ಸಾಗಿ ಕಡ್ಡಾಯ ಮತದಾನ ಕುರಿತು ಜಾಗೃತಿ ಮೂಡಿಸಿದರು.



ಈ ವೇಳೆ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕರಾದ ವಿವೇಕ್, ತಾಲ್ಲೂಕು ಸ್ವೀಪ್ ಸಮಿತಿಯ ದಿನೇಶ್, ಕಾವ್ಯ, ಸುತ್ತೂರು, ಹೊಸಕೋಟೆ, ಬಿಳಿಗೆರೆ, ತುಂನೇರಳೆ, ನಗರ್ಲೆ ಹಾಗೂ ಕಾರ್ಯ ಗ್ರಾಮ ಪಂಚಾಯಿತಿಯ ಅಭಿವೃದ್ಧಿಗಳು, ಕಾರ್ಯದರ್ಶಿ, ತಾಲ್ಲೂಕು ಸಿಬ್ಬಂದಿಗಳು ಹಾಜರಿದ್ದರು.

## 50 ರೂ. ಕೊಡುವಂತೆ ಕೇಳಿದ್ದಕ್ಕೆ ಬಟ್ಟೆ ಅಂಗಡಿಯವನ ಬೆರಳು ಕಚ್ಚಿ ವ್ಯಕ್ತಿ ಪರಾರಿ

**ಬೆಂಗಳೂರು:** ಹೆಚ್ಚುವರಿಯಾಗಿ 50 ರೂ. ಕೊಡುವಂತೆ ಕೇಳಿದ್ದಕ್ಕೆ ವ್ಯಕ್ತಿಯೊಬ್ಬ ಬಟ್ಟೆ ಅಂಗಡಿಯವನ ಬೆರಳು ಕಚ್ಚಿ ಪರಾರಿಯಾಗಿರುವ ಘಟನೆ ಉತ್ತರ ಪ್ರದೇಶದ ಬಂದಾ ಜಿಲ್ಲೆಯಲ್ಲಿ ನಡೆದಿದೆ. ವ್ಯಕ್ತಿಯೊಬ್ಬರು ಬಟ್ಟೆ ಅಂಗಡಿಗೆ ಹೋಗಿ ಮಗಳಿಗೆ ಫ್ರಾಕ್ ಒಂದನ್ನು ಖರೀದಿಸಿದ್ದರು. ಮಾಲೀಕ ಶಿವಚಂದ್ರ ಕಾರವಾರಿಯಾ ಅವರಿಗೆ ಹಣ ಕೊಟ್ಟು ಬಟ್ಟೆ ತೆಗೆದುಕೊಂಡು ಹೋಗಿದ್ದರು.ಆದರೆ ಮನೆಗೆ ಹೋಗಿ ಮಗಳಿಗೆ ಫ್ರಾಕ್ ಹಾಕಿದಾಗ ಅದು ಚಿಕ್ಕ ಗಾತ್ರದಲ್ಲಿರುವುದು ಗೊತ್ತಾಗಿದೆ.



ಮರುದಿನ ದೊಡ್ಡ ಗಾತ್ರದ ಫ್ರಾಕ್ ಖರೀದಿಸಬೇಕೆಂದು ಮತ್ತೆ ಅದೇ ಬಟ್ಟೆ ಅಂಗಡಿಗೆ ಬಂದಿದ್ದಾರೆ. ಬಳಿಕ ದೊಡ್ಡ ಫ್ರಾಕ್ ಕೊಡಿ ಎಂದು ಕೇಳಿದ್ದಾರೆ, ಅದಕ್ಕೆ ಅಂಗಡಿ ಮಾಲೀಕ ಆಯ್ತು ತಗೊಳ್ಳಿ ಆದರೆ ಈ ಫ್ರಾಕ್ ನ ಗಾತ್ರ ಉದ್ದವಾದ ಕಾರಣ ಇನ್ನೂ 50 ರೂ. ಹೆಚ್ಚುವರಿಯಾಗಿ ನೀಡಬೇಕು ಎಂದು ಕೇಳಿದ್ದಾರೆ.

ಅದಕ್ಕೆ ಕೋಪಗೊಂಡ ಗ್ರಾಹಕ ವಾದ ನಡೆಸಿದ್ದಾರೆ, 50 ರೂ. ಕೊಡುವುದಿಲ್ಲ ಎಂದು ಜಗಳವಾಡಿದ್ದಾರೆ. ಬಳಿಕ ಅಂಗಡಿ ಮಾಲೀಕ ಹಾಗೂ ಹಾಗೂ ಆತನ ಮಗನ ಕೈಗೆ ಕಚ್ಚಿ ಪರಾರಿಯಾಗಿದ್ದಾನೆ. ಗಾಯಗೊಂಡ ಕಾರವಾರಿಯಾ ಸಮೀಪದ ಪೊಲೀಸ್ ಠಾಣೆಗೆ ಬಂದು ದೂರು ದಾಖಲಿಸಿದ್ದಾರೆ. ಅಂಗಡಿಯವರ ದೂರಿನ ಆಧಾರದ ಮೇಲೆ ಪ್ರಕರಣವನ್ನು ದಾಖಲಿಸಲಾಗಿದೆ.

ಆರೋಪಿಗಾಗಿ ಪೊಲೀಸರು ಶೋಧ ನಡೆಸುತ್ತಿದ್ದು, ಆತನನ್ನು ಬಂಧಿಸಿದ ನಂತರ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಸ್‌ಎಚ್‌ಒ ತಿಳಿಸಿದ್ದಾರೆ.

## ವೃದ್ಧರಿಗೆ ಮನೆಯಲ್ಲೇ ಮತದಾನ

**ಹುಳಿಯಾರು:** ತುಮಕೂರು ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಚಿಕ್ಕನಾಯಕನಹಳ್ಳಿ ತಾಲೂಕಿನ 85 ವರ್ಷಕ್ಕಿಂತ ಹೆಚ್ಚು ವಯಸ್ಸಿನ ಹಿರಿಯ ಹಾಗೂ ಅಂಗವಿಕಲ ಮತದಾರರಿಗೆ ಅಂಚೆ ಮತಪತ್ರದ ಮೂಲಕ ಮನೆಯಲ್ಲಿಯೇ ಮತದಾನ ಮಾಡುವ ಪ್ರಕ್ರಿಯೆ ಶನಿವಾರದಿಂದ ಆರಂಭವಾಯಿತು. ಚುನಾವಣಾ ಸಿಬ್ಬಂದಿ ಬೆಳಿಗ್ಗೆ 7.30 ರಿಂದ ಸಂಜೆ 6.30 ರ ತನಕ ಮನೆಗೆ ಭೇಟಿ ನೀಡಿ ಮತದಾನಕ್ಕೆ ಅವಕಾಶ ಕಲ್ಪಿಸಲಿದ್ದಾರೆ. ವಿಧಾನಸಭಾ ಕ್ಷೇತ್ರಗಳಲ್ಲಿ 399 ಹಿರಿಯ ನಾಗರಿಕರು ಹಾಗೂ 78 ಅಂಗವಿಕಲರು ಸೇರಿ ಒಟ್ಟು 477 ಮಂದಿ ಮತದಾರರು ಮನೆಯಲ್ಲಿ ಮತದಾನ ವ್ಯವಸ್ಥೆಯನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಈ ಮತದಾರರಿಗೆ ಈಗಾಗಲೇ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ಕ್ಷೇತ್ರ ಮತಗಟ್ಟೆ ಅಧಿಕಾರಿಗಳು ಪ್ರಮಾಣೀಕರಿಸಿರುವ 'ನಮೂನೆ-12ಡಿ' ಯನ್ನು ವಿತರಿಸಲಾಗಿದ್ದು ಶನಿವಾರದಿಂದ ಮನೆಯಲ್ಲಿಯೇ ಮತದಾನ ಮಾಡಿಸಲು ನಿಯೋಜಿಸಲಾಗಿರುವ ತಂಡ ಮನೆಗೆ ಭೇಟಿ ನೀಡಿ ಮತದಾನ ಮಾಡಿಸುತ್ತಿದ್ದಾರೆ. ಕ್ಷೇತ್ರ ಮತಗಟ್ಟೆ ಅಧಿಕಾರಿ, ಮೈಕ್ರೋ ಅಬ್ಸರ್ವರ್, ಪೊಲೀಸ್ ಹಾಗೂ ವಿಡಿಯೊಗ್ರಾಫರ್ ತಂಡ ಮನೆಗೆ ತೆರಳಿ ಅಂಚೆ ಮತ ಪತ್ರದ ಮೂಲಕ ಮತದಾನ ಪ್ರಕ್ರಿಯೆ ನಡೆಸುತ್ತಿದ್ದಾರೆ. ಮತಪತ್ರದಲ್ಲಿ ನೋಟಾ ಮತದಾನ ಮಾಡಲು ಅವಕಾಶವಿರುವುದಿಲ್ಲ. ರಾಜಕೀಯ ಪಕ್ಷಗಳ ನಿಯೋಜಿತ ಏಜೆಂಟರು ಕೂಡ ಅಂಚೆ ಮತದಾನ ಪ್ರಕ್ರಿಯೆಯನ್ನು ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದೆ.



## ಬೋರನಕಣಿವೆ ಕಾಲೇಜಿಗೆ ಶೇ.82 ಫಲಿತಾಂಶ

**ಹುಳಿಯಾರು:** ಹುಳಿಯಾರು ಹೋಬಳಿಯ ಬೋರನಕಣಿವೆ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಪ್ರಸಕ್ತ ಸಾಲಿನ ಪಿಯುಸಿ ಪರೀಕ್ಷೆಯನ್ನು 39 ವಿದ್ಯಾರ್ಥಿಗಳು ಬರೆದಿದ್ದು ಇವರಲ್ಲಿ 32 ಮಂದಿ ಉತೀರ್ಣರಾಗುವ ಮೂಲಕ ಶೇ.82.05 ಫಲಿತಾಂಶ ಲಭಿಸಿದೆ. ಕಲಾ ವಿಭಾಗದಲ್ಲಿ 22 ಮಂದಿ ಪರೀಕ್ಷೆ ಬರೆದಿದ್ದು 17 ಮಂದಿ ಉತೀರ್ಣರಾಗುವ ಮೂಲಕ ಶೇ.77.27 ಫಲಿತಾಂಶ ಲಭಿಸಿದೆ. ಇದರಲ್ಲಿ 6 ಮಂದಿ ಪ್ರಥಮ, 4 ಮಂದಿ ದ್ವಿತೀಯ, 7 ಮಂದಿ ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ 17 ಮಂದಿ ಪರೀಕ್ಷೆ ಬರೆದಿದ್ದು 15 ಮಂದಿ ಉತ್ತೀರ್ಣರಾಗುವ ಮೂಲಕ ಶೇ.88.23 ಫಲಿತಾಂಶ ಲಭಿಸಿದೆ. ಇದರಲ್ಲಿ 3 ಮಂದಿ ಅತ್ಯುನ್ನತ, 8 ಮಂದಿ ಪ್ರಥಮ, 3 ಮಂದಿ ದ್ವಿತೀಯ ಹಾಗೂ ಒಬ್ಬರು ತೃತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ. ಕಲಾ ವಿಭಾಗದಲ್ಲಿ ಎಸ್.ಸಂಗೀತಾ (390), ಬಿ.ಆರ್.ಪುಷ್ಪಾ (388), ಜಿ.ಎಂ.ಹರ್ಷ (381), ವಾಣಿಜ್ಯ ವಿಭಾಗದಲ್ಲಿ ಆರ್.ಯಶವಂತ್ (572), ಬಿ.ಮಂಜುನಾಥ್ (541), ಡಿ.ಎಸ್.ಶಶಿಕಲಾ (513) ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಾಗಿದ್ದಾರೆ.

# 400 ಮಂದಿಯಲ್ಲಿ ಒಬ್ಬರಾಗುವವರು ಬೇಕೋ

## 40 ಮಂದಿಯಲ್ಲಿ ಒಬ್ಬರಾಗುವವರು ಬೇಕೋ ಯೋಚಿಸಿ ತೀರ್ಮಾನಿಸಿ

ವಿಜಯಪುರ;. ಬೆಳಗಾಗುತ್ತಲೇ ಸೂರ್ಯ ಉದಯಿಸುವುದು ಎಷ್ಟು ಸತ್ಯವೋ ಅದೇ ರೀತಿಯಲ್ಲಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷ 400ಕ್ಕೂ ಹೆಚ್ಚು ಸದಸ್ಯರುಗಳನ್ನು ಹೊಂದಿ ಅಧಿಕಾರ ಹಿಡಿಯುವುದು ಸತ್ಯವಾಗಿದ್ದು ಮತದಾರರು 400 ಮಂದಿಯಲ್ಲಿ ಒಬ್ಬರಾಗುವಂತಹ ಸಂಸದರನ್ನು ಆಯ್ಕೆ ಮಾಡಬೇಕೋ ಇಲ್ಲವೇ 40 ಮಂದಿಯಲ್ಲಿ ಒಬ್ಬರಾಗುವಂತಹ ಸಂಸದರನ್ನು ಆಯ್ಕೆ ಮಾಡಬೇಕೋ ಮತದಾರರು ಯೋಚಿಸಬೇಕಾಗಿದೆ ಎಂದು ಅದಕ್ಕಾಗಿ ಬಿಜೆಪಿ ಲೋಕಸಭಾ ಚಿಕ್ಕಬಳ್ಳಾಪುರ ಕ್ಷೇತ್ರದ ಅಭ್ಯರ್ಥಿ ಕೆ ಸುಧಾಕರ್ ರವರಿಗೆ ಮತದಾನ ಮಾಡಬೇಕಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಎ.ವಿ. ನಾರಾಯಣಸ್ವಾಮಿ ತಿಳಿಸಿದರು.

ಅವರು ಇಲ್ಲಿಗೆ ಸಮೀಪದ ಹೋಬಳಿಯ ಬಿಜ್ಜವರ ಗ್ರಾಮದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು.

ಸಾವಿರಾರು ವರ್ಷಗಳ ಹಿಂದೆಯೇ ಪುರಾತನ ಭಾರತ ದೇಶದಲ್ಲಿ ನಳಂದ, ತಕ್ಷಶಿಲೆ ಮುಂತಾದ ವಿಶ್ವವಿದ್ಯಾನಿಲಯಗಳಲ್ಲಿ ಶಿಕ್ಷಣ ಪಡೆಯಲು ಹೊರದೇಶಗಳಿಂದ ಇಲ್ಲಿಗೆ ವಿದ್ಯಾರ್ಥಿಗಳು ಬರುತ್ತಿದ್ದು, ವಿಜಯನಗರ ಸಾಮ್ರಾಜ್ಯದ ಕಾಲದಲ್ಲಿನ ಅಭಿವೃದ್ಧಿ ಮತ್ತೆ ಮರುಕಳಿಸಬೇಕೆಂದರೆ ನರೇಂದ್ರ ಮೋದಿ ರವರನ್ನು ಮೂರನೇ ಬಾರಿ ಪ್ರಧಾನಿಯಾಗಿ ಆಯ್ಕೆ ಮಾಡಬೇಕಾಗಿದೆ ಎಂದು ತಿಳಿಸಿದರು.

ದೇವನಹಳ್ಳಿ ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಗೋಣೂರು ಭೀಮರಾಜುರವರು ಮಾತನಾಡಿ ಕಳೆದ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಪಡೆದಂತಹ ಒಟ್ಟಾರೆ ಮತಗಳು ಈ ಬಾರಿ ಎರಡು ಪಕ್ಷಗಳ ಸಂಯುಕ್ತ ಅಭ್ಯರ್ಥಿಯಾಗಿರುವ ಕೆ.ಸುಧಾಕರ್ ಅವರಿಗೆ ಬರುವಂತೆ ನೋಡಿಕೊಳ್ಳಬೇಕಾದ ಜವಾಬ್ದಾರಿ ಪ್ರತಿಯೊಬ್ಬ ಕಾರ್ಯಕರ್ತರಾಗಿದ್ದು ಆ ನಿಟ್ಟಿನಲ್ಲಿ ಎರಡು ಪಕ್ಷಗಳ ಕಾರ್ಯಕರ್ತರು ಕಾರ್ಯೋನ್ಮುಖರಾಗಬೇಕೆಂದು ತಿಳಿಸಿದರು.

ಮಾಜಿ ಶಾಸಕರಾದ ಪಿಳ್ಳ ಮನಿಶಾಮಪ್ಪ ರವರು ಮಾತನಾಡಿ 18 ವರ್ಷ ತುಂಬಿರುವ ಹೊಸದಾಗಿ ಮತದಾನ ಮಾಡಲಿರುವ ಮತದಾರರ ಸಂಖ್ಯೆ ಸುಮಾರು 60 ಸಾವಿರದಷ್ಟು ಅವರೆಲ್ಲರೂ ಈ ಬಾರಿ ಬಿಜೆಪಿ ಪಕ್ಷಕ್ಕೆ ಮತದಾನ ಮಾಡುವ ಸಂಭವ ಹೆಚ್ಚಾಗಿದ್ದು ಎಲ್ಲರಲ್ಲಿಯೂ ಮೋದಿಯ ಅಭಿವೃದ್ಧಿ ಕೆಲಸ ಕಾರ್ಯಗಳು ಕಂಡುಬರುತ್ತಿದ್ದು ಅವರುಗಳ ಆಶಯಗಳನ್ನು ಮತಗಳನ್ನಾಗಿ ಪರಿವರ್ತಿಸುವ ಕೆಲಸ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರದ್ದು ಎಂದು ತಿಳಿಸಿದರು.

ಮಾಜಿ ಶಾಸಕರಾದ ನಿಸರ್ಗ ನಾರಾಯಣಸ್ವಾಮಿ ರವರು ಮಾತನಾಡಿ ಈಗಾಗಲೇ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳಿಂದ ಸಮನ್ವಯ ಸಮಿತಿ ರಚಿಸಿದ್ದು ಎರಡು ಪಕ್ಷಗಳ ಕಾರ್ಯಕರ್ತರು ಒಟ್ಟಾಗಿ ಕಾರ್ಯ ನಿರ್ವಹಿಸಿ ಕೆ ಸುಧಾಕರ್ ರವರನ್ನು ಹೆಚ್ಚಿನ ಮತಗಳ ಅಂತರದಲ್ಲಿ ಗೆಲ್ಲಿಸುವಂತಾದಲ್ಲಿ ಇದೆ ಸಮನ್ವಯ ಸಮಿತಿ ನಿರಂತರವಾಗಿ ಶಾಶ್ವತವಾಗಿ ಉಳಿಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮಾಜಿ ಶಾಸಕರು ಹಾಗೂ ಬಿಜೆಪಿ ಮುಖಂಡರಾದ ಜಿ ಚಂದ್ರಣ್ಣ, ಜೆಡಿಎಸ್ ಕಾರ್ಯದರ್ಶಿ ರವೀಂದ್ರ,ಬಿಜೆಪಿ ತಾಲೂಕು ಅಧ್ಯಕ್ಷ ಸುನಿಲ್ ಸುಂದರೇಶ್, ಕಾರ್ಯದರ್ಶಿ ರವಿಕುಮಾರ್, ಬಿಜವಾರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಹದೇವ್, ಮುಖಂಡರುಗಳಾದ ಚೇತನ್ ಗೌಡ, ನಾರಾಯಣಸ್ವಾಮಿ, ಬಮೂಲ್‌ನ ಮಾಜಿ ನಿರ್ದೇಶಕರುಗಳಾದ ದಂಡಿಗನಹಳ್ಳಿ ನಾರಾಯಣಸ್ವಾಮಿ, ಹಾಲಿ ನಿರ್ದೇಶಕ ಇರಿಗೇನಹಳ್ಳಿ ಶ್ರೀನಿವಾಸ್, ಬೆಂಗಳೂರು ಗ್ರಾಮಾಂತರ ಜಿಲ್ಲಾ ಒಬಿಸಿ ಘಟಕದ ಅಧ್ಯಕ್ಷ ಕನಕರಾಜು ಬಿಜೆಪಿ ಜಿಲ್ಲಾ ಸಂಚಾಲಕ ಗಿರೀಶ್ ಆರಾಧ್ಯ ,ಹಾಪ್ ಕಾಮ್ಸ್ ಮಾಜಿ ನಿರ್ದೇಶಕರಾದ ಹುರಳುಗುರ್ಕಿ ಶ್ರೀನಿವಾಸ್, ಬಿಜೆಪಿ ವಿಜಯಪುರ ಹೋಬಳಿ ಅಧ್ಯಕ್ಷ ಅನಿಲ್, ಜೆಡಿಎಸ್ ನ ಹೋಬಳಿ ಅಧ್ಯಕ್ಷರಾದ ಪುರ ಕೃಷ್ಣಪ್ಪ, ಕಾರ್ಯದರ್ಶಿ ಕಲ್ಯಾಣಕುಮಾರ್ ಬಾಬು, ಬುಳ್ಳಹಳ್ಳಿ ರಾಜಪ್ಪ, ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಗಳ ಮಾಜಿ ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು ಮತ್ತಿತರರು ಉಪಸ್ಥಿತರಿದ್ದರು.

## ಹಿರಿಯ ನಾಗರಿಕರು, ವಿಶೇಷ ಚೇತನರುಗಳಿಗೆ ಮನೆಯಿಂದಲೇ ಮತದಾನ ಪ್ರಾರಂಭ

# 11 ಮಂದಿ ಮತದಾನ

**ವಿಜಯಪುರ:** ಪಟ್ಟಣದ ಜಯ್‌ಮಹಲ್ ಲೇಔಟ್ ಮೊದಲನೇ ಕ್ರಾಸ್‌ನಲ್ಲಿರುವ ಮುನಿವೆಂಕಟಪ್ಪನವರ ಪತ್ನಿ ಮುನಿಯಮ್ಮ 88 ವರ್ಷ ವಯಸ್ಸಿನ ವೃದ್ದೆಗೆ ಮನೆಯಿಂದಲೇ ಮತದಾನ ನಡೆಸಲಾಯಿತು.

ಪಟ್ಟಣದಲ್ಲಿ ಒಟ್ಟಾರೆ 8 ಮಂದಿ ವೃದ್ಧರು ಹಾಗೂ ಮೂವರು ಮಂದಿ ವಿಶೇಷ ಚೇತನರಿಂದ ಮತದಾನ ಮಾಡುವ ಪ್ರಕ್ರಿಯೆ ನಡೆಯಿತು.

ಲೋಕಸಭೆ ಚುನಾವಣೆಗೆ ಮನೆಯಿಂದಲೇ ಮತದಾನ ಮಾಡಲು ಇಚ್ಚಿಸುವ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರಿಗೆ ಮನೆಯಲ್ಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಏ.13 ಹಾಗೂ 14ರಂದು ಎರಡು ದಿನ ಮತ ಪಡೆಯುವ ಪ್ರಕ್ರಿಯೆ ನಡೆಸಲಾಗುತ್ತಿದ್ದು, ಈ ಪ್ರಕ್ರಿಯೆ ಶನಿವಾರದಂದು ಪ್ರಾರಂಭವಾಯಿತು.

ಹಿರಿಯ ನಾಗರಿಕರು, ವಿಕಲ ಚೇತನರುಗಳು, ಲೋಕಸಭಾ ಚುನಾವಣೆಯ ಮತದಾನ ಪ್ರಕ್ರಿಯೆಯಿಂದ ದೂರ ಉಳಿಯಬಾರದು ಎಂದು ಚುನಾವಣಾ ಆಯೋಗ ಈ ಪ್ರಕ್ರಿಯೆ ರೂಪಿಸಿದ್ದು.

ಹೆಸರು ನೋಂದಾಯಿಸಿಕೊಂಡ 85 ವರ್ಷದ ಮೇಲ್ಪಟ್ಟವರು ಹಾಗೂ ವಿಶೇಷ ಚೇತನ ಮತದಾರರು ಮನೆಯಿಂದಲೇ ಮತದಾನ ಮಾಡಲು ಮತದಾನ ಪ್ರಕ್ರಿಯೆಗೆ ತಂಡಗಳನ್ನು ರಚಿಸಲಾಗಿದ್ದು, ಪ್ರತಿ ತಂಡದಲ್ಲಿ ಒಬ್ಬ ಮೈಕ್ರೋ ಅಬ್ಜರ್ವರ್, ಮತಗಟ್ಟೆ ಅಧಿಕಾರಿ, 2ನೇ ಮತಗಟ್ಟೆ ಅಧಿಕಾರಿ, ಬಿಎಲ್‌ಓ, ಪೊಲೀಸ್ ಹಾಗೂ ವಿಡಿಯೋ ಗ್ರಾಫರ್‌ಗಳು ಇದ್ದರು.



ಸಂಜೆ ಟಿಪ್ಸ್

## ಜೆಎಸ್‌ಡಬ್ಲ್ಯು ಅನುದಾನವನ್ನು ಪ್ರಕಟಿಸಿದ ಎನ್‌ಎಲ್‌ಎಸ್‌ಐಯು

ನ್ಯಾಶನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯುನಿವರ್ಸಿಟಿ (ಎನ್‌ಎಲ್‌ಎಸ್‌ಐಯು) ವಿಶ್ವವಿದ್ಯಾಲಯದ ಪ್ರಮುಖ ಅಕಾಡೆಮಿಕ್ ಬ್ಲಾಕ್ ಮತ್ತು ಆವರಣದ ಸಮಗ್ರ ಮರುಅಭಿವೃದ್ಧಿ ಹಾಗೂ ವಿಸ್ತರಣೆ ಮತ್ತು ಕಾನೂನಿನ ಭವಿಷ್ಯದ ಕುರಿತ ಜೆಎಸ್‌ಡಬ್ಲ್ಯು ಕೇಂದ್ರ (ಜೆಎಸ್‌ಡಬ್ಲ್ಯು ಸೆಂಟರ್ ಆನ್ ದ ಫ್ಯೂಚರ್ ಆಫ್ ಲಾ ) ಸ್ಥಾಪನೆಗೆ ಜೆಎಸ್‌ಡಬ್ಲ್ಯು ಗ್ರೂಪ್ನಿಂದ ಅನುದಾನವನ್ನು ಪ್ರಕಟಿಸಿದೆ.

ಅನುದಾನವು ಬೆಂಗಳೂರಿನ ನಾಗರಭಾವಿಯಲ್ಲಿರುವ ಎನ್ ಎಲ್‌ಎಸ್‌ಐಯುನ ದಕ್ಷಿಣ ಭಾಗದಲ್ಲಿನ ನೂತನ ಅಕಾಡೆಮಿಕ್ ಬ್ಲಾಕ್ನ (ಎನ್‌ಎಬಿ) ಮರುಅಭಿವೃದ್ಧಿಗೆ ಬೆಂಬಲವನ್ನು ನೀಡುತ್ತದೆ. ಎರಡು ಅಂತಸ್ತುಗಳ ಎನ್‌ಎಬಿಯನ್ನು ಮೂಲತಃ 2014ರಲ್ಲಿ ನಿರ್ಮಿಸಲಾಗಿದ್ದು ಅದು ಉಪನ್ಯಾಸ ಮಂದಿರಗಳು, ವಿಚಾರ ಸಂಕಿರಣ ಕೊಠಡಿಗಳು, ಕಚೇರಿಗಳು ಮತ್ತು ಸಭಾ ಭವನಗಳಿಗೆ ಅವಕಾಶ ಕಲ್ಪಿಸಿದೆ. ಜೆಎಸ್‌ಡಬ್ಲ್ಯು ಅನುದಾನವು ಇನ್ನೂ ನಾಲ್ಕು ಮಹಡಿಗಳನ್ನು ಸೇರಿಸಲು ಹಾಗೂ ಲಭ್ಯ ಎರಡು ಅಂತಸ್ತುಗಳಲ್ಲಿ ಹೊಂದಿಕೊಳ್ಳುವಂಥ ಮತ್ತು ತಂತ್ರಜ್ಞಾನದಲ್ಲಿ ಮುಂದುವರಿದ ಕಲಿಕೆ ಮತ್ತು ಕಚೇರಿ ಸ್ಥಳಗಳನ್ನು ಒದಗಿಸಲು ಹಾಗೂ ಬೋಧಕರು, ವಿದ್ಯಾರ್ಥಿಗಳು, ಮತ್ತು ಸಂಶೋಧಕರಿಗೆ ಸಹಯೋಗದ ಸಂಶೋಧನಾ ಸ್ಥಳಗಳನ್ನು ಒದಗಿಸುವುದು ಕೂಡ ಅದರ ಉದ್ದೇಶವಾಗಿದೆ. ಈ ಕಟ್ಟಡಕ್ಕೆ ಜೆಎಸ್‌ಡಬ್ಲ್ಯು ಅಕಾಡೆಮಿಕ್ ಬ್ಲಾಕ್ ಎಂದು ಹೆಸರಿಸಲಾಗುತ್ತದೆ. ಹಾಗೂ ವಿಶ್ವವಿದ್ಯಾಲಯದ ಹೊಸ ಅಕಾಡೆಮಿಕ್ ಕೇಂದ್ರವನ್ನು ಸೃಷ್ಟಿಸಲು ಅದನ್ನು ಇತ್ತೀಚೆಗೆ ಅಭಿವೃದ್ಧಿ ಪಡಿಸಲಾದ ನಾರಾಯಣ ರಾವ್ ಮೇಲ್ಗಿರಿ ಸ್ಮಾರಕ ರಾಷ್ಟ್ರೀಯ ಕಾನೂನು ಗ್ರಂಥಾಲಯ ಸಹಿತ ಸುತ್ತಮುತ್ತಲ ಆವರಣದೊಂದಿಗೆ ಸಮಗ್ರಗೊಳಿಸಲಾಗುತ್ತದೆ.ಅನುದಾನವು ಕಾನೂನಿನ ಭವಿಷ್ಯದ ಕುರಿತ ಜೆಎಸ್‌ಡಬ್ಲ್ಯು ಕೇಂದ್ರ ಎಂಬ ಹೊಸ ಸಂಶೋಧನಾ ಕೇಂದ್ರಕ್ಕೆ ಕೂಡ ಬೆಂಬಲ ಒದಗಿಸುತ್ತದೆ. ಭವಿಷ್ಯದ ಕಾನೂನು ವ್ಯವಸ್ಥೆ, ಕಾನೂನು ವೃತ್ತಿ ಮತ್ತು ಕಾನೂನು ಶಿಕ್ಷಣದ ಮೇಲೆ ಹೊಸ ತಂತ್ರಜ್ಞಾನಗಳ ಪರಿಣಾಮವನ್ನು ಶೋಧಿಸುವಲ್ಲಿ ಅಕಾಡೆಮಿಕ್ ಸಂಶೋಧನೆ ಹಾಗೂ ನೀತಿ ಸಂಶೋಧನೆಯನ್ನು ಈ ಕೇಂದ್ರ ಸಮನ್ವಯಗೊಳಿಸುತ್ತದೆ. ಈ ಕೇಂದ್ರವು ಕಾನೂನು ನಿಯಂತ್ರಣದ ಹೊಸ ಮತ್ತು ಸೂಕ್ತ ಮಾದರಿಗಳನ್ನು ಅಭಿವೃದ್ಧಿ ಪಡಿಸುತ್ತದೆ ಹಾಗೂ ಕಾನೂನು ವ್ಯವಸ್ಥೆಯ ಸುಧಾರಣೆ ಮತ್ತು ನ್ಯಾಯ ಎಲ್ಲರಿಗೆ ಸಿಗುವಂತಾಗಲು ಹೊಸ ತಂತ್ರಜ್ಞಾನಗಳನ್ನು ಇನ್ಕ್ಯುಬೇಟ್ ಮಾಡುತ್ತದೆ.

## ನೂಡಲ್ಸ್ ಪಕೋಡಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಕ್ರಸ್ಟ್ ತಯಾರಿಸಲು: • ಹಿಟ್ಟು - ಒಂದೂವರೆ ಕಪ್, • ಸಕ್ಕರೆ ಪುಡಿ - ಅರ್ಧ ಕಪ್ • ಬೆಣ್ಣೆ - ಅರ್ಧ ಕಪ್ • ಫಿಲ್ಲಿಂಗ್ ತಯಾರಿಸಲು: • ಸಿಹಿ ಕಂಡೆನ್ಸ್ಡ್ ಮಿಲ್ಕ್ - 30 ಎಂಎಲ್ • ಮೊಟ್ಟೆ - 1 • ವೆನಿಲ್ಲಾ ಸಾರ - 1 ಟೀಸ್ಪೂನ್ • ಟಾಫಿ ಬಿಟ್ಸ್ - 1 ಕಪ್ • ಬಾದಾಮಿ ಚೂರುಗಳು - 1 ಕಪ್

### ಮಾಡುವ ವಿಧಾನ

ಮೊದಲಿಗೆ ಒಂದು ಬಟ್ಟಲಿನಲ್ಲಿ ಬೆಣ್ಣೆ, ಹಿಟ್ಟು ಮತ್ತು ಸಕ್ಕರೆ ಪುಡಿಯನ್ನು ಹಾಕಿ ಚೆನ್ನಾಗಿ ಮಿಶ್ರಣ ಮಾಡಿ. ಈ ಮಿಶ್ರಣವನ್ನು ಗ್ರೀಸ್ ಮಾಡಿದ ಪ್ಯಾನ್ಗೆ ಹರಡಿ, ಸುಮಾರು 18 ನಿಮಿಷಗಳ ಕಾಲ ಓವನ್ನಲ್ಲಿ 325 ಡಿಗ್ರಿ ಫ್ಯಾರಾಹೀಟ್ಗೆ ಬಿಸಿ ಮಾಡಿ ಕ್ರಸ್ಟ್ ತಯಾರಿಸಿ.

ಮತ್ತೊಂದು ಪಾತ್ರೆಯಲ್ಲಿ ಹಾಲು, ಮೊಟ್ಟೆ, ವೆನಿಲ್ಲಾ ಸಾರ ಹಾಕಿ ಚೆನ್ನಾಗಿ ಬಿಟ್ ಮಾಡಿ ಬಳಿಕ ಅದಕ್ಕೆ ಟಾಫಿ ಬಿಟ್ಸ್ ಹಾಗೂ ಬಾದಾಮಿ ಹಾಕಿ ಮಿಶ್ರಣ ಮಾಡಿ.

ಈಗ ಬೇಯಿಸಿದ ಕ್ರಸ್ಟ್ ಮೇಲೆ ಹಾಲಿನ ಮಿಶ್ರಣ ಹಾಕಿ, ಮತ್ತೆ 25 ನಿಮಿಷಗಳ ಕಾಲ ಬೇಯಿಸಿಕೊಳ್ಳಿ. ನಂತರ ಅದನ್ನು ಓವನ್ನಿಂದ ತೆಗೆದು ತಣ್ಣಗಾಗಲು ಬಿಡಿ. ಬಳಿಕ ಚಾಕು ಸಹಾಯದಿಂದ ಚೌಕಾಕಾರವಾಗಿ ಕತ್ತರಿಸಿಕೊಂಡರೆ ಬಾದಾಮಿ ಬಾರ್ಸ್ ಸವಿಯಲು ಸಿದ್ಧ.

# ಶೂ ಕದ್ದ ಡೆಲಿವರಿ ಬಾಯ್ ಪರ ನಿಂತ ನಟ ಸೋನು ಸೂದ್

ಗುರುಗ್ರಾಮ್ ನಲ್ಲಿ ಫುಡ್ ಡೆಲಿವರಿಗೆ ಬಂದ ಸ್ವಿಗ್ಗಿ ಡೆಲಿವರಿ ಬಾಯ್ ಮನೆಗೆ ಹೊರಗಿದ್ದ ಒಂದು ಜತೆ ಶೂವನ್ನು ಕದ್ದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು, ಈ ಬಗ್ಗೆ ಅನೇಕರು ಆಕ್ರೋಶ ವ್ಯಕ್ತಪಡಿಸಿದರು. ಇದೀಗ ಈ ವಿಚಾರವಾಗಿ ನಟ ಸೋನು ಸೂದ್ ಮಾತನಾಡಿದ್ದಾರೆ.



ಕಳ್ಳತನ ಮಾಡಿದ ಡೆಲಿವರಿ ಬಾಯ್ ಪರ ನಿಂತಿರುವ ಸೋನು ಸೂದ್ ಈ ಬಗ್ಗೆ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ. ದಯೆಯಿಂದಿರಿ ಮತ್ತು ಆತನ ವಿರುದ್ಧ ಯಾವುದೇ ಕ್ರಮ ತೆಗೆದುಕೊಳ್ಳಬೇಡಿ ಎಂದು ಮನವಿ ಮಾಡಿದ್ದಾರೆ. ಈ ಪೋಸ್ಟ್ ಇದೀಗ ಭಾರೀ ಚರ್ಚೆಯಾಗುತ್ತಿದೆ.

ಡೆಲಿವರಿ ಬಾಯ್ ಮಾಡಿರುವುದನ್ನು ಸಮರ್ಥಿಸಿಕೊಂಡ ಅವರು ಅವನನ್ನು ಶಿಕ್ಷಿಸುವ ಬದಲು ಅವನಿಗೆ ಹೊಸ ಜೋಡಿ ಶೂಗಳನ್ನು ನೀಡಿ ಎಂದು ಹೇಳಿದ್ದಾರೆ. ಇದೀಗ ಈ ಹೇಳಿಕೆ ಆಕ್ರೋಶಕ್ಕೆ ಕಾರಣವಾಗಿದೆ. ಸೋನು ಸೂದ್ ಅವರ ಈ ಹೇಳಿಕೆಯನ್ನು ಅನೇಕರು ವಿರೋಧಿಸಿದ್ದಾರೆ. ಕಳ್ಳತನಕ್ಕೆ ನಟ ಪ್ರೋತ್ಸಾಹ ನೀಡುತ್ತಿದ್ದಾರೆ ಎಂದು ಹೇಳಿದ್ದಾರೆ. ಇದೊಂದು ವಿಚಿತ್ರ ಹೇಳಿಕೆ ಎಂದು ಅನೇಕರು ಸೋನು ಸೂದ್ ಅವರ ಪೋಸ್ಟ್ಗೆ ಕಮೆಂಟ್ ಮಾಡಿದ್ದಾರೆ.

ರೋಹಿತ್ ಅರೋರಾ ಎಂಬ ವ್ಯಕ್ತಿ ಈ ಹಿಂದೆ ತಮ್ಮ ಎಕ್ಸ್ ಖಾತೆಯಲ್ಲಿ ಡಿಲಿವರಿ ಬಾಯ್ ಶೂ ಕದ್ದಿರುವ ವಿಡಿಯೋವನ್ನು ಹಂಚಿಕೊಂಡಿದ್ದರು. ಇದಕ್ಕೆ ಸೋನು ಸೂದ್ ಎಕ್ಸ್‌ನಲ್ಲಿ ಪ್ರತಿಕ್ರಿಯೆ ನೀಡಿದ್ದಾರೆ. ಅವನ ವಿರುದ್ಧ ಯಾವುದೇ ಕ್ರಮ ತೆಗೆದುಕೊಳ್ಳಬೇಡಿ . ಅದರ ಬದಲು ಆತನಿಗೆ ಒಂದು ಜೋಡಿ ಶೂವನ್ನು ನೀಡಿ. ಇದನ್ನು ನೀವು ಅಗತ್ಯವಾಗಿ ಮಾಡಬೇಕು. ಆತ ಬಡವನಾಗಿದ್ದ ಕಾರಣ ಆ ಶೂವನ್ನು ಕದ್ದಿರಬಹುದು, ಈ ಕಾರಣಕ್ಕೆ ಆತನಿಗೆ ಈ ಬಡತನ ಕಳ್ಳತನ ಮಾಡಲು ಪರವಾನಿಗೆ ನೀಡುವುದಿಲ್ಲ ಎಂದು ಹೇಳಿದ್ದಾರೆ.



# ಮನೆಯಲ್ಲೇ ಹೆಚ್ಚಿಸಿಕೊಳ್ಳಿ ಸೌಂದರ್ಯ



ಹೆಲ್ತ್ ಟಿಪ್ಸ್

ವರ್ಕ್ ಫ್ರಂ ಹೋಂ ಆಯ್ಕೆ ಆರಂಭವಾದ ಬಳಿಕ ಮಹಿಳೆಯರಿಗೆ ಮನೆಯಲ್ಲೇ ಸಮಯ ಕಳೆಯಲು ಹೆಚ್ಚಿನ ಟೈಂ ಸಿಗುತ್ತಿದೆ ಎಂಬುದಂತೂ ಸತ್ಯ. ಹೀಗಾಗಿ ಮನೆಯಲ್ಲೇ ಮಾಡಿಕೊಳ್ಳಬಹುದಾದ ಕೆಲವಷ್ಟು ಬ್ಯೂಟಿ ಟಿಪ್ಸ್ ಗಳ ಬಗ್ಗೆ ತಿಳಿಯೋಣ ಬನ್ನಿ.

ಬ್ಲ್ಯಾಕ್ ಹೆಡ್ ನಿವಾರಣೆ ಮಾಡಬೇಕಾದರೆ ಹೀಗೆ ಮಾಡಿ. ಜೇನುತುಪ್ಪಕ್ಕೆ ದಾಲ್ಚಿನ್ನಿ ಪುಡಿ ಬೆರೆಸಿ ಬ್ಲ್ಯಾಕ್ ಹೆಡ್ ಮೇಲೆ ಹಚ್ಚಿ. ಹತ್ತು ನಿಮಿಷ ಬಳಿಕ ಮುಖ ತೊಳೆಯಿರಿ. ವಾರಕ್ಕೆರಡು ಬಾರಿ ಹೀಗೆ ಮಾಡಿದರೆ ಬ್ಲ್ಯಾಕ್ ಹೆಡ್ ಮಾಯವಾಗುತ್ತದೆ.

ನಿಮ್ಮ ತ್ವಚೆ ಕಳೆಗುಂದಿದೆಯೇ, ಹಾಗಿದ್ದರೆ ಆಯಪಲ್ ಜ್ಯೂಸ್ ಗೆ ಜೇನುತುಪ್ಪ ಬೆರೆಸಿ ಫೇಸ್ ಪ್ಯಾಕ್ ಮಾಡಿ. ಅರ್ಧ ಗಂಟೆ ಬಳಿಕ ಮುಖ ತೊಳೆಯಿರಿ. ಬಾಳೆಹಣ್ಣು ಹಾಗೂ ದ್ರಾಕ್ಷಿಯ ಮಾಸ್ಕ್ ಮಾಡಿಕೊಂಡರೂ ಒಳ್ಳೆಯದು.

ಕಣ್ಣಿನ ಸುತ್ತ ಕಪ್ಪು ವರ್ತುಲಗಳು ಕಾಣಿಸಿಕೊಂಡಿದ್ದರೆ ಆಲೂಗಡ್ಡೆ ಪೇಸ್ಟ್ ಹಾಕಿ, 15 ನಿಮಿಷ ಬಳಿಕ ಮುಖ ತೊಳೆಯಿರಿ. ಗುಲಾಬಿ ಬಣ್ಣದ ಆಕರ್ಷಕ ತುಟಿಗಳು ನಿಮ್ಮದಾಗಬೇಕಿದ್ದರೆ ದಾಲ್ಚಿನಿ ಹಾಗೂ ಆಲಿವ್ ಆಯಿಲ್ ನಿಂದ ಸ್ಕಬ್ ಮಾಡಿ. ಡ್ರೈ ಸ್ಕಿನ್ ಇರುವವರು ಹಾಲಿನ ಕೆನೆ ಹಾಗೂ ಮೊಸರಿನ ಮಾಸ್ಕ್ ಹಾಕಿಕೊಳ್ಳಿ.

# ಶೃಂಗೇರಿ ಜಗದ್ಗುರು ಶ್ರೀ ಭಾರತಿ ತೀರ್ಥ ಮಹಾಸ್ವಾಮಿಗಳವರ 74ನೇ ವರ್ಧಂತಿ

ವಿಶ್ವದ ಆಧ್ಯಾತ್ಮಿಕ ಶಕ್ತಿ ಹಾಗೂ ತಪಸ್ಸಿನ ಕೇಂದ್ರ. ಆಧ್ಯಾತ್ಮ ರಹಸ್ಯವನ್ನು ತನ್ನ ತಪೋಶಕ್ತಿಯ ಮೂಲಕ ಇಡೀ ಜಗತ್ತಿಗೆ ನೀಡಿ ಮಾರ್ಗದರ್ಶನವನ್ನು ನೀಡುತ್ತಿರುವ ಭಾರತ ಹೆಮ್ಮೆಯ ರಾಷ್ಟ್ರವಾಗಿದೆ. ಸಾವಿರಾರು ಋಷಿಗಳು, ಮಹರ್ಷಿಗಳು ,ತಪಸ್ವಿಗಳು, ದಾರ್ಶನಿಕರು, ಚಿಂತಕರು ವೇದಾಂತಿಗಳು ತಮ್ಮ ಧೀ: ಶಕ್ತಿಯ ಅಂತರ್ಜ್ಞಾನದ ಮೂಲಕ ದಿವ್ಯ ರಹಸ್ಯಗಳನ್ನು, ಆಧ್ಯಾತ್ಮ ಚಿಂತನೆಗಳನ್ನು ,ದರ್ಶನಗಳನ್ನು, ವೇದಾಂತಗಳನ್ನು ನೀಡಿ ಜಗತ್ತಿಗೆ ನೀಡಿದ್ದಾರೆ.



ಭಾರತ ಸನಾತನ ಧರ್ಮದ ಮೂಲಕ ವಿಶ್ವಕ್ಕೆ ಅಮೂಲ್ಯವಾದ ಸಾಹಿತ್ಯವನ್ನು , ಸಂಸ್ಕೃತಿಯನ್ನು ಪರಂಪರೆಯ ಜ್ಞಾನವನ್ನು ನೀಡಿ ಮಾನವ ಶಕ್ತಿಯನ್ನು ಉನ್ನತಿಗೊಳಿಸಿದ ರಾಷ್ಟ್ರವಾಗಿದೆ.

1200 ವರ್ಷಗಳ ಹಿಂದೆ ಭಾರತೀಯ ಸನಾತನ ಧರ್ಮವು ಗೊಂದಲದಲ್ಲಿ ಸಿಲುಕಿ ಅವಸಾನದ ಕಡೆ ಸಾಗುವ ಸಂದರ್ಭದಲ್ಲಿ ಪುನರುಸ್ತಾನಗೊಳಿಸಲು ಪರಮೇಶ್ವರನೇ ಶ್ರೀಶಂಕರ ಭಗವದ್ಪಾದರ ಅವತಾರದಲ್ಲಿ ಕೇರಳದ ಕಾಲಟಿ ಎಂಬ ಕ್ಷೇತ್ರದಲ್ಲಿ 788 ರಲ್ಲಿ ಅವತರಿಸಿ ಭಾರತೀಯ ಸನಾತನ ಧರ್ಮವನ್ನು ಪುನರುಜ್ಜೀವನಗೊಳಿಸಿ ಶಾಶ್ವತವಾಗಿ ಧರ್ಮವನ್ನು ಉಳಿಸಿದವರು ಜಗದ್ಗುರು ಶ್ರೀಶಂಕರಾಚಾರ್ಯರು.

ತಮ್ಮ 32 ವರ್ಷಗಳ ಅವಧಿಯಲ್ಲಿ ಇಡೀ ಭಾರತವನ್ನು ಮೂರು ಬಾರಿ ಕಾಲ್ನಡಿಗೆಯಲ್ಲಿ ಸಂಚರಿಸಿ ಸನಾತನ ಧರ್ಮವನ್ನು ಮತ್ತು ಅದ್ವೈತ ಸಿದ್ಧಾಂತಗಳನ್ನು ಜಗತ್ತಿಗೆ ನೀಡಿ ಭಾರತದ ನಾಲ್ಕು ದಿಕ್ಕುಗಳಲ್ಲೂ ನಾಲ್ಕು ಮಠಗಳನ್ನು ಸ್ಥಾಪಿಸಿದರು. ಪುರಿ ,ದ್ವಾರಕ, ಬದರಿ ,ಶೃಂಗೇರಿ ಕ್ಷೇತ್ರಗಳಲ್ಲಿ ಮಠ ಸ್ಥಾಪನೆಯನ್ನು ಮಾಡಿ ನಾಲ್ಕು ವೇದಗಳನ್ನು ಹಾಗೂ ಪರಂಪರೆಯನ್ನು ಬೆಳೆಸಿದವರು. ಅವುಗಳಲ್ಲಿ ದಕ್ಷಿಣ ದಿಕ್ಕಿನಲ್ಲಿ ಸ್ಥಾಪನೆ ಮಾಡಿದ ಪೀಠವೇ ದಕ್ಷಿಣಾಮಯ ಶ್ರೀಶೃಂಗೇರಿ ಶಾರದಾ ಪೀಠ.

ಶೃಂಗೇರಿ ಶಾರದಾ ಪೀಠಕ್ಕೆ ಮೊದಲ ಅಧಿಪತಿಗಳಾಗಿ ಶ್ರೀಸುರೇಶ್ವರಾಚಾರ್ಯ ನೇಮಿಸಿ ಅಂದಿನಿಂದಲೂ ಗುರು ಪರಂಪರೆಯು ಅವಿಚಿನ್ನವಾಗಿ ನಡೆದು ಬಂದಿದೆ. ಶ್ರೀವಿದ್ಯಾರಣ್ಯರಂತಹ ಮಹಾ ತಪಸ್ವಿಗಳು , ಚಂದ್ರಶೇಖರ ಭಾರತಿ ರಂತಹ ಶ್ರೇಷ್ಠ ಆಧ್ಯಾತ್ಮ ತಪಸ್ವಿಗಳು ವೇದಶಾಸ್ತ್ರ , ಯತಿ ಶ್ರೇಷ್ಠರಿಂದ ಶೃಂಗೇರಿ ಶಾರದಾ ಪೀಠವು ಇಡೀ ಜಗತ್ತಿಗೆ ಮಾದರಿಯಾಗಿದೆ. ಆಧ್ಯಾತ್ಮ ಧರ್ಮ ಮತ್ತು ಮಾರ್ಗದರ್ಶನದ ಮೂಲಕ ಇಡೀ ಜಗತ್ತಿಗೆ ಶ್ರೇಷ್ಠವಾದಂತಹ ಯತಿ ಪರಂಪರೆಯನ್ನು ನೀಡಿರುವ ಶ್ರೀಕ್ಷೇತ್ರ ಶೃಂಗೇರಿ.

ಶ್ರೀಶಾರದಾ ಪೀಠದಲ್ಲಿ 1,200 ವರ್ಷಗಳಿಂದ ನಿರಂತರವಾಗಿ ಧರ್ಮರಕ್ಷಣೆಯ ಕಾರ್ಯವನ್ನು ನೀಡುತ್ತಿರುವ ಯತಿ ಶ್ರೇಷ್ಠರ ಪರಂಪರೆ ನಡೆದು ಬಂದಿದೆ. 36ನೆಯ ಪೀಠಾಧಿಪತಿಗಳಾಗಿ ಇಂದು ಪೀಠದಲ್ಲಿ ವಿರಾಜಮಾನ ರಾಗಿರುವ ಪರಮಪೂಜ್ಯ ಜಗದ್ಗುರು ಶ್ರೀಶ್ರೀಭಾರತಿ ತೀರ್ಥ ಮಹಾಸ್ವಾಮಿಗಳವರು ಸಕಲ ಮಾನವ ಕುಲಕ್ಕೆ ತಮ್ಮ ತಪಶಕ್ತಿಯಿಂದ ಮಾರ್ಗದರ್ಶನ, ಆಶೀರ್ವಾದ , ಧರ್ಮ ರಕ್ಷಣೆಯನ್ನು ನಿರ್ವಹಿಸಿಕೊಂಡು ಬರುತ್ತಿದ್ದಾರೆ.

ಅದ್ವಿತೀಯ ಜ್ಞಾನಿಗಳು, ಶಾಸ್ತ್ರ ಪಾಂಡಿತ್ಯರು, ಬಹುಭಾಷಾ ವಿದ್ವಾಂಸರು ,ವೇದ ,ಉಪನಿಷತ್ತು ಪುರಾಣಗಳ ಅಪಾರ ಜ್ಞಾನ ,ಧ್ಯಾನ, ಚಿಂತನೆ, ಶಿಷ್ಯ ಜನರಲ್ಲಿ ವಾತ್ಸಲ್ಯ ಧಾರ್ಮಿಕ ವಿಧಿ ವಿಧಾನಗಳಿಗೆ ಎಲ್ಲಿಯೂ ಲೋಪ ಬಾರದಂತೆ ಮುನ್ನಡೆಸಿಕೊಂಡು ಬರುತ್ತಿರುವ ಭಾರತೀಯ ತೀರ್ಥ ಮಹಾಸ್ವಾಮಿಗಳವರು ಇಡೀ ಭಾರತದ ವಿಜಯ ಯಾತ್ರೆ, ಧರ್ಮಯಾತ್ರೆ, ಮೂಲಕ ಹಲವಾರು ಬಾರಿ ಸಂಚರಿಸಿ ಮೂಲೆ ಮೂಲೆಗಳಲ್ಲೂ ಧರ್ಮ ಸಂದೇಶವನ್ನು ನೀಡುತ್ತಾ ಭಾರತದ ಸನಾತನ ಧರ್ಮ ಇಂದಿಗೂ ಅಮೂಲ್ಯವಾಗಿ ಉಳಿದಿರಲು ಭಾರತೀ ತೀರ್ಥ ಮಹಾಸ್ವಾಮಿಗಳವರ ಕೊಡುಗೆ ಅಪಾರವಾದದ್ದು.

ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯಲ್ಲಿರುವ ನರಸರಾವುಪೇಟೆ ಎಂಬ ಸ್ಥಳದಲ್ಲಿ ಸಂಪ್ರದಾಯ ಶ್ರದ್ಧೆಯುಳ್ಳ ವೈದಿಕ ಕುಟುಂಬದ ಶ್ರೀವೆಂಕಟೇಶ್ವರ ಅವಧಾನಿಗಳು ಹಾಗೂ ಶ್ರೀಮತಿ ಅನಂತಲಕ್ಷ್ಮಮ್ಮ ಪುಣ್ಯ ದಂಪತಿಗಳ ಪುತ್ರರಾಗಿ ಏಪ್ರಿಲ್ 11 , 1951ರ ಖರ ನಾಮ ಸಂವತ್ಸರ ಚೈತ್ರ ಶುದ್ಧ ಷಷ್ಠಿ ಬುಧವಾರದಂದು ಜನಿಸಿದರು. ಇವರ ಪೂರ್ವಾಶ್ರಮದ ಹೆಸರು ಸೀತಾ ರಾಮಾಂಜನೇಯಲು.

ಬಾಲ್ಯದಿಂದಲೂ ಭಗವಂತನಲ್ಲಿ ಅಪಾರ ಭಕ್ತಿ, ವಿಷಯಗಳಲ್ಲಿ ಪಾಂಡಿತ್ಯ, ಸತ್ಪುರುಷರಲ್ಲಿ ಆಸಕ್ತಿ, ಗುರು ಪರಂಪರೆಯ ಬಗ್ಗೆ ಗೌರವ ಹೊಂದಿದ್ದ ಇವರು 1961 ರಲ್ಲಿ ಆಗಿನ ಶೃಂಗೇರಿ ಶಾರದಾ ಪೀಠಾಧಿಪತಿಗಳಾಗಿದ್ದ ಜಗದ್ಗುರು ಶ್ರೀಅಭಿನವ ವಿದ್ಯಾ ತೀರ್ಥರು ಧರ್ಮ ಯಾತ್ರೆ ಮಾಡುವ ಸಂದರ್ಭದಲ್ಲಿ ಜಗದ್ಗುರುಗಳ ದರ್ಶನವನ್ನು ಮಾಡಿದ ಬಾಲಕ ಸೀತಾರಾಮ ಆಂಜನೇಯಲು ಜಗದ್ಗುರುಗಳೊಂದಿಗೆ ಸಂಸ್ಕೃತದಲ್ಲಿ ಮಾತನಾಡಿದರು. ಗುರುಗಳ ಅನುಗ್ರಹ ,ಅಧ್ಯಯನ ,ಗುರುಭಕ್ತಿ ಧರ್ಮದ ಉಳಿವಿಗಾಗಿ ಶರಣಾಗತಿ, ಸತತ ಪರಿಶ್ರಮ ,ಗುರು ನಿಷ್ಠೆ, ಏಕಾಗ್ರತೆ ಸಕಲ ಶಾಸ್ತ್ರಗಳ ನಿಷ್ಣಾಥ ರಾದ ಇವರನ್ನು ಶಾರದಾದೇವಿಯ ಪ್ರೇರಣೆಯಂತೆ ಶ್ರೀಜಗದ್ಗುರು ಅಭಿನವ ವಿದ್ಯಾ ತೀರ್ಥ ಮಹಾಸ್ವಾಮಿಗಳವರು 1974 ನವೆಂಬರ್ 11ರಂದು ಆನಂದ ನಾಮ ಸಂವತ್ಸರದ ಆಶ್ರಯದ ಬಹುಲ ದ್ವಾದಶಿ ಯಂದು ಸನ್ಯಾಸಾಶ್ರಮವನ್ನು ಅನುಗ್ರಹಿಸಿ ಭಾರತೀ ತೀರ್ಥ ಯೋಗ ಪಟ್ಟವನ್ನು ನೀಡಿ ತಮ್ಮ ಉತ್ತರಾಧಿಕಾರಿಯನ್ನಾಗಿ ಘೋಷಿಸಿದರು.

1989 ರಲ್ಲಿ ಗುರು ಪ್ರೇರಣೆಯಂತೆ ಶ್ರೀಶ್ರೀಭಾರತಿ ತೀರ್ಥ ಮಹಾಸ್ವಾಮಿಗಳವರು 36ನೆಯ ಅಧಿಪತಿಗಳಾಗಿ ಪಟ್ಟಾಭಿಷೇಕರಾದರು. ಆಧ್ಯಾತ್ಮದ ಮುನ್ನಡೆ, ಧಾರ್ಮಿಕ ಚಿಂತನೆ, ಸಾಮಾಜಿಕ ಕಾರ್ಯ ಯೋಜನೆಗಳ ಮೂಲಕ ಇಡೀ ಶೃಂಗೇರಿ ಪೀಠವನ್ನು ವಿಶ್ವವಿಖ್ಯಾತಿಗೊಳಿಸಿದವರು. ಕೋಟಿ ಕೋಟಿ ಭಕ್ತ ಸಮೂಹವನ್ನು ಹೊಂದಿರುವ ಶ್ರೀಶಾರದಾ ಪೀಠ ಇವರ ಅವಧಿಯಲ್ಲಿ ಅಪಾರ ಅಭಿವೃದ್ಧಿಯನ್ನು ಸಾಧಿಸಿತು .ತುಂಗಾ ನದಿಗೆ ಸೇತುವೆಯ ನಿರ್ಮಾಣ, ಸುರ ಸರಸ್ವತಿ ಸಭಾ, ಶ್ರೀಶಂಕರ ಕೃಪಾ ಮಾಸಪತ್ರಿಕೆ ,ಕನ್ನಡ ತೆಲುಗು ಭಾಷೆಯ ತತ್ವ ಲೋಕ ಪತ್ರಿಕೆ ,ಶಿಕ್ಷಣ ಸಂಸ್ಥೆಗಳ ಸ್ಥಾಪನೆ, ಶೃಂಗೇರಿಯಲ್ಲಿ ವಸತಿ ಗೃಹ ನಿರ್ಮಾಣ , ಶಾಸ್ತ್ರ ಸಂವರ್ಧನೆ ಸಭಾ, ಶ್ರೀಮಹಾಗಣಪತಿ ವಾಕ್ಯಾರ್ಥ ಸಭೆ ಮೂಲಕ ವೇದ ವಿದ್ವಾಂಸರನ್ನು ಗೌರವಿಸುವ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದವರು.

**ಶಾರದಾ ಪೀಠದ ಮಹಾನ್ ಗೋಪುರ ನಿರ್ಮಾಣ:** ಶ್ರೀಶಂಕರ ಅದ್ವೈತ ಶೋಧ ಕೇಂದ್ರವನ್ನು ಸ್ಥಾಪನೆ ಮಾಡುವ ಮೂಲಕ ಸಾವಿರಾರು ಗ್ರಂಥಗಳ ಸಂಗ್ರಹಣೆ ವೈಜ್ಞಾನಿಕ ರೂಪದಲ್ಲಿ ಸಂರಕ್ಷಣೆ ಪ್ರಕ್ರಿಯೆ ನಡೆದು ನೂರಾರು ವರ್ಷಗಳ ಅಮೂಲ್ಯ ಗ್ರಂಥಗಳನ್ನು ಸಂರಕ್ಷಿಸಿ ಮುದ್ರಿಸಿ ನೀಡುತ್ತಿರುವುದು ಅಪಾರ ಕೊಡುಗೆಯಾಗಿದೆ.

# ಹಾಲಿನೊಂದಿಗೆ 'ಖರ್ಜೂರ' ಸೇವಿಸಿದರೆ ಇಷ್ಟೆಲ್ಲಾ ಪ್ರಯೋಜನ

ರಾತ್ರಿ ಮಲಗುವ ಮುನ್ನ ಒಂದು ಲೋಟ ಹಾಲಿನೊಂದಿಗೆ ಎರಡು ಖರ್ಜೂರವನ್ನೂ ಸೇವಿಸುವುದರಿಂದ ಎಷ್ಟೆಲ್ಲಾ ಪ್ರಯೋಜನಗಳಿವೆ ಎಂಬುದು ನಿಮಗೆ ತಿಳಿದಿದೆಯೇ

ಖರ್ಜೂರ ರಕ್ತದಲ್ಲಿರುವ ಕೆಟ್ಟ ಕೊಬ್ಬಿನ ಪ್ರಮಾಣವನ್ನು ಕಡಿಮೆ ಮಾಡುತ್ತದೆ ಮತ್ತು ಸುಸ್ತಾದ ನಿಮ್ಮ ದೇಹಕ್ಕೆ ಚೈತನ್ಯವನ್ನು ಒದಗಿಸುತ್ತದೆ.

ಖರ್ಜೂರದಲ್ಲಿ ಉತ್ತಮ ಪ್ರಮಾಣದ ನಾರು ಇದ್ದು, ಇದು ಕರುಳಿನಲ್ಲಿ ಜೀರ್ಣಗೊಂಡ ಆಹಾರ ಸುಲಭದಲ್ಲಿ ಚಲಿಸುವಂತೆ ಮಾಡುತ್ತದೆ. ಇದರಿಂದ ಜೀರ್ಣಕ್ರಿಯೆ ಮಾತ್ರವಲ್ಲ ವಿಸರ್ಜನೆ ಕಾರ್ಯವೂ ಸಲೀಸಾಗಿ ನಡೆಯುತ್ತದೆ.

ಇದರಿಂದ ಮೂಳೆಗಳು ದೃಢವಾಗುತ್ತವೆ. ಇದರಲ್ಲಿ ನೈಸರ್ಗಿಕ ಆಂಟಿ ಆಕ್ಸಿಡೆಂಟ್ ಗಳಿದ್ದು ಹಲವು ಬಗೆಯ ಕ್ಯಾನ್ಸರ್ ಗಳಿಂದ ಮುಕ್ತಿ ನೀಡುತ್ತದೆ. ರೋಗ ನಿರೋಧಕ ಶಕ್ತಿ ಹೆಚ್ಚಿಸುತ್ತದೆ. ಹಾಲುಣಿಸುವ ತಾಯಂದಿರಲ್ಲಿ ಹಾಲು ಹೆಚ್ಚಿಸುತ್ತದೆ. ಹೃದಯ ಸಂಬಂಧಿ ಸಮಸ್ಯೆಗಳಿಂದ ಮುಕ್ತಿ ನೀಡುತ್ತದೆ. ರಕ್ತಹೀನತೆ ಸಮಸ್ಯೆಯನ್ನು ದೂರಮಾಡಿ ಹಿಮೋಗ್ಲೋಬಿನ್ ಪ್ರಮಾಣವನ್ನು ಹೆಚ್ಚಿಸುತ್ತದೆ. ಮಧುಮೇಹವನ್ನೂ ನಿಯಂತ್ರಣದಲ್ಲಿ ಇಟ್ಟುಕೊಳ್ಳಲು ನೆರವಾಗುವ ಇದು ಪ್ರೊಟೀನ್ ಗಳ ಮೂಲಕ ಸ್ನಾಯುಗಳನ್ನು ಬಲಪಡಿಸುತ್ತದೆ.

### ಬ್ಯೂಟಿ ಟಿಪ್ಸ್





ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಆರ್ಥಿಕ ಬೆಳವಣಿಗೆ, ಮಕ್ಕಳಿಂದ ಸಹಕಾರ, ಐಷಾರಾಮಿ ಜೀವನದ ಕಡೆ ಒಲವು, ಆಹಾರ ವ್ಯತ್ಯಾಸದಿಂದ ಅನಾರೋಗ್ಯ

**ವೃಷಭ:** ಆರ್ಥಿಕ ಪ್ರಗತಿ, ಕೌಟುಂಬಿಕ ಸಹಕಾರ, ಮಾತಿನಿಂದ ಕಾರ್ಯಜಯ, ಪತ್ರ ವ್ಯವಹಾರಗಳಲ್ಲಿ ಸಮಸ್ಯೆ

**ಮಿಥುನ:** ವ್ಯವಹಾರದಲ್ಲಿ ಹಿನ್ನಡೆ, ಮಕ್ಕಳಿಂದ ಅನಾನುಕೂಲ, ಆರೋಗ್ಯ ಸುಧಾರಣೆ, ಅಧಿಕಾರಿಗಳಿಂದ ಅನುಕೂಲ

**ಕಟಕ:** ಲಾಭದಲ್ಲಿ ಕುಂಠಿತ, ವ್ಯಾಪಾರ ವ್ಯವಹಾರದಲ್ಲಿ ಪ್ರಗತಿ, ವಿದ್ಯಾಭ್ಯಾಸದಲ್ಲಿ ಅನುಕೂಲ, ಕೌಟುಂಬಿಕ ಸಹಕಾರ

**ಸಿಂಹ:** ಸ್ಥಳ ಬದಲಾವಣೆಯಿಂದ ಅನುಕೂಲ, ಯತ್ನ ಕಾರ್ಯಗಳಲ್ಲಿ ಜಯ, ತಂದೆಯಿಂದ ಅನುಕೂಲ, ವಾಹನ ಖರೀದಿ ಆಲೋಚನೆ

**ಕನ್ಯಾ:** ಆರ್ಥಿಕ ಬೆಳವಣಿಗೆ, ಆಕಸ್ಮಿಕ ಉದ್ಯೋಗ ಲಾಭ, ವಿದ್ಯಾಭ್ಯಾಸದಲ್ಲಿ ಬೆಳವಣಿಗೆ, ನಷ್ಟದ ಪ್ರಮಾಣ ಕಡಿಮೆ

**ತುಲಾ:** ವ್ಯವಹಾರದಲ್ಲಿ ಉತ್ತಮ ಅವಕಾಶ, ಉನ್ನತ ವಿದ್ಯಾಭ್ಯಾಸದಲ್ಲಿ ಪ್ರಗತಿ, ಪ್ರಯಾಣದಲ್ಲಿ ಅನುಕೂಲ, ಭವಿಷ್ಯದ ಯೋಜನೆಯಲ್ಲಿ ಯಶಸ್ಸು

**ವೃಶ್ಚಿಕ:** ಉದ್ಯೋಗ ಬದಲಾವಣೆಯಿಂದ ಅನುಕೂಲ, ಆರೋಗ್ಯ ಸುಧಾರಣೆ, ಆರ್ಥಿಕತೆಯಲ್ಲಿ ಬದಲಾವಣೆ, ಪಾಲದಾರಿಕೆಯಲ್ಲಿ ತೊಂದರೆ

**ಧನಸ್ಸು:** ಆರ್ಥಿಕ ಬೆಳವಣಿಗೆ, ಶುಭ ಕಾರ್ಯದಲ್ಲಿ ಅನುಕೂಲ, ಪ್ರೀತಿ ಪ್ರೇಮ ವಿಷಯಗಳಲ್ಲಿ ಜಯ, ವಿದ್ಯಾಭ್ಯಾಸದಲ್ಲಿ ಅನುಕೂಲ

**ಮಕರ:** ಯತ್ನ ಕಾರ್ಯಗಳಲ್ಲಿ ಅನಾನುಕೂಲ, ವಾಹನ ಚಾಲನೆಯಲ್ಲಿ ಎಚ್ಚರಿಕೆ, ಅನಿರೀಕ್ಷಿತ ಉದ್ಯೋಗಾವಕಾಶ, ಅನಾರೋಗ್ಯ ಸಮಸ್ಯೆ

**ಕುಂಭ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಸ್ಥಿರಾಸ್ತಿಯಿಂದ ಲಾಭ, ಪ್ರೀತಿ ಪ್ರೇಮ ಭಾವನೆಗಳಿಗೆ ಸ್ಪಂದನೆ, ರೋಗಭಾದೆಯಿಂದ ಮುಕ್ತಿ

**ಮೀನ:** ವ್ಯಾಪಾರ ವ್ಯವಹಾರದಲ್ಲಿ ಕುಂಠಿತ, ಆರ್ಥಿಕ ಬದಲಾವಣೆ, ಸ್ಥಿರಸ್ತಿ ಯೋಗ ಫಲ, ನೆರೆಹೊರೆಯವರೊಂದಿಗೆ ಮನಸ್ತಾಪ

## ಅಂಬೇಡ್ಕರ್ ಜಯಂತಿ




ಭಾರತದ ಸಂವಿಧಾನ ಶಿಲ್ಪಿ ಡಾ. ಬಿಆರ್ ಅಂಬೇಡ್ಕರ್ ಅವರ ಜನ್ಮದಿನವಾದ ಏಪ್ರಿಲ್ 14 ಅನ್ನು ಅಂಬೇಡ್ಕರ್ ಜಯಂತಿ ಎಂದು ಆಚರಿಸಲಾಗುತ್ತದೆ. ಈ ದಿನವನ್ನು ಸಮಾನತೆಯ ದಿನ ಎಂದೂ ಕರೆಯಲಾಗುತ್ತದೆ. ಡಾ. ಭೀಮರಾವ್ ಅಂಬೇಡ್ಕರ್ ಅವರ 134ನೇ ಹುಟ್ಟುಹಬ್ಬದ ಸಂದರ್ಭ ಅಂಬೇಡ್ಕರ್ ಜಯಂತಿ ಆಚರಣೆಯ ಉದ್ದೇಶ,

ಪ್ರತಿವರ್ಷ ಏಪ್ರಿಲ್ 14 ರಂದು ಭಾರತ ದೇಶದಾದ್ಯಂತ ಅಂಬೇಡ್ಕರ್ ಜಯಂತಿ ಅಥವಾ ಭೀಮ್ ಜಯಂತಿಯನ್ನು ಆಚರಿಸಲಾಗುತ್ತದೆ. ಇದು ನಮ್ಮ ದೇಶದ ಸಂವಿಧಾನ ಶಿಲ್ಪಿ ಎಂದೇ ಖ್ಯಾತಿಯಾಗಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಜನ್ಮದಿನವಾಗಿದೆ. ವಿಶ್ವದರ್ಜೆಯ ವಕೀಲರು, ಸಮಾಜ ಸುಧಾಕರರೂ ಆಗಿದ್ದ ಅಂಬೇಡ್ಕರ್ ಅವರು ಭಾರತದ ದಲಿತ ಚಳವಳಿಗಳ ಹಿಂದಿನ ಮಹಾನ್ ಶಕ್ತಿ ಎಂದರೂ ತಪ್ಪಾಗಲಿಕ್ಕಿಲ್ಲ. ಶಿಕ್ಷಣ, ಸಮಾನತೆ, ಅರ್ಥಶಾಸ್ತ್ರಕ್ಕೆ ಇವರು ನೀಡಿದ ಕೊಡುಗೆಗಳು ಅಪಾರ.

1891ರಲ್ಲಿ ಜನಿಸಿದ ಅಂಬೇಡ್ಕರ್ ಅವರು ಭಾರತ ಸಂವಿಧಾನದ ಪ್ರಧಾನ ಶಿಲ್ಪಿ ಮಾತ್ರವಲ್ಲ, ಸ್ವತಂತ್ರ ಭಾರತದ ಮೊದಲ ಕಾನೂನು ಮಂತ್ರಿ, ನ್ಯಾಯಶಾಸ್ತ್ರಜ್ಞ, ಅರ್ಥಶಾಸ್ತ್ರಜ್ಞ ಮತ್ತು ಸಮಾಜ ಸುಧಾರಕರೂ ಆಗಿದ್ದರು.

ಅವರು ಅಸ್ಪೃಶ್ಯರ ವಿರುದ್ಧದ ತಾರತಮ್ಯವನ್ನು ತೊಡೆದು ಹಾಕಲು ಮತ್ತು ಮಹಿಳೆಯರು ಹಾಗೂ ಕಾರ್ಮಿಕರ ಹಕ್ಕುಗಳಿಗಾಗಿ ಹೋರಾಡಲು ತಮ್ಮ ಜೀವನವನ್ನು ಮುಡಿಪಾಗಿಟ್ಟರು. ಅದ್ದರಿಂದ ಅವರ ಜನ್ಮ ವಾರ್ಷಿಕೋತ್ಸವವನ್ನು ಸಮಾನತೆಯ ದಿನ ಎಂದೂ ಕರೆಯಲಾಗುತ್ತದೆ.

ಅಂಬೇಡ್ಕರ್ ಅವರು ಕಾನೂನಿನ ದೃಷ್ಟಿಯಲ್ಲಿ ಎಲ್ಲಾ ನಾಗರಿಕರು ಸಮಾನರು, ಎಲ್ಲರಿಗೂ ಸಮಾನ ನ್ಯಾಯ ದೊರಕಬೇಕು ಎಂಬುದನ್ನು ತಮ್ಮ ಜೀವಮಾನವಿಡಿ ಪ್ರತಿಪಾದಿಸಿದರು. ಈ ವರ್ಷ ಬಾಬ್ ಸಾಹೇಬ್ ಅಂಬೇಡ್ಕರ್ ಅವರ 134ನೇ ಜನ್ಮದಿನವಿದೆ.

ಅಂಬೇಡ್ಕರ್ ಏಪ್ರಿಲ್ 14, 1891 ರಲ್ಲಿ ಮಧ್ಯಪ್ರದೇಶದ ಮಾಹೋನಲ್ಲಿ ಜನಿಸುತ್ತಾರೆ. ಇವರ ತಂದೆ ರಾಮ್ಜಿ ಮಾಲೋಜಿ ಸಕ್ಪಾಲ್, ತಾಯಿ ಭೀಮಾಬಾಯಿ. ಅಂಬೇಡ್ಕರ್ ಅವರು 2 ಮದುವೆಯಾಗಿದ್ದರು. ಮೊದಲ ಮಡದಿ ರಮಾಬಾಯಿ ಅಂಬೇಡ್ಕರ್ ಹಾಗೂ ಎರಡನೇಯವರು ಡಾ. ಸವಿತಾ ಅಂಬೇಡ್ಕರ್. ಇವರ ಮಗ ಯಶವಂತ್ ಭೀಮರಾವ್ ಅಂಬೇಡ್ಕರ್.

ಅಂಬೇಡ್ಕರ್ ಜನ್ಮದಿನದಂದು ದೇಶದಾದ್ಯಂತ ಮೆರವಣಿಗೆಗಳು, ಸಮುದಾಯ ಸಭೆಗಳು ಮತ್ತು ಅಂಬೇಡ್ಕರ್ ಪ್ರತಿಮೆಗಳಿಗೆ ಶ್ರದ್ಧಾಂಜಲಿ ಸಲ್ಲಿಸುವುದು ಸೇರಿದಂತೆ ಹಲವು ಕಾರ್ಯಕ್ರಮಗಳು ನಡೆಯುತ್ತವೆ.

ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ತತ್ವಗಳನ್ನು ಎತ್ತಿ ಹಿಡಿಯುವ ಸಂವಿಧಾನವನ್ನು ರೂಪಿಸುವಲ್ಲಿ ಅವರ ಪ್ರಯತ್ನಗಳನ್ನು ಗುರುತಿಸಿ, ಭಾರತೀಯ ಸಂವಿಧಾನದ ಪ್ರಧಾನ ವಾಸ್ತುಶಿಲ್ಪಿಯಾಗಿ ಡಾ. ಅಂಬೇಡ್ಕರ್ ಅವರ ಪಾತ್ರವನ್ನು ಕೊಂಡಾಡಲಾಗುತ್ತದೆ.

ಸಂಜೆ ಮುಗಿಲು
ಭಾನುವಾರ
14.4.2024


# ಇಸ್ರೇಲ್ ಮೇಲೆ ಇರಾನ್ ನಿಂದ ಕ್ಷಿಪಣಿ ದಾಳಿ

ಇಸ್ರೇಲ್ ಮೇಲೆ ಇರಾನ್ ಕ್ಷಿಪಣಿ ಹಾಗೂ ಡ್ರೋನ್ ದಾಳಿ ನಡೆಸಿದೆ. ಕಿಲ್ಲರ್ ಡ್ರೋನ್ ಗಳು, ಬ್ಯಾಲಿಸ್ಟಿಕ್ ಕ್ಷಿಪಣಿಗಳು ಹಾಗೂ ಕ್ರೂಸ್ ಕ್ಷಿಪಣಿಗಳು ಸೇರಿದಂತೆ ಇರಾನ್ 200ಕ್ಕೂ ಹೆಚ್ಚು ಬಗೆಯ ಡ್ರೋನ್ ದಾಳಿಗಳನ್ನು ನಡೆಸಿದೆ. ಸಿರಿಯಾದ ರಾಜಧಾಮಿ ಡಮಾಸ್ಕಸ್ ನಲ್ಲಿರುವ ತನ್ನ ರಾಯಭಾರ ಕಚೇರಿ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಗೆ ಪ್ರತಿಯಾಗಿ ಇರಾನ್ ಈ ಕ್ರಮ ಕೈಗೊಂಡಿದೆ. ಇರಾನ್ ಸೇನೆಯು ಡ್ರೋನ್ ಮತ್ತು ಕ್ಷಿಪಣಿಗಳ ಮೂಲಕ ಇಸ್ರೇಲ್ ಮೇಲೆ ದಾಳಿ ಮಾಡಿದೆ.

ಇರಾನ್ ಇಸ್ರೇಲ್ ಮೇಲೆ 100ಕ್ಕೂಹೆಚ್ಚು ಡ್ರೋನ್ ಗಳನ್ನು ಹಾರಿಸಿದೆ. ಇರಾನ್ ದಾಳಿಯ ನಂತರ ಇಸ್ರೇಲ್ ರಕ್ಷಣಾ ಪಡೆ ತೀವ್ರ ಕಟ್ಟೆಚ್ಚರವಹಿಸಿದೆ. ಇಸ್ರೇಲಿ ವಾಯುಪ್ರದೇಶವನ್ನು ಪ್ರವೇಶಿಸುವ ಮೊದಲೇ ಡ್ರೋನ್ ಮತ್ತು ಕ್ಷಿಪಣಿದಾಳಿಗಳನ್ನು ತಡೆಹಿಡಿಯಲಾಗಿದೆ.

ಡ್ರೋನ್ ಗಳು ಹಾಗೂ ಕ್ಷಿಪಣಿಗಳನ್ನು ಗಾಳಿಯಲ್ಲಿ ಹೊಡೆದುರುಳಿಸುವಲ್ಲಿ ಅಮೆರಿಕ ಹಾಗೂ ಬ್ರಿಟಿಷ್ ವಾಯುಪಡೆಗಳು ಇಸ್ರೇಲ್ ಗೆ ಸಹಾಯ ಮಾಡಿವೆ. ಇಸ್ರೇಲ್ ದಕ್ಷಿಣ ಭಾಗದಲ್ಲಿರುವ ಸೇನಾ ನೆಲೆಯಲ್ಲಿ ಸಣ್ಣಪುಟ್ಟ ಹಾನಿಗಳಾಗಿವೆ. ಈ ದಾಳಿಯಿಂದ ಯಾವುದೇ ಸಾವು, ನೋವು ಸಂಭವಿಸಿಲ್ಲ.

ದಾಳಿಯ ದೃಷ್ಟಿಯಿಂದ ಮಧ್ಯಪ್ರಾಚ್ಯದ ಅನೇಕ ದೇಶಗಳು ತಮ್ಮ ವಾಯುನೆಲೆಯನ್ನು ಮುಚ್ಚಿವೆ. ಇಸ್ರೇಲ್ ಮ ಪಾಶ್ಚಿಮಾತ್ಯ ಮಿತ್ರರಾಷ್ಟ್ರಗಳು ಮತ್ತು ಯುಎಸ್ ಸೆಕ್ರೆಟರಿ ಜನರಲ್ ಆಂಟೋನಿಯೊ ಗುಟೆರಸ್ ಇರಾನ್ ದಾಳಿಯನ್ನು ಖಂಡಿಸಿದ್ದಾರೆ. ಇರಾನ್ ದಾಳಿಯ ಕುರಿತು ಇಸ್ರೇಲ್ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ತುರ್ತು ಸಭೆಯನ್ನು ಕರೆದಿದೆ.

ಇಸ್ರೇಲ್‌ಗೆ ಸಹಾಯ ಮಾಡುವುದಾಗಿ ಅಮೆರಿಕ ಸ್ಪಷ್ಟಪಡಿಸಿದೆ. ಅದೇ ಸಮಯದಲ್ಲಿ ಇರಾನ್ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳಲಾಗುವುದು ಎಂದು ಇಸ್ರೇಲ್ ಅಧಿಕಾರಿಗಳು ಹೇಳಿದ್ದಾರೆ.

ಇರಾನ್ ಇಸ್ರೇಲ್ ಮೇಲೆ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಹಾರಿಸಿದೆ ಎಂದು ಇಸ್ರೇಲಿ ರಕ್ಷಣಾ ಪಡೆ ವಕ್ತಾರ ರಿಯರ್ ಅಡ್ಮಿರಲ್ ಡೇನಿಯಲ್ ಹಗರಿ ಹೇಳಿದ್ದಾರೆ.



## ಉಗ್ರರಿಗೆ ನಿಯಮಗಳಿಲ್ಲ, ಪ್ರತಿಕ್ರಿಯೆಗಳಿಗೂ ನಿಯಮ ಇಲ್ಲ

**ಪುಣೆ:** ಗಡಿಯಾಚೆಯಿಂದ ನಡೆಯುವ ಯಾವುದೇ ಭಯೋತ್ಪಾದನಾ ಕೃತ್ಯಕ್ಕೆ ಪ್ರತ್ಯುತ್ತರ ನೀಡಲು ಭಾರತ ಬದ್ಧವಾಗಿದೆ ಎಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಹೇಳಿದ್ದಾರೆ.



ಪುಣೆಯಲ್ಲಿ ಯುವಕರನ್ನು ಉದ್ದೇಶಿಸಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉಗ್ರರಿಗೆ ಯಾವುದೇ ನಿಯಮಗಳಿಲ್ಲ. ಹೀಗಾಗಿ ಅವರಿಗೆ ನೀಡುವ ಉತ್ತರಕ್ಕೂ ಯಾವುದೇ ನಿಯಮ ಇಲ್ಲ ಎಂದು ತಿಳಿಸಿದರು.

2008 ರಲ್ಲಿ ಮುಂಬೈ ಮೇಲೆ ದಾಳಿ ನಡೆಯಿತು. ಈ ದಾಳಿಯ ನಂತರ ಪಾಕಿಸ್ತಾನದ ಮೇಲೆ ದಾಳಿ ಮಾಡಬೇಕಾ ಬೇಡವೇ ಎಂಬುದರ ಬಗ್ಗೆ ಸರ್ಕಾರಿ ಮಟ್ಟದಲ್ಲಿ ಸಾಕಷ್ಟು ಚರ್ಚೆ ನಡೆಯಿತು. ಕೊನೆಗೆ ಪಾಕಿಸ್ತಾನದ ಮೇಲೆ ದಾಳಿ ಮಾಡದೇ ಇರುವುದಕ್ಕಿಂತ ಮೇಲೆ ದಾಳಿ ಮಾಡುವ ವೆಚ್ಚ ಹೆಚ್ಚು ಎಂದು ಆ ಸಮಯದಲ್ಲಿ ತೀರ್ಮಾನಕ್ಕೆ ಬರಲಾಯಿತು ಎಂದರು. ಈಗ ಇದೇ ರೀತಿಯ ದಾಳಿ ನಡೆದರೆ ಮತ್ತು ಅದಕ್ಕೆ ಪ್ರತಿಕ್ರಿಯಿಸದಿದ್ದರೆ ಮುಂದಿನ ದಾಳಿಗಳನ್ನು ತಡೆಯುವುದು ಹೇಗೆ ಎಂದು ಪ್ರಶ್ನಿಸಿದರು. ನರೇಂದ್ರ ಮೋದಿ ಅವರು 2014 ರಲ್ಲಿ ಪ್ರಧಾನಿಯಾಗಿ ಬಂದರು. ಈ ಸಮಸ್ಯೆ 2014ರಿಂದ ಆರಂಭವಾಗಿಲ್ಲ.ಇದು 1947 ರಿಂದ ಆರಂಭವಾಗಿದೆ. ಮೊದಲು ಪಾಕಿಸ್ತಾನದಿಂದ ಬಂದು ಕಾಶ್ಮೀರದ ಮೇಲೆ ದಾಳಿ ಮಾಡಿದರು. ಇದು ಭಯೋತ್ಪಾದನೆ. ಪಟ್ಟಣಗಳಿಗೆ ಬೆಂಕಿ ಹಚ್ಚಿ ಜರನ್ನು ಕೊಲ್ಲುತ್ತಿದ್ದರು. ಉಗ್ರರಲ್ಲಿ ಮೊದಲು ನೀವು ಹೋಗಿ ನಂತರ ನಾವು ಬರುತ್ತೇವೆ ಎಂದು ಪಾಕ್ ಸೇನೆ ಹೇಳಿತ್ತು ಎಂಬುದಾಗಿ ತಿಳಿಸಿದರು.

## ಬೋರ್ನ್ವೀಟಾವನ್ನು 'ಆರೋಗ್ಯ ಪಾನೀಯ' ವಿಭಾಗದಿಂದ ತೆಗೆದು ಹಾಕಿ: ಕೇಂದ್ರ ಸೂಚನೆ

**ನವದೆಹಲಿ:** ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯವು ಎಲ್ಲಾ ಇಕಾಮರ್ಸ್ ಕಂಪನಿಗಳನ್ನು ತಮ್ಮ ಸೈಟ್ಗಳು ಮತ್ತು ಪ್ಲಾಟ್ಫಾರ್ಮ್ಗಳಿಂದ ತಂಪುಪಾನೀಯಗಳನ್ನು ತೆಗೆದುಹಾಕುವಂತೆ ಹೇಳಿದೆ. ಬೋರ್ನ್ವಿಟಾವನ್ನು ಕೂಡ ಆರೋಗ್ಯಕರ ಪಾನೀಯಾಗಳ ಸ್ಥಾನದಿಂದ ತೆಗೆದು ಹಾಕುವಂತೆ ಹೇಳಿದೆ.




ಬೋರ್ನ್ವೀಟಾದಲ್ಲಿ ಸ್ವೀಕಾರಾರ್ಹ ಮಿತಿಗಿಂತ ಹೆಚ್ಚಿನ ಸಕ್ಕರೆ ಮಟ್ಟವಿದೆ ಎಂದು ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ರಾಷ್ಟ್ರೀಯ ಆಯೋಗನಡೆಸಿದ ತನಿಖೆಯಲ್ಲಿ ಕಂಡುಬಂದ ಹಿನ್ನೆಲೆಯಲ್ಲಿ ಈ ಸಲಹೆ ಕೇಳಿ ಬಂದಿದೆ. ಸುರಕ್ಷತಾ ಮಾನದಂಡಗಳು ಮತ್ತು ಮಾರ್ಗಸೂಚಿಗಳನ್ನು ಪೂರೈಸಲು ವಿಫಲವಾಗಿ 'ಆರೋಗ್ಯ ಪಾನೀಯಗಳು' ಎಂದು ಬಿಂಬಿಸುತ್ತಿರುವ ಕಂಪೆನಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಎನ್ಸಿಪಿಸಿಆರ್ ಈ ಹಿಂದೆ ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರಕ್ಕೆ ಸಲಹೆ ನೀಡಿತ್ತು.

ದೇಶದ ಆಹಾರ ಕಾನೂನುಗಳಲ್ಲಿ 'ಆರೋಗ್ಯ ಪಾನೀಯ' ಎನ್ನುವುದನ್ನು ವ್ಯಾಖ್ಯಾನಿಸಲಾಗಿಲ್ಲ ಮತ್ತು ಅದರ ಅಡಿಯಲ್ಲಿ ಆರೋಗ್ಯ ಪಾನೀಯ ಎಂಬಂತೆ ಬಿಂಬಿಸುವುದು ನಿಯಮಗಳನ್ನು ಉಲ್ಲಂಘಿಸಿದಂತಾಗುತ್ತದೆ. ಹಾಲಿನ ಉತ್ಪನ್ನ ಅಥವಾ ಮಾಲ್ಟ್ ಆಧಾರಿತ ಪಾನೀಯಗಳನ್ನು 'ಆರೋಗ್ಯ ಪಾನೀಯಗಳು' ಎಂದು ಲೇಬಲ್ ಮಾಡದಂತೆ ಎಫ್ಎಸ್ಎಸ್ಎಐ ಈ ತಿಂಗಳ ಆರಂಭದಲ್ಲಿ ಇ–ಕಾಮರ್ಸ್ ಪೋರ್ಟಲ್ಗೆ ಸೂಚನೆ ನೀಡಿತ್ತು.

ತಪ್ಪು ಪದಗಳನ್ನು ಬಳಸುವುದು ಗ್ರಾಹಕರನ್ನು ದಾರಿ ತಪ್ಪಿಸಬಹುದು. ಆ ಮೂಲಕ ಆ ಜಾಹೀರಾತುಗಳನ್ನು ತೆಗೆದುಹಾಕಲು ಅಥವಾ ಸರಿಪಡಿಸಲು ವೆಬ್ಸೈಟ್ಗಳಿಗೆ ಸೂಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

## ಇಸ್ರೇಲಿ ಜನರೊಂದಿಗೆ ಅಮೆರಿಕ ನಿಲ್ಲುತ್ತದೆ

**ವಾಶಿಂಗ್ಟನ್:** ಇಸ್ರೇಲ್ ಮೇಲೆ ಇರಾನ್ ವಾಯುಗಾಮಿ ದಾಳಿಯನ್ನು ಆರಂಭಿಸಿದ್ದು, ಇಸ್ರೇಲ್ನ ಭದ್ರತೆಗೆ ಅಮೆರಿಕದ ಬೆಂಬಲವು ಉಕ್ಕಿನಂತಿದೆ ಎಂದು ಶ್ವೇತಭವನ ಪ್ರತಿಪಾದಿಸಿದೆ. ಇರಾನಿನ ಡ್ರೋನ್ ದಾಳಿಗೆ ಸಜ್ಜಾಗುತ್ತಿರುವ ಇಸ್ರೇಲ್ ವಾಯುಯಾನ ಅಧಿಕಾರಿಗಳು ಶನಿವಾರ ದೇಶದ ವಾಯುಪ್ರದೇಶವನ್ನು ಎಲ್ಲಾ ವಿಮಾನಗಳಿಗೆ ಮುಚ್ಚುವುದಾಗಿ ತಿಳಿಸಿದ್ದಾರೆ.

ಅಮೆರಿಕವು ಇಸ್ರೇಲ್ ಜನರೊಂದಿಗೆ ನಿಲ್ಲುತ್ತದೆ ಮತ್ತು ಇರಾನ್ನಿಂದ ಈ ಬೆದರಿಕೆಯ ವಿರುದ್ಧ ಅವರ ರಕ್ಷಣೆಯನ್ನು ಬೆಂಬಲಿಸುತ್ತದೆ ಎಂದು ಶ್ವೇತಭವನದಲ್ಲಿ ರಾಷ್ಟ್ರೀಯ ಭದ್ರತಾ ಮಂಡಳಿಯ ವಕ್ತಾರ ಆಡ್ರಿಯನ್ ವ್ಯಾಟ್ಸನ್ ಹೇಳಿದ್ದಾರೆ.



ಶನಿವಾರ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ವ್ಯಾಟ್ಸನ್ ಈ ದಾಳಿಯು ಹಲವಾರು ಗಂಟೆಗಳ ಕಾಲ ತೆರೆದುಕೊಳ್ಳುವ ಸಾಧ್ಯತೆಯಿದೆ ಎಂದು ಹೇಳಿದರು. ಇರಾನ್ ಇಸ್ರೇಲ್ ವಿರುದ್ಧ ವಾಯುಗಾಮಿ ದಾಳಿಯನ್ನು ಪ್ರಾರಂಭಿಸಿದೆ ಮತ್ತು ಅಧ್ಯಕ್ಷ ಜೋ ಬೈಡನ್ ಅವರ ತಂಡವು ಇಸ್ರೇಲ್ ಅಧಿಕಾರಿಗಳು ಮತ್ತು ಇತರ ಪಾಲುದಾರರು ಮತ್ತು ಮಿತ್ರರಾಷ್ಟ್ರಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂದು ವಕ್ತಾರರು ತಿಳಿಸಿದ್ದಾರೆ.

ಮಧ್ಯಪ್ರಾಚ್ಯದಲ್ಲಿನ ಬೆಳವಣಿಗೆಗಳ ನಂತರ ಡೆಲಾವೇರ್ನಲ್ಲಿರುವ ತಮ್ಮ ಮನೆಯಿಂದ ವಾಷಿಂಗ್ಟನ್ಗೆ ಮರಳಿದ ಅಧ್ಯಕ್ಷ ಬೈಡನ್, ಈ ಪ್ರದೇಶದ ಪರಿಸ್ಥಿತಿಯ ಬಗ್ಗೆ ತಮ್ಮ ರಾಷ್ಟ್ರೀಯ ಭದ್ರತಾ ತಂಡವನ್ನು ಭೇಟಿ ಮಾಡಲಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಹಿಂದಿರುಗಿದ ನಂತರ, ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾನ್ ಮತ್ತು ಪ್ರಧಾನ ಉಪ ರಾಷ್ಟ್ರೀಯ ಭದ್ರತಾ ಸಲಹೆಗಾರ ಜಾನ್ ಫೈನರ್ ಅವರು ಬೆಳವಣಿಗೆಗಳ ಬಗ್ಗೆ ಅವರಿಗೆ ವಿವರಿಸಿದರು.

## ಬಾಡಿಗೆ ತಾಯ್ತನ ಅಮಾನವೀಯ ಪದ್ಧತಿ.' ಎಂದ ಇಟಲಿ ಪ್ರಧಾನಿ

ಬಾಡಿಗೆ ತಾಯ್ತನದ ಪದ್ಧತಿ ಅಮಾನವೀಯವಾಗಿದೆ, ಅದು ಮಕ್ಕಳನ್ನು ಸೂಪರ್ ಮಾರ್ಕೆಟ್ ಉತ್ಪನ್ನದ ರೀತಿ ಬಳಕೆ ಮಾಡಿಕೊಳ್ಳುತ್ತದೆ ಎಂದು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.



ಶುಕ್ರವಾರ (ಏ.12) ಲೋಕಸಭೆಯಲ್ಲಿ ಬಾಡಿಗೆ ತಾಯ್ತನಕ್ಕಾಗಿ ವಿದೇಶಕ್ಕೆ ಹೋಗುವುದನ್ನು ನಿಷೇಧಿಸುವ ಬಿಲ್ ಪಾಸ್ ಮಾಡುವ ಕುರಿತು ಮಾತನಾಡಿದ ಪ್ರಧಾನಿ ಮೆಲೋನಿ, ಇಟಲಿಯಲ್ಲಿ ಈ ಪದ್ಧತಿಗೆ ಅನುಮತಿ ಇಲ್ಲದ ಕಾರಣ ವಿದೇಶಕ್ಕೆ ತೆರಳುತ್ತಿದ್ದಾರೆ, ಗರ್ಭವನ್ನು ಬಾಡಿಗೆಗೆ ಪಡೆಯುವ ಪದ್ಧತಿ ಅಮಾನವೀಯವಾಗಿದೆ.

ಇದೊಂದು ಸ್ವಾತಂತ್ರ್ಯ , ಮಕ್ಕಳನ್ನು ಪಡೆಯುವ ಹಂಬಲ ಎಂದು ಯಾರೂ ನನ್ನನ್ನು ಒಪ್ಪಿಸಲು ಸಾಧ್ಯವೇ ಇಲ್ಲ , ಈ ಪದ್ದತಿಯನ್ನು ಸಾರ್ವತ್ರಿಕ ಅಪರಾಧ ಎಂದು ಘೋಷಿಸಬೇಕು ಎಂದು ಪ್ರತಿಪಾದಿಸಿದರು.

ಇಟಲಿ ಲೋಕಸಭೆಯಲ್ಲಿ ಇಟಲಿ ಪ್ರಜೆಗಳು ಬಾಡಿಗೆ ತಾಯ್ತನ ಕಾನೂನುಬದ್ಧವಾಗಿರುವ ದೇಶಕ್ಕೆ ತೆರಳಿ ಮಕ್ಕಳನ್ನು ಪಡೆಯುವುದನ್ನು ನಿಷೇಧಿಸಬೇಕು ಎಂಬ ಬಿಲ್ ತಯಾರಿಸಲಾಗಿದ್ದು ಭಾರಿ ಚರ್ಚೆಗೆ ಒಳಗಾಗಿದೆ, ಅನೇಕ ಹಕ್ಕು ರಕ್ಷಣಾ ಹೋರಾಟಗಾರರು ಈ ಬಿಲ್ಲನ್ನ ವಿರೋಧಿಸಿದ್ದಾರೆ. ಎಲ್ಜಿಬಿಟಿಕ್ಯೂ ಜನರನ್ನು ಟಾರ್ಗೆಟ್ ಮಾಡಿ ಈ ಬಿಲ್ ರಚಿಸಲಾಗಿದೆ ಎಂಬ ಆರೋಪ ಕೂಡ ಕೇಳಿ ಬಂದಿದೆ.

## ಕೆನ್ಯಾದಲ್ಲಿ ಪ್ರವಾಹ: ಕನಿಷ್ಟ 13 ಮಂದಿ ಬಲಿ

**ನೈರೋಬಿ:** ಕೆನ್ಯಾದ ವಿವಿಧ ಪ್ರದೇಶಗಳಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಪ್ರವಾಹದ ಸಮಸ್ಯೆ ಎದುರಾಗಿದ್ದು ಕನಿಷ್ಟ 13 ಮಂದಿ ಸಾವನ್ನಪ್ಪಿದ್ದಾರೆ. ಇದುವರೆಗೆ ಸುಮಾರು 15,000 ಜನರನ್ನು ಸ್ಥಳಾಂತರಿಸಲಾಗಿದೆ ಎಂದು ವಿಶ್ವಸಂಸ್ಥೆ ಮಾಹಿತಿ ನೀಡಿದೆ.

ಜೂನ್ವರೆಗೆ ಮತ್ತಷ್ಟು ಬಿರುಸಿನ ಮಳೆ ಸುರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿರುವುದು ಮತ್ತಷ್ಟು ಆತಂಕಕ್ಕೆ ಕಾರಣವಾಗಿದೆ. ಮಾರ್ಚ್ ಮಧ್ಯಭಾಗದಿಂದ ನಿರಂತರ ಸುರಿಯುತ್ತಿರುವ ಮಳೆ ಮತ್ತು ಪ್ರವಾಹದಿಂದ ಸುಮಾರು 20,000 ಜನರು ಸಂಕಷ್ಟಕ್ಕೆ ಸಿಲುಕಿದ್ದು ಇದುವರೆಗೆ ಸುಮಾರು 15,000 ಜನರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗಿದೆ ಎಂದು ಕೆನ್ಯಾ ರೆಡ್ಕ್ರಾಸ್ ಸೊಸೈಟಿಯನ್ನು ಉಲ್ಲೇಖಿಸಿ ಯುಎನ್ಒಸಿಎಚ್ಆರ್ (ಯುನೈಟೆಡ್ ನೇಷನ್ಸ್ ಆಫೀಸ್ ಫಾರ್ ದಿ ಕೋರ್ಟಿನೇಷನ್ ಆಫ್ ಹ್ಯುಮಾನಿಟೇರಿಯನ್ ಅಫೇರ್ಸ್) ಹೇಳಿದೆ.

ದೇಶದ ಪ್ರಮುಖ ರಸ್ತೆಗಳು ಜಲಾವೃತಗೊಂಡಿದ್ದು ರಸ್ತೆ ಸಂಚಾರ ಅಸ್ತವ್ಯಸ್ತಗೊಂಡಿದೆ. ಉತ್ತರ ಕೆನ್ಯಾದ ಗ್ಯರಿಸಾ ರಸ್ತೆಯಲ್ಲಿ ಚಲಿಸುತ್ತಿದ್ದ ಬಸ್ಸೊಂದು ಪ್ರವಾಹದಲ್ಲಿ ಕೊಚ್ಚಿಹೋಗಿದ್ದು ಬಸ್ಸಿನಲ್ಲಿದ್ದ 51 ಪ್ರಯಾಣಿಕರನ್ನು ರಕ್ಷಿಸಲಾಗಿದೆ.



ತನಾ ನದಿಯ ನೀರು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು ಲಮು, ಗ್ಯರಿಸಾ ಪ್ರದೇಶಗಳ ನಿವಾಸಿಗಳಿಗೆ ಪ್ರವಾಹದ ಮುನ್ನೆಚ್ಚರಿಕೆ ನೀಡಲಾಗಿದೆ ಎಂದು ಕೆನ್ಯಾದ ವಿಪತ್ತು ನಿರ್ವಹಣಾ ಏಜೆನ್ಸಿ ಹೇಳಿದೆ. ದೇಶದ 47 ಪ್ರಾಂತಗಳ ಪೈಕಿ 9 ಪ್ರಾಂತಗಳಲ್ಲಿ ಪ್ರವಾಹದ ಸ್ಥಿತಿಯಿದೆ. ಮಧ್ಯ ಪ್ರಾಂತಗಳಲ್ಲಿ ಹಲವೆಡೆ ಭೂಕುಸಿತದ ವರದಿಯಾಗಿದೆ. ನರೋಕ್ ಪ್ರಾಂತದಲ್ಲಿ ಭೂಕುಸಿತದಿಂದ 4 ಮಂದಿ ಮೃತಪಟ್ಟಿದ್ದಾರೆ. ಸ್ಥಳಾಂತರಗೊಂಡವರಿಗೆ ತಾತ್ಕಾಲಿಕ ಶಿಬಿರಗಳಲ್ಲಿ ವಾಸ್ತವ್ಯ ಕಲ್ಪಿಸಿದ್ದು ಶುದ್ಧ ನೀರಿನ ವ್ಯವಸ್ಥೆ ಮಾಡಲಾಗಿದೆ ಎಂದು ಕೆನ್ಯಾ ರೆಡ್ಕ್ರಾಸ್ ಸೊಸೈಟಿಯ ಪ್ರಧಾನ ಕಾರ್ಯದರ್ಶಿ ಅಹ್ಮದ್ ಇದ್ರಿಸ್ ಹೇಳಿದ್ದಾರೆ.

## '3ನೇ ಮಹಾಯುದ್ಧದ' ಎಚ್ಚರಿಕೆ ನೀಡಿದ ಟ್ರಂಪ್

**ನ್ಯೂಯಾರ್ಕ್:** ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಮುಂಚಿತವಾಗಿ ಮತ್ತೊಂದು ಮಹಾಯುದ್ಧದ ಬಗ್ಗೆ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ. ಯುಎಸ್ ಅಧ್ಯಕ್ಷ ಜೋ ಬೈಡನ್ ಅವರನ್ನು ಕರುಣಾಜನಕ ನಾಯಕ ಎಂದು ಉಲ್ಲೇಖಿಸಿದ ಅಧ್ಯಕ್ಷೀಯ ಆಕಾಂಕ್ಷಿ, ಅವರು ಅಧಿಕಾರಕ್ಕೆ ಮರಳಿದರೆ ಮಾತ್ರ ಇರಾನ್ ಇಸ್ರೇಲ್ ಮೇಲೆ ದಾಳಿ ಮಾಡಲು ಸಾಧ್ಯವಾಗುವುದಿಲ್ಲ ಎಂದು ಹೇಳಿದರು.



ಸ್ಪೀಕರ್ ಮೈಕ್ ಜಾನ್ಸನ್ ಅವರು ತಮ್ಮ ಸ್ಪೀಕರ್ ಸ್ಥಾನವನ್ನು ಉಳಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ ಎಂದು ಬಣ್ಣಿಸಲಾದ ಅವರನ್ನು ಭೇಟಿಯಾದ ನಂತರ ಟ್ರಂಪ್ ಶುಕ್ರವಾರ ಈ ಎಚ್ಚರಿಕೆ ನೀಡಿದ್ದಾರೆ.

ಫ್ಲೋರಿಡಾದ ತಮ್ಮ ಮಾರ್–ಎ–ಲಾಗೋ ಮನೆಯಿಂದ ಮಾತನಾಡಿದ ರಿಪಬ್ಲಿಕನ್ ಉದ್ಯಮಿ, ಅಕ್ಟೋಬರ್ 7 ರಂದು ಇಸ್ರೇಲ್ನೊಂದಿಗೆ ಏನು ನಡೆಯುತ್ತಿದೆ ಎಂಬುದು ವಿಶ್ವ ಯುದ್ಧದಲ್ಲಿ ಕೊನೆಗೊಳ್ಳಬಹುದು. ನಾವು ಎರಡು ವಾಕ್ಯಗಳನ್ನು ಒಟ್ಟಿಗೆ ಸೇರಿಸಲು ಸಾಧ್ಯವಿಲ್ಲದ ಅಧ್ಯಕ್ಷರನ್ನು ಹೊಂದಿದ್ದೇವೆ. ವೇದಿಕೆಯಿಂದ ಮೆಟ್ಟಿಲುಗಳನ್ನು ಇಳಿಯಲು ಸಾಧ್ಯವಾಗದ ಅಧ್ಯಕ್ಷರನ್ನು ನಾವು ಹೊಂದಿದ್ದೇವೆ. ಎಂದರು

ನಾವು ನೆಪ ಮಾತ್ರಕ್ಕೆ ಅಧ್ಯಕ್ಷರನ್ನು ಹೊಂದಿದ್ದೇವೆ, ಅವರು ಏನು ಮಾಡುತ್ತಿದ್ದಾರೆಂದು ತಿಳಿದಿಲ್ಲ. ಮತ್ತು ನಾವು ವಿಶ್ವ ಯುದ್ಧದಲ್ಲಿ ಕೊನೆಗೊಳ್ಳಬಹುದು. ನಿಮಗೆ ತಿಳಿದಿದೆ, ನವೆಂಬರ್ 5 ಕ್ಕೆ ತಿಂಗಳುಗಳ ಮೊದಲು ನಮಗೆ ಈಗ ಏಳು ತಿಂಗಳಿಗಿಂತ ಸ್ವಲ್ಪ ಕಡಿಮೆ ಇದೆ ಎಂದು ಅವರು ಸ್ಪೀಕರ್ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

## ಆಮ್ ಆದ್ಮಿ ಪಕ್ಷಕ್ಕೆ 25 ಕೋಟಿ ಲಂಚ ನೀಡುವಂತೆ ಕವಿತಾ ಬೆದರಿಕೆ: ಆರೋಪ

**ನವದೆಹಲಿ:** ದೆಹಲಿ ಸರ್ಕಾರದ ಅಬಕಾರಿ ನೀತಿಯಡಿ ಸಂಸ್ಥೆಗೆ ನಿಗದಿಪಡಿಸಿದ ಐದು ಚಿಲ್ಲರೆ ವಲಯಗಳಿಗಾಗಿ ಆಮ್ ಆದ್ಮಿ ಪಕ್ಷಕ್ಕೆ 25 ಕೋಟಿ ರೂಪಾಯಿ ನೀಡುವಂತೆ ಅರಬಿಂದೋ ಫಾರ್ಮಾ ಪ್ರಮೋಟರ್ ಶರತ್ ಚಂದ್ರ ರೆಡ್ಡಿ ಅವರಿಗೆ ಬಿಆರ್‌ಎಸ್ ನಾಯಕಿ ಕೆ.ಕವಿತಾ ಬೆದರಿಕೆ ಹಾಕಿದ್ದರು ಎಂದು ಸಿಬಿಐ ಶುಕ್ರವಾರ ವಿಶೇಷ ನ್ಯಾಯಾಲಯಕ್ಕೆ ತಿಳಿಸಿದೆ. ಜಾರಿ ನಿರ್ದೇಶನಾಲಯ ತನಿಖೆ ನಡೆಸುತ್ತಿರುವ ಪಿಎಂಎಲ್ಎ ಪ್ರಕರಣದಡಿ ಆರೋಪಿಯಾಗಿದ್ದ ರೆಡ್ಡಿ, ಪ್ರಕರಣದಲ್ಲಿ ಮಾಫಿ ಸಾಕ್ಷಿಯಾಗಿ ಬದಲಾಗಿದ್ದರು. ಅವರ ವಿರುದ್ಧ ಸಿಬಿಐ ಇನ್ನೂ ಆರೋಪ ಪಟ್ಟಿ ಸಲ್ಲಿಸಿಲ್ಲ. ಕವಿತಾ ಅವರನ್ನು ಕಸ್ಟಡಿ ವಿಚಾರಣೆಗೆ ಒಳಪಡಿಸಲು ಕೋರಿದ ಸಿಬಿಐ ವಿಶೇಷ ನ್ಯಾಯಾಧೀಶ ಕಾವೇರಿ ಬವೇಜಾ ಅವರನ್ನು ಕೋರಿದೆ. ತೆಲಂಗಾಣ ಮಾಜಿ ಮುಖ್ಯಮಂತ್ರಿ ಕೆ. ಚಂದ್ರಶೇಖರ್ ರಾವ್ ಅವರ ಪುತ್ರಿಯಾಗಿರುವ ಕವಿತಾ ಅವರ ಒತ್ತಾಯ ಮತ್ತು ಭರವಸೆಯಿಂದಲೇ ರೆಡ್ಡಿ ರಾಷ್ಟ್ರ ರಾಜಧಾನಿಯಲ್ಲಿ ಮದ್ಯದ ವ್ಯವಹಾರದಲ್ಲಿ ಭಾಗವಹಿಸಿದ್ದಾರೆ ಎಂದು ಸಿಬಿಐ ದೂರಿದೆ.



ದೆಹಲಿ ಸರ್ಕಾರದಲ್ಲಿ ತನಗೆ ಸಂಪರ್ಕವಿದೆ ಮತ್ತು ಹೊಸ ಅಬಕಾರಿ ನೀತಿಯ ಅಡಿಯಲ್ಲಿ ದೆಹಲಿಯಲ್ಲಿ ಮದ್ಯದ ವ್ಯವಹಾರದಲ್ಲಿ ರೆಡ್ಡಿಗೆ ಸಹಾಯ ಮಾಡುವುದಾಗಿ ಕವಿತಾ ಭರವಸೆ ನೀಡಿದ್ದರು ಎನ್ನಲಾಗಿದೆ. ಮದ್ಯದ ವ್ಯಾಪಾರವನ್ನು ಪಡೆಯಲು ಸಗಟು ವ್ಯಾಪಾರಕ್ಕೆ 25 ಕೋಟಿ ರೂಪಾಯಿ ಮತ್ತು ಪ್ರತಿ ಚಿಲ್ಲರೆ ವಲಯಕ್ಕೆ 5 ಕೋಟಿ ರೂಪಾಯಿಗಳ ಮುಂಗಡ ಹಣದ ಪಾವತಿಯನ್ನು ಆಮ್ ಆದ್ಮಿ ಪಕ್ಷಕ್ಕೆ ಮಾಡಲಾಗುವುದು ಎಂದು ಕವಿತಾ, ಶರತ್ ಚಂದ್ರ ರೆಡ್ಡಿಗೆ ತಿಳಿಸಿದ್ದರು.

## ಆಂಧ್ರ ಸಿಎಂ 'ಜಗನ್' ಮೇಲೆ ದುಷ್ಕರ್ಮಿಗಳಿಂದ ಕಲ್ಲಿನಿಂದ ಹಲ್ಲೆ



**ವಿಜಯವಾಡ :** ಆಂಧ್ರಪ್ರದೇಶ ಮುಖ್ಯಮಂತ್ರಿ ವೈಎಸ್ ಜಗನ್ ಮೋಹನ್ ರೆಡ್ಡಿ ಮೇಲೆ ಅಪರಿಚಿತ ದುಷ್ಕರ್ಮಿಗಳು ಕಲ್ಲಿನಿಂದ ಹಲ್ಲೆ ನಡೆಸಿದ್ದು, ಹಣೆಗೆ ಗಾಯವಾಗಿದೆ. ಸದ್ಯ ಸಿಎಂ ಜಗನ್ ಬಸ್ ಯಾತ್ರೆ ನಡೆಸುತ್ತಿದ್ದು, ಬಸ್ ಯಾತ್ರೆಯ ಅಂಗವಾಗಿ ಸಿಂಗ್ ನಗರಕ್ಕೆ ಆಗಮಿಸಿದ ಸಿಎಂ ಜಗನ್ ಜನರಿಗೆ ಶುಭಾಶಯ ಕೋರುತ್ತಿದ್ದರು. ಈ ವೇಳೆ ವ್ಯಕ್ತಿಯೊಬ್ಬ ಸಿಎಂ ಜಗನ್ ಮೇಲೆ ಕಲ್ಲು ತೂರಾಟ ನಡೆಸಿದ್ದಾನೆ. ಈ ಘಟನೆಯಲ್ಲಿ ಜಗನ್ ಎಡಗಣ್ಣಿನ ಹುಬ್ಬಿನ ಮೇಲೆ ಅಂದ್ರೆ ಹಣೆಗೆ ಗಾಯವಾಗಿದೆ. ಇನ್ನವ್ರ ಪಕ್ಕದಲ್ಲಿದ್ದ ವೈಸಿಪಿ ಶಾಸಕ ವೆಲ್ಲಂಪಳ್ಳಿ ಕೂಡ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

## ಶಾಪಿಂಗ್ ಮಾಲ್ ಗೆ ನುಗ್ಗಿ ಐವರನ್ನು ಕೊಂದ ದುಷ್ಕರ್ಮಿ

ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ವ್ಯಕ್ತಿಯೊಬ್ಬ ಬ್ಯುಸಿ ಶಾಪಿಂಗ್ ಮಾಲ್ನಲ್ಲಿ ಸಿಕ್ಕಸಿಕ್ಕವರಿಗೆ ಚೂರಿ ಇರಿದಿದ್ದಾನೆ.

ಶಾಪಿಂಗ್ ಮಾಲ್ ಗೆ ಏಕಾಏಕಿ ನುಗ್ಗಿದ ದುಷ್ಕರ್ಮಿಯೊಬ್ಬ ಐರನ್ನು ಚಾಕುವುನಿಂದ ಇರಿದು ಹತ್ಯೆ ಮಾಡಿದ್ದಾನೆ.



ಇನ್ನು ಈತನನ್ನು ಬಂಧಿಸಲು ಪೊಲೀಸರು ಪ್ರಯತ್ನ ಮಾಡಿದಾಗ ಪೊಲೀಸರ ಮೇಲೆ ಗುಂಡಿನ ದಾಳಿ ನಡೆಸಿದ್ದಾನೆ.

ಈ ವೇಳೆ ಪೊಲೀಸರ ಗುಂಡಿನ ದಾಳಿಯಲ್ಲಿ ಈತ ಹತನಾಗಿದ್ದಾನೆ ಎಂದು ಸ್ಥಳೀಯ ಪತ್ರಿಕೆಗಳು ವರದಿ ಮಾಡಿದೆ. ಚೂರಿ ಇರಿತ ಮತ್ತು ಗುಂಡಿನ ದಾಳಿ ನಡೆದ ಕಾರಣ ಬೋಂಡಿ ಬೀಚ್ ಬಳಿಯ ವೆಸ್ಟ್ಫೀಲ್ಡ್ ಬೋಂಡಿ ಜಂಕ್ಷನ್ನಿಂದ ನೂರಾರು ಜನರನ್ನು ಸ್ಥಳಾಂತರಿಸಲಾಗಿದೆ. ಇನ್ನು ಎಂಟು ಮಂದಿ ಗಾಯಗೊಂಡಿದ್ದು, ಅವರಲ್ಲಿ ಒಬ್ಬರ ಸ್ಥಿತಿ ಚಿಂತಾಜನಕವಾಗಿದೆ ಎಂದು ದಿ ಸಿಡ್ನಿ ಮಾರ್ನಿಂಗ್ ಹೆರಾಲ್ಡ್ ವರದಿ ಮಾಡಿದೆ. ಶಂಕಿತ ವ್ಯಕ್ತಿಯನ್ನು ನ್ಯೂ ಸೌತ್ ವೇಲ್ಸ್ ಪೋಲಿಸ್ನ ಮಹಿಳಾ ಅಧಿಕಾರಿಯೊಬ್ಬರು ಗುಂಡಿಕ್ಕಿ ಕೊಂದಿದ್ದಾರೆ ಎಂದು ಅಧಿಕಾರಿಗಳು ದೃಢಪಡಿಸಿದ್ದಾರೆ.

ಈ ದಾಳಿಯು ನಗರದ ಪೂರ್ವ ಉಪನಗರಗಳಲ್ಲಿ ಮಧ್ಯಾಹ್ನ 3:40 ರ ಸುಮಾರಿಗೆ (ಸ್ಥಳೀಯ ಕಾಲಮಾನ) ನಡೆದಿದೆ. ಚೂರಿ ಇರಿದು ಸಾಕಷ್ಟು ಮಂದಿ ಗಾಯಗೊಂಡ ಬೆನ್ನಲ್ಲಿಯೇ 4 ಗಂಟೆ ವೇಳೆಗೆ ಎಮರ್ಜೆನ್ಸಿ ಸರ್ವೀಸ್‌ಅನ್ನು ಕರೆಸಲಾಗಿತ್ತು.

## 7ನೇ ಮಹಡಿಯಿಂದ ಜಿಗಿದು ಯೂಟ್ಯೂಬರ್ ಜೋಡಿ ಆತ್ಮಹತ್ಯೆ

**ಚಂಡೀಗಢ:** ಲೀವ್ ಇನ್ ರಿಲೇಷನ್ಶಿಪ್ನಲ್ಲಿದ್ದ ಯೂಟ್ಯೂಬರ್ ಜೋಡಿಯೊಂದು ಕಟ್ಟಡದ 7ನೇ ಮಹಡಿಯಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹರಿಯಾಣದ ಬಹದ್ದೂರ್ಗಢದಲ್ಲಿ ನಡೆದಿದೆ. ಗಾರ್ವಿತ್ (25) ಮತ್ತು ನಂದಿನಿ (22) ಮೃತ ದುರ್ದೈವಿಗಳು.

ಗರ್ವಿತ್ ಮತ್ತು ನಂದಿನಿ ಇಬ್ಬರೂ ಯೂಟ್ಯೂಬ್ ಕಂಟೆಂಟ್ ಕ್ರಿಯೇಟರ್ಸ್ ಆಗಿದ್ದರು.

ತಮ್ಮದೇ ಚಾನಲ್ ನಡೆಸುತ್ತಿದ್ದ ಈ ಜೋಡಿ ಯೂಟ್ಯೂಬ್ ಮತ್ತು ಫೇಸ್ಬುಕ್ನಂತಹ ಸಾಮಾಜಿಕ ಜಾಲತಾಣ ಪ್ಲಾಟ್ಫಾರ್ಮ್ಗಳಿಗಾಗಿ ಕಿರುಚಿತ್ರ ತಯಾರಿಸುತ್ತಿತ್ತು ಎಂದು ಮೂಲಗಳು ತಿಳಿಸಿವೆ.



ಕೆಲವು ದಿನಗಳ ಹಿಂದೆ ಇವರು ತಮ್ಮ ತಂಡದೊಂದಿಗೆ ಡೆಹ್ರಾಡೂನ್ನಿಂದ ಬಹದ್ದೂರ್ಗಢಕ್ಕೆ ಸ್ಥಳಾಂತರಗೊಂಡಿದ್ದರು. ಅವರು ಬಹು ಮಹಡಿ ಕಟ್ಟಡವೊಂದರ ಏಳನೇ ಮಹಡಿಯಲ್ಲಿನ ಫ್ಲಾಟ್ ಅನ್ನು ಬಾಡಿಗೆಗೆ ಪಡೆದಿದ್ದರು. ಅಲ್ಲಿ ಅವರು ತಮ್ಮ ಐದು ಸಹೋದ್ಯೋಗಿಗಳೊಂದಿಗೆ ವಾಸಿಸುತ್ತಿದ್ದರು?? ಎಂದು ಪೊಲೀಸರು ತಿಳಿಸಿದ್ದಾರೆ.

ಇಂದು ಸಂಜೆ 6 ಗಂಟೆಗೆ ಚಿತ್ರೀಕರಣ ಮುಗಿಸಿ ಹಿಂತಿರುಗಿದ ಜೋಡಿ ನಡುವೆ ಯಾವುದೋ ವಿಚಾರ ಕುರಿತು ವಾಗ್ವಾದ ನಡೆದಿದೆ ಬಳಿಕಬಳಿಕ ಇಬ್ಬರೂ ಜಿಗಿದು ಆತ್ಮಹತ್ಯೆಗೆ ಶರಣಾಗಿದ್ದಾರೆ?? ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ.

ಸ್ಥಳಕ್ಕೆ ಭೇಟಿ ನೀಡಿದ ಪೊಲೀಸ್ ಅಧಿಕಾರಿಗಳು ಮೃತದೇಹಗಳನ್ನು ಪರಿಶೀಲಿಸಿ ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.ಫೋರೆನ್ಸಿಕ್ ತಂಡ ಕೂಡ ಸ್ಥಳಕ್ಕೆ ತೆರಳಿ, ಸಾಕ್ಷ್ಯ ಮತ್ತು ಸಿಸಿಟಿವಿ ಕ್ಯಾಮೆರಾದ ದೃಶ್ಯಾವಳಿಗಳನ್ನು ಸಂಗ್ರಹಿಸಿದೆ.

## ಗಾಝಾದಲ್ಲಿ ಸಾವಿನ ಸಂಖ್ಯೆ 33,634ಕ್ಕೆ ಏರಿಕೆ

**ಗಾಜಾ:** ಗಾಝಾದಲ್ಲಿ, ಇಸ್ರೇಲ್ ಬಾಂಬ್ ದಾಳಿಯಿಂದ ಸಾವನ್ನಪ್ಪಿದವರ ಸಂಖ್ಯೆ ಕನಿಷ್ಠ 33,634 ಕ್ಕೆ ತಲುಪಿದೆ, ಕಳೆದ 24 ಗಂಟೆಗಳಲ್ಲಿ ಹೆಚ್ಚುವರಿ 89 ಸಾವುನೋವುಗಳು ಸಂಭವಿಸಿವೆ ಎಂದು ಆರೋಗ್ಯ ಸಚಿವಾಲಯ ಶುಕ್ರವಾರ ವರದಿ ಮಾಡಿದೆ.

ಅಕ್ಟೋಬರ್ 7 ರಂದು ಇಸ್ರೇಲ್ ಮೇಲೆ ಹಮಾಸ್ ಆಕ್ರಮಣ ಮಾಡಿದ ನಂತರ ಇತ್ತೀಚಿನ ಸಂಘರ್ಷ ಪ್ರಾರಂಭವಾದಾಗಿನಿಂದ 76,214 ಜನರು ಗಾಯಗೊಂಡಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

ಸಚಿವಾಲಯದ ಹೇಳಿಕೆಯ ಪ್ರಕಾರ, ಇಸ್ರೇಲಿ ಆಕ್ರಮಿತ (ಪಡೆಗಳು) ಗಾಜಾ ಪಟ್ಟಿಯ ಕುಟುಂಬಗಳ ವಿರುದ್ಧ ಎಂಟು ಹತ್ಯಾಕಾಂಡಗಳನ್ನು ನಡೆಸಿದ್ದು, ಕಳೆದ 24 ಗಂಟೆಗಳಲ್ಲಿ 89 ಹುತಾತ್ಮರು ಮತ್ತು 120 ಜನರು ಗಾಯಗೊಂಡಿದ್ದಾರೆ.

ರಕ್ಷಣಾ ಸಿಬ್ಬಂದಿಗೆ ತಲುಪಲು ಸಾಧ್ಯವಾಗದ ಕಾರಣ ಅನೇಕ ಜನರು ಇನ್ನೂ ಅವಶೇಷಗಳ ಅಡಿಯಲ್ಲಿ ಮತ್ತು ರಸ್ತೆಗಳಲ್ಲಿ ಸಿಲುಕಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಇಸ್ರೇಲ್ ಅಂತರರಾಷ್ಟ್ರೀಯ ನ್ಯಾಯಾಲಯದಲ್ಲಿ ನರಮೇಧದ ಆರೋಪಗಳನ್ನು ಎದುರಿಸುತ್ತಿದೆ.



ಜನವರಿಯಲ್ಲಿ ಮಧ್ಯಂತರ ತೀರ್ಪಿನ ಹೊರತಾಗಿಯೂ, ಹಗೆತನವು ಅಡೆತಡೆಯಿಲ್ಲದೆ ಮುಂದುವರೆದಿದೆ ಮತ್ತು ಮಾನವೀಯ ದುರಂತವನ್ನು ಪರಿಹರಿಸಲು ಸಹಾಯ ವಿತರಣೆಗಳು ಸಾಕಾಗುವುದಿಲ್ಲ.

ಅಕ್ಟೋಬರ್ 7 ರ ಆಕ್ರಮಣದ ನಂತರ ಇಸ್ರೇಲ್ ಗಾಜಾ ಮೇಲೆ ತನ್ನ ದಾಳಿಯನ್ನು ತೀವ್ರಗೊಳಿಸಿದೆ, ಇದು ಸುಮಾರು 1,200 ಜನರನ್ನು ಕೊಂದಿದೆ ಎಂದು ಟೆಲ್ ಅವೀವ್ ಹೇಳಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ನಲವತ್ತರ ವಯಸ್ಸಿನ ಪಾತ್ರ ಒಪ್ಪಿಕೊಂಡ ರಚಿತಾ ರಾಮ್



ಸಂಜು ವೆಡ್ಸ್ ಗೀತಾ 2 ಸಿನಿಮಾದ ಶೂಟಿಂಗ್‌ನಲ್ಲಿ ಬ್ಯುಸಿಯಾಗಿರುವ ನಟಿ ರಚಿತಾ ರಾಮ್, ಈ ನಡುವೆ ದುನಿಯಾ ವಿಜಯ್ ನಟನೆಯ ಹೊಸ ಸಿನಿಮಾವನ್ನು ಒಪ್ಪಿಕೊಂಡಿದ್ದಾರೆ. ರಚಿತಾ ಅವರದ್ದು ನಲವತ್ತರ ವಯಸ್ಸಿನ ಪಾತ್ರ ಎನ್ನುವುದು ಬಹಿರಂಗವಾಗಿದೆ. ಸದಾ ಗ್ಲಾಮ್ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದ ರಚ್ಚು, ಈ ಬಾರಿ ವಿಭಿನ್ನ ಪಾತ್ರವನ್ನು ಆಯ್ಕೆ ಮಾಡಿಕೊಂಡಿದ್ದಾರೆ.

ಜಂಟಲ್ ಮ್ಯಾನ್, ಗುರುಶಿಷ್ಯರು ಚಿತ್ರಗಳ ನಿರ್ದೇಶಕ ಹಾಗೂ ಕಾಟೇರ ಚಿತ್ರದ ಲೇಖಕ ಜಡೇಶ ಕೆ ಹಂಪಿ ನಿರ್ದೇಶನದಲ್ಲಿ ಈ ಸಿನಿಮಾ ಮೂಡಿ ಬರುತ್ತಿದ್ದು, ಚಿತ್ರದ ಮುಹೂರ್ತ ಸಮಾರಂಭ ಇತ್ತೀಚೆಗೆ ಮಹಾಲಕ್ಷ್ಮೀಪುರದ ಶ್ರೀ ವೀರಾಂಜನೇಯಸ್ವಾಮಿ ದೇವಸ್ಥಾನದಲ್ಲಿ ನಡೆಯಿತು. ರಚಿತಾರಾಮ್ ಈ ಚಿತ್ರದ ನಾಯಕಿಯಾಗಿ ನಟಿಸುತ್ತಿದ್ದು, ದುನಿಯಾ ವಿಜಯ್ ಪುತ್ರಿ ರಿತನ್ಯ(ಮೋನಿಕಾ) ಈ ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ''ಡೇರ್ ಡೆವಿಲ್ ಮುಸ್ತಫಾ'' ಖ್ಯಾತಿಯ ಶಿಶಿರ್ ಸಹ ಪ್ರಮುಖಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

ಇದು ನಾನು ಕಂಡ, ಕೇಳಿದ ಹಾಗೂ ನೋಡಿದ ನೈಜ ಕಥೆ ಎಂದು ಮಾತನಾಡಿದ ನಿರ್ದೇಶಕ ಜಡೇಶ ಕೆ ಹಂಪಿ, ಇದು ಆಳಿದವರ ಕಥೆಯಲ್ಲ. ಅಳಿದು ಉಳಿದವರ ಕಥೆ. ಕೋಲಾರ ಭಾಗದಲ್ಲಿ ನಡೆಯುವ ಕಥೆಯಾಗುವುದರಿಂದ ಸಂಭಾಷಣೆ ಕೋಲಾರದ ಭಾಷೆಯಲ್ಲೇ ಇರುತ್ತದೆ. ಮಾಸ್ತಿ ಅವರು ಸಂಭಾಷಣೆ ಬರೆಯುತ್ತಿದ್ದಾರೆ. ಅವರು ಕೋಲಾರದವರೆ ಆಗಿರುವುದು ವಿಶೇಷ.ಇದು 90 ರ ಕಾಲಘಟ್ಟದಲ್ಲಿ ನಡೆಯುವ ಕಥೆ. ಶಿವರಾಮ ಕಾರಂತರ ''ಚೋಮನ ದುಡಿ''ಯ ಚೋಮನ ಪಾತ್ರ ಈ ಚಿತ್ರಕ್ಕೆ ಸ್ಫೂರ್ತಿ. ಹಾಗಂತ ''ಚೋಮನ ದುಡಿ'' ಚಿತ್ರಕ್ಕೂ ಈ ಚಿತ್ರಕ್ಕೂ ಸಂಬಂಧವಿಲ್ಲ. ಇನ್ನು ಈ ಚಿತ್ರವನ್ನು ಜಗದೀಶ್ ಅವರು ನಿರ್ಮಿಸಬೇಕಿತ್ತು. ಕಾರಣಾಂತರದಿಂದ ಆಗಲಿಲ್ಲ. ಆನಂತರ ಸ್ನೇಹಿತರೊಬ್ಬರ ಮೂಲಕ ಸತ್ಯಪ್ರಕಾಶ್ ಅವರ ಪರಿಚಯವಾಯಿತು. ಅವರು ಹಾಗೂ ಅವರ ಮಗ ಸೂರಜ್ ಈ ಚಿತ್ರದ ಕಥೆ ಕೇಳಿ ಮೆಚ್ಚಿಕೊಂಡರು. ಕೇವಲ ಇಪ್ಪತ್ತು ದಿನಗಳಲ್ಲಿ ಚಿತ್ರಕ್ಕೆ ಚಾಲನೆ ದೊರಕ್ಕಿದೆ. ಬೆಂಗಳೂರಿನಲ್ಲಿ ಅದ್ದೂರಿ ಸೆಟ್ ಹಾಕಲಾಗುತ್ತಿದೆ. ಉಳಿದಂತೆ ಕೋಲಾರ, ಮೈಸೂರಿನಲ್ಲೂ ಚಿತ್ರೀಕರಣ ನಡೆಯಲಿದೆ. ನಾಯಕ ವಿಜಯ್ ಅವರು ವಿಭಿನ್ನ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ ಎನ್ನುತ್ತಾರೆ ನಿರ್ದೇಶಕರು. ಈ ಚಿತ್ರದ ಮತ್ತೊಂದು ವಿಶೇಷವೆಂದರೆ ತಂದೆ ? ಮಗ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ತಂದೆ ? ಮಗಳು ಅಭಿನಯಿಸುತ್ತಿದ್ದಾರೆ. ಈ ಚಿತ್ರದಲ್ಲೂ ದುನಿಯಾ ವಿಜಯ್ ಮಗಳು, ಮಗಳ ಪಾತ್ರದಲ್ಲೇ ಅಭಿನಯಿಸುತ್ತಿದ್ದಾರೆ.

# ರಮ್ಯಾ ಪಾತ್ರವನ್ನು ನಾನು ಮಾಡುತ್ತಿಲ್ಲ ನಟಿ ಸೋನು ಸ್ಪಷ್ಟನೆ



ಕನ್ನಡದ ಪ್ರತಿಭಾವಂತ ನಿರ್ದೇಶಕ ವಿಜಯ್ ಪ್ರಸಾದ್ ಮತ್ತೊಂದು ಸಿದ್ಲಿಂಗು ಕಥೆ ಹೇಳಲು ಮುಂದಾಗಿದ್ದಾರೆ. ಈ ಹಿಂದೆ ಲೂಸ್ ಮಾದ ಯೋಗಿ ಮತ್ತು ರಮ್ಯಾ ಅವರನ್ನು ಆಯ್ಕೆ ಮಾಡಿಕೊಂಡು ಸಿದ್ಲಿಂಗು ಕಥೆ ಹೇಳಿದ್ದರು ವಿಜಯ್ ಪ್ರಸಾದ್. ಇದೀಗ ರಮ್ಯಾ ಬದಲು ಸೋನು ಗೌಡ ಅವರನ್ನು ನಾಯಕಿಯನ್ನಾಗಿ ಆಯ್ಕೆ ಮಾಡಿ ಸಿದ್ಲಿಂಗು 2 ಚಿತ್ರದ ಕಥೆ ಹೇಳುತ್ತಿದ್ದಾರೆ.

ರಮ್ಯಾ ಮಾಡಿದ ಪಾತ್ರಕ್ಕೆ ಸೋನು ಗೌಡ ರಿಪ್ಲೇಸ್ ಆಗಿದ್ದಾರಾ ಎನ್ನುವ ಮಾತು ಕೇಳಿ ಬಂದಿತ್ತು. ಈ ಕುರಿತಂತೆ ಸೋನು ಮಾತನಾಡಿದ್ದಾರೆ. ತಮ್ಮದು ರಮ್ಯಾ ಮಾಡಿದ ಪಾತ್ರದ ರಿಪ್ಲೇಸ್ ಅಲ್ಲ. ಆ ಪಾತ್ರವೇ ಬೇರೆ, ನಾನು ಮಾಡುತ್ತಿರುವ ಪಾತ್ರವೇ ಬೇರೆ ಎಂದು ಅವರು ಹೇಳಿಕೊಂಡಿದ್ದಾರೆ.

ಮೊನ್ನೆಯಷ್ಟೇ ಸಿನಿಮಾಗೆ ಮುಹೂರ್ತವಾಗಿದೆ. ಸಿಂಪಲ್ ಆಗಿ ಆದ ಮುಹೂರ್ತ ಸಮಾರಂಭದಲ್ಲಿ ಚಿತ್ರದ ನಾಯಕ ಯೋಗಿ, ನಾಯಕಿ ಸೋನು ಗೌಡ ಸೇರಿದಂತೆ ಹಲವರು ಭಾಗಿಯಾಗಿದ್ದರು. ಸಿದ್ಲಿಂಗು ಸಿನಿಮಾದ ಕೊನೆಯಲ್ಲಿ ನಾಯಕಿ ಸಾವನ್ನಪ್ಪುತ್ತಾಳೆ. ಹಾಗಾಗಿ ಸಿದ್ಲಿಂಗು 2 ಸಿನಿಮಾದ ಕಥೆಯು ಹೇಗೆ ಶುರುವಾಗಬಹುದು ಎನ್ನುವ ಕುತೂಹಲವಿದೆ.

2012ರಲ್ಲಿ ಸಿದ್ಲಿಂಗು ತೆರೆಗೆ ಬಂದಿತ್ತು. ಮೊದಲ ಬಾರಿಗೆ ರಮ್ಯಾ ಜೊತೆ ಯೋಗಿ ನಟಿಸಿದ್ದರಿಂದ ಸಾಕಷ್ಟು ನಿರೀಕ್ಷೆ ಮೂಡಿಸಿತ್ತು. ಸಿನಿಮಾ ಕೂಡ ಗೆದ್ದಿತ್ತು. ಮತ್ತೆ ಹನ್ನೆರಡು ವರ್ಷಗಳ ನಂತರ ವಿಜಯ್ ಪ್ರಸಾದ್ ಅದೇ ಹೆಸರಿನಲ್ಲಿ ಸಿನಿಮಾ ಮಾಡುತ್ತಿದ್ದಾರೆ. ಏನೆಲ್ಲ ವಿಷಯಗಳನ್ನು ಈ ಚಿತ್ರ ಹೊತ್ತು ತರಲಿದೆ ಎನ್ನುವುದನ್ನು ಕಾದು ನೋಡಬೇಕು. ಈಗಾಗಲೇ ಮೊದಲ ಹಂತದ ಶೂಟಿಂಗ್ ಕೂಡ ಮುಗಿಸಿದೆ ಚಿತ್ರತಂಡ.



# ಸದ್ಯಕ್ಕೆ 'ಸಲಾರ್ 2' ಅನುಮಾನ: ಪ್ರಭಾಸ್ ಇದಕ್ಕೆ ಕಾರಣ



ಪ್ರಭಾಸ್ ನಟನೆಯ ಸಲಾರ್ ಸಿನಿಮಾ ಬಾಕ್ಸಾಫೀಸಿನಲ್ಲಿ ಸಖತ್ ಸದ್ದು ಮಾಡಿತ್ತು. ಈಗಲೂ ಕೆಲವರು ಸಲಾರ್ ಸಿನಿಮಾದ ಗುಂಗಿನಲ್ಲೇ ಇದ್ದಾರೆ. ಈ ನಡುವೆ ಸಲಾರ್ 2 ಸಿನಿಮಾದ ಬಗ್ಗೆ ಒಂದಷ್ಟು ಮಾಹಿತಿಗಳು ಹೊರ ಬಿದ್ದಿದ್ದವು. ಇದೇ ಏಪ್ರಿಲ್ ಕೊನೆಯ ವಾರದಿಂದ ಸಲಾರ್ 2 ಚಿತ್ರದ ಶೂಟಿಂಗ್ ಕೆಲಸದಲ್ಲಿ ನಿರ್ದೇಶಕ ಪ್ರಶಾಂತ್ ನೀಲ್ ತೊಡಗಿಕೊಳ್ಳಲಿದ್ದಾರೆ ಎಂದು ಹೇಳಲಾಗಿತ್ತು. ಆದರೆ, ಸದ್ಯಕ್ಕೆ ಸಲಾರ್ ಅನುಮಾನ ಎನ್ನುವ ಮಾಹಿತಿ ಹೊರ ಬಿದ್ದಿದೆ.

ಸದ್ಯ ಪ್ರಭಾಸ್ ಕಲ್ಕಿ ಸಿನಿಮಾದ ಕೆಲಸದಲ್ಲಿ ಬ್ಯುಸಿಯಾಗಿದ್ದಾರೆ. ಕಲ್ಕಿ ಮುಗಿಯುತ್ತಿದ್ದಂತೆಯೇ 'ದಿ ರಾಜ ಸಾಬ್' ಸಿನಿಮಾದ ಚಿತ್ರೀಕರಣದಲ್ಲಿ ಪಾಲ್ಗೊಳ್ಳಬೇಕಿದೆ. ಇದರ ನಂತರ ಸ್ಪಿರಿಟ್ ಚಿತ್ರಕ್ಕೆ ಅವರು ಕಾಲ್ ಶೀಟ್ ಕೊಟ್ಟಿದ್ದಾರೆ ಎಂದು ಹೇಳಲಾಗುತ್ತಿದೆ. ಈ ಎರಡೂ ಸಿನಿಮಾ ಮುಗಿಯೋಕೆ ಕನಿಷ್ಠ ಎರಡು ವರ್ಷಗಳಾದರೂ ಬೇಕು. ಹಾಗಾಗಿ ಸದ್ಯಕ್ಕೆ ಸಲಾರ್ 2 ಸೆಟ್ಟೇರುವುದು ಅನುಮಾನ.

ಈ ಹಿಂದೆ ಆಂಗ್ಲ ವೆಬ್ ಸೈಟ್ ಜೊತೆ ನಿರ್ಮಾಪಕ ವಿಜಯ ಕಿರಗಂದೂರು ಕೆಲ ಮಾಹಿತಿಗಳನ್ನು ಹಂಚಿಕೊಂಡಿದ್ದರು. ಅದರ ಪ್ರಕಾರ ಸಲಾರ್ 2 ಸಿನಿಮಾ 2025ರಲ್ಲಿ ಬಿಡುಗಡೆ ಆಗಲಿದೆಯಂತೆ. ಇನ್ನೂ ಅಚ್ಚರಿಯ ಸಂಗತಿ ಅಂದರೆ, ಈಗಾಗಲೇ ಸಲಾರ್ 2 ಸಿನಿಮಾದ ಸ್ಕ್ರಿಪ್ಟ್ ರೆಡಿಯಾಗಿದ್ದು, ಸಲಾರ್ ಸಿನಿಮಾಗಿಂತಲೂ ಸಲಾರ್ 2 ಇನ್ನೂ ಅದ್ದೂರಿಯಾಗಿ ಇರಲಿದೆ ಎಂದು ವಿಜಯ್ ತಿಳಿಸಿದ್ದರು.



'ಸಲಾರ್' ಪ್ಯಾನ್ ಇಂಡಿಯಾ ಚಿತ್ರವಾದರೂ, ಈ ಚಿತ್ರದ ಹಿಂದಿರುವ ತಾಂತ್ರಿಕ ತಂಡದವರೆಲ್ಲರೂ ಕನ್ನಡದವರಾಗಿದ್ದರು. ನಿರ್ಮಾಪಕರಾದ ವಿಜಯ್ ಕಿರಗಂದೂರು, ನಿರ್ದೇಶಕ ಪ್ರಶಾಂತ್ ನೀಲ್ , ಛಾಯಾಗ್ರಾಹಕ ಭುವನ್ ಗೌಡ, ಸಂಗೀತ ನಿರ್ದೇಶಕ ರವಿ ಬಸ್ರೂರು, ಕಲಾ ನಿರ್ದೇಶಕ ಶಿವಕುಮಾರ್ ಸೇರಿದಂತೆ ಚಿತ್ರದಲ್ಲಿ ಕೆಲಸ ಮಾಡಿರುವ ಹಲವು ತಂತ್ರಜ್ಞರು ಹಾಗೂ ಕಲಾವಿದರು ಈ ನೆಲದ ಮಣ್ಣಿನವರಾಗಿದ್ದು, ಇದು ಕನ್ನಡದ ಪ್ರತಿಭಾ ಸಂಪತ್ತಿನ ಒಂದು ಉದಾಹರಣೆಯಷ್ಟೇ.

# ಟಿ20 ವಿಶ್ವಕಪ್‌ಗೆ ಬಲಿಷ್ಠ ಭಾರತ ತಂಡವನ್ನು ಹೆಸರಿಸಿದ ಕೈಫ್

ಇಂಡಿಯನ್ ಪ್ರೀಮಿಯರ್ ಲೀಗ್ ಮುಕ್ತಾಯದ ಬೆನ್ನಲ್ಲೇ ಟಿ20 ವಿಶ್ವಕಪ್ ಶುರುವಾಗಲಿದೆ. ಯುಎಸ್ ಎ-ವೆಸ್ಟ್ ಇಂಡೀಸ್ ನಲ್ಲಿ ನಡೆಯಲಿರುವ ಈ ಬಾರಿಯ ಟಿ20 ವಿಶ್ವಕಪ್ ಗಾಗಿ ಮೇ 1 ರೊಳಗೆ ಎಲ್ಲಾ ದೇಶಗಳು ತಮ್ಮ ತಂಡಗಳನ್ನು ಘೋಷಿಸಬೇಕಿದೆ.



ಇತ್ತ ಐಪಿಎಲ್ ನಲ್ಲಿನ ಪ್ರದರ್ಶನವನ್ನು ಪರಿಗಣನೆಗೆ ತೆಗೆದುಕೊಂಡು ಬಲಿಷ್ಠ ಭಾರತ ತಂಡವನ್ನು ಆಯ್ಕೆ ಮಾಡಲು ಬಿಸಿಸಿಐ ಪ್ಲ್ಯಾನ್ ರೂಪಿಸಿದೆ. ಇದರ ನಡುವೆ ಈ ಬಾರಿಯ ಟಿ20 ವಿಶ್ವಕಪ್ ಗಾಗಿ ಟೀಮ್ ಇಂಡಿಯಾ ಹೇಗಿರಬೇಕೆಂದು ತಿಳಿಸಿದ್ದಾರೆ ಮಾಜಿ ಕ್ರಿಕೆಟಿಗ ಮೊಹಮ್ಮದ್ ಕೈಫ್.



ಮುಂಬರುವ ಟಿ20 ವಿಶ್ವಕಪ್ ಗಾಗಿ ಮೊಹಮ್ಮದ್ ಕೈಫ್ 15 ಸದಸ್ಯರ ಬಳಗವನ್ನು ಆಯ್ಕೆ ಮಾಡಿದ್ದಾರೆ. ವಿಶೇಷ ಎಂದರೆ ಈ ತಂಡದಲ್ಲಿ ರಿಂಕು ಸಿಂಗ್, ಸಂಜು ಸ್ಯಾಮ್ಸನ್ ಹಾಗೂ ಶುಭ್ ಮನ್ ಗಿಲ್ ಅವರಿಗೆ ಸ್ಥಾನ ಕಲ್ಪಿಸಲಾಗಿಲ್ಲ ಎಂಬುದು ವಿಶೇಷ. ಬದಲಿಗೆ ಶಿವಂ ದುಬೆ ಹಾಗೂ ರಿಯಾನ್ ಪರಾಗ್ ಅವರನ್ನು ಆಯ್ಕೆ ಮಾಡಿದ್ದಾರೆ.

ಹಾಗೆಯೇ ಸ್ಪಿನ್ನರ್ ಗಳಾಗಿ ಕುಲ್ದೀಪ್ ಯಾದವ್, ಯುಜ್ವೇಂದ್ರ ಚಹಲ್ ಹಾಗೂ ಅಕ್ಷರ್ ಪಟೇಲ್ ಗೆ ಸ್ಥಾನ ನೀಡಿದ್ದಾರೆ. ವೇಗಿಗಳ ಪಟ್ಟಿಯಲ್ಲಿ ಜಸ್ ಪ್ರೀತ್ ಬುಮ್ರಾ ಜೊತೆ ಮೊಹಮ್ಮದ್ ಸಿರಾಜ್ ಹಾಗೂ ಅರ್ಷದೀಪ್ ಸಿಂಗ್ ಅವರಿಗೆ ಸ್ಥಾನ ಕಲ್ಪಿಸಲಾಗಿದೆ. ಇನ್ನು ವಿಕೆಟ್ ಕೀಪರ್ ಆಗಿ ರಿಷಭ್ ಪಂತ್ ಗೆ ಸ್ಥಾನ ನೀಡಿದ್ದಾರೆ. ಅದರಂತೆ ಮೊಹಮ್ಮದ್ ಕೈಫ್ ಆಯ್ಕೆ ಮಾಡಿರುವ ಭಾರತ ಟಿ20 ವಿಶ್ವಕಪ್ ತಂಡ ಈ ಕೆಳಗಿನಂತಿದೆ...

ಯಶಸ್ವಿ ಜೈಸ್ವಾಲ್, ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಸೂರ್ಯಕುಮಾರ್ ಯಾದವ್, ಹಾರ್ದಿಕ್ ಪಾಂಡ್ಯ, ರಿಷಭ್ ಪಂತ್ (ವಿಕೆಟ್ ಕೀಪರ್), ಅಕ್ಷರ್ ಪಟೇಲ್, ರವೀಂದ್ರ ಜಡೇಜಾ, ಕುಲದೀಪ್ ಯಾದವ್, ಜಸ್ಪ್ರೀತ್ ಬುಮ್ರಾ, ಅರ್ಷದೀಪ್ ಸಿಂಗ್, ಯುಜ್ವೇಂದ್ರ ಚಹಲ್, ಶಿವಂ ದುಬೆ, ರಿಯಾನ್ ಪರಾಗ್, ಮೊಹಮ್ಮದ್ ಸಿರಾಜ್.

# ಡಿಕೆ ಸಹೋದರರ ದೌರ್ಜನ್ಯ ಕೊನೆಗಾಣಿಸಲು ಮಂಜುನಾಥ್ ಕಣಕ್ಕೆ

**ಹಾಸನ:** 'ನನ್ನ ಅಳಿಯ ಎಂಬ ಕಾರಣಕ್ಕೆ ಡಾ. ಸಿಎನ್ ಮಂಜುನಾಥ್ ಬೆಂಗಳೂರು ಗ್ರಾಮಾಂತರ ಕ್ಷೇತ್ರದಿಂದ ಲೋಕಸಭೆ ಚುನಾವಣೆಗೆ ಸ್ಪರ್ಧಿಸುತ್ತಿಲ್ಲ. ಜಯದೇವ ಸಂಸ್ಥೆಯನ್ನು ಇಡೀ ದೇಶದಲ್ಲಿ ಎತ್ತರಕ್ಕೆ ಬೆಳೆಸಿದ ಕೀರ್ತಿ ಅವರದ್ದಾಗಿದೆ. ಅವರು ನಮ್ಮ ಪಕ್ಷದಿಂದಲೇ ಸ್ಪರ್ಧಿಸಬೇಕು ಎಂದು ಪ್ರಧಾನಿ ಮೋದಿ ಮನವಿ ಮಾಡಿದರು. ಆ ಅಣ್ಣ ತಮ್ಮರ (ಡಿಕೆ ಸಹೋದರರ) ದೌರ್ಜನ್ಯ ಏನಿದೆ, ಅದನ್ನು ನಿಲ್ಲಿಸಲೇಬೇಕು ಎಂದು ಮಂಜುನಾಥ್‌ರನ್ನು ಕಣಕ್ಕಿಳಿಸಿದ್ದಾರೆ. ಅರ್ಥ ಮಾಡಿಕೊಳ್ಳಿ' ಎಂದು ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಹೆಚ್‌ಡಿ ದೇವೇಗೌಡ ಹೇಳಿದರು. ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನ ಮಂಚಿಗನಹಳ್ಳಿ ಗ್ರಾಮದಲ್ಲಿ ಪ್ರಜ್ವಲ್ ಪರ ಮತಯಾಚನೆ ಮಾಡಿದ ಅವರು, ಡಿಕೆ ಸಹೋದರರ ವಿರುದ್ಧವೂ ವಾಗ್ದಾಳಿ ನಡೆಸಿದರು.



ಶಾಸಕ ಹೆಚ್‌ಡಿ ರೇವಣ್ಣ ಅವರನ್ನು ಹೊಗಳಿದ ದೇವೇಗೌಡರು, ರಾಜ್ಯದಲ್ಲಿ ಇಷ್ಟೊಂದು ಕೆಲಸ ಮಾಡುವ ಯಾವುದೇ ಶಾಸಕ ಇಲ್ಲ. ಯಾರಾದರು ಇದ್ದರೆ ಅವರು ನನ್ನ ಮುಂದೆ ಬಂದು ನಿಲ್ಲಬಹುದು. ನೀವು ಹಾಸನದ ಖಾಸಗಿ ಇಂಜಿನಿಯರಿಂಗ್ ಕಾಲೇಜಿಗೆ ಹೋಗಿ ಫೀಜ್ ಕೇಳಿ ಎಷ್ಟು ಹೇಳ್ತಾರೆ ನೋಡಿ. ರೇವಣ್ಣ ತಮ್ಮ ಕ್ಷೇತ್ರದ ಮೊಸಳೆಹೊಸಳ್ಳಿಯಲ್ಲಿ ಒಂದು ಇಂಜಿನಿಯರಿಂಗ್ ಕಾಲೇಜು ಮಾಡಿದರು. ಹಳ್ಳಿಯಲ್ಲಿ ಕಾಲೇಜು ಬೇಡಾ ಎಂದು ಕುಮಾರಸ್ವಾಮಿ ಹೇಳಿದ್ದರು. ಆದರೆ ಹಠ ಹಿಡಿದು ಅಲ್ಲಿ ಕಾಲೇಜು ಸ್ಥಾಪನೆ ಮಾಡಿದರು. ಅಲ್ಲಿ ಕೇವಲ ಐದು ಸಾವಿರಕ್ಕೆ ಸೀಟ್ ಸಿಗುತ್ತದೆ ಎಂದು ಹೇಳಿದರು.

ರೇವಣ್ಣ ದೊಡ್ಡ ವಿದ್ಯಾವಂತ ಅಲ್ಲ. ಅವನು ಕೇವಲ ಎಸ್‌ಎಸ್ ಎಲ್‌ಸಿ ಅಷ್ಟೆ. ಹಿಂದೆ ಕಾಂಗ್ರೆಸ್ ಜೊತೆ ಸಮ್ಮಿಶ್ರ ಸರ್ಕಾರ ಮಾಡಿದ್ದಾಗ ಎಷ್ಟು ಷರತ್ತು ಹಾಕಿದ್ದರು. ಕುಮಾರಸ್ವಾಮಿ ಸಾಲಮನ್ನಾ ಮಾಡುತ್ತೇನೆ ಅಂದರೆ ನಮ್ಮ ಯೋಜನೆಗೆ ಮೊದಲು ಹಣ ಇಡಿ ಎಂದರು. ಸಿಎಂ ಸಿದ್ದರಾಮಯ್ಯ ಏಪ್ರಿಲ್ 18 ಕ್ಕೆ ಬರ್ತಾರಂತೆ. ನಾನು ಅವರನ್ನೇ ಫಾಲೋ ಮಾಡ್ತೇನೆ, ಮಾತನಾಡಲಿ ನೋಡೋಣ ಎಂದು ದೇವೇಗೌಡರು ಸವಾಲು ಹಾಕಿದರು.

ನನ್ನ ರಾಜಕೀಯ ಜೀವನದ ಭದ್ರ ಬುನಾದಿ ಹಾಕಿದ್ದು ಈ ದಂಡಿಗನಹಳ್ಳಿ ಹೋಬಳಿ. ಕಾವೇರಿಕೊಳ್ಳದ ಹತ್ತು ಜಿಲ್ಲೆಯ ಜನ ನೀರು ಕುಡಿತೇವೆ. ತಮಿಳುನಾಡಿನ ಸಿಎಂ ಅವರ ಪ್ರಣಾಳಿಕೆಯಲ್ಲಿ ಹಾಕ್ತಾರೆ, ಒಂದು ಗ್ಲಾಸ್ ನೀಡು ಕೊಡಲ್ಲ ಅಂತ. ಹೇಮಾವತಿ, ಕಾವೇರಿ ನೀರು ನೀರು ಬಳಸುವ ಹಾಗಿಲ್ಲ ಎನ್ನುತ್ತಾರೆ. ಈ ಬಗ್ಗೆ ಏಕಾಂಗಿಯಾಗಿ ಪಾರ್ಲಿಮೆಂಟ್‌ನಲ್ಲಿ ಹೋರಾಟ ಮಾಡಿದೆ. ಅಂದು ಕಾಂಗ್ರೆಸ್‌ನಲ್ಲಿದ್ದ ಎಸ್‌ಎಂ ಕೃಷ್ಣ, ಮಲ್ಲಿಕಾರ್ಜುನ ಖರ್ಗೆ, ಮುನಿಯಪ್ಪ, ವೀರಪ್ಪ ಮೊಯ್ಲಿ ಸಚಿವರಾಗಿದ್ದರು. ನಾನು ಪಾರ್ಲಿಮೆಂಟ್ ನಲ್ಲಿ ಮಾತನಾಡಿದೆ ಎಂದು ದೇವೇಗೌಡ ಮೆಲುಕು ಹಾಕಿದರು. ನಾನು ಬಂದಿರುವುದು ಒಬ್ಬ ರೇವಣ್ಣರನ್ನು ಗೆಲ್ಲಿಸಲು ಅಲ್ಲ. ತುಮಕೂರಿಗೆ ಹೋಗ್ತೇನೆ, ಅಲ್ಲಿ ಸೋಮಣ್ಣ ಗೆಲ್ಲಬೇಕು. ಮೈಸೂರಿಗೆ ಹೋಗ್ತೇನೆ ಅಲ್ಲಿ ಮಹರಾಜರು ಗೆಲ್ಲಬೇಕು. ಮಂಡ್ಯಕ್ಕೆ ಹೋಗ್ತೇನೆ ಅಲ್ಲಿ ಕುಮಾರಸ್ವಾಮಿ ಗೆಲ್ಲಬೇಕು ಎಂದು ಅವರು ಹೇಳಿದರು. ಸ್ಟಾಲಿನ್ ಹೇಳಿದ್ದಾರೆ ಕಾವೇರಿ ನೀರು ಕೊಡಲ್ಲ ಎಂಬುದಾಗಿ. ಈ ಕಾವೇರಿ ನೀರು ಬಳಸುವ ಹತ್ತು ಜಿಲ್ಲೆಯಲ್ಲಿ ನಮ್ಮ ಅಭ್ಯರ್ಥಿ ಗಳು ಗೆಲ್ಲಬೇಕು. ಅವರೊಟ್ಟಿಗೆ ನಾನು ಹೋರಾಟ ಮಾಡ್ತೇನೆ. ನಾಳೆ ನರೇಂದ್ರ ಮೋದಿಯವರು ನನ್ನ ಜೊತೆ ಬಂದು ಕೂಳಿತುಕೊಳ್ಳಬೇಕು ಎಂದಿದ್ದಾರೆ.

# ವಿಭಿನ್ನ ಜೆರ್ಸಿಯಲ್ಲಿ ಕಣಕ್ಕಿಳಿಯಲಿದೆ ಲಕ್ನೋ ಸೂಪರ್ ಜೈಂಟ್ಸ್

ಐಪಿಎಲ್ ನ 28ನೇ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡವು ವಿಭಿನ್ನ ಜೆರ್ಸಿಯಲ್ಲಿ ಕಣಕ್ಕಿಳಿಯಲಿದೆ.

ಕೆಕೆಆರ್ ತಂಡದ ತವರು ಮೈದಾನದಲ್ಲಿ ಈ ಪಂದ್ಯ ನಡೆಯುತ್ತಿರುವುದರಿಂದ ಲಕ್ನೋ ತಂಡ ಜೆರ್ಸಿ ಬದಲಿಸಲು ನಿರ್ಧರಿಸಿರುವುದು ವಿಶೇಷ. ಅಂದರೆ ಈಡನ್ ಗಾರ್ಡನ್ಸ್ ಮೈದಾನದಲ್ಲಿ ಲಕ್ನೋಗಿಂತ ಕೆಕೆಆರ್ ತಂಡಕ್ಕೆ ಹೆಚ್ಚಿನ ಪ್ರೇಕ್ಷಕರ ಬೆಂಬಲ ದೊರೆಯಲಿದೆ. ಆದರೆ ಈ ಬೆಂಬಲಕ್ಕೆ ಮಾಸ್ಟರ್ ಸ್ಟ್ರೋಕ್ ನೀಡಲು ಲಕ್ನೋ ಸೂಪರ್ ಜೈಂಟ್ಸ್ ತಂಡದ ಮಾಲೀಕ ಸಂಜೀವ್ ಗೋಯೆಂಕಾ ನಿರ್ಧರಿಸಿದ್ದಾರೆ.




ಅದಕ್ಕಾಗಿ ಆಯ್ಕೆ ಮಾಡಿಕೊಂಡಿದ್ದೇ ಜೆರ್ಸಿ ಬದಲಾವಣೆ. ಅಂದರೆ ಪಶ್ಚಿಮ ಬಂಗಾಳದ ಜನರು ಕ್ರಿಕೆಟ್ ಅನ್ನು ಎಷ್ಟು ಪ್ರೀತಿಸುತ್ತಾರೋ, ಅಷ್ಟೇ ಫುಟ್ ಬಾಲ್ ಅನ್ನು ಪ್ರೀತಿಸುತ್ತಾರೆ. ಅದರಲ್ಲೂ ಬಂಗಾಳದ ಪ್ರತಿಷ್ಠಿತ ಫುಟ್ ಬಾಲ್ ಕ್ಲಬ್ ಮೋಹನ್ ಬಗಾನ್ ಗೆ ಅಪಾರ ಅಭಿಮಾನಿಗಳಿದ್ದಾರೆ.

ಇತ್ತ ಮೋಹನ್ ಬಗಾನ್ ಕ್ಲಬ್ ನ ಮಾಲೀಕರು ಸಂಜೀವ್ ಗೋಯೆಂಕಾ. ಅಂದರೆ ಇಂಡಿಯನ್ ಸೂಪರ್ ಲೀಗ್ (ಫುಟ್ ಬಾಲ್) ಹಾಗೂ ಇಂಡಿಯನ್ ಪ್ರೀಮಿಯರ್ ಲೀಗ್ ನಲ್ಲಿ ಗೋಯೆಂಕಾ ತಂಡಗಳನ್ನು ಹೊಂದಿದ್ದು, ಇದೀಗ ಇದನ್ನೇ ಮಾಸ್ಟರ್ ಸ್ಟ್ರೋಕ್ ಆಗಿ ಬಳಸಿ ಕೊಲ್ಕತ್ತಾ ಅಭಿಮಾನಿಗಳ ಮನಗೆಲ್ಲಲು ಪ್ಲ್ಯಾನ್ ರೂಪಿಸಿದ್ದಾರೆ.

ಅದರಂತೆ ಕೆಕೆಆರ್ ವಿರುದ್ಧದ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಆಟಗಾರ ಮೋಹನ್ ಬಗಾನ್ ತಂಡದ ಬಣ್ಣದ ಜೆರ್ಸಿಯಲ್ಲಿ ಕಣಕ್ಕಿಳಿಯಲಿದೆ.

ಪ್ರಸ್ತುತ ಇರುವ ಗಾಢ ನೀಲಿ ಜೆರ್ಸಿ ಬದಲಿಗೆ, ಹಸಿರು ಮತ್ತು ಮರೂನ್ ಬಣ್ಣಗಳ ಜೆರ್ಸಿಯಲ್ಲಿ ಐಖಲು ಈಡನ್ ಗಾರ್ಡನ್ಸ್‌ನಲ್ಲಿ ಕಾಣಿಸಿಕೊಳ್ಳಲಿದೆ.

ಈ ಮೂಲಕ ಕಳೆದ ಬಾರಿಯಂತೆ ಈ ಬಾರಿ ಕೂಡ ಮೋಹನ್ ಬಗಾನ್ ಅಭಿಮಾನಿಗಳನ್ನು ಲಕ್ನೋ ಸೂಪರ್ ಜೈಂಟ್ಸ್ ನತ್ತ ಸೆಳೆಯಲು ಪ್ಲ್ಯಾನ್ ರೂಪಿಸಿದ್ದಾರೆ ಸಂಜೀವ್ ಗೋಯೆಂಕಾ.

# ಕಾಂಗ್ರೆಸ್ ಪಕ್ಷದ ಪ್ರಧಾನಿ ಅಭ್ಯರ್ಥಿ ಯಾರೆಂದು ಹೇಳಲಿ

**ಹುಬ್ಬಳ್ಳಿ:** ಕಾಂಗ್ರೆಸ್ ಪಕ್ಷದ ಪ್ರಧಾನಿ ಅಭ್ಯರ್ಥಿ ಯಾರೆಂದು ಹೇಳಲಿ. ರಾಹುಲ್ ಗಾಂಧಿಗೆ ತಾನೇನು ಮಾತಾಡುತ್ತೇನೆ ಅಂತಾ ಅವರಿಗೆ ಗೊತ್ತಿಲ್ಲ ಎಂದು ಧಾರವಾಡ ಬಿಜೆಪಿ ಅಭ್ಯರ್ಥಿ ಪ್ರಲ್ಹಾದ್ ಜೋಶಿ ವಾಗ್ದಾಳಿ ಮಾಡಿದ್ದಾರೆ. ನಗರದಲ್ಲಿ ಬಿಜೆಪಿಯಿಂದ ನಡೆದ ಎಸ್‌ಟಿ ಸಮಾವೇಶದಲ್ಲಿ ಮಾತನಾಡಿದ ಅವರು, ಸರ್ಕಾರ ರಚಿಸಲು ಬೇಕಾಗುವಷ್ಟು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಸ್ಪರ್ಧಿಸಿಲ್ಲ. ದೇಶದಲ್ಲಿ ಕಾಂಗ್ರೆಸ್ ಪಕ್ಷ ಇಂತಹ ದಯಾನಿಯ ಸ್ಥಿತಿಗೆ ತಲುಪಿದೆ ಎಂದು ಕಿಡಿಕಾರಿದ್ದಾರೆ.



ಕಾಂಗ್ರೆಸ್ ಹೆಣದ ಮೇಲೆ ರಾಜಕಾರಣ ಮಾಡುತ್ತಿದೆ. ರಾಮೇಶ್ವರಂ ಕೆಫೆ ಸ್ಫೋಟದ ಆರೋಪಿಗಳನ್ನು ಎನ್‌ಐಎ ಬಂಧಿಸಿದೆ. ಗುಪ್ತಚರ ಇಲಾಖೆ ಶ್ರಮಪಟ್ಟು ಮಾಹಿತಿ ಸಂಗ್ರಹಿಸಿ ಎನ್‌ಐಎಗೆ ನೀಡಿದೆ. ರಾಮೇಶ್ವರಂ ಕೆಫೆಯಲ್ಲಿ ಸ್ಫೋಟವಾದಾಗ ದಾರಿತಪ್ಪಿಸುವ ಕೆಲಸ ಮಾಡಲಾಗಿದೆ. ಸಿಲಿಂಡರ್ ಸ್ಫೋಟ ಅಥವಾ ವೈಯಕ್ತಿಕ ದ್ವೇಷದ ಹಿನ್ನೆಲೆಯಲ್ಲಿ ಘಟನೆ ನಡೆದಿದೆ ಎಂದಿದ್ದರು.

ಡಿಸಿಎಂ, ಗೃಹಸಚಿವರು ತನಿಖೆ ದಾರಿ ತಪ್ಪಿಸುವ ಕೆಲಸ ಮಾಡಿದ್ದರು. ಸರ್ಕಾರದ ವರ್ತನೆಯಿಂದ ಇಂತಹ ಘಟನೆಗಳಿಗೆ ಕುಮ್ಮಕ್ಕು ಸಿಗುತ್ತಿದೆ. ಕ್ಲಿಷ್ಟಕರ ಪರಿಸ್ಥಿತಿಯಲ್ಲೂ NIA ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸಿದೆ. ನಕಲಿ ದಾಖಲೆ ಸೃಷ್ಟಿಸಿ ವಿದೇಶಕ್ಕೆ ಹಾರಲು ಮುಂದಾಗಿದ್ದವರ ಬಂಧನ ಮಾಡಲಾಗಿದೆ. ಪಶ್ಚಿಮ ಬಂಗಾಳದಲ್ಲಿ ಅವಿತಿದ್ದ ಆರೋಪಿಗಳನ್ನು ಎನ್ ಐಎ ಎಳೆದುತಂದಿದೆ. ಆದರೆ ಕಾಂಗ್ರೆಸ್ ಜನರ ಜೀವ, ಹೆಣದ ಮೇಲೆ ರಾಜಕಾರಣ ಮಾಡುತ್ತಿದೆ. ಈಗಲಾದರೂ ಸಿಎಂ ಗುಪ್ತಚರ ಇಲಾಖೆ ಬಲಪಡಿಸಲಿ ಎಂದು ಹೇಳಿದ್ದಾರೆ.

ದೇಶದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ ಮತ್ತೆ ಮೋದಿ ಪ್ರಧಾನಿ ಆಗುತ್ತಾರೆ. ಬಡತನ ನಿರ್ಮೂಲನೆ ಮಾಡುವುದೇ ಮೋದಿಯವರು ಗುರಿ. ಬಡವರು, ಕಡುಬಡವರನ್ನು ಮಧ್ಯಮ ವರ್ಗಕ್ಕೆ ತರಬೇಕು. ದೇಶವನ್ನು ಜಗತ್ತಿನ ನಂಬರ್ ಒನ್ ಆರ್ಥಿಕ ಶಕ್ತಿಯಾಗಿ ಮಾಡುವುದೇ ಮೋದಿ ಉದ್ದೇಶ ಎಂದು ಹೇಳಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com